ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಡಿಸೆಂಬರ್ 4 ಬುಧವಾರ 2024

ಸಂಪುಟ: 45 | ಸಂಚಿಕೆ: 227 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4


ಚಾಮುಂಡಿಬೆಟ್ಟದಲ್ಲಿ ಮುಖ್ಯ ರಸ್ತೆಗೆ ಉರುಳಿದ ಭಾರಿ ಬಂಡೆ

ರಾತ್ರಿ ವೇಳೆ ಬೆಟ್ಟಕ್ಕೆ ಪ್ರವೇಶ ನಿರ್ಬಂಧದ ಹಿನ್ನೆಲೆಯಲ್ಲಿ ತಪ್ಪಿದ ಅನಾಹುತ

ಮೈಸೂರು, ಡಿ.3(ಎಂಟಿವೈ)– ಫೆಂಗಲ್ ಚಂಡಮಾರುತದ ಪರಿಣಾಮ ಮೈಸೂರಲ್ಲಿ ಕಳೆದ ಎರಡು ದಿನಗಳ ಕಾಲ ಸುರಿದ ನಿರಂತರ ಮಳೆಯಿಂದಾಗಿ ಚಾಮುಂಡಿಬೆಟ್ಟದಲ್ಲಿ ಮುಖ್ಯ ರಸ್ತೆಗೆ ಭಾರಿ ಗಾತ್ರದ ಬಂಡೆಯೊಂದು ಉರುಳಿ ಬಿದ್ದಿದ್ದು, ಸ್ಥಳೀಯರಲ್ಲಿ ಮತ್ತೆ ಆತಂಕ ಸೃಷ್ಟಿಯಾಗಿದೆ.

ತಮಿಳುನಾಡಿನಲ್ಲಿ ಭಾರಿ ಅನಾಹುತಕ್ಕೆ ಕಾರಣವಾಗಿರುವ ಫೆಂಗಲ್ ಚಂಡಮಾರುತ, ರಾಜ್ಯದ ದಕ್ಷಿಣ ಭಾಗದ ಜಿಲ್ಲೆಗಳಲ್ಲೂ ಸಾಕಷ್ಟು ಹಾನಿ ಉಂಟು ಮಾಡಿದೆ. ಶನಿವಾರ ರಾತ್ರಿಯಿಂದ ಭಾನುವಾರ ದಿನವಿಡೀ ಸುರಿದ ಮಳೆಯಿಂದಾಗಿ ಮೈಸೂರಿನ ವಾತಾವರಣ ಮಲೆನಾಡಾಗಿ ಪರಿವರ್ತನೆಯಾಗಿತ್ತು. ಈ ಮಧ್ಯೆ ಕಳೆದ ರಾತ್ರಿ ಚಾಮುಂಡಿಬೆಟ್ಟದ ರಸ್ತೆಯಲ್ಲಿ ಬೃಹತ್ ಗಾತ್ರದ ಬಂಡೆ ಉರುಳಿ ಬಿದ್ದಿದ್ದು, ಆದರೆ ಭಾರಿ ಅನಾಹುತ ತಪ್ಪಿದೆ. ತಾವರೆಕಟ್ಟೆಯಿಂದ ಬೆಟ್ಟಕ್ಕೆ ಹೋಗುವ ಮಾರ್ಗದಲ್ಲಿ ಕಡಿದಾದ ತಿರುವಿನಲ್ಲಿ ಮಧ್ಯರಾತ್ರಿ ಈ ಬಂಡೆ ಉರುಳಿ ಬಿದ್ದಿದೆ.

ಚಾಮುಂಡಿಬೆಟ್ಟಕ್ಕೆ ಬೆಟ್ಟದ ನಿವಾಸಿಗಳನ್ನು ಹೊರತುಪಡಿಸಿ, ಬೇರೆಯವರಿಗೆ ರಾತ್ರಿ 9 ಗಂಟೆ ನಂತರ ಪ್ರವೇಶ ನಿರ್ಬಂಧಿಸಲಾಗಿದ್ದು, ಹಾಗಾಗಿ ರಾತ್ರಿ 10 ಗಂಟೆಯಿಂದ ಬೆಳಗ್ಗೆ 5.30ರವರೆಗೆ ಬೆಟ್ಟದ ರಸ್ತೆಯಲ್ಲಿ ಯಾವುದೇ ವಾಹನ ಸಂಚಾರವಿರುವುದಿಲ್ಲ. ■ 6ನೇ ಪುಟಕ್ಕೆ







ಚಾಮುಂಡಿ ಬೆಟ್ಟದ ರಸ್ತೆಯಲ್ಲಿ ಬಂಡೆ ಉರುಳಿ ಬಿದ್ದಿರುವುದು. ಕೊನೆಯ ಚಿತ್ರದಲ್ಲಿ ರಸ್ತೆ ಮೇಲಿದ್ದ ಬಂಡೆಯನ್ನು ತೆರವು ಮಾಡುತ್ತಿರುವುದು.

ಅಗತ್ಯ ಬಿದ್ದರೆ ಜಂಟಿ ಸರ್ವೆ

ರಸ್ತೆಗೆ ಉರುಳಿ ಬಿದ್ದಿದ್ದ ಬಂಡೆಯನ್ನು ಜೆಸಿಬಿ ಬಳಸಿ ತೆರವು ಮಾಡಲಾಗಿದೆ. ಬೆಟ್ಟದಲ್ಲಿ ಕುಸಿತ ಉಂಟಾಗಿಲ್ಲ. ಅಂಚಿನಲ್ಲಿದ್ದ ಬಂಡೆ ಉರುಳಿ ಬಿದ್ದಿದೆ. ಅದನ್ನು ರಸ್ತೆ ಬದಿಗೆ ಸರಿಸಲಾಗಿದೆ. ಆ ಸ್ಥಳದಲ್ಲಿ ಬೇರೆ ಯಾವ ಬಂಡೆಯೂ ಉರುಳಿ ಬೀಳುವ ಸ್ಥಿತಿಯಲ್ಲಿಲ್ಲ. ಅಗತ್ಯಬಿದ್ದರೆ ಅರಣ್ಯ ಇಲಾಖೆಯೊಂದಿಗೆ ಜಂಟಿ ಸಮೀಕ್ಷೆ ಮಾಡಿ, ಯಾವ ಬಂಡೆ ಬೀಳುವ ಸ್ಥಿತಿಯಲ್ಲಿದೆ ಎಂದು ಪರಿಶೀಲಿಸುತ್ತೇವೆ. ಮೇಲ್ನೋಟಕ್ಕೆ ರಸ್ತೆಬದಿ ಇರುವ ಯಾವುದೇ ಬಂಡೆಯೂ ಉರುಳುವ ಸ್ಥಿತಿಯಲ್ಲಿಲ್ಲ. –ರಾಜು, ಎಕ್ಸಿಕ್ಯೂಟಿವ್ ಇಂಜಿನಿಯರ್, ಲೋಕೋಪಯೋಗಿ ಇಲಾಖೆ

ಸಿದ್ದರಾಮಯ್ಯ ಸರ್ಕಾರದಿಂದ 'ಮರಳು ಭಾಗ್ಯ'

■ಸಾಮಾನ್ಯ ಮರಳು ಮೆಟ್ರಿಕ್ ಟನ್‌ಗೆ 300 ರೂ., ಉತ್ತಮ ದರ್ಜೆ ಮರಳು ಮೆಟ್ರಿಕ್ ಟನ್‌ಗೆ 850 ರೂ. ■ಹಳ್ಳ–ಕೊಳ್ಳದ ಮರಳು ನಿರ್ವಹಣೆ ಗ್ರಾಮ ಪಂಚಾಯಿತಿ ವಶಕ್ಕೆ

■ನದಿ ಪಾತ್ರದ ಉತ್ತಮ ದರ್ಜೆ ಮರಳು ನಿರ್ವಹಣೆಗೆ ಟೆಂಡರ್ ಮೂಲಕ ವಿಲೇ

■ತಕ್ಷಣದಿಂದಲೇ ನೂತನ ಮರಳು ನೀತಿ ಜಾರಿಗೆ ಆಯಾಯ ಜಿಲ್ಲಾಧಿಕಾರಿಗಳಿಗೆ ಸೂಚನೆ

ಬೆಂಗಳೂರು, ಡಿ.3(ಕೆಎಂಶಿ)– ಕಡೆಗೂ ಮರಳು ನೀತಿ ಜಾರಿಗೊಳಿಸಿರುವ ಸರ್ಕಾರ ಇಂದಿನಿಂದಲೇ ಸಾಮಾನ್ಯ ಮರಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ 300 ಹಾಗೂ ಉತ್ತಮ ದರ್ಜೆಯ ಮರಳಿಗೆ 850 ರೂ.ನಂತೆ ದರ ನಿಗದಿಪಡಿಸಿದೆ.

ನದಿ ಪಾತ್ರದಲ್ಲಿ ದೊರಕುವ ಮರಳನ್ನು ಉತ್ತಮ ದರ್ಜೆ ಎಂದು ಪ್ರತಿ ಟನ್‌ಗೆ 850 ರೂ. ನಿಗದಿಪಡಿಸಿರುವ ಸರ್ಕಾರ, ಪಂಚಾಯತ್ ಮಟ್ಟದಲ್ಲಿ ಹಳ್ಳಕೊಳ್ಳದಲ್ಲಿ ತೆಗೆಯುವ ಮರಳಿಗೆ ಪ್ರತಿ ಟನ್‌ಗೆ 300 ರೂ.ನಂತೆ ನಿಗದಿಪಡಿಸಿದೆ. ಈ ಸಂಬಂಧ ತೋಟಗಾರಿಕೆ ಹಾಗೂ ಗಣಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಪತ್ರಿಕಾ ಹೇಳಿಕೆ ನೀಡಿದ್ದು, ಸಾರ್ವಜನಿಕರಿಗೆ ಸುಲಭವಾಗಿ ಮತ್ತು ಕೈಗೆಟಕುವ ದರದಲ್ಲಿ ಮರಳು ಸಿಗಲಿ ಎಂಬ ಉದ್ದೇಶದಿಂದ ಮರಳು ನೀತಿ ಜಾರಿಗೆ ತಂದಿದ್ದೇವೆ.





ಮಲ್ಲಿಕಾರ್ಜುನ್

ಸಾರ್ವಜನಿಕ ಹಾಗೂ ಸ್ಥಳೀಯ ಸರ್ಕಾರಿ ಕಾಮಗಾರಿಗಳಿಗೆ ಕಡಿಮೆ ಬೆಲೆಯಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮರಳು ಪೂರೈಸಲು ಮೂರು ಶ್ರೇಣಿಗಳಾಗಿ ವಿಂಗಡಿಸಲಾಗಿದೆ ಎಂದಿದ್ದಾರೆ. ಹಳ್ಳ–ಕೊಳ್ಳದಲ್ಲಿ ಲಭ್ಯವಿರುವ ಮರಳು ತೆಗೆದು ವಿಲೇವಾರಿ ಜವಾಬ್ದಾರಿಯನ್ನು ಆಯಾ ಗ್ರಾಮ ಪಂಚಾಯತ್‌ಗಳಿಗೆ ವಹಿಸಿ, ಪ್ರತಿ ಮೆಟ್ರಿಕ್ ಟನ್ ಬೆಲೆಯನ್ನು 300ರೂ.ಗೆ ನಿಗದಿಪಡಿಸಲಾಗಿದೆ ಎಂದು ಹೇಳಿದ್ದಾರೆ.

ನದಿ ಹಾಗೂ ಅದರ ಪಾತ್ರಗಳಲ್ಲಿ ಲಭ್ಯವಿರುವ ಬ್ಲ್ಯಾಕ್‌ಗಳನ್ನು 4 ಮತ್ತು 5ನೇ ಉನ್ನತ ಶ್ರೇಣಿಯೆಂದು ಗುರುತಿಸಿ ಅಂತಹ ಪ್ರದೇಶ ಅಥವಾ ಸ್ಥಳಗಳನ್ನು ಖಾಸಗಿ ಗಣಿಗಾರಿಕೆಗೆ ಅವಕಾಶ ಮಾಡಿಕೊಡಲಾಗಿದೆ.

ಸಾರ್ವಜನಿಕ ಹಾಗೂ ಖಾಸಗಿ ಸಂಸ್ಥೆಗಳು ಟೆಂಡರ್ ಮೂಲಕ ಈ ಬ್ಲ್ಯಾಕ್‌ಗಳನ್ನು ಪಡೆದು ಸರ್ಕಾರಕ್ಕೆ ರಾಯಲ್ಟಿ ನೀಡಿ ಗಣಿಗಾರಿಕೆ ಮಾಡಬಹುದಾಗಿದೆ.

ಹೊಸ ನೀತಿಯಂತೆ ಮರಳು ಬ್ಲ್ಯಾಕ್‌ಗಳ ಟೆಂಡರ್ ಅನ್ನು ಆಯಾ ಜಿಲ್ಲಾ ಸಮಿತಿಯಿಂದ ನಡೆಸಲಾಗುವುದು.

ಜಿಲ್ಲಾವಾರು ಗುರುತಿಸಲಾಗುವ ಮರಳು ಬ್ಲ್ಯಾಕ್‌ಗಳಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ವಿಕಲಚೇತನ ಮತ್ತು ಇತರೆ ಸಾಮಾನ್ಯ ವರ್ಗದವರಿಗೆ ರೋಸ್ಟರ್ ಪದ್ಧತಿಯಡಿ ಮೀಸಲಾತಿ ಕಲ್ಪಿಸಲಾಗಿದೆ.

ಈ ಉನ್ನತ ಶ್ರೇಣಿಯ ಮರಳಿಗೆ ರಾಜ್ಯಾದ್ಯಂತ ಪ್ರತಿ ಮೆಟ್ರಿಕ್ ಟನ್ ಮರಳಿಗೆ 850 ರೂ. ನಿಗದಿಪಡಿಸಲಾಗಿದೆ. ಸರ್ಕಾರ ನಿಗದಿಪಡಿಸುವ ಮಾರಾಟ ಬೆಲೆ ಮೊತ್ತದ ಶೇಕಡಾ 50ರಷ್ಟನ್ನು ಮಾರಾಟ ಬೆಲೆ ಎಂಬುದಾಗಿ ಹಾಗೂ ಇದರಲ್ಲಿ ಶೇಕಡಾ 60ರಷ್ಟನ್ನು ಕಟ್‌ಆಫ್ ಬೆಲೆಯೆಂದು ನಿಗದಿಪಡಿಸಲಾಗಿರುತ್ತದೆ. ಸೆಲ್ಲಿಂಗ್ ಮತು ಕಟ್‌ಆಫ್ ಬೆಲೆಗೆ ಸಮನಾದ ಅಥವಾ ನಡುವೆ ಸಲ್ಲಿಸುವ ಕಡಿಮೆ ಟೆಂಡರ್ ಮೊತ್ತ ನಮೂದಿಸುವವರಿಗೆ ■6ನೇ ಪುಟಕ್ಕೆ

ಚುನಾವಣಾ ಬಾಂಡ್ ಹೆಸರಲ್ಲಿ ಸುಲಿಗೆ ಆರೋಪ

ನಿರ್ಮಲಾ ಸೀತಾರಾಮನ್, ಕಟೀಲ್, ವಿಜಯೇಂದ್ರ ಇತರರ ವಿರುದ್ಧದ ಎಫ್‌ಐಆರ್ ರದ್ದು



ಬೆಂಗಳೂರು, ಡಿ.3(ಕೆಎಂಶಿ)– ಚುನಾವಣಾ ಬಾಂಡ್ ಹೆಸರಲ್ಲಿ ಸುಲಿಗೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸೇರಿದಂತೆ ಇತರರ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಅನ್ನು ರದ್ದುಗೊಳಿಸಿ ರಾಜ್ಯ ಹೈಕೋರ್ಟ್ ಇಂದಿಲ್ಲಿ ಮಹತ್ವದ ತೀರ್ಪು ನೀಡಿದೆ.

ಬಿಜೆಪಿಯ ಮಾಜಿ ರಾಜ್ಯಾಧ್ಯಕ್ಷ ಹಾಗೂ ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಎಫ್‌ಐಆರ್ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ, ಎಫ್‌ಐಆರ್ ರದ್ದುಪಡಿಸಿದೆ.


ನಿರ್ಮಲಾ ಸೀತಾರಾಮನ್, ಕಟೀಲ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಇ.ಡಿ. ಅಧಿಕಾರಿಗಳು, ರಾಜ್ಯ ಮತ್ತು ರಾಷ್ಟ್ರಮಟ್ಟದ ಬಿಜೆಪಿ ಪದಾಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು.

ಭಾರತೀಯ ನ್ಯಾಯಸಂಹಿತೆ ವಿಧಿ 384, 120ಬಿ ಹಾಗೂ 34ರ ಅಡಿ ಇವರುಗಳ ವಿರುದ್ಧ ನಗರದ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿತ್ತು. ಆರೋಪಿಗಳು ಚುನಾವಣಾ ಬಾಂಡ್ ಹೆಸರಿನಲ್ಲಿ 8,000 ಕೋಟಿ ರೂ.ಗಳಿಗೂ ಅಧಿಕ ಲಾಭ ಪಡೆದಿದ್ದಾರೆ ಎಂದು ಆರೋಪಿಸಿ ಜೆಎಸ್‌ಪಿ ಸಹಸಂಸ್ಥಾಪಕ ಆರ್.ಆದರ್ಶ ಅಯ್ಯರ್ ಈ ದೂರು ದಾಖಲಿಸಿದ್ದರು.

ವಿಕಲಚೇತನರ ಸಬಲೀಕರಣಕ್ಕೆ ಪ್ರಸಕ್ತ ಸಾಲಿನ ಪೂರಕ ಅಂದಾಜಲ್ಲಿ 44 ಕೋಟಿ ಮಂಜೂರು

●ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

●ರಾಜ್ಯದಲ್ಲಿ 15 ಲಕ್ಷ ವಿಕಲಚೇತನರಿದ್ದಾರೆ; ಇವರಿಗೆ ವಿಶೇಷ ಸೌಲಭ್ಯ ಕಲ್ಪಿಸಲು ಸರ್ಕಾರ ಬದ್ಧ



ವಿಶ್ವ ವಿಕಲಚೇತನರ ದಿನಾಚರಣೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು.

ಬೆಂಗಳೂರು, ಡಿ.3(ಕೆಎಂಶಿ)–ವಿಕಲಚೇತನರ ಸಬಲೀಕರಣ ಹಾಗೂ ಶ್ರೇಯೋಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಪ್ರಸಕ್ತ ಸಾಲಿನ ಪೂರಕ ಅಂದಾಜಿನಲ್ಲಿ 44 ಕೋಟಿ ರೂ. ಮಂಜೂರು ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಭರವಸೆ ನೀಡಿದರು.

ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಸಂವಿಧಾನ ಎಲ್ಲರಿಗೂ ಬದುಕುವ ಮತ್ತು ಉದ್ಯೋಗ ಪಡೆಯುವ ಅವಕಾಶ ನೀಡಿದೆ, ರಾಜ್ಯದಲ್ಲಿ ಸುಮಾರು 15 ಲಕ್ಷ ವಿಕಲಚೇತನರಿದ್ದು, ಇವರ ಆರೈಕೆಗೆ ವಿಶೇಷ ಸೌಲಭ್ಯ ನೀಡುವುದು ಸರ್ಕಾರದ ಕರ್ತವ್ಯವಾಗಿದೆ ಎಂದರು.

ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ, ಸಮಾಜದ ಆಸ್ತಿ. ಎಲ್ಲ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿದ್ದಾರೆ. ಪ್ಯಾರಾ ಒಲಿಂಪಿಕ್ಸ್‌ನಲ್ಲಿ ಭಾರತದ ವಿಕಲಚೇತನ ಕ್ರೀಡಾಪಟುಗಳು ಹೆಚ್ಚಿನ ಪದಕಗಳನ್ನು ಗೆದ್ದಿರುವುದು ಹೆಮ್ಮೆಯ ವಿಚಾರ, ನಮ್ಮ ಸರ್ಕಾರ ಈ ಬಾರಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು 'ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವದ ಉತ್ತೇಜನ' ಘೋಷವಾಕ್ಯದೊಂದಿಗೆ ಆಚರಿಸುತ್ತಿದೆ. ■6ನೇ ಪುಟಕ್ಕೆ

ಮಂಜೂರಾತಿ ರದ್ದಾಗಿರುವ 48 ನಿವೇಶನ ಎರಡು ದಿನದಲ್ಲಿ ಮುಡಾ ವಶಕ್ಕೆ

ಮೈಸೂರು, ಡಿ.3(ಆರ್‌ಕೆ)– ಮೈಸೂರಿನ ರಾಮಕೃಷ್ಣನಗರದ ಶ್ರೀರಾಮಕೃಷ್ಣ ಪರಮಹಂಸ ವೃತ್ತದ ಬಳಿ ಬರುವ ದಟ್ಟಗಳ್ಳಿಯ ವಿವಿಧ ಸರ್ವೆ ನಂಬರ್‌ಗಳಲ್ಲಿ ಅನಧಿಕೃತವಾಗಿ ಮಂಜೂರು ಮಾಡಿದ್ದ 48 ನಿವೇಶನಗಳನ್ನು ಇನ್ನೆರಡು ದಿನದೊಳಗಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ವಶಕ್ಕೆ ಪಡೆದುಕೊಳ್ಳುತ್ತೇವೆ ಎಂದು ಮುಡಾ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಸ್ಪಷ್ಟಪಡಿಸಿದ್ದಾರೆ.



ಲಕ್ಷ್ಮಿಕಾಂತರೆಡ್ಡಿ

2023ರ ಮಾರ್ಚ್ 21ರಂದು ಪ್ರಾಧಿಕಾರದ ಸಭೆಯಲ್ಲಿ ಕೋರ್ಟ್ ಆದೇಶ ಮರೆಮಾಚಿ ಸದಸ್ಯರ ದಿಕ್ಕು ತಪ್ಪಿಸಿ, ಅಂದಿನ ಮುಡಾ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ರಾಮಕೃಷ್ಣನಗರದ ಶ್ರೀ ರಾಮಕೃಷ್ಣ ಪರಮಹಂಸ ವೃತ್ತದ ಸಮೀಪ ಅತ್ಯಂತ ಬೆಲೆ ಬಾಳುವ ಭೂಮಿಯಲ್ಲಿ ಅಭಿವೃದ್ಧಿಪಡಿಸಲಾದ ಪ್ರತಿಷ್ಠಿತ ಬಡಾವಣೆಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲು ಸಭೆಯ ಅನುಮೋದನೆ ಪಡೆದು, ಅಧಿಕೃತ ಜ್ಞಾಪನದ ಮೂಲಕ ಮಂಜೂರಾತಿ ಮಾಡಿರುವುದು ಕಾನೂನುಬಾಹಿರ ಎಂದು ನಿರ್ಧರಿಸಿ, ಸರ್ಕಾರ ಇದೇ ನವೆಂಬರ್ 30ರಂದು 48 ನಿವೇಶನಗಳ ಮಂಜೂರಾತಿ ರದ್ದುಪಡಿಸಿ ಆದೇಶ ಹೊರಡಿಸಿರುವ ಹಿನ್ನೆಲೆಯಲ್ಲಿ ಅವುಗಳ ನೋಂದಣಿ ರದ್ದುಪಡಿಸಿ, ಮುಡಾ ವಶಕ್ಕೆ ಪಡೆಯುವ ಪ್ರಕ್ರಿಯೆ ಆರಂಭಿಸಿದ್ದೇವೆ ಎಂದು ಜಿಲ್ಲಾಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.



2023ರ ಮಾರ್ಚ್ 21ರ ಪ್ರಾಧಿಕಾರದ ಸಭೆಯಲ್ಲಿ ಸಂಬಂಧಿತ ಅರ್ಜಿದಾರರಿಗೆ ನಿವೇಶನ ಮಂಜೂರು ಮಾಡುವುದು ಹಾಗೂ ಕ್ರಯಪತ್ರ ನೋಂದಾಯಿಸಿ ಕೊಡುವುದು ಎಂಬ ■9ನೇ ಪುಟಕ್ಕೆ

ಮಂಜೂರಾತಿ ರದ್ದಾಗಿರುವ 48 ನಿವೇಶನಗಳ ಪ್ರಕ್ರಿಯೆ ಸ್ಥಗಿತಕ್ಕೆ ಪಾಲಿಕೆ ಆಯುಕ್ತರು, ಜಿಲ್ಲಾ ನೋಂದಣಾಧಿಕಾರಿಗೆ ಮುಡಾ ಆಯುಕ್ತರ ಮನವಿ

ಮೈಸೂರು, ಡಿ.3– ದಟ್ಟಗಳ್ಳಿ ವಿವಿಧ ಸರ್ವೆ ನಂಬರ್‌ಗಳ ಜಮೀನಿನಲ್ಲಿ ಅಭಿವೃದ್ಧಿಪಡಿಸಿದ 48 ನಿವೇಶನಗಳ ಮಂಜೂರಾತಿಯನ್ನು ಸರ್ಕಾರ ರದ್ದುಗೊಳಿಸಿದ ಬೆನ್ನಲ್ಲೇ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಆಯುಕ್ತ ರಘುನಂದನ್, ಮೈಸೂರು ನಗರ ಪಾಲಿಕೆ ಆಯುಕ್ತರು ಹಾಗೂ ಜಿಲ್ಲಾ ನೋಂದಣಾಧಿಕಾರಿಗಳಿಗೆ ಮಂಗಳವಾರ ಪತ್ರ ಬರೆದು, ಸದರಿ ನಿವೇಶನಗಳ ಸಂಬಂಧ ಯಾವುದೇ ಪ್ರಕ್ರಿಯೆ ನಡೆಸದಂತೆ ಮನವಿ ಮಾಡಿದ್ದಾರೆ.



ರಘುನಂದನ್

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ದಟ್ಟಗಳ್ಳಿ ಗ್ರಾಮದ ಸರ್ವೆ ನಂಬರ್ 15/1,2, 27/1,2,3,4, 32, 38/1,2 ಮತ್ತು 41/2 ಜಮೀನಿನಲ್ಲಿರುವ ವಿವಿಧ ಅಳತೆಯ ನಿವೇಶನಗಳನ್ನು ಚಾಮುಂಡೇಶ್ವರಿ ನಗರ ಸರ್ವೋದಯ ಸಂಘದವರಿಗೆ ಮಂಜೂರು ಮಾಡಿ, ಮಂಜೂರಾತಿ ಪತ್ರ ಹಾಗೂ ಕ್ರಯಪತ್ರ ನೀಡಲಾಗಿದೆ. ನಿವೇಶನ ಹಂಚಿಕೆ ನಿಯಮ ಪಾಲಿಸದೆ ಹಂಚಿಕೆ ಮಾಡಿರುವುದರಿಂದ ಈ 48 ನಿವೇಶನಗಳ ಮಂಜೂರಾತಿಯನ್ನು ಸರ್ಕಾರ ರದ್ದುಪಡಿಸಿದೆ. ಸರ್ಕಾರದ ಆದೇಶದಂತೆ ಸದರಿ ನಿವೇಶನಗಳಿಗೆ ಸಂಬಂಧಿಸಿದಂತೆ ಯಾವುದೇ ಖಾತಾ ನೋಂದಣಿ ಹಾಗೂ ಖಾತಾ ವರ್ಗಾವಣೆ ಮಾಡದಂತೆ ಸಂಬಂಧಪಟ್ಟ ವಲಯ ಕಚೇರಿಗಳಿಗೆ ■9ನೇ ಪುಟಕ್ಕೆ

ಮುಡಾ ನಿವೇಶನ ಹಂಚಿಕೆ ಹಗರಣದ ತನಿಖೆಯಲ್ಲಿ ಮಹತ್ವದ ಪುರಾವೆ ಲಭ್ಯ!

ಬೆಂಗಳೂರು, ಡಿ.3– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಯಲ್ಲಿ ಮಹತ್ವದ ಬೆಳವಣಿಗೆ ಆಗಿದೆ ಎಂದು ಹೇಳಲಾಗುತ್ತಿದೆ.

ಮುಡಾದಿಂದ 14 ನಿವೇಶನಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ.ಪಾರ್ವತಿ ಅವರಿಗೆ ಹಸ್ತಾಂತರಿಸಿರುವ ಪ್ರಕರಣದಲ್ಲಿ ಹಲವು ಅಕ್ರಮಗಳು ನಡೆದಿರುವ ಬಗ್ಗೆ ಪುರಾವೆಗಳು ಸಿಕ್ಕಿವೆ ಎಂದು ಇಡಿ ತಿಳಿಸಿರುವುದಾಗಿ ನ್ಯೂಸ್ ಏಜೆನ್ಸಿಯೊಂದು ವರದಿ ಮಾಡಿದೆ.

ಕೇಂದ್ರ ತನಿಖಾ ಸಂಸ್ಥೆ ಪ್ರಕರಣ ಸಂಬಂಧ ಕರ್ನಾಟಕ ಲೋಕಾಯುಕ್ತ ಇಲಾಖೆಗೆ ಇತ್ತೀಚೆಗೆ ಕಳುಹಿಸಿದ ಸಂವಹನದಲ್ಲಿ, ಮುಡಾ ಒಟ್ಟು 1,095 ಸೈಟ್‌ಗಳನ್ನು ಬೇನಾಮಿ ಮತ್ತು ಇತರ ಮಧ್ಯವರ್ತಿಗಳಲ್ಲಿ 'ಅಕ್ರಮವಾಗಿ' ಮಂಜೂರು ಮಾಡಿದೆ ಎಂಬುದು ತನ್ನ ತನಿಖೆಯಲ್ಲಿ ಕಂಡುಬಂದಿದೆ ಎಂದು ಅದು ಹೇಳಿಕೊಂಡಿದೆ. ಅಕ್ರಮ ಹಣ ವರ್ಗಾವಣೆ ಪ್ರಕರಣದ ತನಿಖೆಯ ವೇಳೆ, ಭೂಪರಿವರ್ತನೆಯಲ್ಲಿ 'ಕಾನೂನುಬದ್ಧ ಮಾರ್ಗಸೂಚಿಗಳ ಉಲ್ಲಂಘನೆ', ಕಚೇರಿಯ ಕಾರ್ಯವಿಧಾನಗಳ ಉಲ್ಲಂಘನೆ, 'ಅನವಶ್ಯಕ' ಕೃಪಾಕಟಾಕ್ಷ ಮತ್ತು ಪ್ರಭಾವದ ಬಳಕೆ ಹಾಗೂ ಸಹಿಗಳ 'ಫೋರ್ಜರಿ'ಗೆ ಸಾಕ್ಷ್ಯಾಧಾರಗಳು ಪತ್ತೆಯಾಗಿವೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ ಎಂದು ಹೇಳಲಾಗಿದೆ. ಸಿದ್ದರಾಮಯ್ಯ ಅವರ ಆಪ್ತ ಸಹಾಯಕರಲ್ಲಿ ಒಬ್ಬರಾದ ಎಸ್.ಜಿ.ದಿನೇಶ್ ಕುಮಾರ್ ಅಲಿಯಾಸ್ ಸಿ.ಟಿ.ಕುಮಾರ್ ಅವರು ಈ ಪ್ರಕ್ರಿಯೆಯಲ್ಲಿ ಅನಗತ್ಯ ಪ್ರಭಾವ ಬೀರಿದ್ದಾರೆ ಎಂಬುದಕ್ಕೆ ಪುರಾವೆಗಳು ಸಿಕ್ಕಿವೆ ಎಂದು ಇಡಿ ಹೇಳಿಕೊಂಡಿರುವುದಾಗಿ ವರದಿಯಾಗಿದೆ. ಮುಡಾದಲ್ಲಿ ಆಪಾದಿತ ಅಕ್ರಮ ಚಟುವಟಿಕೆಗಳು ಪಾರ್ವತಿ ಪ್ರಕರಣದೊಂದಿಗೆ ಕೊನೆಗೊಂಡಿಲ್ಲ. 700 ಕೋಟಿ ರೂ.ಗಿಂತ ಹೆಚ್ಚು ಮಾರುಕಟ್ಟೆ ಮೌಲ್ಯದ ಒಟ್ಟು 1,095 ಸೈಟ್‌ಗಳನ್ನು 'ಕಾನೂನುಬಾಹಿರವಾಗಿ' ಹಂಚಿಕೆ ಮಾಡಲಾಗಿದೆ ಎಂದು ಇಡಿ ತನಿಖಾ ವರದಿ ಮತ್ತು ಅಧಿಕೃತ ಮೂಲಗಳು ತಿಳಿಸಿರುವುದಾಗಿ ನ್ಯೂಸ್ ಏಜೆನ್ಸಿ ವರದಿ ಮಾಡಿದೆ.

ಕುರುಬಗೇರಿ ಅರಳಿಕಟ್ಟೆ ನಾಗರಕಲ್ಲು ಪ್ರತಿಷ್ಠಾಪನೆ



ಶ್ರೀ ಕೃಷ್ಣದೇವರಾಯ ಸಂಘ, ಈಶ್ವರ ಸೇವಾ ಸಮಿತಿಯಿಂದ ಕುರುಬಗೇರಿ ಅರಳಿಕಟ್ಟೆಯಲ್ಲಿ ನಾಗರಕಲ್ಲು ಪ್ರತಿಷ್ಠಾಪನೆಗೆ ಶಾಸಕ ಹರೀಶ್‌ಗೌಡ ಪೂಜೆ ನೆರವೇರಿಸಿದರು.

ಮೈಸೂರು: ಶ್ರೀ ಕೃಷ್ಣದೇವರಾಯ ಸಂಘ ಹಾಗೂ ಈಶ್ವರ ಸೇವಾ ಸಮಿತಿ ವತಿಯಿಂದ ಕುರುಬಗೇರಿ ಅರಳಿಕಟ್ಟೆಯಲ್ಲಿ ನಾಗರಕಲ್ಲು ಪ್ರತಿಷ್ಠಾಪನೆ ಪೂಜೆಯನ್ನು ಶಾಸಕ ಹರೀಶ್‌ಗೌಡ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ದೇವಾಲಯಗಳು ಭಕ್ತಿ, ನೆಮ್ಮದಿ ನೀಡುವ ಧಾರ್ಮಿಕ ಕೇಂದ್ರಗಳು. ಭಕ್ತರು ತಮ್ಮ ನೆಚ್ಚಿನ ದೇವರು, ದೇವಾಲಯಗಳಿಗೆ ಹೋಗಿ ಇಷ್ಟಾರ್ಥ ಸಿದ್ಧಿಗಾಗಿ ಪೂಜೆ ಸಲ್ಲಿಸಿ, ಭಕ್ತಿ ಸಮರ್ಪಿಸುವುದು ಅನಾದಿ ಕಾಲದಿಂದಲೂ ನಡೆದು ಬಂದಿದೆ.

ಈಗಲೂ ನೆಚ್ಚಿನ ದೇಗುಲಗಳಲ್ಲಿ ಪೂಜೆ ಸಲ್ಲಿಸುವುದು ವಾಡಿಕೆ. ಭಕ್ತರ ನೆಚ್ಚಿನ ದೇಗುಲಗಳಲ್ಲಿ ಅರಳಿಕಟ್ಟೆ, ಗಣಪತಿ ದೇಗುಲವೂ ಅತೀ ಪ್ರಮುಖ ಪೂಜಾಸ್ಥಳ. ಗಣಪತಿ ದೇವಾಲಯ ಹಲವು ವೈಶಿಷ್ಟ್ಯ ಹಾಗೂ ಐತಿಹಾಸಿಕ ಹಿನ್ನೆಲೆ ಹೊಂದಿದೆ ಎಂದರು. ನಗರ ಪಾಲಿಕೆ ಮಾಜಿ ಸದಸ್ಯ ಪ್ರಶಾಂತ್ ಗೌಡ, ಸೋಮಣ್ಣ, ಮಂಜುನಾಥ್, ಕೆಂಪರಾಜು, ಜಗದೀಶ್, ನಾಗೇಶ್, ರಾಜೇಶ್, ಲೋಕೇಶ್, ಹೇಮಂತ್, ನವೀನ್, ಹರ್ಷ ಮತ್ತಿತರರು ಉಪಸ್ಥಿತರಿದ್ದರು.

ಖುದ್ದು ವರಿಷ್ಠರಿಗೆ ವಿವರಣೆ ನೀಡಲು ಯತ್ನಾಳ್ ತಂಡ ದೆಹಲಿ ಯಾತ್ರೆ

ಇಂದು ಶಿಸ್ತು ಸಮಿತಿ ಮುಂದೆ ಹಾಜರು

ಬೆಂಗಳೂರು, ಡಿ.3(ಕೆಎಂಶಿ)–ಪಕ್ಷ ಮತ್ತು ರಾಜ್ಯ ನಾಯಕರ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡುತ್ತಾ, ಬಂಡಾಯ ಎದ್ದಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೆ ಕೇಂದ್ರ ಬಿಜೆಪಿ ನೀಡಿರುವ ಶೋಕಾಸ್ ನೋಟಿಸ್‌ಗೆ ಖುದ್ದು ಉತ್ತರ ನೀಡಲು ಭಿನ್ನರ ತಂಡ ತೆರಳಿದೆ.



ಯತ್ನಾಳ್ ಜೊತೆ ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ, ಬಿ.ಪಿ. ಹರೀಶ್, ಕುಮಾರ್ ಬಂಗಾರಪ್ಪ ಸೇರಿದಂತೆ ಹಲವು ನಾಯಕರು ದೆಹಲಿಗೆ ತೆರಳಿದ್ದಾರೆ.

ನಾಳೆ ಬೆಳಗ್ಗೆ 11–30ಕ್ಕೆ ಶಿಸ್ತುಸಮಿತಿ ಮುಂದೆ ಹಾಜರಾಗಲು ಸಮಯ ನೀಡಲಾಗಿದೆ ಎಂದು ರಮೇಶ್ ಜಾರಕಿಹೊಳಿ ಸುದ್ದಿಗಾರರಿಗೆ ತಿಳಿಸಿದ್ದಾರೆ. ಒಂದು ವೇಳೆ ಭೇಟಿ ಸಾಧ್ಯವಾಗದಿದ್ದರೆ, ಮುಂದೊಂದು ದಿನ ಬರುವುದಾಗಿಯೂ ತಿಳಿಸಿದ್ದಾರೆ.

ಬಿಜೆಪಿ ಶಿಸ್ತು ಸಮಿತಿ ಮುಂದೆ ನಮ್ಮ ಅಹವಾಲುಗಳನ್ನು ಮಂಡಿಸಲಿದ್ದು, ನಮ್ಮ ತಪ್ಪಿದ್ದರೆ ತಿದ್ದಿಕೊಳ್ಳಲು ಸಿದ್ಧವಿದ್ದೇವೆ ಎಂದರು.

ಈ ಮಧ್ಯೆ ನೋಟಿಸ್ ತಲುಪಿದ 10 ದಿನಗಳೊಳಗಾಗಿ ಉತ್ತರ ನೀಡುವಂತೆ ಗಡುವು ನೀಡಲಾಗಿದ್ದು, ಹಿಂದಿನ ಎಚ್ಚರಿಕೆಗಳಿಂದ ಸರಿಪಡಿಸಿಕೊಳ್ಳದೆ, ಪಕ್ಷದ ರಾಜ್ಯ ನಾಯಕರ ವಿರುದ್ಧ ಮಾತು ಮುಂದುವರೆಸಿರುವುದಕ್ಕೆ ಶಿಸ್ತು ಸಮಿತಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ವರಿಷ್ಠರ ನೋಟಿಸ್‌ಗೆ ನಿನ್ನೆಯೇ ಯತ್ನಾಳ್ ಎರಡು ಪ್ರತ್ಯೇಕ ಟ್ವೀಟ್ ಮಾಡಿ, ನನಗೆ ಇದುವರೆಗೂ ಯಾವುದೇ ಅಧಿಕೃತ ನೋಟಿಸ್ ಬಂದಿಲ್ಲ, ವಾಟ್ಸಆಪ್‌ನಲ್ಲಿ ಬಂದಿದೆ ಎಂದಿದ್ದರು. ಆದರೆ, ಇಂದು ಸ್ವಯಂ ದೆಹಲಿಯಲ್ಲಿದ್ದು, ನೋಟಿಸ್‌ಗೆ ಉತ್ತರಿಸಲು ಮುಂದಾಗಿದ್ದಾರೆ.

ಯತ್ನಾಳ್ ನೇತೃತ್ವದ ಭಿನ್ನರ ತಂಡ ಸಮಾಲೋಚನೆಯಲ್ಲಿ ತೊಡಗಿದ್ದು, ಶಿಸ್ತು ಸಮಿತಿ ಮುಂದೆ ಏನು ಹೇಳಬೇಕು ಎಂಬ ತಯಾರಿ ನಡೆಸಿದೆ. ಏನೇ ಆದರೂ, ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಲೇಬೇಕೆಂಬುದು ಈ ತಂಡದ ಹಠವಾಗಿದೆ. ವಿಜಯೇಂದ್ರ ಪರವಾಗಿ ಎಲ್ಲೋ ಕೆಲವು ನಾಯಕರು ಮಾತ್ರ ಇದ್ದು, ಉಳಿದವರು ತಮ್ಮೊಂದಿಗಿದ್ದಾರೆ ಎಂದು ಯತ್ನಾಳ್ ಪರ ತಂಡ ವಾದ ಮಾಡುತ್ತಿದೆ.

ವಸತಿರಹಿತರಿಂದ ಅರ್ಜಿ ಆಹ್ವಾನ

ಮೈಸೂರು,ಡಿ.3–ಕೃಷ್ಣರಾಜ ವಿಧಾನಸಭಾ ಕ್ಷೇತ್ರದಲ್ಲಿ ಹೌಸಿಂಗ್ ಫಾರ್ ಆಲ್ ಎಂಬ ಶೀರ್ಷಿಕೆಯಡಿಯಲ್ಲಿ ಪ್ರಧಾನಮಂತ್ರಿ ಅವಾಸ್ ಯೋಜನೆ ಮತ್ತು ಕೆ.ಆರ್. ಆಶ್ರಯ ವಸತಿ ಯೋಜನೆಯಡಿಯಲ್ಲಿ ಮನೆಗಳನ್ನು ನಿರ್ಮಿಸಿ ನಿಯಮಾನುಸಾರ ಹಂಚಿಕೆ ಮಾಡಲು ವರುಣ ಕ್ಷೇತ್ರದ ವಸತಿರಹಿತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಜನವರಿ 2ರವರೆಗೆ ವಿದ್ಯಾಭಾರತಿ ಕಲ್ಯಾಣಮಂಟಪದ ಎದುರು ಉತ್ತರಾದಿಮಠ ರಸ್ತೆಯಲ್ಲಿರುವ ಕೆ.ಆರ್.ಆಶ್ರಯ ಶಾಖೆಯಲ್ಲಿ ಪಡೆದು, ಜ.3ರಿಂದ ಏ.2ರವರೆಗೆ ಅರ್ಜಿ ಸಲ್ಲಿಸಬಹುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ನಿಧನ




ಅಚಮ್ಮ ಥಾಮಸ್

ಮೈಸೂರು,ಡಿ.3–ಮೈಸೂರಿನ ಸಿಎಫ್‌ಟಿಆರ್‌ಐ ನಿವೃತ್ತ ಹಿರಿಯ ಸ್ಟೆನೋ(ಎಂಎಫ್‌ಪಿಟಿ) ಮತ್ತು ಬೋಗಾದಿ 2ನೇ ಹಂತ, ಸಿಎಫ್‌ಟಿಆರ್‌ಐ ಬಡಾವಣೆ, 5ನೇ ಮೇನ್, ಮನೆ ನಂ.54ರ ನಿವಾಸಿ ಅಚಮ್ಮ ಥಾಮಸ್ (72) ಡಿ.1ರಂದು ನಿಧನರಾದರು.

ಮೃತರು ಪತಿ ಚೆರಿಯನ್ ಪಿ.ಥಾಮಸ್, ಪುತ್ರರಾದ ವಿನಯ್ ಥಾಮಸ್ ಮತ್ತು ಜಾರ್ಜ್ ಥಾಮಸ್, ಸೊಸೆಯಂದಿರಾದ ಅನು ಮೆರಿನ್ ಮ್ಯಾಥ್ಯೂ ಮತ್ತು ಶಿನಿ ಸಾರಾ ಜೋಸೆಫ್, ಮೊಮ್ಮಕ್ಕಳಾದ ಜೋಶುವಾ, ಜೋಹಾನ್ ಮತ್ತು ಜೋವಾನ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಡಿ.4ರಂದು ಮಹದೇವಪುರ ರಸ್ತೆಯಲ್ಲಿರುವ ಸಿಎಸ್‌ಐ ನ್ಯೂ ಸಿಮೆಟ್ರಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪ್ರೊ. ರಾಘವೇಂದ್ರ ಭಟ್ಟ



ಮೈಸೂರಿನ ಸರಸ್ವತಿಪುರಂ 12ನೇ ಮುಖ್ಯ ರಸ್ತೆ ನಿವಾಸಿ ಪ್ರೊ.ರಾಘವೇಂದ್ರ ಭಟ್ಟ (87) ಮಂಗಳವಾರ ಬೆಳಗ್ಗೆ ನಿಧನರಾದರು.

ಮೈಸೂರಿನ ಪ್ರಾದೇಶಿಕ ಶಿಕ್ಷಣ ಸಂಸ್ಥೆ (ಆರ್‌ಐಇ)ಯಲ್ಲಿ ನಿವೃತ್ತ ಕನ್ನಡ ಪ್ರಾಧ್ಯಾಪಕರಾಗಿದ್ದ ಇವರು ಕನ್ನಡ ಮತ್ತು ಇಂಗ್ಲೀಷ್ ಸಾಹಿತ್ಯದಲ್ಲಿ ಪಾರಂಗತರಾಗಿದ್ದರಲ್ಲದೆ, ಕಾಪಿ ಎಡಿಟಿಂಗ್‌ನಲ್ಲಿ ಪರಿಣತಿ ಹೊಂದಿದ್ದರು. ಪುಸ್ತಕ ಹಾಗೂ ಸಂಗೀತ ಪ್ರೇಮಿಯೂ ಆಗಿದ್ದ ಇವರು, ಯಾವುದೇ ಸಂಗೀತ ಕಛೇರಿಗಳಿಗೆ ತಪ್ಪಿಸುತ್ತಿರಲಿಲ್ಲ. ಇವರು ಪ್ರೊ. ಜಿ.ಟಿ. ನಾರಾಯಣರಾವ್ ಅವರ ನಿಕಟವರ್ತಿಯೂ ಆಗಿದ್ದರು. ಮೈಸೂರಿನ ಸಂಗೀತ ಸಭೆಗಳಲ್ಲಿ ಒಂದಾದ ಗಾನಭಾರತಿ ಸ್ಥಾಪಿಸುವಲ್ಲಿ ಇವರ ಕೊಡುಗೆಯೂ ಅಪಾರ.

ಶ್ರೀಯುತರು ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಇವರ ಪಾರ್ಥಿವ ಶರೀರವನ್ನು ಡಿ. 5 ರಂದು ಜೆಎಸ್‌ಎಸ್ ಆಸ್ಪತ್ರೆಗೆ ದಾನ ಮಾಡಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಕೃಷ್ಣ

ವಿಕ್ರಾಂತ್ ಟೈರ್ಸ್ ಮಾಜಿ ನೌಕರರು ಹಾಗೂ ಮೈಸೂರು ಮಂಚೇಗೌಡನಕೊಪ್ಪಲು (ಅಭಿಷೇಕ್ ಸ್ಟೋರ್ ಸರ್ಕಲ್ ಬಳಿ) ನಿವಾಸಿ ಕೃಷ್ಣ (55) ಇಂದು ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ ಶೀಲಾ, ಪುತ್ರ ವಿಕಾಸ್ ಸೇರಿದಂತೆ ಅಪಾರ ಬಂಧು ವರ್ಗ, ಮಿತ್ರರನ್ನು ಅಗಲಿದ್ದಾರೆ. ಇವರು ಮೂಲತಃ ಮಂಡ್ಯ ಜಿಲ್ಲೆ ಗೋಪಾಲಪುರದವರಾಗಿದ್ದು, ಅಂತ್ಯಕ್ರಿಯೆ ಇಂದು ಸಂಜೆ ಸ್ವಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಇವರ ನಿಧನಕ್ಕೆ ವಿಕ್ರಾಂತ್ ಮಾಜಿ ನೌಕರರು ಹಾಗೂ ಕಾಂಗ್ರೆಸ್ ಮುಖಂಡರಾದ ವಿಕ್ರಾಂತ್ ಪಿ.ದೇವೇಗೌಡರು ಸಂತಾಪ ಸೂಚಿಸಿದ್ದಾರೆ.

ಡಿ.ಎನ್.ಸೀತಾರಾಮಮೂರ್ತಿ



ನಿವೃತ್ತ ರೈಲ್ವೆ ಎಲೆಕ್ಟ್ರಿಕಲ್ ಇಂಜಿನಿಯರ್ ಹಾಗೂ ಮೈಸೂರಿನ ಮೇಟಗಳ್ಳಿ ಮಧುರಾನಗರದ ನಿವಾಸಿ ಡಿ.ಎನ್.ಸೀತಾರಾಮಮೂರ್ತಿ(90) ಇಂದು ನಿಧನರಾದರು. ಮೃತರು ಮೂವರು ಪುತ್ರಿಯರು, ಅಳಿಯಂದಿರು, ಏಳು ಮಂದಿ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಮೈಸೂರಿನ ಗೋಕುಲಂನಲ್ಲಿರುವ ಚಿತಾಗಾರದಲ್ಲಿ ಮಂಗಳವಾರ ಸಂಜೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮುನೇಶ್ವರನಗರದ ಮನೆ, ಮಠದ ವಕ್ಫ್ ವಿವಾದ

ಯಡಿಯೂರಪ್ಪ ಸಿಎಂ ಆಗಿದ್ದಾಗಲೇ ಆಸ್ತಿ ವಶಕ್ಕೆ ಡಿಸಿ ವಕ್ಫ್ ಬೋರ್ಡ್‌ಗೆ ಶಿಫಾರಸು ಮಾಡಿದ್ದರು

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಆರೋಪ



ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಮಂಗಳವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು,ಡಿ.3(ಬಿಎಲ್‌ಯು)–ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲೇ ಅಂದಿನ ಜಿಲ್ಲಾಧಿಕಾರಿಗಳು ಮೈಸೂರಿನ ಮುನೇಶ್ವರನಗರ ನಿವಾಸಿಗಳ ಮನೆಯನ್ನು ವಶಕ್ಕೆ ಪಡೆಯುವಂತೆ ವಕ್ಫ್ ಬೋರ್ಡ್‌ಗೆ ಶಿಫಾರಸು ಮಾಡಿದ್ದರು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪಿಸಿದರು. ಈ ಸಂಬಂಧ ನಾಳೆ ದಾಖಲೆ ಬಿಡುಗಡೆ ಮಾಡುವುದಾಗಿಯೂ ಹೇಳಿದರು.

ನಗರದ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್‌ನಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಕ್ಫ್ ಬೋರ್ಡ್ ಜಾಗವನ್ನು ಮುನೇಶ್ವರನಗರದ ವಾಸಿಗಳು 25 ವರ್ಷದ ಹಿಂದೆಯೇ ಅತಿಕ್ರಮಿಸಿಕೊಂಡಿರುವ ಆರೋಪವಿತ್ತು. ಈ ಸಂಬಂಧ ಅಂದೇ ವಕ್ಫ್ ಬೋರ್ಡ್ ನೋಟಿಸ್ ಜಾರಿ ಮಾಡಿತ್ತು ಎಂದರು.

ಇದನ್ನು ಪ್ರಶ್ನಿಸಿ ಮುನೇಶ್ವರನಗರದ ವಾಸಿಗಳು ಹೈಕೋರ್ಟ್ ಮೊರೆ ಹೋಗಿದ್ದರು. ದಾಖಲಾತಿ ಪರಿಶೀಲನೆ ನಡೆಸಿ ಸರ್ಕಾರವೇ ಇದನ್ನು ಬಗೆಹರಿಸಬೇಕು ಎಂದು ಹೈಕೋರ್ಟ್ ಸೂಚನೆ ನೀಡಿತ್ತು. ಈ ಸಂಬಂಧ ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ ಅಂದಿನ ಜಿಲ್ಲಾಧಿಕಾರಿಗಳು ಮುನೇಶ್ವರನಗರದ ಜಾಗವನ್ನು ವಶಕ್ಕೆ ಪಡೆಯುವಂತೆ ವಕ್ಫ್ ಬೋರ್ಡ್‌ಗೆ ಸೂಚನೆ ನೀಡಿದ್ದರು. ಹೈಕೋರ್ಟ್‌ನಲ್ಲಿ ಅಲ್ಲಿನ ನಿವಾಸಿ ಇದನ್ನು ಪ್ರಶ್ನಿಸಿದ್ದು, ವಿಚಾರಣೆ ಇನ್ನು ನಡೆಯುತ್ತಿದೆ ಎಂದು ವಿವರಿಸಿದರು.

ಆದರೆ ಮುನೇಶ್ವರನಗರದ ವಾಸಿಗಳಿಗೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನೋಟಿಸ್ ಜಾರಿ ಮಾಡಲಾಗಿದೆ ಎಂದು ಬಿಜೆಪಿ ನಾಯಕರು ತಪ್ಪು ಮಾಹಿತಿ ನೀಡುತ್ತಿದ್ದಾರೆ. ಬಿಜೆಪಿಯವರು ಎಷ್ಟೇ ಸುಳ್ಳು ಹೇಳಿದರೂ ನಾವು ಸತ್ಯವನ್ನು ಜನರಿಗೆ ಮನವರಿಕೆ ಮಾಡಿಕೊಡುತ್ತೇವೆ ಎಂದು ಶಾಸಕ ಶ್ರೀವತ್ಸ ಅವರಿಗೆ ಲಕ್ಷ್ಮಣ್ ತಿರುಗೇಟು ನೀಡಿದರು.

ಹಾಸನದಲ್ಲಿ ಡಿಸೆಂಬರ್ 5ರಂದು ನಡೆಯುವ ಜನ ಕಲ್ಯಾಣ ಮತ್ತು ಸ್ವಾಭಿಮಾನಿ ಸಮಾವೇಶದಲ್ಲಿ ಮೂರು ಲಕ್ಷ ಜನರು ಭಾಗವಹಿಸಲಿದ್ದು, ಮೈಸೂರಿನಿಂದ ಹಾಸನಕ್ಕೆ ತೆರಳಲು 1,300 ಬಸ್ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಹೆಣ್ಣು ಮಕ್ಕಳ ಜೊತೆ ಗಂಡು ಮಕ್ಕಳು ಕೂಡ ಹಾಸನದಲ್ಲಿ ಲೈಂಗಿಕ ಕಿರುಕುಳಕ್ಕೆ ಒಳಗಾಗಿದ್ದಾರೆ. ಇದರಿಂದ ಹಾಸನದ 7 ತಾಲೂಕಿನ ಜನರು ದುಃಖದಲ್ಲಿದ್ದಾರೆ. ಮಾಜಿ ಪ್ರಧಾನಿ ಮೊಮ್ಮಗ ಸೇರಿದಂತೆ ಯಾರೇ ನಿಮ್ಮ ವಿರುದ್ಧವಾಗಿದ್ದರೂ ನಾವು ನಿಮ್ಮ ಜೊತೆಗಿದ್ದೇವೆ ಎಂಬ ಸಂದೇಶ ನೀಡಲು ಈ ಸಮಾವೇಶ ಆಯೋಜಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನುದಾನ ಕಡಿತ, ಬಿಜೆಪಿಯಿಂದ ಕೋಮು ಸಂಘರ್ಷ, ಸರ್ಕಾರ ಸುಗಮ ಆಡಳಿತ ನಡೆಸಲು ಅಡ್ಡಿಪಡಿಸುತ್ತಿರುವ ವಿಪಕ್ಷಗಳ ಕುತಂತ್ರಗಳ ಬಗ್ಗೆ ಅಂದು ಜನರಿಗೆ ತಿಳಿಸುತ್ತೇವೆ. ಜನತಾ ನ್ಯಾಯಾಲಯದಲ್ಲಿ ಈ ಮೂಲಕ ಸರ್ಕಾರಕ್ಕೆ ಯಾವ ರೀತಿ ತೊಂದರೆ ನೀಡುತ್ತಿದ್ದಾರೆ ಎಂದು ಮನವರಿಕೆ ಮಾಡಿಕೊಡುತ್ತೇವೆ ಎಂದು ಲಕ್ಷ್ಮಣ್ ತಿಳಿಸಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಮಹೇಶ್, ಮಾಜಿ ಕಾರ್ಪೋರೇಟರ್ ಶಿವಣ್ಣ, ಕಾಂಗ್ರೆಸ್ ಮುಖಂಡ ಭಾಸ್ಕರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಬಿಜೆಪಿಯಲ್ಲಿ ಒಂದು ಮನೆ, ಒಂಭತ್ತು ಬಾಗಿಲು

ಬಿಜೆಪಿಯಲ್ಲಿ ಒಂದು ಮನೆ, ಒಂಭತ್ತು ಬಾಗಿಲು ಆಗಿದೆ ಎಂದು ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಗೇಲಿ ಮಾಡಿದರು. 63 ಶಾಸಕರಿರುವ ಬಿಜೆಪಿಯಲ್ಲಿ ಎಷ್ಟು ಶಾಸಕರು ವಿಜಯೇಂದ್ರ ಜೊತೆಗಿದ್ದಾರೆ ಎಂದು ಸ್ಪಷ್ಟಪಡಿಸಲಿ ಎಂದು ಸವಾಲು ಹಾಕಿದ ಲಕ್ಷ್ಮಣ್, ದಿನ ಬೆಳಗಾದರೆ ವಿಜಯೇಂದ್ರ ಅವರನ್ನು ಯತ್ನಾಳ್ ಕಳ್ಳ ಎಂದು ಟೀಕಿಸುತ್ತಾರೆ. ಕಾಂಗ್ರೆಸ್‌ನಲ್ಲಿ ಯಾರಾದರೂ ನಮ್ಮ ಅಧ್ಯಕ್ಷರನ್ನು ಹೀಗೆ ಕರೆಯುತ್ತಾರಾ ಎಂದು ಪ್ರಶ್ನಿಸಿದರು.

ಯತ್ನಾಳ್‌ಗೆ ಕಾಂಗ್ರೆಸ್ ಪಕ್ಷಕ್ಕೆ ಆಹ್ವಾನ ನೀಡುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಯತ್ನಾಳ್ ಬಿಜೆಪಿಯಲ್ಲೇ ಇದ್ದು, ಅವರ ಪಕ್ಷದ ಅಧ್ಯಕ್ಷರನ್ನು ಬೈಯ್ಯುವ ಕೆಲಸ ಮಾಡುತ್ತಿದ್ದಾರೆ. ಅದನ್ನು ಅವರು ಮುಂದುವರೆಸಲಿ ಎಂದು ಸಲಹೆ ನೀಡಿದರು. ಆದರೆ ಯತ್ನಾಳ್ ನಮ್ಮ ಪಕ್ಷಕ್ಕೆ ಬಂದರೆ ಅದೇ ಚಾಳಿ ಇಲ್ಲೂ ಮುಂದುವರೆಯುತ್ತದೆ. ಈಗಾಗಲೇ ಯತ್ನಾಳ್ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ಅಧ್ಯಕ್ಷರನ್ನು ಬಹಳಷ್ಟು ಬಾರಿ ಟೀಕಿಸಿದ್ದಾರೆ. ಇಂತಹವರು ನಮ್ಮ ಪಕ್ಷಕ್ಕೆ ಬರುತ್ತಾರೆಯೇ ಎಂದು ಪ್ರಶ್ನಿಸಿದರು.

ಡಿ.6ರಂದು ಮುಕ್ತಕ ವಾಚನ, ವ್ಯಾಖ್ಯಾನ ಸೌರಭ ಕಾರ್ಯಕ್ರಮ

ಮೈಸೂರು, ಡಿ.3–ಕರ್ನಾಟಕ ಮುಕ್ತಕ ಸಾಹಿತ್ಯ ಅಕಾಡೆಮಿಯು ತನ್ನ ವಾರ್ಷಿಕ ಕಾರ್ಯಕ್ರಮಗಳ ಅಡಿಯಲ್ಲಿ ಡಿ.6ರ ಶುಕ್ರವಾರ ಸಂಜೆ 6 ಗಂಟೆಗೆ ಮೈಸೂರಿನ ಕೃಷ್ಣಮೂರ್ತಿಪುರಂನ ಕಾಂತರಾಜ ಅರಸ್ ರಸ್ತೆಯಲ್ಲಿರುವ ಶ್ರೀ ರಾಮಮಂದಿರದ ಸಭಾಂಗಣದಲ್ಲಿ ಡಿ. 6ರಂದು ಮುಕ್ತಕ ವಾಚನ–ವ್ಯಾಖ್ಯಾನ ಸೌರಭ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಕವಿ ಪುಲಿಗೆರೆ ಸೋಮನಾಥನ ಮುಕ್ತಕ ಕೃತಿ ಸೋಮೇಶ್ವರ ಶತಕಗಳು ಕಾವ್ಯದ ಆಯ್ದ ಭಾಗಗಳನ್ನು ವಿದುಷಿ ಶುಭ ರಾಘವೇಂದ್ರ ಗಮಕ ವಾಚನ ಮಾಡುತ್ತಾರೆ. ವಿದ್ವಾನ್ ಕೃಪಾ.ಮಂಜುನಾಥ್ ವ್ಯಾಖ್ಯಾನ ನಡೆಸಿ ಕೊಡುತ್ತಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಕ್ತಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ. ಎಚ್.ವಿ.ನಾಗರಾಜ ರಾವ್ ವಹಿಸಲಿದ್ದಾರೆ ಎಂದು ಅಕಾಡೆಮಿ ಪ್ರಧಾನ ಕಾರ್ಯದರ್ಶಿ ಕಿರಣ್ ಸಿಡ್ಲೇಹಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ಡಿ.3–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಡಿ.5ರಂದು ಬೆಳಗ್ಗೆ 10ರಿಂದ ರಾತ್ರಿ 8 ರವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಒಂದು ತಿಂಗಳಿಗೂ ಮೇಲ್ಪಟ್ಟ ವಾಸಿಯಾಗದ ಗಾಯ, ರಕ್ತಸ್ರಾವ, ಊತ, ಗಡಸುತನ, ನುಂಗುವಾಗಿನ ತೊಂದರೆ, ಗಂಟಲಲ್ಲಿ ಉರಿತ ಅಥವಾ ತಡೆತ, ಧ್ವನಿ ಬದಲಾವಣೆ ಇರುವ ರೋಗಿಗಳು ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ನಾಳೆಯಿಂದ ರಾಷ್ಟ್ರಮಟ್ಟದ ರೋಲರ್ ಸ್ಕೇಟಿಂಗ್ ಸ್ಪರ್ಧೆ



ಮೈಸೂರು, ಡಿ.3(ಜಿಎ)–ಕರ್ನಾಟಕ ರೋಲರ್ ಸ್ಕೇಟಿಂಗ್ ಸಂಸ್ಥೆ ವತಿಯಿಂದ ಡಿಸೆಂಬರ್ 5ರಿಂದ 15 ರವರೆಗೆ ನಗರದ ಉನ್ನತಿನಗರ ಬಡಾವಣೆಯಲ್ಲಿರುವ ರಾವ್ ರೋಲರ್ ಸ್ಕೇಟಿಂಗ್ ಅಕಾಡೆಮಿಯಲ್ಲಿ ರಾಷ್ಟ್ರ ಮಟ್ಟದ ರೋಲರ್ ಸ್ಕೇಟಿಂಗ್ ಚಾಂಪಿಯನ್‌ಷಿಪ್ ಪಂದ್ಯಾವಳಿ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರೋಲರ್ ಸ್ಕೇಟಿಂಗ್ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಇಂದೂಧರ ಸೀತಾರಾಮ್ ಈ ವಿಷಯ ತಿಳಿಸಿ, ದೇಶದ 28 ರಾಜ್ಯಗಳು ಹಾಗೂ ಎಂಟು ಕೇಂದ್ರಾಡಳಿತ ಪ್ರದೇಶಗಳ 1500 ಮಂದಿ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಡಿಸೆಂಬರ್ 8ರಂದು ಸಂಜೆ 5 ಗಂಟೆಗೆ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಟಿ.ಎಸ್.ಶ್ರೀವತ್ಸ, ತನ್ವೀರ್‌ಸೇಠ್ ಇನ್ನಿತರ ಗಣ್ಯರು ಭಾಗವಹಿಸಲಿದ್ದಾರೆ.

ಪಂದ್ಯಾವಳಿಗೆ ಅಂಡಮಾನ್, ನಿಕೋಬಾರ್, ಮಿಜೋರಾಂ ಸೇರಿದಂತೆ ಇನ್ನಿತರ ಕಡೆಗಳಿಂದಲೂ ಸ್ಪರ್ಧಿಗಳು ಆಗಮಿಸುತ್ತಿರುವುದು ಇದರ ವಿಶೇಷ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಆದಿತ್ಯ ಎಸ್.ರಾವ್ ಫ್ರಾನ್ಸಿಸ್, ಜಯಕುಮಾರ್ ಉಪಸ್ಥಿತರಿದ್ದರು.

ಭಾರಿ ಮಳೆಗೆ ನೆಲಕಚ್ಚಿದ ಭತ್ತದ ಬೆಳೆ



ಭಾರಿ ಮಳೆಯಿಂದ ಭತ್ತದ ಬೆಳೆ ನೆಲ ಕಚ್ಚಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಸುತ್ತೂರು,ಡಿ.3–ಧಾರಾಕಾರ ಮಳೆಗೆ ಕಟಾವಿಗೆ ಬಂದಿದ್ದ ನೂರು ಎಕರೆಗೂ ಅಧಿಕ ಗದ್ದೆಯಲ್ಲಿ ಭತ್ತದ ಬೆಳೆ ನೆಲೆ ಕಚ್ಚಿದೆ.

ಕಬಿನಿ ನಾಲೆಯ ಹುಲ್ಲಳ್ಳಿ ರಾಂಪುರ ನಾಲೆಗಳ ವ್ಯಾಪ್ತಿಗೆ ಸೇರಿದ ಸುತ್ತೂರು, ಹೊಸಕೋಟೆ, ಬಿಳುಗಲಿ, ಜಿಮಾರಳ್ಳಿ, ಮೂಡಳ್ಳಿ, ಅಲತ್ತೂರು, ಸಾಲುಂಡಿ, ಹರಿಹರಪುರ, ಈಗ್ಗೇ, ತಾಯೂರು ಇನ್ನಿತರ ಗ್ರಾಮಗಳಲ್ಲಿ ರೈತರು ಮುಂಗಾರು ಫಸಲಿನಲ್ಲಿ ಉತ್ತಮ ಭತ್ತದ ಬೆಳೆ ಬೆಳೆದಿದ್ದು ಕಳೆದ ಮೂರು ನಾಲ್ಕು ದಿನಗಳಿಂದ ಧಾರಾಕಾರವಾಗಿ ಸುರಿದ ಭಾರಿ ಮಳೆಗೆ ಕಟಾವಿಗೆ ಬಂದಿದ್ದ ಬೆಳೆ ಸಂಪೂರ್ಣ ನೆಲಕಚ್ಚಿದೆ. ಅಲ್ಲದೆ ಮಳೆಯಿಂದ ಸಣ್ಣಪುಟ್ಟ ಕೆರೆಕಟ್ಟೆಗಳು ತುಂಬಿವೆ.

ಕಳೆದ ವರ್ಷ ರೈತರು ಮಳೆ ಬೆಳೆ ಇಲ್ಲದೆ ಕಂಗಲಾಗಿದ್ದರು. ಅಲ್ಲದೆ ಜನ–ಜಾನುವಾರುಗಳಿಗೆ ಮೇವು ಇಲ್ಲದೆ ಪರದಾಡುತ್ತಿದ್ದರು. ಈ ಬಾರಿ ಉತ್ತಮ ಮಳೆಯಿಂದ ಬಂಪರ್ ಬೆಳೆ ಬಂದರೂ ಕಟಾವು ವೇಳೆಯಲ್ಲಿ ಭಾರಿ ಮಳೆಗೆ ಸುಮಾರು ನೂರಾರು ಎಕರೆಗೂ ಅಧಿಕ ಭೂಮಿಯ ಭತ್ತದ ಬೆಳೆ ನಾಶವಾಗಿದೆ. ಕೂಡಲೇ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಬೆಳೆ ನಷ್ಟ ಪರಿಹಾರ ಕೊಡಿಸಲು ಕ್ರಮ ಕೈಗೊಳ್ಳಬೇಕೆಂದು ರೈತರು ಒತ್ತಾಯ ಮಾಡಿದ್ದಾರೆ.

ಮಡಿವಾಳ ಸಂಘದ ಉಪಾಧ್ಯಕ್ಷನ ಕೊಲೆ ಪ್ರಕರಣ

ಮರು ತನಿಖೆಗೆ ಆಗ್ರಹಿಸಿ ಡಿ.11ಕ್ಕೆ ಪ್ರತಿಭಟನೆ

ಮೈಸೂರು, ಡಿ.3(ಜಿಎ)–ಮೈಸೂರು ಜಿಲ್ಲೆಯ ಹುಣಸೂರು ತಾಲೂಕು ಮಡಿವಾಳ ಸಂಘದ ಉಪಾಧ್ಯಕ್ಷ ಹೆಚ್.ಸಿ. ಹರೀಶ್ ಕೊಲೆ ಪ್ರಕರಣದಲ್ಲಿ ಪೊಲೀಸರು ಪಕ್ಷಪಾತ ಧೋರಣೆ ಅನುಸರಿಸುತ್ತಿದ್ದು, ಮರು ತನಿಖೆಗೆ ಆಗ್ರಹಿಸಿ ಡಿ.11ರಂದು ಬೆಳಗ್ಗೆ 10ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಕರ್ನಾಟಕ ದಲಿತ ಚಳವಳಿ ನವ ನಿರ್ಮಾಣ ವೇದಿಕೆ ಹಾಗೂ ಜಿಲ್ಲಾ ಮಡಿವಾಳ ಸಂಘ ತಿಳಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ದಲಿತ ಚಳವಳಿ ನವ ನಿರ್ಮಾಣ ವೇದಿಕೆ ಅಧ್ಯಕ್ಷ ಹರಿಹರ ಆನಂದಸ್ವಾಮಿ ಮಾತನಾಡಿ, ಕೊಲೆ ನಡೆದು ಎಂಟು ತಿಂಗಳು ಕಳೆದಿದೆ. ಆದರೆ ಅವರ ಸಾವನ್ನು ಆತ್ಮಹತ್ಯೆ ಎಂದು ಬಿಂಬಿಸುವ ಕೆಲಸ ಪೊಲೀಸರು ನಡೆಸಿದ್ದಾರೆ. ಹರೀಶ್‌ರನ್ನು ರವಿ ಎಂಬ ದಕ್ಷಿಣ ಕನ್ನಡ ಮೂಲದ ಹಾಗೂ ಹುಣಸೂರು ಜಿಲ್ಲೆಗೆ ಸ್ಥಳಾಂತರಗೊಂಡ ವ್ಯಕ್ತಿ ಕೊಲೆ ಮಾಡಿದ್ದಾನೆ. ಬಡ್ಡಿ ವ್ಯವಹಾರದ ಮೂಲಕ ಈತ ಜನರ ಸುಲಿಗೆ ಮಾಡುತ್ತಿದ್ದುದನ್ನು ಹರೀಶ್ ವಿರೋಧಿಸಿದ್ದರಿಂದಾಗಿ ಅವರು ದೊಡ್ಡಕೊಪ್ಪಲಿನ ತಮ್ಮ ಅಂಗಡಿಯಿಂದ ವಾಸಸ್ಥಳ ಹರವೆ ಗ್ರಾಮಕ್ಕೆ ವಾಪಸಾಗುವ ಮಾರ್ಗಮಧ್ಯೆ ಸಾಮಾಜಿಕ ಅರಣ್ಯ ಪ್ರದೇಶಕ್ಕೆ ಎಳೆದೊಯ್ದು ಕೊಲೆ ಮಾಡಿ, ಶವದ ಕೆಲ ಭಾಗಕ್ಕೆ ಪೆಟ್ರೋಲ್ ಹಾಕಿ ಸುಟ್ಟಿದ್ದಾನೆ ಎಂದು ಆರೋಪಿಸಿದರು.


ಮೃತನ ಪತ್ನಿ ಪತಿಯ ಅಗಲಿಕೆ ನೋವಿನಲ್ಲಿದ್ದ ವೇಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆಂಬ ಪತ್ರಕ್ಕೆ ಸಹಿ ಹಾಕಿಸಿಕೊಂಡು ವಂಚಿಸಿದ್ದಾರೆ. ಈ ಘಟನೆ ಬಳಿಕ ಹಲವಾರು ಬಾರಿ ಡಿಸಿ ಹಾಗೂ ಇನ್ನಿತರ ಹಿರಿಯ ಪೊಲೀಸ್ ಅಧಿಕಾರಿಗಳ ಗಮನ ಸೆಳೆದರೂ ಪ್ರಯೋಜನವಾಗಿಲ್ಲ. ಹೀಗಾಗಿ ಪ್ರಕರಣದ ಮರು ತನಿಖೆಗೆ ಆಗ್ರಹಿಸಿ ಈಗ ಧರಣಿ ಸತ್ಯಾಗ್ರಹ ನಡೆಸಲಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಮೃತನ ಪತ್ನಿ ಸುನೀತಾ, ರವಿನಂದನ್, ನಾಗೇಶ್, ಹೊರಳವಾಡಿ ನಂಜುಂಡಸ್ವಾಮಿ, ಬಂಗವಾದಿ ನಾರಾಯಣಪ್ಪ ಉಪಸ್ಥಿತರಿದ್ದರು.

ವಕ್ಫ್ ಬೋರ್ಡ್ ನೋಟಿಸ್; ರೈತರ ಹಿತ ಕಾಪಾಡಲು ಆಗ್ರಹ



ಮೈಸೂರು,ಡಿ.3–ಆಂಧ್ರಪ್ರದೇಶದಂತೆ ರಾಜ್ಯದಲ್ಲೂ ವಕ್ಫ್ ಬೋರ್ಡ್ ವಜಾಗೊಳಿಸಬೇಕು ಎಂದು ಮೈಸೂರು ನಗರ ಬಿಜೆಪಿ ಉಪಾಧ್ಯಕ್ಷೆ ಹೇಮಾನಂದೀಶ್ ಆಗ್ರಹಿಸಿದ್ದಾರೆ. ವಕ್ಫ್ ಬೋರ್ಡ್ ಏಕಾಏಕಿ ನೋಟಿಸ್ ನೀಡಿದ್ದರಿಂದ ರೈತರು, ಮಠ ಮಂದಿರಗಳು, ಶಿಕ್ಷಣ ಸಂಸ್ಥೆಗಳು ಆತಂಕಕ್ಕೀಡಾಗಿವೆ. ಕಾಂಗ್ರೆಸ್ ನೇತೃತ್ವದ ಸರ್ಕಾರ ರೈತರ ಪರ, ಜನರ ಪರ, ಸಂವಿಧಾನದ ಪರ ಎಂದು ಹೇಳುತ್ತದೆ. ಅದನ್ನು ಈಗ ಸಾಬೀತುಪಡಿಸಬೇಕು. ವಕ್ಫ್ ಬೋರ್ಡ್, ರೈತರಿಗೆ ನೀಡಿರುವ ನೋಟಿಸ್ ಹಿಂಪಡೆದಿರುವುದು ಶಾಶ್ವತ ಪರಿಹಾರವಲ್ಲ. ಸರ್ಕಾರಕ್ಕೆ ನಿಜವಾಗಲೂ ರೈತರ ಬಗ್ಗೆ ಕಾಳಜಿಯಿದ್ದರೆ ಅವರ ಪಹಣಿಯಲ್ಲಿ ರೈತರ ಹೆಸರು ದಾಖಲಾಗುವಂತೆ ನೋಡಿಕೊಳ್ಳಬೇಕಿತ್ತು ಎಂದಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ


04.12.2024 ಬುಧವಾರ, ಮಳೆ ನಕ್ಷತ್ರ: ಜ್ಯೇಷ್ಠ, 02.12.2024 ರಿಂದ 15.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ,
ತಿಥಿ: ತದಿಗೆ, ನಕ್ಷತ್ರ: ಪೂಷಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕುತ್ತಿಗೆ ಹಾಗೂ ಬೆನ್ನುನೋವಿಗೆ ಅಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಬೆನ್ನುನೋವಿನ ಕಾರಣಗಳು, ಲಕ್ಷಣಗಳು ಮತ್ತು ಚಿಕಿತ್ಸೆ ಬಗ್ಗೆ ತಜ್ಞ ವೈದ್ಯರಿಂದ ಸಲಹೆ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಜೆಎಸ್‌ಎಸ್ ಸಂಗೀತ ಸಭಾ ಟ್ರಸ್ಟ್ :** ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಸಂಸ್ಮರಣಾ 21ನೇ ಸಂಗೀತ ಸಮ್ಮೇಳನ–2024, ಬೆಳಗ್ಗೆ 10ಕ್ಕೆ ವಿದ್ವತ್ ಗೋಷ್ಠಿ, ವಿದುಷಿ ಕೃತಿಕಾ ಶ್ರೀನಿವಾಸನ್ ಅವರಿಂದ ಪ್ರಾತ್ಯಕ್ಷಿಕೆ, ವಿದುಷಿ ಮಾನಸೀ ಪ್ರಸಾದ್ ಅವರಿಂದ ಪ್ರಾತ್ಯಕ್ಷಿಕೆ, ಸಂಜೆ 5.30 ರಿಂದ ವಿದುಷಿ ರಕ್ಷಿತಾ ರಮೇಶ್ ಅವರಿಂದ ವೀಣಾವಾದನ, ವಿದ್ವಾನ್ ವಿಷ್ಣುವರ್ಧನ–ಮೃದಂಗ; ಸಂಜೆ 6.30 ರಿಂದ ವಿದ್ವಾನ್ ಡಾ. ವಿದ್ಯಾಭೂಷಣ ಅವರಿಂದ ಗಾಯನ, ವಿದ್ವಾನ್ ಪ್ರಾದೇಶಾಚಾರ್–ವಯೋಲಿನ್, ವಿದ್ವಾನ್ ವಿ. ಪ್ರವೀಣ್–ಮೃದಂಗ, ವಿದ್ವಾನ್ ಬಿ.ಎಸ್. ರಘುನಂದನ್–ಘಟಂ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ' ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ರೋಹಿಣಿ ಸುಧಾಮ್, ವ್ಯಾಖ್ಯಾನ–ಪ್ರೊ. ಮೈಸೂರು ಕೃಷ್ಣಮೂರ್ತಿ, 6.50 ರೈತರಿಗೆ ಸಲಹೆ, 7.15 ವಾತ್ಸಲ್ಯವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಚಿತ್ರಗೀತೆಗಳು, 9.00 ನಂದನ, ಮನೋನಂದನ ಪ್ರಾಯೋಜಿತ ಆರೋಗ್ಯ ಕಾರ್ಯಕ್ರಮ, ಪ್ರಾಯೋಜಕರು : ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ ಮೈಸೂರು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ತರುಣ್ ಭಟ್ಟಾಚಾರ್ಯ–ಸಂತೂರ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ, 1.20 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಪುತ್ತೂರ್ ಗಣೇಶ್–ಸ್ಯಾಕ್ಸೋಫೋನ್ ವಾದನ, 4.00 ಮಹಿಳಾರಂಗ, 4.45 ಹಿಂದಿ ಪಾಠ–ಡಾ. ಮಾಧವಿ ಭಂಡಾರಿ, 6.50 ಕೃಷಿರಂಗ : ರೈತ ಬ್ರ್ಯಾಂಡ್‌ಗಳ ನೇರ ಮಾರಾಟ. ಈ ಕುರಿತು ಮಂಡ್ಯದ ಯೋಗೀಶ್ ಅಪ್ಪಾಜಯ್ಯ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಸವಿನೆನಪು, 9.30 ಕ್ರೀಡಾಲೋಕ, 10.00 ನಾಟಕ–ವಿಗಡ ವಿಕ್ರಮರಾಯ, ರಚನೆ–ಸಂಸ, ಬಾನುಲಿ ರೂಪ– ಎಸ್.ವಿ. ಕೃಷ್ಣಶರ್ಮ, ನಿರ್ದೇಶನ–ಹೆಚ್. ಎಸ್. ಸರಸ್ವತಿ

■ **ಸಂಚಲನ ಮೈಸೂರು ರಂಗ ಸಂಸ್ಥೆ:** ಮಹಿಳಾ ನಾಟಕೋತ್ಸವ, ಸಂಜೆ 6 ಗಂಟೆಗೆ ಶಶಿ ಥಿಯೇಟರ್‌ನಿಂದ ಏಕವ್ಯಕ್ತಿ ರಂಗ ಪ್ರಯೋಗ 'ಕಸ್ತೂರ ಬಾ' ನಾಟಕ ಪ್ರದರ್ಶನ, ವೃತ್ತಿ ರಂಗಭೂಮಿ ಕಲಾವಿದೆ ಸರಸ್ವತಿ ಜುಲೇಖಾ ಬೇಗಂ ಅವರಿಗೆ ರಂಗ ಗೌರವ, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರದ ಆವರಣ.

■ **ಪಾತಿ ಫೌಂಡೇಷನ್ :** ಡಾ. ವಿಷ್ಣುವರ್ಧನ್‌ರವರ ಪುಣ್ಯಸ್ಮರಣೆ ಅಂಗವಾಗಿ ಸಿಂಹದ ನೆನಪು ಸಂಗೀತ ಸಂಜೆ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಇಳೈ ಆಳ್ವಾರ್ ಸ್ವಾಮೀಜಿ, ಮೈಸೂರು ಜಿಲ್ಲಾ ಮತ್ತು ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಹಿರಿಯ ಸಮಾಜ ಸೇವಕ ಕೆ. ರಘುರಾಂ ವಾಜಪೇಯಿ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ ಆವರಣ, ಜೆಎಲ್‌ಬಿ ರಸ್ತೆ, ಸಂಜೆ 5 ಗಂಟೆಗೆ.

ಭಾರಿ ಮಳೆಗೆ ದ್ವಿಶತಮಾನದ ಅಂಚಿನಲ್ಲಿರುವ ಮೈಸೂರಿನ ಗರಡಿಮನೆಯ ಗೋಡೆ ಕುಸಿತ

ನಿತ್ಯವೂ ಸಾಧನೆ ಮಾಡುತ್ತಿದ್ದ ಕುಸ್ತಿಪಟುಗಳು ಕಂಗಾಲು



ಪಾರಂಪರಿಕ ಉಸ್ತಾದ್ ಶ್ರೀನಿವಾಸಣ್ಣನವರ ಗರಡಿ ಮನೆ

ಮೈಸೂರು, ಡಿ.3(ಎಸ್‌ಬಿಡಿ)– ಮೈಸೂರಿನಲ್ಲಿ ಸುರಿದ ಭಾರಿ ಮಳೆಯಿಂದಾಗಿ ಪಾರಂಪರಿಕ ಗರಡಿ ಮನೆಯೊಂದರ ಗೋಡೆ ಕುಸಿದು ಬಿದ್ದಿದೆ.

ನಗರದ ಲಷ್ಕರ್ ಮೊಹಲ್ಲಾದ ಇರ್ವಿನ್ ರಸ್ತೆ ಪಕ್ಕದ ಬೆಂಕಿನವಾಬ ರಸ್ತೆಯಲ್ಲಿರುವ ಸುಮಾರು 188 ವರ್ಷಗಳ ಪಾರಂಪರಿಕ 'ಉಸ್ತಾದ್ ಶ್ರೀನಿವಾಸಣ್ಣನವರ ಗರಡಿ ಮನೆಯ ಗೋಡೆ ಮಂಗಳವಾರ ಕುಸಿದು ಬಿದ್ದಿದ್ದು, ಇಲ್ಲಿ ನಿತ್ಯ ಅಭ್ಯಾಸ ಮಾಡುವ ಕುಸ್ತಿಪಟುಗಳು ಕಂಗಾಲಾಗಿದ್ದಾರೆ.

ಶಿಥಿಲಾವಸ್ಥೆಯಲ್ಲಿರುವ ಈ ಗರಡಿ ಹಿಂಭಾಗದ ಮಟ್ಟಿ ಮನೆಯ ಗೋಡೆ ಮೊದಲೇ ಬಿರುಕು ಬಿಟ್ಟಿತ್ತು. ಪಾರಂಪರಿಕ ಗರಡಿ ಮನೆಯ ಸಂರಕ್ಷಣೆಗೆ ಜನಪ್ರತಿನಿಧಿಗಳ ಸಹಾಯಕ್ಕೆ ಮನವಿ ಮಾಡಲಾಗಿತ್ತು. ಆದರೆ ಈ ನಿಟ್ಟಿನಲ್ಲಿ ಪರಿಶೀಲನೆ ಬಿಟ್ಟು ಮತ್ಯಾವುದೇ ಪ್ರಯತ್ನವಾಗಲಿಲ್ಲ. ಹಾಗಾಗಿ ಪೈಲ್ವಾನರುಗಳೇ ಕೈಹೆಂಚಿನ ಚಾವಣಿಯನ್ನು ದುರಸ್ತಿ ಮಾಡಿಕೊಂಡು ಗೋಡೆಗೆ ರಕ್ಷಣೆ ನೀಡಿದ್ದರು. ಆದರೆ ಭಾನುವಾರ ರಾತ್ರಿಯಿಂದ ಮಂಗಳವಾರ ಮುಂಜಾನೆವರೆಗೂ ಎಡೆಬಿಡದೆ ಮಳೆ ಸುರಿದ ಪರಿಣಾಮ ಮಟ್ಟಿ ಮನೆಯ ಗೋಡೆ ಕುಸಿದಿದೆ.

ನೆರವು ನೀಡಿದ್ದ ಮಹಾರಾಜರು: ದೆಹಲಿ, ಪಂಜಾಬ್ ಸೇರಿದಂತೆ ಹೊರ ರಾಜ್ಯಗಳ ಘಟಾನುಘಟಿ ಜಗಮಲ್ಲರನ್ನೇ ಮಣಿಸಿದ್ದ ಉಸ್ತಾದ್ ಶ್ರೀನಿವಾಸಣ್ಣನವರು 1836ರಲ್ಲಿ ಈ ಗರಡಿ ನಿರ್ಮಿಸಿದರು. ಹಾಗಾಗಿ ಗರಡಿಗೆ ಅವರ ಹೆಸರೇ ಉಳಿದುಬಂದಿದೆ. ಗರಡಿ ಸ್ಥಾಪನೆಗೆ ಮೈಸೂರು ಸಂಸ್ಥಾನದ ಅಂದಿನ ರಾಜ ಮುಮ್ಮಡಿ ಕೃಷ್ಣರಾಜ ಒಡೆಯರ್ ಸಹಕಾರ ನೀಡಿದ್ದರು. ಉಸ್ತಾದ್ ಶ್ರೀನಿವಾಸಣ್ಣ, ಪೈ.ದೊಡ್ಡತಮ್ಮಯ್ಯ, ಚನ್ನಣ್ಣ, ಸಿದ್ದಣ್ಣ ಆಚಾರ್, ಚಿನ್ನಕೃಷ್ಣಪ್ಪ, ನಾಗರಾಜ್ ಅವರಂತಹ ನೂರಾರು ಪೈಲ್ವಾನರು ಇದೇ ಗರಡಿ ಮನೆಯಲ್ಲಿ ಸಾಧನೆ ಮಾಡಿದ್ದಾರೆ. ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಪೈಲ್ವಾನರೂ ಇಲ್ಲಿನ ಮಟ್ಟಿಯಲ್ಲಿ ಪಟ್ಟು ಹಾಕಿದ್ದಾರೆ. ಈಗಲೂ ಹತ್ತಾರು ಮಕ್ಕಳು ಹಾಗೂ ಯುವಕರು ಕುಸ್ತಿ ಅಭ್ಯಾಸ ಮಾಡುತ್ತಿದ್ದಾರೆ.

ಗರಡಿ ರಕ್ಷಣೆಗೆ ಮನವಿ: ಮೈಸೂರಿನಲ್ಲಿ ಪಾರಂಪರಿಕ ನಾಡಕುಸ್ತಿ ನೇಪಥ್ಯಕ್ಕೆ ಸರಿಯುವ ಆತಂಕ ಸೃಷ್ಟಿಯಾಗಿದೆ. ಹಲವು ಗರಡಿಗಳು ಕಳೆಗುಂದಿರುವ ಕಾರಣ ಕುಸ್ತಿ ವೈಭವ ಕಳೆಗುಂದಿದೆ. ನಗರ ವ್ಯಾಪ್ತಿಯಲ್ಲಿದ್ದರೂ ಗ್ರಾಮೀಣ ಸೊಗಡು ಉಳಿಸಿಕೊಂಡಿರುವ ಕೆಲವು ಪ್ರದೇಶಗಳಲ್ಲಿ ಮಾತ್ರ ಗರಡಿ ಮನೆಗಳ ನಿರ್ವಹಣೆ ಮಾಡಲಾಗಿದೆ. ಆದರೆ ಹಲವು ಗರಡಿ ಮನೆಗಳು ಸುಸ್ಥಿತಿಯಲ್ಲಿಲ್ಲ. ಹಿರಿಯ ಪೈಲ್ವಾನರ ನಿರಂತರ ಒತ್ತಡದಿಂದಾಗಿ ದಶಕದ ಹಿಂದೆ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಮೂಲಕ ಶಿಥಿಲಗೊಂಡ ಗರಡಿಗಳ ಪುನರ್ ನಿರ್ಮಾಣ ಹಾಗೂ ವ್ಯಾಯಾಮ ಸಲಕರಣೆಗಳನ್ನು ಕಲ್ಪಿಸುವ ಪ್ರಯತ್ನ ನಡೆದಿತ್ತಾದರೂ ಎಲ್ಲಾ ಗರಡಿಗಳಿಗೂ ಪುನಶ್ಚೇತನ ಭಾಗ್ಯ ಸಿಕ್ಕಿಲ್ಲ. ಹಾಗೆಯೇ ಪಾರಂಪರಿಕ ಹಿನ್ನೆಲೆಯುಳ್ಳ ಉಸ್ತಾದ್ ಶ್ರೀನಿವಾಸಣ್ಣನವರ ಗರಡಿ ಮನೆಗೆ ಈವರೆಗೂ ಕಾಯಕಲ್ಪ ದೊರೆತಿಲ್ಲ ಈಗಲಾದರೂ ಜನಪ್ರತಿನಿಧಿಗಳು ಪಾರಂಪರಿಕ ಗರಡಿ ಸಂರಕ್ಷಣೆಗೆ ಮುಂದಾಗಬೇಕು. ಈ ಮೂಲಕ ನಾಡಕುಸ್ತಿಯನ್ನು ಮುಂದಿನ ತಲೆಮಾರುಗಳಿಗೆ ತಲುಪಿಸಲು ನೆರವಾಗಬೇಕು ಎಂದು ಪೈಲ್ವಾನರು ಮನವಿ ಮಾಡಿದ್ದಾರೆ.



ಗರಡಿಯ ಮಟ್ಟಿ ಮನೆ ಗೋಡೆ ಮಳೆಗೆ ಕುಸಿದಿರುವುದು.

ಮರ ಉರುಳಿ ಎರಡು ಕಾರು ಜಖಂ



ಮೈಸೂರು, ಡಿ.3(ಎಸ್‌ಪಿಎನ್)– ಫೆಂಗಲ್ ಚಂಡಮಾರುತದ ಎಫೆಕ್ಟ್‌ನಿಂದಾಗಿ ಮೈಸೂರಿನಲ್ಲಿ ಸೋಮವಾರ ಭಾರೀ ಮರ ಉರುಳಿ ಬಿದ್ದು ಎರಡು ಕಾರುಗಳು ಜಖಂಗೊಂಡಿವೆ.

ಸರಸ್ವತಿಪುರಂನ ಕಾಮಾಕ್ಷಿ ಆಸ್ಪತ್ರೆ ರಸ್ತೆಯ ನಿವಾಸಿ ಪ್ರಿಯ ಎಂಬುವರು ಮನೆ ಮುಂಭಾಗ ನಿಲ್ಲಿಸಿದ್ದ ಕಾರಿನ ಮೇಲೆ ಮರ ಬಿದ್ದು ಜಖಂಗೊಂಡಿದೆ. ಅಲ್ಲದೆ, ಪಕ್ಕದಲ್ಲಿದ್ದ ನಿಂತಿದ್ದ ಮತ್ತೊಂದು ಕಾರಿಗೂ ಹಾನಿಯಾಗಿದೆ

ಡಿ.5ರಂದು, ಹಾಸನದಲ್ಲಿ ಜನಕಲ್ಯಾಣ ಸಮಾವೇಶ

ಮಾಜಿ ಶಾಸಕ ಎಂಕೆಎಸ್ ನೇತೃತ್ವದಲ್ಲಿ ಬೈಕ್ ರ್‍ಯಾಲಿ



ಮೈಸೂರಿನ ವಿದ್ಯಾರಣ್ಯಪುರಂನಲ್ಲಿ ಕಾಂಗ್ರೆಸ್ ಜನಕಲ್ಯಾಣ ಸಮಾವೇಶದ ಜಾಗೃತಿಗಾಗಿ ಬೈಕ್ ರ್‍ಯಾಲಿ ನಡೆಯಿತು.

ಮೈಸೂರು, ಡಿ.3(ಎಸ್‌ಪಿಎನ್)– ಹಾಸನದಲ್ಲಿ ಡಿ.5ರಂದು ಕೆಪಿಸಿಸಿ ವತಿಯಿಂದ ಆಯೋಜಿಸಿರುವ ಜನಕಲ್ಯಾಣ ಹಾಗೂ ಸ್ವಾಭಿಮಾನ ಸಮಾವೇಶ ಹಿನ್ನೆಲೆಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ನೇತೃತ್ವದ ಬೈಕ್ ರ್‍ಯಾಲಿಗೆ ಮೈಸೂರಿನ ವಿದ್ಯಾರಣ್ಯಪುರಂನ ಚಾಮುಂಡಿವನದ ಬಳಿ ಮಂಗಳವಾರ ಚಾಲನೆ ನೀಡಲಾಯಿತು.

ಈ ವೇಳೆ ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಆರ್.ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಶ್ರೀಧರ್, ನಗರ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಆರ್.ಹೆಚ್.ಕುಮಾರ್, ನಿರಾಲ್ ಶಾ, ಜೋಗಿ ಮಹೇಶ್, ಮಂಜು, ರಮೇಶ್, ರಾಜು, ವಿಶ್ವ, ಗುಣಶೇಖರ್, ಮಹ್ಮದ್ ಫಾರೂಖ್, ರಾಕೇಶ್, ಮಹೇಂದ್ರ ಗೌಡ, ಅಬ್ರಾಹಿಂ, ವೀಣಾ, ಭವ್ಯ, ಚಂದ್ರಕಲಾ, ವಿನಯ್ ಕುಮಾರ್, ಡೈರಿ ವೆಂಕಟೇಶ್, ಎಂ.ಕೆ.ಅಶೋಕ್, ಕುಮಾರ್ (ಕುಮ್ಮಿ), ಮಧುರಾಜ್ ,ಲಖನ್, ರವೀಶ್,ಜಾನಿ ಸೇರಿದಂತೆ ಇತರರು ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದರು.

ವಿದ್ಯಾರಣ್ಯಪುರಂನ ಚಾಮುಂಡಿವನದಿಂದ ಪ್ರಾರಂಭವಾದ ಬೈಕ್ ರ್‍ಯಾಲಿ, ಅಶೋಕ್‌ಪುರಂ ರಾಮಸ್ವಾಮಿ ವೃತ್ತ ಶಾಂತಲಾ ಸಿಗ್ನಲ್, ಸಿದ್ದಪ್ಪ ಚೌಕ, ನಂಜುಮಳಿಗೆ, ನೂರೊಂದು ಗಣಪತಿ ದೇವಸ್ಥಾನ, ಅಗ್ರಹಾರ, ರಾಮಾನುಜ ರಸ್ತೆಯಿಂದ ಹಾದು ಕನಕಗಿರಿಯಲ್ಲಿ ಮುಕ್ತಾಯಗೊಂಡಿತು. 300ಕ್ಕೂ ಹೆಚ್ಚು ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನ ಬಿಂಬಿಸುವ ಘೋಷಣೆಗಳನ್ನು ಕೂಗಿ ಸಾರ್ವಜನಿಕರ ಗಮನ ಸೆಳೆದರು.

ನಂತರ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಚುನಾವಣೆಗೆ ಮೊದಲು ನೀಡಿದ್ದ ಐದು ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ಜನರ ಆಶೋತ್ತರಗಳಿಗೆ ಸ್ಪಂದಿಸಿದೆ. ಇದನ್ನೆಲ್ಲಾ ಸಹಿಸದ ಬಿಜೆಪಿ–ಜೆಡಿಎಸ್‌ನ ಸುಳ್ಳು ವದಂತಿಗಳಿಗೆ ಜನರು ಕಿವಿಕೊಡಬಾರದು ಎಂದು ಮನವಿ ಮಾಡಿದರು.

ಆ ನಿಟ್ಟಿನಲ್ಲಿ ಡಿ.5 ರಂದು ಹಾಸನದಲ್ಲಿ ನಡೆಯುವ ಬೃಹತ್ ಜನಕಲ್ಯಾಣ ಸಮಾವೇಶಕ್ಕೆ ಕೃಷ್ಣರಾಜ ಕ್ಷೇತ್ರದಿಂದ ಸಾವಿರಾರು ಮಂದಿ ಆಗಮಿಸಿ ಸರ್ಕಾರದ ಜನಪರ ಕಾರ್ಯಕ್ರಮಗಳನ್ನು ಬೆಂಬಲಿಸಬೇಕು ಮತ್ತು ರಾಜ್ಯದ ಸಮಗ್ರ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಮಾಸಿಕ 30 ಸಾವಿರಕ್ಕಿಂತ ಅಧಿಕ ವೇತನ ಪಡೆಯುವ ಸಹಕಾರಿಗಳು ಯಶಸ್ವಿನಿ ಆರೋಗ್ಯ ಯೋಜನೆಗೆ ಅರ್ಹರಲ್ಲ

ಮೈಸೂರು, ಡಿ.3(ಎಸ್‌ಪಿಎನ್)– ಖಾಸಗಿ ಕಂಪನಿ ಅಥವಾ ಸಂಘ–ಸಂಸ್ಥೆಗಳಲ್ಲಿ ತಿಂಗಳಿಗೆ 30 ಸಾವಿರಕ್ಕಿಂತ ಹೆಚ್ಚು ವೇತನ ಪಡೆಯುವ ಯಾವುದೇ ಸಹಕಾರಿ, ಯಶಸ್ವಿನಿ ಆರೋಗ್ಯ ಯೋಜನೆಗೆ ಅರ್ಹರಾಗುವುದಿಲ್ಲ ಎಂಬ ಷರತ್ತು ಸೇರಿದಂತೆ ಒಟ್ಟು 19 ಷರತ್ತು ವಿಧಿಸಿ ಹೊಸ ಯಶಸ್ವಿನಿ ಕಾರ್ಡ್ ನೋಂದಣಿಗೆ ಅವಕಾಶ ನೀಡಿ ಸಹಕಾರ ಇಲಾಖೆ ಅಧೀನ ಕಾರ್ಯದರ್ಶಿ(3) ಜಿ.ರಂಗನಾಥ ಆದೇಶಿಸಿದ್ದಾರೆ.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ113 ವೆಚ್ಚ–2/2022ರ ದಿನಾಂಕ:21.11.2024ರಂದು ಸಹಮತಿ ಮೇರೆಗೆ ಹೊರಡಿಸಿದ್ದು, 2024–25ನೇ ಸಾಲಿಗೆ ನೋಂದಣಿ 1.12.2024ರಿಂದ ಪ್ರಾರಂಭವಾಗಲಿದ್ದು, ದಿನಾಂಕ:31.12.2024 ರವರೆಗೆ ಇರಲಿದೆ. 2024–25ನೇ ಸಾಲಿನಲ್ಲಿ ಚಿಕಿತ್ಸಾ ಅವಧಿಯನ್ನು ದಿ:1.4.2025ರಿಂದ ದಿನಾಂಕ:31.3.2026ರವರೆಗೆ ನಿಗದಿಗೊಳಿಸಿ ಆದೇಶಿಸಿದ್ದಾರೆ.

ಯಶಸ್ವಿನಿ ಕಾರ್ಡನ್ನು ಫಲಾನುಭವಿಗಳು ಜೋಪಾನವಾಗಿ ಇಟ್ಟುಕೊಳ್ಳತಕ್ಕದು. ಒಂದು ವೇಳೆ ಕಾರ್ಡ್ ಕಳೆದುಕೊಂಡಲ್ಲಿ 250 ರೂ. ಶುಲ್ಕವನ್ನು ಟ್ರಸ್ಟ್‌ಗೆ ಪಾವತಿಸಿ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರ ಮೂಲಕ ಟ್ರಸ್ಟ್‌ಗೆ ಮನವಿ ಸಲ್ಲಿಸಿ ಡೂಪ್ಲಿಕೇಟ್ ಕಾರ್ಡನ್ನು ಪಡೆಯಬಹುದು. ನಂತರ ಹಳೆ ಕಾರ್ಡ್ ಸ್ಥಗಿತಗೊಳಿಸಲಾಗುವುದು. ಪ್ರಸ್ತುತ ಯಶಸ್ವಿನಿ ಯೋಜನೆಯಡಿ ಟ್ರಸ್ಟ್ ಗುರ್ತಿಸಿದ 1650 ವಿವಿಧ ಚಿಕಿತ್ಸೆಗಳು ಮತ್ತು 478 ಐಸಿಯು ಚಿಕಿತ್ಸೆಗಳೂ ಸೇರಿದಂತೆ ಒಟ್ಟು 2128 ಚಿಕಿತ್ಸೆಗಳನ್ನು ಅಳವಡಿಸಿಕೊಳ್ಳಲಾಗಿದೆ.

ರಾಜ್ಯದಲ್ಲಿ ಕೆಲವು ಹಾಲು ಉತ್ಪಾದಕರ ಒಕ್ಕೂಟಗಳು, ಡಿಸಿಸಿ ಬ್ಯಾಂಕುಗಳು ಹಾಗೂ ಸಹಕಾರ ಸಂಘ–ಸಂಸ್ಥೆಗಳು ಅವುಗಳ ಸದಸ್ಯರ ವಾರ್ಷಿಕ ಯಶಸ್ವಿನಿ ವಂತಿಕೆಯಲ್ಲಿ ಭಾಗಶಃ ಅಥವಾ ಪೂರ್ಣ ವಂತಿಗೆಯನ್ನು ಸಂಘದ ಸ್ವಂತ ಬಂಡವಾಳದಿಂದ ಭರಿಸುತ್ತಿವೆ. ಈ ಪದ್ಧತಿಯನ್ನು ರಾಜ್ಯದ ಎಲ್ಲಾ ಸಹಕಾರ ಸಂಘಗಳೂ ಕೂಡ ಅನುಸರಿಸುವಂತೆ ಪ್ರೋತ್ಸಾಹಿಸತಕ್ಕದ್ದು ಎಂದು ಸಲಹೆ ನೀಡಿದ್ದಾರೆ.

ಗ್ರಾಮೀಣ ಸಹಕಾರ ಸಂಘಗಳ, ಸ್ವ–ಸಹಾಯ ಗುಂಪುಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.500 ವಂತಿಕೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಗಳ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೂ ರೂ.100 ಗಳನ್ನು ಪಾವತಿಸತಕ್ಕದ್ದು. ನಗರ ಸಹಕಾರ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ 1000 ರೂ.ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರ ಕುಟುಂಬದ ಪ್ರತಿಯೊಬ್ಬ ಹೆಚ್ಚುವರಿ ಸದಸ್ಯರಿಗೆ ರೂ.200 ಗಳನ್ನು ಪಾವತಿಸತಕ್ಕದ್ದು. ಎಸ್ಸಿ–ಎಸ್ಟಿ ಸದಸ್ಯರಿಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ. ಎಸ್ಸಿ–ಎಸ್ಟಿ ವಿವರಗಳಿಗೆ ಸಂಬಂಧಿಸಿದಂತೆ ಜಾತಿ ಪ್ರಮಾಣ ಪತ್ರದಲ್ಲಿರುವ ಆರ್‌ಡಿ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು ಎಂದು ತಿಳಿಸಿದ್ದಾರೆ.

ಪ್ರತಿ ವರ್ಷ ಆ ಸಮುದಾಯದ ಸದಸ್ಯರ ವಂತಿಗೆಯನ್ನು ಸರ್ಕಾರದಿಂದ ಭರಿಸಲಾಗುವುದು. ಸದಸ್ಯರಿಂದ ಸಂಗ್ರಹಿಸಿದ ವಂತಿಗೆ ಮೊತ್ತದ ಪೈಕಿ ಪ್ರತಿ ಕಾರ್ಡಿಗೆ 25ರೂ.ಗಳನ್ನು ಸಹಕಾರ ಸಂಘಗಳು ಪ್ರೋತ್ಸಾಹಧನವಾಗಿ ಇಟ್ಟುಕೊಂಡು ಉಳಿದ ಮೊತ್ತವನ್ನು ಸದಸ್ಯತ್ವ ನೋಂದಣಿಯಾದ ಏಳು ದಿನಗಳೊಳಗಾಗಿ ಸಂಬಂಧಿಸಿದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಯಶಸ್ವಿನಿ ಟ್ರಸ್ಟ್ ಹೊಂದಿರುವ ಖಾತೆಗೆ ಜಮಾ ಮಾಡತಕ್ಕದ್ದು ಎಂದಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗುರುಗಳು : ಕ್ರಿಕೆಟ್ ಬಗ್ಗೆ ಅತೀ ಚಿಕ್ಕದಾದ ಒಂದು ಪ್ರಬಂಧ ಬರೆಯಿರಿ.

ಶಿಷ್ಯ : ಮಳೆ ಬಂದ ಕಾರಣ ಪಂದ್ಯವನ್ನು ರದ್ದುಗೊಳಿಸಲಾಗಿದೆ.

ಮೈಸೂರು ಮಿತ್ರ

ಬುಧವಾರ, 4 ಡಿಸೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ನಾಳೆಯೇ ಸಾಯಬಹುದೆಂಬಂತೆ ಜೀವಿಸು, ಯಾವಾಗಲೂ ಜೀವಿಸುತ್ತೇನೆ ಎಂಬಂತೆ ಕಲಿಕೆಯನ್ನು ಮಾಡು. –ಮಹಾತ್ಮಗಾಂಧಿ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಗದ್ದೆ ಸುಟ್ಟರೂ ಹಾಳಾಗದು ಗಾದೆ.

ನಿಮ್ಮ ಪತ್ರಗಳು

ಬಿಜೆಪಿಯಲ್ಲಿ ಭುಗಿಲೆದ್ದಿರುವ ಭಿನ್ನಮತದ ದಳ್ಳುರಿ ಶಮನ ಅವಶ್ಯ

ಮಾನ್ಯರೆ,

ರಾಜ್ಯದಲ್ಲಿ 138 ಶಾಸಕ ಬಲ ಹೊಂದಿರುವ ಕಾಂಗ್ರೆಸ್ ಪಕ್ಷದಲ್ಲಿ ಕಚ್ಚಾಟಗಳಿಲ್ಲ. ಆಂತರಿಕ – ಬಹಿರಂಗವಾಗಿ ಎಲ್ಲೂ ಶಿಸ್ತಿನ ಗೆರೆ ದಾಟಿದ ನಿದರ್ಶನಗಳಿಲ್ಲ. ಆದರೇ ಶಿಸ್ತಿನ ಪಕ್ಷವೆಂದೇ ಖ್ಯಾತವಾಗಿರುವ ಕೇವಲ 66 ಶಾಸಕರನ್ನು ಹೊಂದಿರುವ ಬಿಜೆಪಿ ಸ್ಥಿತಿ ಈಗ ಮನೆಯೊಂದು ಮೂರು ಬಾಗಿಲು ಎಂಬಂತಾಗಿದೆ. ನಾಯಕರ ಬಹಿರಂಗ ಕಲಹ – ಕಚ್ಚಾಟಗಳಿಂದ ಪಕ್ಷದ ಸ್ಥಿತಿ ಅಯೋಮಯವಾಗಿದೆ. ಹಾದಿಬೀದಿಯಲ್ಲಿ ನಡೆಯುತ್ತಿರುವ ವಾಕ್ಸಮರಗಳಿಂದ ಪಕ್ಷದಲ್ಲಿ ಭಿನ್ನಮತದ ದಳ್ಳುರಿ ಭುಗಿಲೆದ್ದಿದೆ.

ವಿಜಾಪುರದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಹಿರಂಗವಾಗೇ ರಾಜ್ಯಾಧ್ಯಕ್ಷರ ವಿರುದ್ಧ ತಿರುಗಿ ಬಿದ್ದಿದ್ದಾರೆ. ಕರ್ನಾಟಕದಲ್ಲಿ ಬಿಜೆಪಿಯನ್ನು ಕಟ್ಟಿ ಬೆಳೆಸಿದ ಯಡಿಯೂರಪ್ಪ ಹಾಗೂ ಅವರ ಕುಟುಂಬದ ವಿರುದ್ಧ ಸಮರವನ್ನೇ ಸಾರಿದ್ದಾರೆ. ಇತ್ತ ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರು ಕಾಂಗ್ರೆಸ್ ಸಖ್ಯದಲ್ಲಿದ್ದಾರೆ. ಇದಕ್ಕೆ ತಾವೇನೂ ಕಡಿಮೆ ಇಲ್ಲವೆಂಬಂತೆ ವಿಜಯೇಂದ್ರರ ಬಣ ಬಲ ಪ್ರದರ್ಶನಕ್ಕೆ ಮುಂದಾಗಿ ಸೆಡ್ಡು ಹೊಡೆದು ನಿಂತಿದೆ. ಈ ತ್ರಿಬಣಗಳ ಪ್ರತಿಷ್ಠೆಯ ಪರಾಕಾಷ್ಟೆಯಿಂದ ಪಕ್ಷದ ವರ್ಚಸ್ಸಿಗೆ ತೀವ್ರ ಧಕ್ಕೆ ಬಂದಿರುವುದು ಅಪ್ಪಟ ಸತ್ಯ.

ಆರಂಭದಲ್ಲೇ ಈ ಬೇಗುದಿಯನ್ನು ನಿಯಂತ್ರಿಸಬೇಕಿದ್ದ ಹೈಕಮಾಂಡ್‌ನ ನಿರ್ಲಿಪ್ತ ಧೋರಣೆ ರಾಜ್ಯ ಬಿಜೆಪಿಯ ಆಂತರಿಕ ಕಲಹ ಕಚ್ಚಾಟಗಳು ಪರಾಕಾಷ್ಟೆ ತಲುಪಲು ಕಾರಣವೆನ್ನಬಹುದು. ದೆಹಲಿ ನಾಯಕರ ಈ ಉದಾಸೀನ ಪ್ರವೃತ್ತಿಯಿಂದಾಗಿಯೇ ರಾಜ್ಯದ ಮೂರು ಉಪ ಚುನಾವಣೆಗಳಲ್ಲಿ ಪಕ್ಷ ನೆಲ ಕಚ್ಚಲು ಕಾರಣವಾಗಿದೆ. ನಾಯಕರ ನಡುವೆಯೇ ಒಮ್ಮತ – ಒಡಂಬಡಿಕೆಗಳು ಇಲ್ಲದಿರುವಾಗ ಇನ್ನೂ ಪಕ್ಷದ ಕಾರ್ಯಕರ್ತರಿಗೆ ಸಂಘಟನೆಯ ಆಸಕ್ತಿ ಉಳಿಯುವುದಾದರೂ ಹೇಗೆ ಎಂಬ ಪ್ರಶ್ನೆ ಇಲ್ಲಿ ಎದುರಾಗುತ್ತದೆ. ರಾಜ್ಯ ಬಿಜೆಪಿಯಲ್ಲಿ ಭುಗಿಲೆದ್ದಿರುವ ಭಿನ್ನಮತದ ದಳ್ಳುರಿಯನ್ನು ಶಮನ ಮಾಡದಿದ್ದಲ್ಲಿ ಕಾಂಗ್ರೆಸ್ ಮತ್ತಷ್ಟು ಬಲಿಷ್ಠಗೊಂಡು ಬಿಜೆಪಿ ಕನಿಷ್ಠಕ್ಕೆ ಇಳಿಯುವುದು ನಿಶ್ಚಿತ.

– ಹೆಚ್.ಆರ್.ಪ್ರಸಾದ್, ವಿವೇಕಾನಂದ ನಗರ, ಮೈಸೂರು.

ಕಾಡುಪ್ರಾಣಿಗಳ ಹಾವಳಿಗೆ ಕೊನೆಯೇ ಇಲ್ಲವೇ?

ಮಾನ್ಯರೆ,

ಕಾಡಂಚಿನ ಗ್ರಾಮವಾದ ನಂಜನಗೂಡು ತಾಲೂಕು ಬಳ್ಳೂರುಹುಂಡಿ ಗ್ರಾಮದಲ್ಲಿ ರೈತರು ಪ್ರತಿನಿತ್ಯ ಭಯದಿಂದಲೇ ಬದುಕಬೇಕಿದೆ. ಹೌದು, ಯಾವ ಸಮಯದಲ್ಲಿ ಆನೆಗಳು, ಕಾಡುಪ್ರಾಣಿಗಳು ಎಲ್ಲಿ ಬೆಳೆದ ಫಸಲು, ಸಸಿಗಳನ್ನು ನಾಶ ಮಾಡಿ ಬಿಡುತ್ತಾವೋ ಎಂದು ರೈತರು ಭಯದಿಂದಲೇ ಜೀವನ ನಡೆಸುತ್ತಿದ್ದಾರೆ. ಹಾಡು ಹಗಲೇ ಕಾಡುಪ್ರಾಣಿಗಳು ಗ್ರಾಮದಲ್ಲಿ ಬೀಡು ಬಿಟ್ಟಿರುತ್ತವೆ. ಅರಣ್ಯ ಇಲಾಖೆಯವರನ್ನು ಕೇಳಿದರೆ ಕೆಲವೊಂದು ಪಟಾಕಿಗಳನ್ನು ಕೊಟ್ಟು ಸುಮ್ಮನಾಗಿ ಬಿಡುತ್ತಾರೆ. ಆದ ನಷ್ಟಕ್ಕೆ ಪರಿಹಾರ ಬಂದರೆ ಬಂದಂಗೆ, ಇಲ್ಲದಿದ್ದರೆ ಇಲ್ಲ. ಪರಿಹಾರ ಬಂದರೂ ಪ್ರಯೋಜನವಿಲ್ಲ. ವರ್ಷವಿಡೀ ಕಷ್ಟಪಟ್ಟು ಬೆಳೆಸಿದ ಫಸಲು ಮತ್ತು ಸಸಿಗಳನ್ನು ಕೇವಲ ಒಂದು ರಾತ್ರಿಯಲ್ಲಿ ಆನೆಗಳು ಮತ್ತು ಇತರ ಕಾಡುಪ್ರಾಣಿಗಳು ನಾಶಮಾಡಿಬಿಡುತ್ತವೆ. ಇದರ ನೋವು ರೈತರಿಗಷ್ಟೇ ಗೊತ್ತು. ಇನ್ನು ಹಗಲು ಹೊತ್ತಿನಲ್ಲೇ ದನಕರುಗಳ ಮೇಲೆ ಹುಲಿ ಚಿರತೆಗಳು ದಾಳಿ ಮಾಡುತ್ತಿವೆ.

ಈಗಾಗಲೇ ಕಾಡಿನ ಸುತ್ತ ಕಂಬಿಗಳನ್ನು ಅಳವಡಿಸಿದ್ದಾರೆ. ಆದರೂ ಸಹ ಪ್ರಯೋಜನವಿಲ್ಲದಂತಾಗಿದೆ. ದಯವಿಟ್ಟು ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್ ಹಾಗೂ ಸಂಸದರಾದ ಸುನಿಲ್ ಬೋಸ್ ಅವರು ಇದರ ಬಗ್ಗೆ ಕೂಡಲೇ ಗಮನಹರಿಸಿ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಮನವಿ.

–ಮಹಾಂತೇಶ್ ಬಸಪ್ಪ, ಬಳ್ಳೂರುಹುಂಡಿ ಗ್ರಾಮ, ನಂಜನಗೂಡು ತಾ.

ಇವಿಎಂ ಬಗ್ಗೆ ಸುಪ್ರೀಂಕೋರ್ಟ್‌ನ ತೀರ್ಪು ಸ್ವಾಗತಾರ್ಹ

ಮಾನ್ಯರೆ,

ಮತಯಂತ್ರಗಳ (ಇವಿಎಂ) ಬದಲು ಬ್ಯಾಲೆಟ್ ಪೇಪರ್ ಮತದಾನ ವ್ಯವಸ್ಥೆಯನ್ನು ಮತ್ತೆ ಜಾರಿಗೊಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿರುವುದು ಸ್ವಾಗತಾರ್ಹ. ಇದರಿಂದಾಗಿ ಚುನಾವಣೆಗಳಲ್ಲಿ ಇವಿಎಂಗಳ ಬಳಕೆಯ ಹಾದಿ ಮತ್ತಷ್ಟು ಸುಗಮವಾಗಲಿದೆ.

ಚುನಾವಣೆಯಲ್ಲಿ ಗೆದ್ದರೆ ಇವಿಎಂಗಳನ್ನು ತಿರುಚಿಲ್ಲ, ಸೋತಾಗ ಇವಿಎಂಗಳನ್ನು ತಿರುಚಲಾಗುತ್ತದೆ ಎಂದು ಹೇಳಲಾಗುತ್ತದೆ. ಹೀಗಾಗಿ ಇಂಥ ವಾದ ಮಂಡಿಸಲು ಇದು ಸೂಕ್ತ ಜಾಗ ಅಲ್ಲ ಎಂಬ ಘನ ನ್ಯಾಯಾಲಯದ ಅಭಿಪ್ರಾಯ ಪ್ರಶಂಸನೀಯ. ಏಕೆಂದರೆ ಚುನಾವಣೆಯಲ್ಲಿ ಬಳಸುವ ತಾಂತ್ರಿಕ ವ್ಯವಸ್ಥೆಗಳ ಭದ್ರತೆ ಕುರಿತಂತೆ ವಿವಿಧ ರಾಜಕೀಯ ಪಕ್ಷಗಳ ನಾಯಕರಲ್ಲಿ ಎದ್ದಿರುವ ಸಂದೇಹಗಳು ಹಾಸ್ಯಾಸ್ಪದ ಅನಿಸುತ್ತದೆ. ಚುನಾವಣೆಯಲ್ಲಿ ತಮ್ಮ ಪಕ್ಷ ಗೆದ್ದರೆ ಅದು ನ್ಯಾಯಯುತ, ಸೋತರೆ ಅದು ಇವಿಎಂನಲ್ಲಿನ ದೋಷ ಎಂಬ ಕೆಲ ರಾಜಕೀಯ ಪಕ್ಷಗಳ ಆರೋಪ ಪ್ರತ್ಯಾರೋಪಗಳು ಇವಿಎಂ ಮೇಲೆ ಮತದಾರ ಹೊಂದಿರುವ ವಿಶ್ವಾಸಾರ್ಹತೆಯನ್ನು ಕಡಿಮೆ ಮಾಡಿ ಚುನಾವಣೆ ವ್ಯವಸ್ಥೆಯನ್ನು ಅನುಮಾನಿಸಿದಂತಾಗುತ್ತದೆ. ಹೀಗಾಗಿ ಈ ಎಲ್ಲಾ ಸಂದೇಹಗಳನ್ನು ಬಗೆಹರಿಸಲು ಇವಿಎಂ ಮೂಲಕ ನಡೆಸುವ ಚುನಾವಣೆಯನ್ನು ಸುಪ್ರೀಂ ಕೋರ್ಟ್ ಪ್ರಸ್ತುತ ಎತ್ತಿ ಹಿಡಿದಿರುವುದು, ಜನರು ಚುನಾವಣಾ ಆಯೋಗ ರೂಪಿಸುವ ಚುನಾವಣಾ ವ್ಯವಸ್ಥೆಯ ಮೇಲೆ ಇಟ್ಟಿರುವ ನಂಬಿಕೆ ಹಾಗೂ ವಿಶ್ವಾಸಾರ್ಹತೆಯನ್ನು ಇಮ್ಮಡಿಗೊಳಿಸಿದಂತಾಗಿದೆ.

ಚುನಾವಣಾ ಪ್ರಕ್ರಿಯೆ ಎಂಬುದು ಪವಿತ್ರವಾದದ್ದು. ಅದರ ಪಾವಿತ್ರ್ಯತೆ ಕಾಪಾಡಿಕೊಳ್ಳುವುದು ಎಲ್ಲರ ಜವಾಬ್ದಾರಿ. ಯಾರಿಗೂ ಕೂಡ ಅವರ (ಚುನಾವಣಾ ಆಯೋಗದ) ನಿರೀಕ್ಷೆಯಂತೆ ಕೆಲಸ ನಡೆಯುತ್ತಿಲ್ಲ ಎನ್ನುವ ಆತಂಕವನ್ನು ಮೂಡಿಸುವುದು ತರವಲ್ಲ. ಈ ನಿಟ್ಟಿನಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಸುಪ್ರೀಂಕೋರ್ಟ್‌ನ ತೀರ್ಪನ್ನು ಸ್ವಾಗತಿಸಿ ನಮ್ಮ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಚುನಾವಣಾ ವ್ಯವಸ್ಥೆಯ ಮೇಲೆ ನಂಬಿಕೆ ಇರಿಸಿ ಅದನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸುವ ಪ್ರಕ್ರಿಯೆಯನ್ನು ಪ್ರತಿಯೊಬ್ಬರೂ ಮಾಡಬೇಕಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಸ್ವಾಮೀಜಿಗಳು ಸಮುದಾಯ ಒಡೆಯುವ ಕೆಲಸ ಮಾಡಬಾರದು

ಮಾನ್ಯರೆ,

ಮುಸ್ಲಿಮರಿಗೆ ಮತದಾನದ ಹಕ್ಕು ಇಲ್ಲದಂತೆ ಮಾಡುವ ಕಾನೂನನ್ನು ಜಾರಿಗೆ ತರಬೇಕೆಂದು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಶ್ರೀ ಚಂದ್ರಶೇಖರನಾಥ ಸ್ವಾಮೀಜಿಯವರು ಬೆಂಗಳೂರಿನಲ್ಲಿ ನಡೆದ ಭಾರತೀಯ ಕಿಸಾನ್ ಸಂಘದಿಂದ ನಡೆದ ವಕ್ಫ್ ಮಂಡಳಿ ವಿರುದ್ಧದ ರೈತರ ಘರ್ಜನಾ ಸಭೆಯಲ್ಲಿ ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ಪ್ರಬಲ ಸಮುದಾಯದ ಸ್ವಾಮೀಜಿ ಒಬ್ಬರು ಈ ರೀತಿ ಬಹಿರಂಗ ಸಭೆಯಲ್ಲಿ ಹೇಳುವುದು ಎಷ್ಟರ ಮಟ್ಟಿಗೆ ಸರಿ? ಚನ್ನಪಟ್ಟಣದ ವಿಧಾನಸಭೆಯ ಉಪ ಚುನಾವಣೆಯಲ್ಲಿ ಮುಸ್ಲಿಂ ಸಮುದಾಯ ನಿಖಿಲ್ ಕುಮಾರಸ್ವಾಮಿ ಅವರನ್ನು ಬೆಂಬಲಿಸಲಿಲ್ಲ ಎಂಬ ಒಂದೇ ಕಾರಣಕ್ಕೆ ಈ ಹೇಳಿಕೆ ನೀಡಿದ್ದಾರೆ. ಒಬ್ಬ ಸ್ವಾಮೀಜಿಯಾಗಿ ಒಂದು ಸಮುದಾಯವನ್ನು ಮತ್ತೊಂದು ಸಮುದಾಯದ ವಿರುದ್ಧ ಎತ್ತಿ ಕಟ್ಟುವ ಕೆಲಸ ಮಾಡಬಾರದು. ಸಮುದಾಯಗಳನ್ನು ಒಂದುಗೂಡಿಸುವ ಕೆಲಸ ಮಾಡಬೇಕೇ ಹೊರತು ಸಮುದಾಯಗಳನ್ನು ಒಡೆಯುವ ಕೆಲಸ ಮಾಡಬಾರದು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಮೈಸೂರಿನ ರತ್ನಾಭರಣ ಪ್ರೊ. ರಾ. ವಿಶ್ವೇಶ್ವರನ್

ಮೈಸೂರು ನಗರದ ಸಂಸ್ಕೃತಿಗೆ ಸುತ್ತೂರಿನ ಶ್ರೀಮಠ ಜಗದ್ಗುರು ಶ್ರೀ ಶಿವರಾತ್ರೀಶ್ವರ ಮಠವು ಕೊಟ್ಟ, ಕೊಡುತ್ತಿರುವ ಕೊಡುಗೆ ಅಪಾರ. ರಾಜಗುರುತಿಲಕ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಸಂಸ್ಮರಣೆಯಲ್ಲಿ ಶ್ರೀ ಮಠವು ನಡೆಸುತ್ತಿರುವ ವಾರ್ಷಿಕ ಸಂಗೀತ ಸಮ್ಮೇಳನ ಸಂಸ್ಕೃತಿಯ ಸಾರವಾಗಿರುವ ಶಾಸ್ತ್ರೀಯ ಸಂಗೀತಕ್ಕೆ ಅಪೂರ್ವ ಮನ್ನಣೆಯನ್ನು ತಂದುಕೊಟ್ಟ ಶ್ರೇಷ್ಠ ಕಾರ್ಯಕ್ರಮವಾಗಿದೆ. ಜಗದ್ಗುರುಗಳು ಆಸ್ಥೆ ವಹಿಸಿ ಸಂಗೀತ ಲೋಕದ ದಿಗ್ಗಜರನ್ನು ಅಧ್ಯಕ್ಷ ಸ್ಥಾನಕ್ಕೆ ಆರಿಸಿ ಗೌರವಿಸುತ್ತಿದ್ದಾರೆ.

ಈ ವರ್ಷ ಡಿಸೆಂಬರ್ 2ರಿಂದ (2.12.2024) ಆರನೆಯ ತಾರೀಖಿನವರೆಗೆ ಜರುಗಲಿರುವ ಸಮ್ಮೇಳನದ ಅಧ್ಯಕ್ಷರನ್ನಾಗಿ ಮೂರ್ತಿವೆತ್ತ ಸಂಗೀತವೇ ಆಗಿರುವ ಸಂಗೀತ ಸಾರ್ವಭೌಮಾದಿ ನಾನಾ ಪ್ರಶಸ್ತಿಗಳಿಂದ ಅಲಂಕೃತರಾದ ಪ್ರೊ. ರಾ. ವಿಶ್ವೇಶ್ವರನ್ ಅವರನ್ನು ಆರಿಸಿ ಗೌರವಿಸುತ್ತಿರುವುದು. ನಮ್ಮ ಊರಿನ ಸಮಸ್ತ ಸಂಸ್ಕೃತಿ ಪ್ರಿಯರಿಗೂ ಅಭೂತಪೂರ್ವ ಹರ್ಷವನ್ನು ತಂದಿದೆ. ರತ್ನಂ ಸಮಾಗಚ್ಛತು ಕಾಂಚನೇನ ಎಂಬ ಮಹಾಕವಿ ಕಾಳಿದಾಸನ ವಾಕ್ಯದಂತೆ ಮೈಸೂರಿನ ಅನರ್ಘ್ಯರತ್ನವಾದ ಡಾ. ರಾ. ವಿಶ್ವೇಶ್ವರನ್ ಅವರಿಗೆ ಶ್ರೀ ಮಠವು ಚಿನ್ನದ ಪದಕದ ಅಲಂಕಾರವನ್ನು ಮಾಡುತ್ತಿರುವುದು ಸಂಗೀತ ಸರಸ್ವತೀ ದೇವಿಗೆ ಮಾಡುತ್ತಿರುವ ಅರ್ಪಣೆ ಎಂಬುದರಲ್ಲಿ ಸಂಶಯವಿಲ್ಲ. ಈ ಸಂದರ್ಭದಲ್ಲಿ ಅವರಿಗೆ ಶ್ರೀಮಠವು ಕೊಡುತ್ತಿರುವ ಸಂಗೀತ ವಿದ್ಯಾನಿಧಿ ಎಂಬ ಪ್ರಶಸ್ತಿಯೂ ಯಥಾರ್ಥವೇ ಆಗಿದೆ.

ಪ್ರೊ. ರಾ. ವಿಶ್ವೇಶ್ವರನ್ ಜನಿಸಿದ್ದು ಸಂಗೀತದ ಮನೆತನದಲ್ಲಿ. ಇವರ ಪೂಜ್ಯ ಮಾತಾಪಿತೃಗಳು ಶ್ರೀ ಬಿ. ರಾಮಯ್ಯ ಮತ್ತು ಶ್ರೀಮತಿ ವರಲಕ್ಷ್ಮಮ್ಮ. 1931ರಲ್ಲಿ ಜನಿಸಿದ ಪ್ರೊ. ವಿಶ್ವೇಶ್ವರನ್ ಅವರಿಗೆ ಈಗ ತೊಂಬತ್ತಮೂರು ವರ್ಷಗಳ ಹರೆಯ. ಸಂಗೀತ ಪ್ರಪಂಚದಲ್ಲಿ ಏನೇನನ್ನು ಸಾಧಿಸಬೇಕೋ ಎಲ್ಲವನ್ನೂ ಸಾಧಿಸಿಕೊಂಡಿರುವ ಸಿದ್ಧಿಪುರುಷ. ವೀಣೆ ಇವರು ನುಡಿಸುವ ವಾದ್ಯವಲ್ಲ, ಇವರ ಅವಿಭಾಜ್ಯ ಅಂಗ. ಪ್ರವೀಣ ಎಂಬ ಪದ ನಿಜವಾಗಿ, ಯಥಾರ್ಥವಾಗಿ ಅನ್ವಯಿಸುವುದು ಇವರಿಗೆ ಮಾತ್ರ. ವೀಣಾಯಾಂ ಪ್ರಕೃಷ್ಟಃ ಪ್ರವೀಣಃ ಎಂದಲ್ಲವೆ. ಅದರ ವ್ಯುತ್ಪತ್ತಿ? ಬೇರೆಯವರಲ್ಲಿ ಆ ಪದದ ಪ್ರಯೋಗ ಗೌಣವಾಗಿ ಮಾತ್ರ ಹಾಗೆಂದರೆ ಅವರು ವೀಣಾವಾದನ ನಿಪುಣರು ಮಾತ್ರ ಎಂದು ತಿಳಿದುಕೊಳ್ಳಬೇಕಾಗಿಲ್ಲ. ಗಾನದಲ್ಲೂ ಅವರು ಅಪ್ರತಿಮರು. ಗೋಟು ವಾದ್ಯದಲ್ಲೂ ವಿಚಕ್ಷಣರು. ಸಂಗೀತ ಶಾಸ್ತ್ರದ ಸಕಲ ಪ್ರಮೇಯಗಳೂ ಅವರಿಗೆ ಕರತಲಾಮಲಕ. ಮೈಸೂರಿನ ಲಲಿತ ಕಲೆಗಳ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸಂಗೀತದ ಹೃದಯ ತರಂಗಗಳನ್ನು ಅವರು ವಿವರಿಸುತ್ತಿದ್ದಾಗ ಕೇಳಿ ಅರಿತುಕೊಂಡ ವಿದ್ಯಾರ್ಥಿಗಳೇ ಧನ್ಯರು.

ವಾಗ್ಗೇಯಕಾರರಾಗಿ ವಿಶ್ವೇಶ್ವರನ್ : ಪುರಂದರದಾಸರು, ತ್ಯಾಗರಾಜರು, ಮುತ್ತುಸ್ವಾಮಿ ದೀಕ್ಷಿತರು ನಮ್ಮೆದುರಲ್ಲಿ ಇಲ್ಲ. ಆದರೆ ಅವರ ಕೃತಿಗಳು ನಮ್ಮ ಮುಂದೆ ಇವೆ. ಅವುಗಳಲ್ಲಿ ಅವರು ಬದುಕಿದ್ದಾರೆ. ಭಾಗ್ಯದ ಲಕ್ಷ್ಮಿ ಬಾರಮ್ಮ ಎಂಬ ಹಾಡನ್ನು ಸಾವಿರ ಬಾರಿ ಕೇಳಿದರೂ ತೃಪ್ತಿಯಾಗುವುದಿಲ್ಲ. ಪ್ರತಿಯೊಂದು ಸಲ ಕೇಳಿದಾಗಲೂ ಪುರಂದರ ದಾಸರನ್ನು ನೆನಪಿಸಿಕೊಳ್ಳುತ್ತೇವೆ. ಎಂದುರೋ ಮಹಾನುಭಾವುಲು ಎಂಬುದನ್ನು ಕೇಳಿದಾಗಲೆಲ್ಲ ತ್ಯಾಗರಾಜರ ಸ್ಮರಣೆ ಉಂಟಾಗುತ್ತದೆ. ವಾತಾಪಿ ಗಣಪತಿಂ ಭಜೇ ಮುಂತಾದ ಸಂಸ್ಕೃತ ಕೀರ್ತನೆಗಳು ದೀಕ್ಷಿತರನ್ನು ನೆನಪಿಗೆ ತರುತ್ತವೆ. ನಾಸ್ತಿ ತೇಷಾಂ ಯಶಃ ಕಾಯೇಜ ರಾಮರಣಜಂ ಭಯಮ್. ವಾಗ್ಗೇಯಕಾರರು ಸದಾ ಶಾಶ್ವತ. ಹಾಗೆ ಪ್ರೊ.ವಿಶ್ವೇಶ್ವರನ್ ವಾಗ್ಗೇಯಗಳನ್ನು ರಚಿಸಿ ಸಂಗೀತ ಪ್ರಪಂಚದ ಚಿರಂಜೀವಿ ಪದವಿಯನ್ನೂ ಪಡೆದಿದ್ದಾರೆ. ವಾಗ್ಗೇಯ ವಿಶ್ವೇಶ್ವರೀ ಗಾನ ಜಗತ್ತಿನಲ್ಲಿ ಶಾಶ್ವತವಾಗಿರುತ್ತದೆ. ಈ ಕೃತಿಯ ವೈಶಿಷ್ಟ್ಯವೇನೆಂದರೆ ಕೃತಿಕಾರರು ಮೂರು ಭಾಷೆಗಳಲ್ಲಿ ಕೃತಿಗಳನ್ನು ರಚಿಸಿರುವುದು. ದೇವ ಭಾಷೆಯಾದ ಸಂಸ್ಕೃತ, ದೇಶಭಾಷೆಯಾದ ಕನ್ನಡ, ಆಪ್ತ ಭಾಷೆಯಾದ ತೆಲುಗು –ಇವೆಲ್ಲದರಲ್ಲೂ ಪ್ರೊ. ವಿಶ್ವೇಶ್ವರನ್ ಅವರಿಗೆ ಪ್ರಭುತ್ವ ವಿದೆ. ಸಂಗೀತ–ಸಾಹಿತ್ಯ–ಲೋಕಾನುಭವಗಳ ಅಂತಸ್ಸಾರವು ಈ ಕೀರ್ತನೆಗಳಲ್ಲಿ ಓತಪ್ರೋತವಾಗಿ ಅವಿನಾಭಾವದಿಂದ ಹರಿದಿವೆ. ಇವರನ್ನು ಕುರಿತು ಪ್ರಾತಃಸ್ಮರಣೀಯ ಆರ್.ಕೆ.ಶ್ರೀಕಂಠನ್ ಅವರು ಮುನ್ನುಡಿಯಲ್ಲಿ ಹೇಳಿರುವ 'ಅನ್ಯೂನ ನವೀನ ಗೇಯ ರಚನಾದಕ್ಷ, A vidwan academically par excellence ಎಂಬ ಮಾತುಗಳು ಸತ್ಯಸ್ಯ ಸತ್ಯವಾಗಿವೆ. ವಿಶ್ವೇಶ್ವರನ್ ಅವರ ಕೃತಿಗಳಲ್ಲಿ ಸಂತರ ಸ್ತುತಿ, ಸಂಗೀತ ಸ್ತುತಿ, ಮೌಲ್ಯ ಸ್ತುತಿ ಹಾಸುಹೊಕ್ಕಾಗಿ ಸೇರಿಕೊಂಡಿರುವುದನ್ನು ಅವರೇ ತಿಳಿಸಿದ್ದಾರೆ.



ಪ್ರೊ. ರಾ. ವಿಶ್ವೇಶ್ವರನ್

ಜನಗಳು ಕೇಳುವುದನ್ನು ಮಾತ್ರ ಕೊಡಬೇಕೋ ಅಥವಾ ಅವರ ಸಂಸ್ಕಾರವನ್ನು ಉತ್ತಮಗೊಳಿಸುವುದನ್ನು ಕಲಾವಿದನು ನೀಡಬೇಕೋ ಎಂಬ ಪ್ರಶ್ನೆಗೆ ಪ್ರೊ.ವಿಶ್ವೇಶ್ವರನ್ ಉತ್ತರವನ್ನು ಕೊಟ್ಟಿದ್ದಾರೆ. "ಪ್ರತಿ ವಿನಿಕೆಯಲ್ಲೂ –ಕಡೆಯ ಪಕ್ಷ ಅವಕಾಶವೀಯುವಾಗೆಲ್ಲ –ತನ್ನ ಶ್ರೋತೃಗಳನ್ನು ಸುಶಿಕ್ಷಿತರನ್ನಾಗಿಸಿ ಅವರ ಕೇಳ್ಮೆಯ ಗುಣಮಟ್ಟವನ್ನು ಹೆಚ್ಚಿಸುವುದರಲ್ಲಿ ಕಲಾವಿದನ ಹೊಣೆಯೇ ಅಧಿಕವೆಂದು ನನ್ನ ತೀವ್ರ ನಂಬಿಕೆ." ಈ ಲೋಕ ಹಿತದೃಷ್ಟಿಯಿಂದಲೇ ಅವರ ಕಛೇರಿಗಳೂ ರಚನೆಗಳೂ ಸಾಗಿವೆ ಎಂಬುದು ಅನುಭವ ಸಿದ್ಧ.

ವಾಗ್ಗೇಯ ವಿಶ್ವೇಶ್ವರಿಯಲ್ಲಿ ನೂರ ಹನ್ನೆರಡು ರಚನೆಗಳನ್ನು ಪ್ರಸ್ತುತ ಪಡಿಸಿದ್ದಾರೆ. ಮಾತು–ಧಾತು ಎಂಬ ಎರಡೂ ಇವುಗಳಲ್ಲಿ ಉತ್ತುಂಗತೆಯನ್ನು ಪಡೆದಿವೆ. ಒಂದೊಂದಕ್ಕೂ ಅವರು ಅರ್ಥ ವ್ಯಾಖ್ಯಾನವನ್ನೂ ಸ್ವರಪ್ರಸ್ತಾರವನ್ನು ಕೊಟ್ಟಿರುವುದರಿಂದ ಗಾಯಕರು ಸಾಹಿತ್ಯಲೋಪವನ್ನು ಮಾಡದೆ ಸಂಗೀತವನ್ನು ವಿಸ್ತರಿಸಲು ಅವಕಾಶವಾಗಿದೆ.

ವಿಶ್ವೇಶ್ವರ ಎಂಬ ಅಂಕಿತವೂ ರಾಗದ ಹೆಸರಿನ ಸೂಚನೆಯೂ ಎಲ್ಲ ಕೃತಿಗಳಲ್ಲೂ ಬಂದಿರುವುದು ಪ್ರೊ. ವಿಶ್ವೇಶ್ವರನ್ ಅವರ ಸೃಷ್ಟಿ ನೈಪುಣ್ಯವನ್ನು ಸೂಚಿಸುತ್ತವೆ. ಸಂಸ್ಕೃತ ಕೀರ್ತನೆಯಾದ 'ಶ್ರೀಮಚ್ಛಂಕರಗುರುವರಂ ವಂದೇ' ಎಂಬ ಕೀರ್ತನೆಯಲ್ಲ, ಅದು ಸಂಸ್ಕೃತಭಾಷಾನಿಬದ್ಧವಾಗಿದ್ದರೂ ತೋಡಿ ಎಂಬ ಪದವನ್ನು ತಂದಿರುವುದು ಪ್ರತಿಭಾ ಮಾತ್ರ ಸಾಧ್ಯ.

'ಅದ್ವೈತವಿಶೇಷತೋ ಡಿಂಡಿಮವಾದ್ಯ ಪ್ರವಾದನ ಶೀಲಂ'

ಎಂಬಲ್ಲಿ ತೋಡಿ ಎಂಬುದನ್ನು ತಂದಿರುವುದು ಶ್ರೋತೃಗಳಿಗೆ ಆನಂದ ವಿಶೇಷವನ್ನುಂಟು ಮಾಡುತ್ತದೆ.

ತೆಲುಗು ಭಾಷೆಯಲ್ಲಿ ರಚಿತವಾಗಿರುವ –

ತಪಮುಜೇಸಿತೇ ಫಲಮೇಮಿ
ತ್ರಿಪುರಸುಂದರಿನಿ ತನಲೋನೇ ಚೂಡಕ
ಕಪಟಮುನು ವಂಚನಲನು ವದಲಕ
ಜಪ ಪೂಜಾದಾನಮುಲ ಜೇಸಿತೇನೇಮಿ

ಎಂಬ ಕೀರ್ತನೆ ಸಮಾಜದ ಎಚ್ಚರಿಕೆಗೆ, ಆತ್ಮ ವಿಮರ್ಶೆಗೆ ಕೊಟ್ಟಿರುವ ಆಹ್ವಾನದಂತಿದೆ. ಬೂಟಾಟಿಕೆಗೆ ಕೊಟ್ಟ ಛಡಿ ಏಟಿನಂತಿರುವ ಇದನ್ನು ಎಷ್ಟು ಸಲ ಕೇಳಿದರೂ ಸಾಲದು.

ಕನ್ನಡದಲ್ಲಿರುವ –

ಧನವೆಂಬೋ ತುರಗವೇರಿ ಧಾವಿಸಿ
ಹಾದಿ ತಪ್ಪಿದೆಲ್ಲೋ ಮನುಜ
ಧನ ಧನ ಇನ್ನಿಷ್ಟು ಮತ್ತಷ್ಟು ಎನುತ
ತನಗೂ ಇಲ್ಲದೆ ಬಚ್ಚಿಟ್ಟ
ಮಾತಲಿ ಅಮೃತ, ಮನದಿ ವಿಷಾನೃತ
ದಾತನ ಹಸ್ತ ಖ್ಯಾತಿಗೆ ಚಿತ್ತ
ಭಕ್ತನ ವೇಷ ಕಾರ್ಯದಿ ಮೋಸ
ನಾಥ ವಿಶ್ವೇಶನ ಬಿಟ್ಟ ಧನದ ದಾಸ

ಎಂಬುದು ಎಷ್ಟು ಮಾರ್ಮಿಕವಾಗಿದೆ! ಕಾಂತಾಸಮ್ಮಿತತಯೋಪದೇಶಯುಜೇ ಎಂಬ ಮಮ್ಮಟನ ಮಾತಿಗೆ ಇದು ಉತ್ತಮ ಉದಾಹರಣೆ.

ಸಂಗೀತಾಕಾಶದ ಪರಮೋಜ್ಜ್ವಲತಾರೆಗಳಾದ ಪುರಂದರದಾಸರು, ತ್ಯಾಗರಾಜರು ಮತ್ತು ಮುತ್ತುಸ್ವಾಮಿ ದೀಕ್ಷಿತರು ಸಂಪೂರ್ಣಾನುಗ್ರಹವನ್ನು ಮಾಡಿರುವುದರಿಂದಲೇ ಭಾಷಾತ್ರಯದಲ್ಲಿ ಪ್ರೊವಿಶ್ವೇಶ್ವರನ್ ಈ ವಾಗ್ಗೇಯಗಳನ್ನು ಜಗತ್ತಿಗೆ ಕೊಡಲು ಸಾಧ್ಯವಾಗಿದೆ ಎಂದು ನಿಸ್ಸಂಶಯವಾಗಿ ಹೇಳಬಹುದು. ದಾಸರೇ ಹರಿದಾಸರೆಂದರೆ ನೀವಲ್ಲವೇ ಎಂಬ ಕನ್ನಡ ಕೀರ್ತನೆ, ಏರೀತಿ ಗೌರವಿಂತುನೇ ನಿನ್ನ ತ್ಯಾಗರಾಜ ಎಂಬ ತೆಲುಗು ಕೀರ್ತನೆ, ಗುರುಗುಹರೂಪಂ ಮುತ್ತುಸ್ವಾಮಿನಂ ಎಂಬ ಸಂಸ್ಕೃತ ಕೀರ್ತನೆ ಆ ಮೂವರಲ್ಲಿ ವಿಶ್ವೇಶ್ವರನ್ ಅವರಿಗಿರುವ ಭಕ್ತ್ಯುತ್ಕರ್ಷವನ್ನು ತೋರಿಸುತ್ತವೆ.

ನಮ್ಮ ಕಾಲದ ಮಹಾವಿಭೂತಿಪುರುಷರಾದ ಪ್ರೊ. ವಿಶ್ವೇಶ್ವರನ್ ಅವರಿಗೆ ವಚಸಾ ಶಿರಸಾ ಮನಸಾ ವಂದಿಸುವುದಲ್ಲದೆ ನಾವೇನನ್ನು ಮಾಡಲು ಸಾಧ್ಯ? ಅವರಿಗೆ ಈ ವಚನ ಕುಸುಮಗಳನ್ನು ಅರ್ಪಿಸುತ್ತೇನೆ.

ವಿಶ್ವೇಶ್ವರಂ ಪ್ರಣಮಾಮ್ಯ ಹಂ
ಜ್ಞಾನ ವಿಜ್ಞಾನದಂ ಗಾನವಿದ್ಯಾನಿಧಿಮ್ ।
ಮಹೀ ಶೂರಪುರೀಕೀರ್ತಿವರ್ಧನಂ
ಮಹೀಶಾದಿಭಿಸ್ಸದಾ ವಂದಿತಮ್
ಅಹಿನ್ಯೈರ್ಜನ್ಯೈರ್ಭೃಶಂ ಪೂಜಿತಂ
ಮಹಾಸರಸ್ವತೀ ಕೃಪಾಪಾಲಿತಮ್ ವಿಶ್ವೇಶ್ವರಂ।

ಅಗಣಿತ ಗುಣಗಣಭೂಷಿತಂ ಗುರುಂ
ನಿಗಮಾಗಮಗಣ ಕಲ್ಪಪಾದಪಂ
ವಿಗಲಿತಕೋಪಂ ಸುಗಮವಿಹಾರಂ
ಖಗಪತಿಕೇತನಭಕ್ತಂ ಧೀರಮ್ । ವಿಶ್ವೇಶ್ವರಂ

ನಾನಾ ಭಾಷಾವಾಗ್ಗೇಯಕರಂ
ವೀಣಾವಾದನ ರಂಜಿತವಿಶ್ವಂ
ಪ್ರಾಣಾಧಿಕ ನಿಜಪತ್ನೀಮಹಿತಂ
ಸನಿಧಪ ಸುಸ್ವರ ನಾದವಿನೋದಮ್।
ವಿಶ್ವೇಶ್ವರಂ

ಸಾಗರಾಂತ ವಸುಧಾವಿಭೂಷಣಂ
ತ್ಯಾಗರಾಜಪ್ರಿಯಂ ರಾಗರಾಜಶ್ರೀಯಂ
ಯೋಗದರ್ಶನೇಡಿತಂ ರಮ್ಯಗೀತಿಪೋಷಣಂ
ನಾಗರಾಜವಿನುತಂ ಸಕಲಜಗನ್ಮಂಗಲಂ ವಿಶ್ವೇಶ್ವರಂ ॥

ನಂಜನಗೂಡಿನ ಕಡಕೊಳ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ



ನಂಜನಗೂಡಿನ ಕಡಕೊಳ ಸರ್ಕಾರಿ ಪ್ರೌಢಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳು ತಮ್ಮ ಶಿಕ್ಷಕ ವೃಂದದವರನ್ನು ಆತ್ಮೀಯವಾಗಿ ಅಭಿನಂದಿಸಿ, ಗುರುವಂದನಾ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎನ್.ಹುಚ್ಚೇಗೌಡ, ಎ.ಎಂ.ಪುರದಪ್ಪ, ಎಲ್.ಜಯಮ್ಮ, ವೈ.ಪ್ರಭಾಕರ್, ಸಿ.ಸುಲೋಚನಾ, ಎಂ.ಸರಸ್ವತಿ, ವಿದ್ಯಾ ಜಿ.ನಾಯಕ್, ಹೆಚ್.ಎಸ್.ಪುಟ್ಟರಾಜು, ಮೊಹಮ್ಮದ್ ರಫೀಕ್ ಪಾಷ, ಅನ್ನಪೂರ್ಣ, ಟಿ.ಎಂ.ಬಸವರಾಜು, ಕುಮಾರ್, ಕೆ.ಎನ್.ರವಿ, ಭಾರತಿ, ಪ್ರಸಾದ್, ಮಂಜುನಾಥ್, ನಟರಾಜು, ಎಸ್‌ಡಿಎಂಸಿ ಉಪಾಧ್ಯಕ್ಷ ಶಿವಕುಮಾರ್ ಹಾಗೂ ಹಳೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕೇರಳದಲ್ಲಿ ಬಸ್‌ಗೆ ಕಾರು ಡಿಕ್ಕಿ: ಐವರು ವೈದ್ಯ ವಿದ್ಯಾರ್ಥಿಗಳ ಸಾವು



ಆಲಪ್ಪುಳ: ಕೇರಳದ ಆಲಪ್ಪುಳದಲ್ಲಿ ಸಾರಿಗೆ ಬಸ್‌ಗೆ ಕಾರು ಡಿಕ್ಕಿ ಹೊಡೆದು ಐವರು ಯುವಕರು ಮೃತಪಟ್ಟಿದ್ದಾರೆ.

ಸೋಮವಾರ ರಾತ್ರಿ 10 ಗಂಟೆ ಸುಮಾರಿಗೆ ಕಳರ್‌ಕೋಡ್ ಬಳಿ ಅವಘಡ ಸಂಭವಿಸಿದೆ. ಮೃತರು ಸರ್ಕಾರಿ ವೈದ್ಯಕೀಯ ಕಾಲೇಜಿನ ಎಂಬಿಬಿಎಸ್ ವಿದ್ಯಾರ್ಥಿಗಳಾಗಿದ್ದಾರೆ. ಲಕ್ಷದ್ವೀಪ್‌ನ ದೇವಾನಂದನ್, ಮುಹಮ್ಮದ್ ಇಬ್ರಾಹಿಂ, ಆಯುಷ್ ಶಾಜಿ, ಶ್ರೀದೀಪ್ ವಲ್ಸನ್ ಮತ್ತು ಮುಹಮ್ಮದ್ ಜಬ್ಬಾರ್ ಮೃತ ದುರ್ದೈವಿಗಳು. ಕಾರಿನಲ್ಲಿ ಒಟ್ಟು 7 ಮಂದಿ ಇದ್ದರು. ಈ ಪೈಕಿ ಐವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಡಿಕ್ಕಿ ರಭಸಕ್ಕೆ ಕಾರು ಸಂಪೂರ್ಣ ಜಖಂಗೊಂಡಿದ್ದು, ವಾಹನ ಒಡೆದು ಒಳಗಿದ್ದ ಯುವಕರನ್ನು ಹೊರತೆಗೆಯಲಾಗಿದೆ. ಬಸ್ಸಿನಲ್ಲಿದ್ದ ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಪಘಾತದ ಬಳಿಕ ರಸ್ತೆಯಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿತ್ತು. ಅಪಘಾತದ ಕಾರಣ ಇನ್ನೂ ತಿಳಿದುಬಂದಿಲ್ಲ. ಘಟನೆ ಕುರಿತು ತನಿಖೆ ನಡೆಸಲಾಗುತ್ತಿದೆ.

ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷ

'ಗಾಂಧಿ ಭಾರತ' ಹೆಸರಲ್ಲಿ ವರ್ಷವಿಡೀ ಕಾರ್ಯಕ್ರಮಕ್ಕೆ ಸರ್ಕಾರ ನಿರ್ಧಾರ

ಬೆಂಗಳೂರು, ಡಿ.3– ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ನೇತೃತ್ವದಲ್ಲಿ 1924ರಲ್ಲಿ ನಡೆದ ಐತಿಹಾಸಿಕ ಕಾಂಗ್ರೆಸ್ ಅಧಿವೇಶನದ ಸ್ಮರಣಾರ್ಥ 'ಗಾಂಧಿ ಭಾರತ' ಹೆಸರಲ್ಲಿ ವರ್ಷವಿಡೀ ಅರ್ಥಪೂರ್ಣ ಕಾರ್ಯಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ. ಈ ಆಚರಣೆ ಜಗತ್ತಿಗೆ ಗಾಂಧಿ ಸಂದೇಶ ಸಾರುವಂತಿರಬೇಕು. ಸ್ವಾತಂತ್ರ್ಯ ಪೂರ್ವದಲ್ಲಿ ಮಹಾತ್ಮ ಗಾಂಧೀಜಿ ಭೇಟಿ ನೀಡಿದ ರಾಜ್ಯದ 120 ಸ್ಥಳಗಳನ್ನು ಅಭಿವೃದ್ಧಿಪಡಿಸಲು ರಾಜ್ಯ ಸರ್ಕಾರ ಯೋಜಿಸಿದೆ. ಜೊತೆಗೆ ರಿಚರ್ಡ್ ಅಟೆನ್‌ಬರೋ ಅವರ ಗಾಂಧಿ ಸಿನಿಮಾ ಕೂಡ ಕನ್ನಡದಲ್ಲಿ ನಿರ್ಮಾಣವಾಗಲಿದೆ. ಸುವರ್ಣ ವಿಧಾನ ಸೌಧದಲ್ಲಿ ಕಾಂಗ್ರೆಸ್ ಅಧಿವೇಶನ, ಸ್ವಾತಂತ್ರ್ಯ ಚಳವಳಿಯನ್ನು ಪ್ರತಿಬಿಂಬಿಸುವ ಛಾಯಾಚಿತ್ರ ಗ್ಯಾಲರಿ ನಿರ್ಮಾಣ ಮಾಡಲಾಗುವುದು. ಡಿ.26ರಂದು ಗಣ್ಯ ಪ್ರತಿನಿಧಿಗಳಿಗಾಗಿ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಡಿ.27ರಂದು ಸಾರ್ವಜನಿಕರಿಗೆ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸುವುದು, ಮೈಸೂರು ದಸರಾ ಮಾದರಿಯಲ್ಲಿ ಬೆಳಗಾವಿ ನಗರದ ಪ್ರಮುಖ 32 ಕಿಮೀ ಉದ್ದದ ರಸ್ತೆ ಹಾಗೂ 30 ವೃತ್ತಗಳ ದೀಪಾಲಂಕಾರ ಮಾಡಲಾಗುವುದು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ಅಧಿವೇಶನ ನಡೆದ ಸ್ಥಳದಲ್ಲಿ ವೀರಸೌಧ ಅಭಿವೃದ್ಧಿ. ಈ ಸ್ಥಳದಲ್ಲಿ ಗ್ರಂಥಾಲಯ, ಗಾಂಧಿ ಪ್ರತಿಮೆ ಅನಾವರಣ ಮಾಡಲಾಗುವುದು. ಬೆಳಗಾವಿಯ 2.1 ಕಿ.ಮೀ ಉದ್ದದ ಕಾಂಗ್ರೆಸ್ ರಸ್ತೆಯಲ್ಲಿ ಶತಮಾನೋತ್ಸವದ ಸ್ಮಾರಕವಾಗಿ ತಾತ್ಕಾಲಿಕ ವಿರೂಪಾಕ್ಷ ಗೋಪುರ ನಿರ್ಮಾಣ, ರೈಲು ಮಾರ್ಗದ ತಡೆಗೋಡೆಯುದ್ದಕ್ಕೂ ಉಬ್ಬು ಶಿಲ್ಪಗಳ ನಿರ್ಮಾಣ, ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ.

ಕಣಬರಗಿಯಲ್ಲಿ ಗಂಗಾಧರ ರಾವ್ ದೇಶಪಾಂಡೆಯವರ ಸ್ಮಾರಕದಲ್ಲಿ ಮೂರ್ತಿ ಸ್ಥಾಪನೆ, ಮ್ಯೂಸಿಯಂ ಉದ್ಘಾಟನೆ. ಹುದಲಿಯಲ್ಲಿ ಗಾಂಧೀ ಸ್ಮಾರಕ ಹಾಗೂ ಛಾಯಾಚಿತ್ರ ಗ್ಯಾಲರಿ ಅಭಿವೃದ್ಧಿ ಮಾಡಲಾಗುವುದು. ಗಾಂಧೀಜಿ ಅವರು ವಿವಿಧ ಕಾಲಘಟ್ಟಗಳಲ್ಲಿ ಭೇಟಿ ನೀಡಿದ ರಾಜ್ಯದ 120 ಸ್ಥಳಗಳಲ್ಲಿ ನೆನಪಿನ ಸ್ತಂಭಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿದೆ.

ಶತಮಾನೋತ್ಸವದ ನೆನಪಿಗೆ ವಿಶೇಷ ಅಂಚೆ ಚೀಟಿ ಬಿಡುಗಡೆಗೆ ನಿರ್ಧಾರ ಮಾಡಲಾಯಿತು. ವರ್ಷವಿಡೀ ಎಲ್ಲಾ ಶಾಲೆಗಳಲ್ಲಿ 'ಗಾಂಧಿ ಭಾರತ' ಅಡಿಯಲ್ಲಿ 'ನಾವು ಮನುಜರು' ಕಾರ್ಯಕ್ರಮಗಳ ಆಯೋಜನೆ. ಮಕ್ಕಳಲ್ಲಿ ಗಾಂಧೀಜಿ ವಿಚಾರಧಾರೆ ಬಗ್ಗೆ ಅರಿವು ಮೂಡಿಸಲು ವಿವಿಧ ಸ್ಪರ್ಧಾ ಕಾರ್ಯಕ್ರಮಗಳ ಆಯೋಜನೆ ಮಾಡಲು ನಿರ್ಧರಿಸಲಾಗಿದೆ. ಗಾಂಧೀಜಿ ಅವರು ಬೋಧಿಸಿದ ಸಪ್ತ ಪಾತಕಗಳು ಹಾಗೂ ಸಂವಿಧಾನದ ಪೀಠಿಕೆಗಳನ್ನು ಮುದ್ರಿಸಿ ಎಲ್ಲಾ ಶಾಲೆಗಳಲ್ಲಿ ವಿತರಿಸಲು ತೀರ್ಮಾನಿಸಲಾಗಿದೆ.

ಭಾರತದ ಸುದ್ದಿವಾಹಿನಿಗಳ ಪ್ರಸಾರ ನಿಷೇಧಕ್ಕೆ ಬಾಂಗ್ಲಾದೇಶ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಕೆ

ಢಾಕಾ: ತಮ್ಮ ವಿರುದ್ಧ ಪ್ರಚೋದನಕಾರಿ ಸುದ್ದಿಗಳನ್ನು ಉಲ್ಲೇಖಿಸಿ ಪ್ರಸಾರ ಮಾಡುತ್ತಿದ್ದು, ಭಾರತದ ಎಲ್ಲಾ ಸುದ್ದಿ ವಾಹಿನಿಗಳ ಪ್ರಸಾರವನ್ನು ನಿಷೇಧಿಸುವಂತೆ ಕೋರಿ ಬಾಂಗ್ಲಾದೇಶ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದೆ. ವಕೀಲ ಎಖ್ಲಾಸ್ ಉದ್ದೀನ್ ಭುಯಾನ್ ಎಂಬುವವರು ಈ ಅರ್ಜಿ ಸಲ್ಲಿಸಿದ್ದು, ಈ ವಿಷಯವನ್ನು ಅವರೇ ದೃಢಪಡಿಸಿದ್ದಾರೆ ಎಂದು ಢಾಕಾ ಟ್ರಿಬ್ಯೂನ್ ವರದಿ ಮಾಡಿದೆ.

ನ್ಯಾಯಮೂರ್ತಿಗಳಾದ ಫಾತಿಮಾ ನಜೀಬ್ ಸಿಕ್ದರ್ ಮಹಮುದೂರ್ ರಾಜಿ ಅವರನ್ನೊಳಗೊಂಡ ಹೈಕೋರ್ಟ್ ಪೀಠದಲ್ಲಿ ಅರ್ಜಿಯ ವಿಚಾರಣೆ ನಡೆಯಬಹುದು ಎಂದು ವಕೀಲ ಭೂಯಾನ್ ಹೇಳಿದ್ದಾರೆ. ಬಾಂಗ್ಲಾದೇಶದಲ್ಲಿ ಎಲ್ಲಾ ಭಾರತೀಯ ಸುದ್ದಿ ವಾಹಿನಿಗಳ ಪ್ರಸಾರವನ್ನು ನಿಷೇಧಿಸುವಂತೆ ಕೋರಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದೆ.

ಎಲ್ಲಾ ಭಾರತೀಯ ಟಿವಿ ಚಾನೆಲ್‌ಗಳ ಪ್ರಸಾರವನ್ನು ನಿಷೇಧಿಸಲು ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ಆಪರೇಷನ್ ಆಕ್ಟ್ 2006ರ ಸೆಕ್ಷನ್ 29ರ ಅಡಿಯಲ್ಲಿ ನಿರ್ದೇಶನ ನೀಡುವಂತೆ ರಿಟ್ ಅರ್ಜಿಯಲ್ಲಿ ಕೋರಲಾಗಿದೆ. ಬಾಂಗ್ಲಾದೇಶದಲ್ಲಿ ಭಾರತೀಯ ಟಿವಿ ಚಾನೆಲ್‌ಗಳ ಮೇಲೆ ನಿಷೇಧ ಹೇರುವ ನಿಯಮವನ್ನು ಏಕೆ ಹೊರಡಿಸಬಾರದು ಎಂದು ರಿಟ್ ಅರ್ಜಿಯಲ್ಲಿ ಪ್ರಶ್ನಿಸಲಾಗಿದೆ.

ಸ್ಟಾರ್ ಜಲ್ಸಾ, ಸ್ಟಾರ್ ಪ್ಲಸ್, ಝೀ ಬಾಂಗ್ಲಾ, ರಿಪಬ್ಲಿಕ್ ಬಾಂಗ್ಲಾ ಮತ್ತು ಇತರ ಭಾರತೀಯ ಸುದ್ದಿವಾಹಿನಿಗಳ ಪ್ರಸಾರವನ್ನು ನಿಷೇಧಿಸಲು ರಿಟ್ ಅರ್ಜಿಯಲ್ಲಿ ಒತ್ತಾಯಿಸಲಾಗಿದೆ. ಭಾರತೀಯ ಸುದ್ದಿವಾಹಿನಿಗಳಲ್ಲಿ ಪ್ರಚೋದನಕಾರಿ ಸುದ್ದಿಗಳನ್ನು ಪ್ರಸಾರ ಮಾಡಲಾಗುತ್ತಿದೆ. ಬಾಂಗ್ಲಾ ಸಂಸ್ಕೃತಿಯನ್ನು ವಿರೋಧಿಸುವ ವಿಷಯದ ಅನಿಯಂತ್ರಿತ ಪ್ರಸಾರಗಳು ಯುವಜನತೆ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ಮನೆ ಕಳವು; ನಾಲ್ವರಿಗೆ ಜೈಲು ಶಿಕ್ಷೆ

ಮೈಸೂರು, ಡಿ. 3(ಆರ್‌ಕೆ)– ಮನೆ ಕಳವು ಮಾಡಿದ್ದ ನಾಲ್ವರು ಖದೀಮರಿಗೆ ಪಾಂಡವಪುರ ಜೆಎಂಎಫ್‌ಸಿ ನ್ಯಾಯಾಲಯವು ಕಾರಾಗೃಹ ಶಿಕ್ಷೆ ಹಾಗೂ 8000 ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಕೆ.ಆರ್.ನಗರ ಟೌನ್ ನಿವಾಸಿಗಳಾದ ಬಾಲರಾಜು, ಸೋಮಶೇಖರ್, ಶ್ರೀಕಂಠ ಹಾಗೂ ರಾಜು ಶಿಕ್ಷೆಗೊಳಗಾದ ಕಳವು ಆರೋಪಿಗಳು. ಪಾಂಡವಪುರ ತಾಲೂಕು, ಚಿಕ್ಕಾಯರಹಳ್ಳಿ ಗ್ರಾಮದ ರಾಜೇಶ ಎಂಬುವರ ಮನೆಯಲ್ಲಿ 2018ರ ಫೆಬ್ರವರಿ 18ರಂದು ಮನೆ ಬಾಗಿಲು ಮೀಟಿ 6 ಸಾವಿರ ರೂ. ನಗದು, 49 ಗ್ರಾಂ ಚಿನ್ನಾಭರಣ, 700 ಗ್ರಾಂ ಬೆಳ್ಳಿ ಪದಾರ್ಥಗಳನ್ನು ಕಳವು ಮಾಡಲಾಗಿತ್ತು.

ಪ್ರಕರಣ ದಾಖಲಿಸಿಕೊಂಡಿದ್ದ ಕೆಆರ್‌ಎಸ್ ಠಾಣೆಯ ಅಂದಿನ ಇನ್‌ಸ್ಪೆಕ್ಟರ್ ಸಿ.ಎಂ. ರವೀಂದ್ರ ಹಾಗೂ ಸಬ್‌ಇನ್‌ಸ್ಪೆಕ್ಟರ್ ಬ್ಯಾಟರಾಯಗೌಡ, ತನಿಖೆ ನಡೆಸಿ ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಪಾಂಡವಪುರ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶ ಆರ್.ಮಹೇಶ್ ಅವರು, ವಾದ–ಪ್ರತಿವಾದಗಳನ್ನು ಆಲಿಸಿದ ಬಳಿಕ ಕಳ್ಳತನ ಮಾಡಿರುವುದು ಸಾಕ್ಷ್ಯಾಧಾರಗಳಿಂದ ದೃಢಪಟ್ಟ ಹಿನ್ನೆಲೆಯಲ್ಲಿ ಆರೋಪಿಗಳಿಗೆ 1 ವರ್ಷ ಕಾರಾಗೃಹ ಶಿಕ್ಷೆ ಹಾಗೂ 8000 ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕಿ ಜಿ.ಪಿ. ಸುಧಾಮಣಿ ವಾದ ಮಂಡಿಸಿದ್ದರು.

ಲ್ಯಾಪ್ರೋಸ್ಕೋಪಿಕ್ ವಿಧಾನದ ಮೂಲಕ ಮೂತ್ರಪಿಂಡದ ಗೆಡ್ಡೆಗೆ ಯಶಸ್ವಿ ಶಸ್ತ್ರಚಿಕಿತ್ಸೆ

ಮಣಿಪಾಲ್ ಆಸ್ಪತ್ರೆಯ ಮೂತ್ರರೋಗ ಶಾಸ್ತ್ರಜ್ಞರ ಸಾಧನೆ

ಮೈಸೂರು,ಡಿ.3(ಜಿಎ)–ಲ್ಯಾಪ್ರೋಸ್ಕೋಪಿಕ್ ವಿಧಾನದ ಮೂಲಕ ಸುಮಾರು 45 ವರ್ಷ ವಯಸ್ಸಿನ ಮಹಿಳೆಯೊಬ್ಬರ ಮೂತ್ರಪಿಂಡದಲ್ಲಿ ಬೆಳೆದಿದ್ದ ಗಡ್ಡೆಯನ್ನು ಮೂತ್ರಪಿಂಡಕ್ಕೆ ತೊಂದರೆಯಾಗದಂತೆ ಶಸ್ತ್ರಚಿಕಿತ್ಸೆ ನಡೆಸಿ, ಯಶಸ್ವಿಯಾಗಿ ಗಡ್ಡೆಯನ್ನು ಮಾತ್ರ ಹೊರತೆಗೆಯಲಾಗಿದೆ ಎಂದು ಮಣಿಪಾಲ್ ಆಸ್ಪತ್ರೆಯ ಮೂತ್ರರೋಗ ಶಾಸ್ತ್ರಜ್ಞ ಡಾ.ಕೆ.ಎ.ತಿಮ್ಮಯ್ಯ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳೆಯ ಬಲ ಮೂತ್ರಪಿಂಡದಲ್ಲಿ ಮೂತ್ರಪಿಂಡದಷ್ಟೇ ದೊಡ್ಡದಾದ ಗಡ್ಡೆ ಬೆಳೆದಿತ್ತು. ಇದು ಕ್ಯಾನ್ಸರ್ ಗಡ್ಡೆಯಾಗಿರದಿದ್ದರೂ ಅದನ್ನು ಹೊರತೆಗೆಯುವ ವೇಳೆ ಮೂತ್ರಪಿಂಡಕ್ಕೂ ಅಪಾಯವಾಗುವ ಸಾಧ್ಯತೆ ಇತ್ತು. ಹೀಗಾಗಿ ಸಾಂಪ್ರದಾಯಿಕ ತೆರೆದ ಶಸ್ತ್ರಚಿಕಿತ್ಸಾ ವಿಧಾನ ಬಳಸದೇ ಕನಿಷ್ಠ ಆಘಾತಕಾರಿಯಾದ ಲ್ಯಾಪ್ರೋಸ್ಕೋಪಿಕ್ ವಿಧಾನದ ಮೂಲಕ ಸುಮಾರು ಮೂರೂವರೆ ಗಂಟೆ ಶಸ್ತ್ರಚಿಕಿತ್ಸೆ ನಡೆಸಿ ಗಡ್ಡೆಯನ್ನು ಹೊರತೆಗೆಯಲಾಗಿದೆ ಎಂದರು.

ಸಾಮಾನ್ಯವಾಗಿ ಗರ್ಭಿಣಿಯಾಗುವ ಸಂದರ್ಭದಲ್ಲಿ ಹಲವರಲ್ಲಿ ಈ ರೀತಿಯ ಗಡ್ಡೆ ಕಾಣಿಸಿಕೊಳ್ಳುತ್ತದೆ. ಆದರೆ ಈ ಮಹಿಳೆ ಸುಮಾರು 45 ವರ್ಷ ವಯಸ್ಸಿನವಾಗಿದ್ದರೂ ಗರ್ಭಿಣಿ ಆಗಿರದಿದ್ದರೂ ಈ ಸಮಸ್ಯೆ ಉಂಟಾಗಿತ್ತು. ನೋವಿನ ಕಾರಣದಿಂದ ಆಸ್ಪತ್ರೆಗೆ ಬಂದ ವೇಳೆ ಇದನ್ನು ಪತ್ತೆಹಚ್ಚಲಾಯಿತು. ಜೊತೆಗೆ ಇದು ಕ್ಯಾನ್ಸರ್ ಗಡ್ಡೆಯಲ್ಲ ಎಂಬುದನ್ನು ಸಹಾ ಖಚಿತಪಡಿಸಿಕೊಂಡು ತಕ್ಕ ಚಿಕಿತ್ಸೆ ನೀಡಲಾಯಿತು. ಈಗ ಆಕೆ ಗುಣಮುಖರಾಗಿದ್ದಾರೆ. ಈ ರೀತಿಯ ಪ್ರಕರಣಗಳು ಅಪರೂಪದ್ದಾಗಿವೆ ಎಂದು ವಿವರಿಸಿದರು.

ಹಣ್ಣು ಹಂಪಲು ವಿತರಿಸಿ ಮಕ್ಕಳ ದಿನಾಚರಣೆ



ಮೈಸೂರಿನ ಜೆಪಿ ನಗರದಲ್ಲಿರುವ ಶ್ರೀ ಪೇಜಾವರ ಸಾರ್ವಜನಿಕ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದಿಂದ ಹಣ್ಣು, ಹಂಪಲು ಹಾಗೂ ದಿನಸಿ ಸಾಮಗ್ರಿಗಳನ್ನು ವಿತರಿಸಿ ಮಕ್ಕಳ ದಿನವನ್ನು ಆಚರಿಸಲಾಯಿತು. ವಿದ್ಯಾರ್ಥಿನಿಲಯದ ಪಾಲಕ ಪುಟ್ಟಣ್ಣ, ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಜಾನ್ ಜೋಸೆಫ್, ವೀರಭದ್ರಸ್ವಾಮಿ, ರಾಜೇಶ್ ಕುಮಾರ್, ಮಹೇಶ್, ಎಸ್.ಪಿ. ಅಕ್ಷಯ್ ಪ್ರಿಯದರ್ಶನ್, ಹರ್ಷಿತ್ ಎಸ್.ನಾಗೇಶ್ ಇತರರು ಹಾಜರಿದ್ದರು.

ನಿವೃತ್ತ ಪೌರಕಾರ್ಮಿಕ ಮಲ್ಲೇಶ್‌ಗೆ ಬೀಳ್ಕೊಡುಗೆ



ಮೈಸೂರಿನ 54ನೇ ವಾರ್ಡಿನ ಪೌರಕಾರ್ಮಿಕರ ಸ್ಯಾನಿಟೈಸರ್ ಮೇಲ್ವಿಚಾರಕ ಎಂ.ಮಲ್ಲೇಶ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು, ಡಿ. 3– ಕೃಷ್ಣರಾಜ ಕ್ಷೇತ್ರದ 54ನೇ ವಾರ್ಡಿನ ಪೌರಕಾರ್ಮಿಕರ ಸ್ಯಾನಿಟೈಸರ್ ಮೇಲ್ವಿಚಾರಕ ಎಂ.ಮಲ್ಲೇಶ್, ಕನಕಗಿರಿಯ ಸುತ್ತಮುತ್ತ ಉತ್ತಮ ಸೇವೆ ಸಲ್ಲಿಸಿ ಜನಮನ್ನಣೆ ಗಳಿಸಿದ್ದು, ಅವರು ಕೆಲಸದಿಂದ ನಿವೃತ್ತರಾದ ಹಿನ್ನೆಲೆಯಲ್ಲಿ ಸ್ಥಳೀಯ ಆರೋಗ್ಯ ಅಧಿಕಾರಿಗಳು, ಕನ್ನಡ ಕಾರ್ಮಿಕರ ವೇದಿಕೆ, ವಾರ್ಡಿನ ಮುಖಂಡರು ಮತ್ತು ಪೌರಕಾರ್ಮಿಕರು ಅವರಿಗೆ ಸನ್ಮಾನಿಸಿ, ಬೀಳ್ಕೊಡುಗೆ ನೀಡಿದರು.

ಈ ವೇಳೆ ಹಿರಿಯ ಆರೋಗ್ಯ ಪರಿವೀಕ್ಷಕ ಶಿವಪ್ರಸಾದ್ ಮಾತನಾಡಿ, ಸಮಾಜದಲ್ಲಿ ಪ್ರತಿ ವ್ಯಕ್ತಿ, ಪ್ರತಿ ವೃತ್ತಿ ಕೂಡ ಗೌರವಯುತವಾದದ್ದೇ ಆಗಿದೆ. ಪೌರಕಾರ್ಮಿಕರು ಸಮಾಜದ ಸ್ವಚ್ಛತೆ ಕಾಪಾಡುವ ವೈದ್ಯರಾಗಿದ್ದಾರೆ. ನಿರಂತರ ಶ್ರಮಿಕರಾದ ಪೌರಕಾರ್ಮಿಕರ ಸ್ವಚ್ಛತಾ ಕಾರ್ಯದಲ್ಲಿ ಸಮಾಜವೂ ಕೈ ಜೋಡಿಸಬೇಕು. ಅನಗತ್ಯವಾಗಿ ಕಸ ಎಸೆಯುವ ಪ್ರವೃತ್ತಿ ನಿಂತರೆ ನಗರ ಸ್ವಚ್ಛವಾಗಿರುತ್ತದೆ ಎಂದರು.

ವಾರ್ಡಿನ ಅಧ್ಯಕ್ಷ ಮಹದೇವ್, ಕನ್ನಡ ಕಾರ್ಮಿಕರ ವೇದಿಕೆ ಜಿಲ್ಲಾಧ್ಯಕ್ಷ ಪಳನಿ, ಉಪಾಧ್ಯಕ್ಷ ಗೌರಿಶಂಕರನಗರದ ಶಿವಕುಮಾರ್, ಕುಮಾರ್, ವಾಸು, ಪ್ರೀತಿ, ದೊಡ್ಡಿ ಶಿವು, ನಿವಾಸಿಗಳು ಮತ್ತು ಪೌರಕಾರ್ಮಿಕರು ಹಾಜರಿದ್ದರು.

ವೃತ್ತಿ ಮಾರ್ಗದರ್ಶನ, ಸಮಾಲೋಚನಾ ಕಾರ್ಯಾಗಾರದ ಸಮಾರೋಪ



ಸಂಪನ್ಮೂಲ ವ್ಯಕ್ತಿ ಉಷಾ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರು,ಡಿ.3–ಮೈಸೂರಿನ ವಿಜಯನಗರದಲ್ಲಿರುವ ಅನಂತಗೀತ ವಿದ್ಯಾಲಯದಲ್ಲಿ 9 ಮತ್ತು 10 ನೇ ತರಗತಿ ವಿದ್ಯಾರ್ಥಿಗಳಿಗೆ ಗ್ರಾಮ್ ಸಂಸ್ಥೆ ಸಹಯೋಗದೊಂದಿಗೆ ಉಚಿತ ವೃತ್ತಿ ಮಾರ್ಗದರ್ಶನ ಮತ್ತು ಸಮಾಲೋಚನಾ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಉಷಾ ಮತ್ತು ಗೋಪಾಲ್ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ, ವೃತ್ತಿಪರ ಕೌಶಲಗಳನ್ನು ಬೆಳೆಸಿಕೊಳ್ಳುವುದು ಹೇಗೆ ಎಂಬುದನ್ನು ಕುರಿತು ಸುದೀರ್ಘ ತರಬೇತಿ ನೀಡಿದರು. ಇದೇ ವೇಳೆ ಅನಂತಗೀತ ವಿದ್ಯಾಲಯದ ವತಿಯಿಂದ ಉಷಾ ಮತ್ತು ಗೋಪಾಲ್ ಅವರನ್ನು ಗೌರವಿಸುವ ಮೂಲಕ ಕಾರ್ಯಕ್ರಮ ಸಂಪನ್ನಗೊಳಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ವೇಣುಗೋಪಾಲ್ ಕಲ್ಲೂರು, ನಿರ್ದೇಶಕರಾದ ಮಂಜುಳಾ, ಮುಖ್ಯ ಶಿಕ್ಷಕ ಲೋಕೇಶ್, ಶಿಕ್ಷಕರಾದ ಉಷಾ, ಕಾವೇರಮ್ಮ, ಶಿಲ್ಪಾ ಹಾಜರಿದ್ದರು.

ಭಾರತಕ್ಕೆ ವಿಶ್ವ ಗುರುವಿನ ಸ್ಥಾನ ತಂದುಕೊಡುವುದರಲ್ಲಿ ಕನ್ನಡ ಸಾಹಿತ್ಯ, ಸಂಸ್ಕೃತಿಯ ಕೊಡುಗೆ ಅಪಾರವಾದುದು

ವಿಜಯ ವಿಠಲ ಕಾಲೇಜಿನಲ್ಲಿ ನಡೆದ ಕನ್ನಡ ಹಬ್ಬ ಕಾರ್ಯಕ್ರಮದಲ್ಲಿ ವಿದ್ವಾಂಸ ಡಾ.ಮೈಸೂರು ಕೃಷ್ಣಮೂರ್ತಿ ಅಭಿಮತ

ಮೈಸೂರು, ಡಿ.3– ಪದವಿ ಪೂರ್ವ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲಾ ಘಟಕದ ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಕನ್ನಡ ಹಬ್ಬ ಹಾಗೂ ಕಾರ್ಯಾಗಾರವನ್ನು ವಿಜಯ ವಿಠಲ ಕಾಲೇಜಿನ ಆವರಣದಲ್ಲಿ ಏರ್ಪಡಿಸಲಾಗಿತ್ತು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ವಿದ್ವಾಂಸ ಡಾ.ಮೈಸೂರು ಕೃಷ್ಣಮೂರ್ತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕನ್ನಡವನ್ನು ಉಳಿಸಿ ಬೆಳೆಸಬೇಕಾದರೆ ನಿತ್ಯವೂ ನಾವು ಕನ್ನಡ ಭಾಷೆಯನ್ನು ಬಳಸಬೇಕು. ಹಾಗಾದಾಗ ಮಾತ್ರ ಅದು ತನ್ನ ಅಸ್ತಿತ್ವವನ್ನು ಎಂದಿಗೂ ಕಳೆದುಕೊಳ್ಳುವುದಿಲ್ಲ. ನಿತ್ಯ ನೂತನವಾಗಿ ಉಳಿಯುತ್ತದೆ. ಕನ್ನಡ ಭಾಷೆಗೆ ತನ್ನದೇ ಆದ ಇತಿಹಾಸ ಮತ್ತು ಪರಂಪರೆ ಇದೆ. ಆದ್ದರಿಂದ ಭಾರತಕ್ಕೆ ವಿಶ್ವ ಗುರುವಿನ ಸ್ಥಾನವನ್ನು ತಂದು ಕೊಡುವುದರಲ್ಲಿ ಕನ್ನಡದ ಕೊಡುಗೆ ಅಪಾರವಾದುದು ಎಂದು ಅಭಿಪ್ರಾಯಿಸಿ, ಇದಕ್ಕೆ ಕನ್ನಡಕ್ಕೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಹಾಗೂ ಕೇಂದ್ರ ಸಾಹಿತ್ಯ ಮತ್ತು ರಾಜ್ಯ ಸಾಹಿತ್ಯ ಪ್ರಶಸ್ತಿಗಳು ಬಂದಿರುವುದೇ ಸಾಕ್ಷಿಯಾಗಿದೆ ಎಂದರು.



ಪದವಿ ಪೂರ್ವ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲಾ ಘಟಕದ ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಕನ್ನಡ ಹಬ್ಬ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ವಿದ್ವಾಂಸ ಡಾ.ಮೈಸೂರು ಕೃಷ್ಣಮೂರ್ತಿ, ಪ್ರಾಂಶುಪಾಲರಾದ ಪುಟ್ಟಗೌರಮ್ಮ, ಡಾ.ಸಂತೋಷ್ ಚೊಕ್ಕಾಡಿ, ಕನ್ನಡ ಉಪನ್ಯಾಸಕರ ಸಂಘದ ಅಧ್ಯಕ್ಷ ಕ್ಯಾತಮಾರನಹಳ್ಳಿ ಎಂ.ಮಹೇಶ್, ಪ್ರಧಾನ ಕಾರ್ಯದರ್ಶಿ ಕೆಂಪಯ್ಯ, ಖಜಾಂಚಿ ಡಾ.ಬೇವಿನಹಳ್ಳಿ ಉಮೇಶ್, ಗೌರವ ಅಧ್ಯಕ್ಷರಾದ ಪುಟ್ಟಗೌರಮ್ಮ, ಬಾಲಸುಬ್ರಹ್ಮಣ್ಯಂ, ವಿಷಕಂಠಮೂರ್ತಿ, ಜಾನಪದ ಗಾಯಕ ಅಮ್ಮ ರಾಮಚಂದ್ರ, ನೀ.ಗು.ರಮೇಶ್, ಪದಾಧಿಕಾರಿಗಳು ಚಿತ್ರದಲ್ಲಿದ್ದಾರೆ.

ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯಲ್ಲಿ ವೈವಿಧ್ಯತೆ ಇದೆ. ಈ ವೈವಿಧ್ಯತೆಯನ್ನು ಉಳಿಸಿ ಬೆಳೆಸುವಂತಹ ಕಾರ್ಯವನ್ನು ಇಂದಿನ ಯುವ ಜನಾಂಗ ಮಾಡಬೇಕಿದೆ ಎಂದು ತಿಳಿಸಿದರಲ್ಲದೆ, ಕನ್ನಡದ ಅಭಿಮಾನವನ್ನು ಕನ್ನಡಿಗರು ಮಾತ್ರವಲ್ಲದೇ ಕನ್ನಡೇತರರೂ ತೋರಬೇಕೆಂದ ಅವರು, ಇಲ್ಲದಿದ್ದರೆ ಕನ್ನಡ ಭಾಷೆ ನಿಂತ ನೀರಾಗಿ ಉಳಿಯುತ್ತದೆ. ಮಾತೃಭಾಷೆ ಮರೆತರೆ ನಾವು ನಮ್ಮ ಹೆತ್ತವರನ್ನು ಮರೆತಂತೆ. ಆದ್ದರಿಂದ ಕನ್ನಡ ಭಾಷೆಗೆ ಯಾರೇ ಆಗಲಿ ದ್ರೋಹ ಬಗೆದರೆ ಸಹಿಸಲಾಗದು. ನಮ್ಮ ಮಕ್ಕಳಿಗೆ ಕನ್ನಡ ಭಾಷೆಯನ್ನು ಪ್ರಾಥಮಿಕ ಹಂತದಲ್ಲಿಯೇ ಕಲಿಸುವ ಕಾರ್ಯಕ್ಕೆ ನಾವೆಲ್ಲರೂ ಮುಂದಾಗಬೇಕೆಂದು ತಿಳಿಸಿದರು.

ಪ್ರಾಂಶುಪಾಲರಾದ ಪುಟ್ಟಗೌರಮ್ಮ ಮಾತನಾಡಿ, ಅಂಕಗಳ ದೃಷ್ಟಿಯಿಂದ ಇಂದಿನ ಯುವಕರು ಇತರ ಭಾಷೆಗಳನ್ನು ಕಲಿಯುತ್ತಿರುವುದು ಬೇಸರದ ಸಂಗತಿ. ಕನ್ನಡ ಭಾಷೆಯನ್ನು ಮೊದಲು ಕಲಿತು ನಂತರ ಇತರ ಭಾಷೆಗಳನ್ನು ಕಲಿತಾಗ ಮಾತೃಭಾಷಾ ವ್ಯಾಮೋಹ ಹೆಚ್ಚುತ್ತದೆಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಸಂತೋಷ್ ಚೊಕ್ಕಾಡಿ ಮಾತನಾಡಿ, ಕನ್ನಡ ವೇದಿಕೆಯ ಕಾರ್ಯಕ್ರಮಗಳು ಸೃಜನಶೀಲತೆಯಿಂದ ಕೂಡಿದಾಗ ಹೊಸ ಸಾಧ್ಯತೆಗಳನ್ನು ಹುಟ್ಟು ಹಾಕಲು ಸಾಧ್ಯವಾಗುತ್ತದೆ. ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳಿಗೆ ಪುನಶ್ಚೇತನ ಕಾರ್ಯಾಗಾರಗಳು ಹೊಸ ಹೊಸ ಆವಿಷ್ಕಾರಗಳನ್ನು ಸೃಷ್ಟಿಸಲು ಮಾರ್ಗವಾಗುತ್ತದೆಂದು ಅಭಿಪ್ರಾಯಿಸಿದರು. ವೇದಿಕೆಯಲ್ಲಿ ಕನ್ನಡ ಸಾಹಿತ್ಯದ ಸಿರಿವಂತಿಕೆಯನ್ನು ಸಾರುವ ಗಮನ ವಾಚನ ಮತ್ತು ವ್ಯಾಖ್ಯಾನವನ್ನು ವಿದುಷಿ ಧರಿತ್ರಿ ಆನಂದರಾವ್, ವ್ಯಾಖ್ಯಾನವನ್ನು ವಿದ್ವಾನ್ ಕೃಪಾ ಮಂಜುನಾಥ್ ನಡೆಸಿಕೊಟ್ಟರು.

ಧನಗಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಸಿದ್ದರಾಜು ಆಯ್ಕೆ



ಧನಗಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿದ್ದರಾಜು ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಮೈಸೂರು, ಡಿ.3– ಧನಗಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಸಿದ್ದರಾಜು ಅವಿರೋಧವಾಗಿ ಆಯ್ಕೆಯಾದರು.

ನೂತನ ಅಧ್ಯಕ್ಷರನ್ನು ಅಭಿನಂದಿಸಿದ ಜಿ.ಪಂ. ಮಾಜಿ ಅಧ್ಯಕ್ಷ ಕೆ.ಮರೀಗೌಡ, ಸಹಕಾರ ಕ್ಷೇತ್ರಕ್ಕೆ ನಾವು ಹೋಗಲಿಲ್ಲ. ಆದರೆ ಬಿ.ಗುರುಸ್ವಾಮಿಯವರು ಸಹಕಾರ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡಿದ್ದಾರೆ ಎಂಬುದಕ್ಕೆ ಈ ಹೊಸ ಕಟ್ಟಡವೇ ಸಾಕ್ಷಿ. ಮುಖ್ಯಮಂತ್ರಿ ಸಿದ್ದರಾಮಯ್ಯರವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಬಡವರ, ರೈತರ, ಮಹಿಳೆಯರ ಪರ ಸರ್ಕಾರವಾಗಿದ್ದು, ಶೂನ್ಯ ಬಡ್ಡಿದರದಲ್ಲಿ ರೈತರಿಗೆ ಸಾಲ ನೀಡುತ್ತಿದೆ. ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ರೈತರು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು. ನೂತನ ಅಧ್ಯಕ್ಷ ಸಿದ್ದರಾಜು ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮಾಜಿ ಅಧ್ಯಕ್ಷರಾದ ಡಿ.ಗುರುಸ್ವಾಮಿ ಸಹಕಾರದಿಂದ ಸಂಘವನ್ನು ಉತ್ತಮವಾಗಿ ನಡೆಸಿಕೊಂಡು ಹೋಗಬೇಕು ಎಂದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ಗುರುಸ್ವಾಮಿ ಮಾತನಾಡಿ, ನಮ್ಮ ಸಹಕಾರ ಸಂಘದಲ್ಲಿ 1934 ಜನ ಸದಸ್ಯರಿದ್ದು, ಅದರಲ್ಲಿ 588 ರೈತರಿಗೆ ಬೆಳೆ ಸಾಲವಾಗಿ 6 ಕೋಟಿ 20 ಲಕ್ಷ ನೀಡಿದ್ದೇವೆ. ಸಂಘಕ್ಕೆ 11 ಲಕ್ಷ ಆದಾಯ ಬಂದಿದೆ. ಈ ಸಂಘಕ್ಕೆ 8 ಗ್ರಾಮಗಳು ಸೇರುತ್ತವೆ. ನನ್ನ ಅವಧಿಯಲ್ಲಿ ಸಂಘಕ್ಕೆ ಸ್ವಂತ ಕಟ್ಟಡ ನಿರ್ಮಿಸಿದ್ದೇವೆ ಎಂದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಎಸ್.ಬಸಪ್ಪ, ಮಾದನಾಯ್ಕ, ಜವರೇಗೌಡ, ಬಸವೇಗೌಡ, ಜಿ.ಎ.ರಾಜೇಗೌಡ, ಚಿಕ್ಕಣ್ಣ, ಬಿ.ಕಾಳಲಿಂಗೇಗೌಡ, ಕೃಷ್ಣಮೂರ್ತಿ, ತಿಮ್ಮಮ್ಮ, ಮೇಲ್ವಿಚಾರಕ ಎಂ.ಗಿರೀಶ್, ಎಪಿಎಂಸಿ ಮಾಜಿ ಅಧ್ಯಕ್ಷ ಬಸವರಾಜು, ತಾ.ಪಂ. ಮಾಜಿ ಸದಸ್ಯ ಸಿ.ಎಂ.ಸಿದ್ದರಾಮೇಗೌಡ, ಗ್ರಾ.ಪಂ. ಮಾಜಿ ಅಧ್ಯಕ್ಷರಾದ ಸೋಮಣ್ಣ ಬಸವರಾಜು, ನಂಜುಂಡೇಗೌಡ, ಧನಗಳ್ಳಿ ಬಸವರಾಜು, ಅಂದಾನಿ ಚಂದ್ರು, ಶಿವರಾಜೇಗೌಡ, ಮನೋಜ್ ಕೋಟೆಹುಂಡಿ, ಲೈಬ್ರರಿ ಬಸಪ್ಪ, ಬಿ.ರವಿ, ಗಡ್ಡಬಸಪ್ಪ, ರಾಜೇಶ್, ಮಹೇಶ್ ಜಿ.ಸಿ., ರವಿಶಂಕರ್, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎಸ್.ಎಂ.ಕೃಷ್ಣ, ಸಿ.ಮಾಲೇಗೌಡ, ರವಿಕುಮಾರ್, ಗೀತಾ, ಜಯಪುರ ಪೊಲೀಸ್ ಸಿಬ್ಬಂದಿ ಹಾಜರಿದ್ದರು.

ಮನುಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರ ಆಯ್ಕೆ



ಹೆಚ್.ಡಿ.ಕೋಟೆಯ ಹಳ್ಳದ ಮನುಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರಾಗಿ ಚಂದ್ರು, ಶಾಂತಪ್ಪ, ಪುಟ್ಟಿರಾಮಶೆಟ್ಟಿ, ರಾಮೇಗೌಡ, ಕುಮಾರಸ್ವಾಮಿ, ಶಿವರಾಮೇಗೌಡ, ಕೃಷ್ಣೇಗೌಡ, ಮಹದೇವಮ್ಮ, ಜಯಮ್ಮ, ಪ್ರೇಮ ಆಯ್ಕೆಯಾದರು.

ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು, ಡಿ.3–ಮೈಸೂರು ತಾಲೂಕಿನ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ www.ssp.postmatric.karnataka.gov.in ಮೂಲಕ 25–02–2025 ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಆಧಾರ್ ಸೀಡಿಂಗ್ ಮಾಡಿಸುವುದು ಕಡ್ಡಾಯ. ಅರ್ಜಿ ಸಲ್ಲಿಸಿದ ನಂತರ Acknowledgement Print ಮತ್ತು ಆಧಾರ್ ಕಾರ್ಡ್ ಪ್ರತಿಯೊಂದಿಗೆ ಗ್ರಾಮ ಒನ್, ಕರ್ನಾಟಕ ಒನ್, ಮೈಸೂರು ಒನ್ ಹಾಗೂ ಇತರೆ ಸೇವಾ ಸಿಂಧು ಕೇಂದ್ರಗಳಿಗೆ ಭೇಟಿ ನೀಡಿ ಬಯೋಮೆಟ್ರಿಕ್ ಇ–ದೃಢೀಕರಣ ಮಾಡಬೇಕಾಗಿರುವುದು ಕಡ್ಡಾಯವಾಗಿರುತ್ತದೆ. ಸದರಿ ಕೇಂದ್ರಗಳಲ್ಲಿ ಇದು ಉಚಿತವಾಗಿದ್ದು, ಯಾವುದೇ ಹಣ ಪಾವತಿಸುವಂತಿರುವುದಿಲ್ಲ. ಹೆಚ್ಚಿನ ಮಾಹಿತಿಗೆ ಮೈಸೂರು ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್–1 ಅವರ ದೂ.ಸಂ:0821–2520910 ಅನ್ನು ಸಂಪರ್ಕಿಸಬಹುದು.

ರಾಜ್ಯ ಮಟ್ಟದ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳ ಸಮಾಲೋಚನೆ



ಜೆಎಸ್‌ಎಸ್ ಕರ್ನಾಟಕ ಮುಕ್ತ ವಿದ್ಯಾಲಯದಲ್ಲಿ ರಾಜ್ಯ ಮಟ್ಟದ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳ ಸಮಾಲೋಚನಾ ಸಭೆ ನಡೆಯಿತು.

ಮೈಸೂರು,ಡಿ.3–ಜೆಎಸ್‌ಎಸ್ ಕರ್ನಾಟಕ ಮುಕ್ತ ವಿದ್ಯಾಲಯದ ಕೇಂದ್ರ ಕಚೇರಿ ಸಭಾಂಗಣದಲ್ಲಿ ರಾಜ್ಯ ಮಟ್ಟದ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳ ಸಮಾಲೋಚನಾ ಸಭೆ ಆಯೋಜಿಸಲಾಗಿತ್ತು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ಬಿ.ಎ.ರಾಜಶೇಖರ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ನಾನಾ ಕಾರಣಗಳಿಂದ ಮಧ್ಯಂತರದಲ್ಲಿ ಶಾಲೆ ಬಿಟ್ಟಿರುವ ಮಕ್ಕಳನ್ನು ಸಮಾಜದ ಪ್ರಮುಖವಾಹಿನಿಗೆ ತರುವ ಸದುದ್ದೇಶದಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕರ್ನಾಟಕ ಮುಕ್ತ ವಿದ್ಯಾಲಯದ ಮುನ್ನಡೆಗೆ ಪ್ರತಿಷ್ಠಿತ ಶಿಕ್ಷಣದ ಆಡಳಿತ ಮಂಡಳಿಯಾದ ಜೆಎಸ್‌ಎಸ್ ಮಹಾವಿದ್ಯಾಪೀಠಕ್ಕೆ ವಹಿಸಿರುತ್ತದೆ. ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ವಿದ್ಯಾರ್ಥಿಗಳಿಗೆ ಕಲಿಕೆಗೆ ಬೇಕಾದಂತಹ ಪೂರಕ ಶೈಕ್ಷಣಿಕ ವಾತಾವರಣವನ್ನು ಬಹಳ ವ್ಯವಸ್ಥಿತವಾಗಿ ಕಲ್ಪಿಸಿಕೊಟ್ಟಿದ್ದಾರೆ. ಶಾಲೆ ಬಿಟ್ಟ ಮಕ್ಕಳನ್ನು ಹೆಚ್ಚೆಚ್ಚು ದಾಖಲಾತಿ ಮಾಡುವ ಮೂಲಕ ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕೆಂದು ಕರೆಕೊಟ್ಟರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಮುಕ್ತ ವಿದ್ಯಾಲಯದ ಮುಖ್ಯಸ್ಥ ಸಿ.ಎಸ್. ಶಿವಸ್ವಾಮಿ ಮಾತನಾಡಿ, ರಜತ ಮಹೋತ್ಸವದ ಅಂಗವಾಗಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಹಾಗೂ ಫಲಿತಾಂಶ ಸುಧಾರಿಸುವ ದೃಷ್ಟಿಯಿಂದ ಕೆಎಸ್ ಮೊಬೈಲ್ ಆಪ್ ಅನಾವರಣ, ಕನ್ನಡಕ್ಕೆ ಭಾಷಾಂತರಿಸಿದ ಭಾರತೀಯ ಸಂಸ್ಕೃತಿ ಮತ್ತು ಪರಂಪರೆ, ಲೆಕ್ಕಶಾಸ್ತ್ರ ವಾಣಿಜ್ಯಶಾಸ್ತ್ರ ಪಠ್ಯಪುಸ್ತಕಗಳ ಬಿಡುಗಡೆ, ಪ್ರಶ್ನಾವಳಿ ಬ್ಯಾಂಕ್, ಮಾರ್ಗದರ್ಶಿ ಪುಸ್ತಕ ಬಿಡುಗಡೆ, ಸಿದ್ಧಪಾಠ ಪಠ್ಯ ಬೋಧನೆ–ಸಿ.ಡಿ. ಬಿಡುಗಡೆ, "ಬೆಳ್ಳಿ ಹೆಜ್ಜೆ" ವಿಶೇಷ ಸಂಚಿಕೆ ಬಿಡುಗಡೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ಕೋರ್ಟ್ ಕಟಕಟೆಯಲ್ಲಿ ದಿ ಮೈಸೂರು ಸಿಟಿ ಗಾಂಧಿನಗರ ಆದಿಕರ್ನಾಟಕ ಅಭಿವೃದ್ಧಿ ಸಂಘದ ಕಟ್ಟಡ ಪ್ರಕರಣ

ಅಭಿವೃದ್ಧಿಗೆ ಕಾನೂನು ತೊಡಕು ನಿಜ: ಸಂಘದಿಂದ ಸ್ಪಷ್ಟನೆ

ಮೈಸೂರು, ಡಿ.3(ಜಿಎ)–ಮೈಸೂರಿನ ದಿ ಮೈಸೂರು ಸಿಟಿ ಗಾಂಧಿನಗರ ಆದಿ ಕರ್ನಾಟಕ ಅಭಿವೃದ್ಧಿ ಸಂಘದ ಕಟ್ಟಡದ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತಿಲ್ಲ ಎಂದು ಸಂಘದ ಅಧ್ಯಕ್ಷ ಪಿ.ಶ್ರೀಕಂಠಮೂರ್ತಿ ಸ್ಪಷ್ಟಪಡಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.31ರಂದು 'ನಿರ್ವಹಣೆ ಇಲ್ಲದೆ ಶಿಥಿಲಾವಸ್ಥೆ ತಲುಪಿರುವ ಗಾಂಧಿನಗರದ ಆದಿಕರ್ನಾಟಕ ಸಂಘದ ಕಟ್ಟಡ' ಎಂಬ ಶೀರ್ಷಿಕೆಯಡಿ 'ಮೈಸೂರು ಮಿತ್ರ' ಪತ್ರಿಕೆಯಲ್ಲಿ ಪ್ರಕಟಗೊಂಡಿರುವ ವರದಿಗೆ ಪ್ರತಿಕ್ರಿಯಿಸಿದ ಅವರು, ಕಟ್ಟಡ ಶಿಥಿಲಗೊಂಡಿರುವುದು ಸತ್ಯ. ಆದರೆ, ಹಕ್ಕುಪತ್ರಕ್ಕೆ ಸಂಬಂಧಿಸಿದಂತೆ ಮೈಸೂರು ಮಹಾನಗರಪಾಲಿಕೆ ಮತ್ತು ಸಂಘದ ನಡುವೇ ನ್ಯಾಯಾಲಯದಲ್ಲಿ ಪ್ರಕರಣ ಇರುವುದರಿಂದ ಯಾವುದೇ ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತಿಲ್ಲ ಎಂದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ದಿ ಮೈಸೂರು ಸಿಟಿ ಗಾಂಧಿನಗರ ಆದಿ ಕರ್ನಾಟಕ ಅಭಿವೃದ್ಧಿ ಸಂಘದ ಅಧ್ಯಕ್ಷ ಪಿ.ಶ್ರೀಕಂಠಮೂರ್ತಿ ಮಾತನಾಡಿದರು.

ಈ ಹಿಂದೆ ಕಟ್ಟಡದ ಚಾವಣಿ ಕುಸಿಯುವ ಹಂತ ತಲುಪಿದ್ದರೂ ಕಟ್ಟಡದಲ್ಲಿರುವ ಬಾಡಿಗೆದಾರರು ಖಾಲಿ ಮಾಡದೇ ಸತಾಯಿಸಿದ ಕಾರಣ ನ್ಯಾಯಾಲಯದಲ್ಲಿ ದಾವೆ ಹೂಡುವ ಮೂಲಕ ಅವರನ್ನು ಖಾಲಿ ಮಾಡಿಸಲಾಗಿದೆ. ಮತ್ತೊಂದೆಡೆ ಕಟ್ಟಡದಲ್ಲಿ ಅಂಚೆ ಕಚೇರಿ ಇತ್ತು. ಅದನ್ನು ಸಂಘದವರು ಖಾಲಿ ಮಾಡಿಸಿದ್ದಾರೆ ಎಂದು ಆರೋಪಿಸಲಾಗಿದೆ. ಆದರೆ, ಅಲ್ಲಿ ಅಂಚೆ ಕಚೇರಿ ಇರಲಿಲ್ಲ. ಬದಲಾಗಿ ಅಂಚೆ ಕಚೇರಿಯಲ್ಲಿ ಉಳಿತಾಯ ಖಾತೆ ಮತ್ತು ಆರ್‌ಡಿ ಮಾಡಿಸುವ ಏಜೆಂಟ್ ಒಬ್ಬರು ಬಾಡಿಗೆಗೆ ಮಳಿಗೆ ಪಡೆದುಕೊಂಡು ನಂತರ ಅವರೇ ಖಾಲಿ ಮಾಡಿದ್ದಾರೆ ಎಂದು ಅವರು ಸ್ಪಷ್ಟನೆ ನೀಡಿದರು.

ಸಂಘಕ್ಕೆ ಸಿಐಟಿಬಿಯಿಂದ ಉಚಿತವಾಗಿ 10 ನಿವೇಶನಗಳನ್ನು ಮಂಜೂರು ಮಾಡಿದೆ. ಆದರೆ, ಹಕ್ಕುಪತ್ರವನ್ನು ಈವರೆಗೂ ನೀಡಿಲ್ಲ. ಈ ಬಗ್ಗೆ ಮುಡಾ ಆಯುಕ್ತರ ಗಮನಕ್ಕೆ ಈಗಾಗಲೇ ತರಲಾಗಿದ್ದು, ಶಾಸಕ ತನ್ವೀರ್ ಸೇಠ್ ಪ್ರಾಧಿಕಾರದ ಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸುವ ಭರವಸೆ ನೀಡಿದ್ದರು. ಮತ್ತೊಂದೆಡೆ ಸಂಘವು 2018ರ ಮುಡಾ ಅದಾಲತ್‌ನಲ್ಲಿ ಅರ್ಜಿಯನ್ನು ಸಲ್ಲಿಸಿತ್ತು. 2024ರ ಮಾರ್ಚ್ 6ರಂದು ಈ ವಿಷಯವನ್ನು ಶಾಸಕ ತನ್ವೀರ್ ಸೇಠ್ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಅನುಮೋದನೆ ಪಡೆಯಲು ಮನವಿ ಮಾಡಿಕೊಂಡಿದ್ದಾರೆ. ಆದರೆ, ಈವರೆಗೂ ಯಾವುದೇ ಕ್ರಮವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಜನಾಂಗದ ಬಡವರ ಶವ ಸಂಸ್ಕಾರಕ್ಕೆ ಸಹಾಯಧನ ನೀಡುವ ಯಾವುದೇ ನಿಯಮ, ಉಪನಿಯಮಗಳಲ್ಲಿ ನಮೂದಿಸಿಲ್ಲ. ಈ ರೀತಿಯ ಸಹಾಯಧನ ನೀಡುವ ಪದ್ಧತಿಯು ನಡಾವಳಿಯಲ್ಲಿ ಇದುವರೆಗೂ ನಮೂದಾಗಿರುವುದಿಲ್ಲ. ಆದ್ದರಿಂದ ಈ ಅಂಶವು ಸಂಘದ ಬಗ್ಗೆ ಜನರಿಗೆ ತಪ್ಪು ಮಾಹಿತಿ ಮತ್ತು ಕೆಟ್ಟ ಅಭಿಪ್ರಾಯಗಳನ್ನು ತಲುಪಿಸುವ ಹುನ್ನಾರವಾಗಿದೆ ಎಂದು ಆರೋಪಿಸಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದ ಮಕ್ಕಳಿಗೆ ಸಹಾಯಧನ ನೀಡಿದ್ದೇವೆ. ಆದರೆ, ಕೊರೊನಾ ನಂತರ ಸಂಘದಿಂದ ಈ ಪುರಸ್ಕಾರವನ್ನು ತಾತ್ಕಾಲಿಕವಾಗಿ ನಿಲ್ಲಿಸಿದ್ದು, ಮುಂದಿನ ದಿನಗಳಲ್ಲಿ ಪುನಾರಂಭಿಸುತ್ತೇವೆ. ಹಾಗೇ ಸಂಘದ ಕಟ್ಟಡದ ಮೇಲಿರುವ ಕಾನೂನು ವ್ಯಾಜ್ಯ ಪೂರ್ಣಗೊಂಡ ನಂತರ ಈ ನಿವೇಶನ ಬಳಸಿಕೊಂಡು ಶಾಲೆ ಆರಂಭಿಸುವ ಚಿಂತನೆ ಇದೆ ಎಂದ ಅವರು, ಸಂಘದ ಉಪನಿಯಮಗಳು 1964–65ನೇ ಸಾಲಿನದ್ದಾಗಿದ್ದು, ನೂತನ ಸದಸ್ಯರ ಸದ್ಯತ್ವವನ್ನು ಪಡೆಯಲು ಸಂಘದ ಸದರಿ ಉಪನಿಯಮಗಳ ತಿದ್ದುಪಡಿ ಆಗಬೇಕಾಗಿದೆ. ಉಪನಿಯಮ ತಿದ್ದುಪಡಿಯನ್ನು ಮಾಡಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದು, ಪ್ರಗತಿಯಲ್ಲಿದೆ. ನಂತರ ನೂತನ ಸದಸ್ಯತ್ವವನ್ನು ಪಡೆಯಬಹುದಾಗಿದೆ ಎಂದು ಸ್ಪಷ್ಟಪಡಿಸಿದರು.

ಸಂಘದ ಮೇಲೆ ಆರೋಪ ಮಾಡಿರುವ ಕರ್ನಾಟಕ ದಲಿತ ಪ್ಯಾಂಥರ್ಸ್ ಸಂಘಟನೆಯವರು ನೇರವಾಗಿ ನಮ್ಮ ಬಳಿ ಈ ಸಮಸ್ಯೆ ಬಗ್ಗೆ ಚರ್ಚಿಸಿದ್ದರೆ, ಈ ಎಲ್ಲಾ ಮಾಹಿತಿಯನ್ನು ಒದಗಿಸುತ್ತಿದ್ದೇವು. ಸಂಘಟನೆಯ ಅಧ್ಯಕ್ಷ ಯೋಗನರಸಿಂಹ ಸ್ಥಳೀಯ ವ್ಯಕ್ತಿಗಳ ಪ್ರಚೋದನೆಯಿಂದ ಸಂಘದ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯದೆ ವಿನಾಕಾರಣ ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು.

ನಾಳೆ ಮೈಸೂರಲ್ಲಿ 'ಟಿಪ್ಪು ಸುಲ್ತಾನ್' ಕೃತಿ ಬಿಡುಗಡೆ

ಮೈಸೂರು, ಡಿ. 3(ಆರ್‌ಕೆ)– ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಡಿಸೆಂಬರ್ 5ರಂದು ಸಂಜೆ 6 ಗಂಟೆಗೆ ಆಯೋಜಿಸಿರುವ ಸಮಾರಂಭದಲ್ಲಿ ಇತಿಹಾಸ ತಜ್ಞ ಡಾ.ವಿಕ್ರಂ ಸಂಪತ್ ರಚನೆಯ 'ಟಿಪ್ಪು ಸುಲ್ತಾನ್: ದಿ ಸಾಗಾ ಆಫ್ ಮೈಸೂರ್ಸ್ ಇಂಟೆರೆಗ್ನಮ್ (1761–1799)' ಪುಸ್ತಕ ಲೋಕಾರ್ಪಣೆಗೊಳ್ಳಲಿದೆ. ಮೈಸೂರು ರಾಜವಂಶಸ್ಥೆ ಶ್ರೀಮತಿ ಪ್ರಮೋದಾದೇವಿ ಒಡೆಯರ್ ಅವರು ಪುಸ್ತಕ ಬಿಡುಗಡೆ ಮಾಡಲಿದ್ದು, ಲೇಖಕಿ ಮತ್ತು ರಂಗಕರ್ಮಿ ಪ್ರೀತಿ ನಾಗರಾಜ್ ಅವರು ಡಾ.ವಿಕ್ರಂ ಸಂಪತ್ ರೊಂದಿಗೆ ಸಂವಾದ ನಡೆಸುವರು. ಮೈಸೂರು ಲಿಟರರಿ ಫೋರಂ ಚಾರಿಟಬಲ್ ಟ್ರಸ್ಟ್, ದಿ ಫೌಂಡೇಷನ್ ಫಾರ್ ಇಂಡಿಯನ್ ಹಿಸ್ಟಾರಿಕಲ್ ಅಂಡ್ ಕಲ್ಚರಲ್ ರಿಸರ್ಚ್ ಹಾಗೂ ಎಸ್.ಎಲ್.ಭೈರಪ್ಪ ಸಾಹಿತ್ಯ ಪ್ರತಿಷ್ಠಾನ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.


ಪಿಹೆಚ್.ಡಿ ಪದವಿ

ಮೈಸೂರು: ಡಾ.ಎನ್.ಆನಂದಗೌಡ ಅವರ ಮಾರ್ಗದರ್ಶನದಲ್ಲಿ ಸಿ.ಪುಟ್ಟರಾಜು ಅವರು ರಾಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕರ್ನಾಟಕ ರಾಜ್ಯ ಮುಕ್ತ ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಇಂದು ಕೆ.ಆರ್.ಪೇಟೆಗೆ ಸಿಎಂ ಸಿದ್ದರಾಮಯ್ಯ

ದಿ.ಕೆ.ಎಸ್.ಕೆಂಗೇಗೌಡ ರೈತ ಸಭಾಭವನ ಉದ್ಘಾಟನೆ





ಸಂಘದ ಅಧ್ಯಕ್ಷ ಕೆ.ಪುರುಷೋತ್ತಮ್ ಪತ್ರಿಕಾಗೋಷ್ಠಿಯಲ್ಲಿ ನಡೆಸಿದರು.

ಕೆ.ಆರ್.ಪೇಟೆ,ಡಿ.3– ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಾಳೆ(ಡಿ.4) ಕೆ.ಆರ್.ಪೇಟೆ ಪಟ್ಟಣಕ್ಕೆ ಭೇಟಿ ನೀಡಲಿದ್ದು, ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಪುರಸಭಾ ಮಾಜಿ ಅಧ್ಯಕ್ಷ ದಿವಂಗತ ಕೆ.ಎನ್.ಕೆಂಗೇಗೌಡ ರೈತಸಭಾ ಸಹಕಾರ ಭವನದ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ.

ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಪುರುಷೋತ್ತಮ್ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಡಿ.4ರಂದು ಮಧ್ಯಾಹ್ನ 12 ಗಂಟೆಗೆ ಸಿದ್ದರಾಮಯ್ಯ ಅವರು ಕಟ್ಟಡವನ್ನು ಲೋಕಾರ್ಪಣೆ ಮಾಡಲಿದ್ದಾರೆ ಎಂದರು.

ಟಿಎಪಿಸಿಎಂಎಸ್ ಸಂಸ್ಥೆಯ ಆವರಣದಲ್ಲಿ ನಡೆಯುವ ಸಹಕಾರ ಸಂಘಗಳ ಸ್ತ್ರೀ ಶಕ್ತಿ ಸಂಘಗಳ ಬಹಿರಂಗ ಸಭೆಯನ್ನು ಉದ್ದೇಶಿಸಿ ಸಿಎಂ ಮಾತನಾಡಲಿದ್ದಾರೆ. ಸಹಕಾರ ಸಚಿವ ಕೆಎನ್.ರಾಜಣ್ಣ ಬ್ಯಾಂಕಿಂಗ್ ಶಾಖೆಯನ್ನು ಉದ್ಘಾಟಿಸುವರು. ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು ಗೊಬ್ಬರದ ಶಾಖೆಯನ್ನು ಉದ್ಘಾಟಿಸುವರು. ರಾಜ್ಯದ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಹೆಚ್.ಟಿ.ಮಂಜು ಸಹಕಾರ ಧ್ವಜಾರೋಹಣ ನೆರವೇರಿಸುವರು.

ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್ ಸಂಘದ ಮಾಜಿ ಅಧ್ಯಕ್ಷರನ್ನು ಸನ್ಮಾನಿಸಿದರೆ, ಮಾಜಿ ಸಚಿವರಾದ ಡಾ.ನಾರಾಯಣಗೌಡ ಸಂಘದ ಆಡಳಿತ ಮಂಡಳಿಯ ಸದಸ್ಯರನ್ನು ಸನ್ಮಾನಿಸುವರು. ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ ರೈತರಿಗೆ ಬೆಳೆ ಸಾಲ ವಿತರಿಸಿದರೆ, ಉಪಾಧ್ಯಕ್ಷ ಹೆಚ್.ಕೆ.ಅಶೋಕ್ ಮಹಿಳಾ ಸ್ವಸಹಾಯ ಸಂಘಗಳಿಗೆ ಸಾಲ ವಿತರಣೆ ಚೆಕ್ ನೀಡುವರು. ಸಂಘದ ಅಧ್ಯಕ್ಷ ಕೆ.ಕೆ.ಪುರುಷೋತ್ತಮ್ ಸಮಾರಂಭದ ಅಧ್ಯಕ್ಷತೆ ವಹಿಸುವರು.

ಇದಕ್ಕೂ ಮುನ್ನ ಮುಖ್ಯಮಂತ್ರಿಗಳು ಬೆಳಿಗ್ಗೆ 11.50ಕ್ಕೆ ಕೆ.ಆರ್.ಪೇಟೆ ತಾಲೂಕಿನ ಕಿಕ್ಕೇರಿ ಹಳ್ಳಿ ಕೋಡಿಮಾರನಹಳ್ಳಿಯಲ್ಲಿ ಲಕ್ಷ್ಮೀದೇವಿ ದೇವಸ್ಥಾನ ಜೀರ್ಣೋದ್ಧಾರ ಟ್ರಸ್ಟ್, ಕೋಡಿಮಾರನಹಳ್ಳಿ ಇವರ ವತಿಯಿಂದ ಆಯೋಜಿಸಿರುವ ಶ್ರೀ ಲಕ್ಷ್ಮೀ ದೇವಿ ಸಮುದಾಯ ಭವನ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ರೈತರಿಗೆ ಭತ್ತ ಖರೀದಿ, ಬೆಳೆ ವಿಮೆಯ ಬಗ್ಗೆ ಅಗತ್ಯ ಪ್ರಚಾರ ಕೈಗೊಳ್ಳಿ:ರವಿಕುಮಾರ್



ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿರುವ ಶಾಸಕ ರವಿಕುಮಾರ್.

ಮಂಡ್ಯ,ಡಿ.3– ಭತ್ತ ಖರೀದಿ ಹಾಗೂ ಬೆಳೆ ವಿಮೆಯ ಬಗ್ಗೆ ತಾಲೂಕಿನ ಎಲ್ಲಾ ರೈತರಿಗೂ ತಿಳಿಸುವ ನಿಟ್ಟಿನಲ್ಲಿ ಅಗತ್ಯ ಪ್ರಚಾರ ಕೈಗೊಳ್ಳಬೇಕು ಎಂದು ಶಾಸಕ ಪಿ.ರವಿಕುಮಾರ್ ಗಣಿಗ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿ ಮಂಡ್ಯ ತಾಲೂಕು ಪಂಚಾಯಿತಿಯ 2024–25ನೇ ಸಾಲಿನ ನವೆಂಬರ್ 2024ರ ಅಂತ್ಯದವರೆಗಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮವು ಸೇರಿದಂತೆ) ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಇಲಾಖೆಗೆ ಸಂಬಂಧಿಸಿದಂತೆ ರೈತರಿಗೆ ಯಾವುದೇ ಕೊರತೆ ಉಂಟಾಗದಂತೆ ಬಿತ್ತನೆ ಭತ್ತವನ್ನು ಆಯಾ ರೈತ ಸಂಪರ್ಕ ಕೇಂದ್ರಗಳಲ್ಲಿ ವಿತರಣೆ ಮಾಡಬೇಕು. ಮಳೆ ಬರುತ್ತಿರುವ ಹಿನ್ನೆಲೆ ರೈತರಿಗೆ ಅಗತ್ಯ ಕ್ರಮ ವಹಿಸುವಂತೆ ಹಾಗೂ ಬೆಳೆ ವಿಮೆಯ ಬಗ್ಗೆ ಮಾಹಿತಿ ನೀಡಬೇಕು. ಇದುವರೆಗೂ ತಾಲೂಕಿನಲ್ಲಿ 3,850 ರೈತರು ಬೆಳೆ ವಿಮೆ ಮಾಡಿಸಿಕೊಂಡಿದ್ದಾರೆ. ಕೃಷಿಯಲ್ಲಿ ರೈತರಿಗೆ ಸಿಗುವ ಎಲ್ಲಾ ಸೌಲಭ್ಯಗಳು ಸೂಕ್ತ ರೀತಿಯಲ್ಲಿ ಅವರಿಗೆ ದೊರೆಯಬೇಕು ಎಂದು ಹೇಳಿದರು.

ತಾಲೂಕಿನಲ್ಲಿ ಹೆಚ್ಚು ಮಳೆಯಾಗುತ್ತಿರುವ ಹಿನ್ನೆಲೆ ನದಿ, ಕಾಲುವೆಗಳಿಗೆ ಹರಿಸಲಾಗುತ್ತಿರುವ ನೀರನ್ನು ಕಾವೇರಿ ನೀರಾವರಿ ನಿಗಮದವರು ತಾತ್ಕಾಲಿಕವಾಗಿ ನಿಲ್ಲಿಸಬೇಕು. ಆಹಾರ ಸರಬರಾಜು ಮತ್ತು ಗ್ರಾಹಕ ನಾಗರೀಕ ಇಲಾಖೆಗೆ ಸಂಬಂಧಿಸಿದಂತೆ ಹೊಸದಾಗಿ ರೇಷನ್ ಕಾರ್ಡ್ ಪಡೆಯಲು ಅರ್ಜಿ ಸಲ್ಲಿಸಿರುವ ಪ್ರತಿಯೊಬ್ಬ ಅರ್ಹರಿಗೂ ರೇಷನ್ ಕಾರ್ಡ್ ಅನ್ನು ವಿತರಣೆ ಮಾಡಿ ಎಂದು ತಹಶೀಲ್ದಾರ್ ಅವರಿಗೆ ತಿಳಿಸಿದರು.

ಮಂಡ್ಯ ತಾಲೂಕಿನ ಪ್ರತಿಯೊಂದು ನ್ಯಾಯಬೆಲೆ ಅಂಗಡಿಗಳಲ್ಲಿ ಇರುವ ತಾಂತ್ರಿಕ ಸಮಸ್ಯೆಯನ್ನು ಪರಿಹರಿಸಬೇಕು. ಮುದಗಂದೂರು ಗ್ರಾಮದಲ್ಲಿ ನ್ಯಾಯ ಬೆಲೆ ಅಂಗಡಿಯಿದ್ದು, ಸುತ್ತಮುತ್ತಲಿನ ಗ್ರಾಮಗಳಿಂದ ಪಡಿತರ ಪಡೆಯಲು ಸಾರ್ವಜನಿಕರು 5, 6 ಕಿಲೋ ಮೀಟರ್ ದೂರದಿಂದ ಬರುತ್ತಿದ್ದು, ಸದರಿ ಗ್ರಾಮದ ಸುತ್ತಮುತ್ತಲು ಬೇರೆ ಯಾವುದೇ ನ್ಯಾಯ ಬೆಲೆ ಅಂಗಡಿ ಇಲ್ಲ ಮುದಗಂದೂರಿನ ಅಕ್ಕಪಕ್ಕದ ಗ್ರಾಮದಲ್ಲಿ ಉಪ ಕೇಂದ್ರಗಳನ್ನು ತೆರೆಯಲು ಸೂಚಿಸಿದರು.

ಕಳೆದ ಬಾರಿ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಫಲಿತಾಂಶ ಕುಸಿದು ಬಂದಿದ್ದು, ಈ ಬಾರಿ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ ನಡೆಸುವ ಮೂಲಕ ಉತ್ತಮ ಫಲಿತಾಂಶ ಬರಬೇಕು ಎಂದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಕೆ.ವಿವೇಕಾನಂದ, ತಾಲೂಕು ಪಂಚಾಯತ್ ಇಓ ವೀಣಾ, ತಹಶೀಲ್ದಾರ್ ಶಿವಕುಮಾರ್ ಬಿರಾದಾರ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಹೆಚ್.ಕೆ.ರುದ್ರಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಡವೆ ಮಾಂಸ ಸಾಗಿಸುತ್ತಿದ್ದ ಇಬ್ಬರ ಬಂಧನ, ಮೂವರು ಪರಾರಿ



ಹಲಗೂರು,ಡಿ.3– ಕಾವೇರಿ ವನ್ಯಜೀವಿಧಾಮದ ಹಲಗೂರು ವನ್ಯಜೀವಿ ವಲಯದ ಬಸವನಬೆಟ್ಟ ಮೀಸಲು ಅರಣ್ಯ ಪ್ರದೇಶದ ಮುತ್ತತ್ತಿ ಶಾಖೆಯ ಹೊಸದೊಡ್ಡಿ ಗಸ್ತಿನ ಬೋರ್ಡ್ ಗಲ್ಲು ಅರಣ್ಯ ಪ್ರದೇಶದಲ್ಲಿ ಕಡವೆ ಮಾಂಸವನ್ನು ಚೀಲದಲ್ಲಿ ಸಾಗಣೆ ಮಾಡುತ್ತಿದ್ದ ಇಬ್ಬರನ್ನು ಅರಣ್ಯಾಧಿಕಾರಿಗಳು ಬಂಧಿಸಿದರೆ, ಮೂವರು ಪರಾರಿಯಾಗಿದ್ದಾರೆ.

ಆರೋಪಿಗಳಾದ ಎಂ.ದರ್ಶನ್, ಎಚ್.ಟಿ.ಗಿರೀಶ್ ಎಂಬುವವರನ್ನು ಬಂಧಿಸಲಾಗಿದ್ದು, ಈ ಪೈಕಿ ಇದೇ ಗುಂಪಿನಲ್ಲಿದ್ದ ನಾರಾಯಣ ಅಲಿಯಾಸ್ ಪುಟ್ಟಿ ಸಿದ್ದರಾಜು ನಾಯ್ಕ್, ಶರತ್ ಇವರು ತಪ್ಪಿಸಿಕೊಂಡು ಪರಾರಿಯಾಗಿದ್ದಾರೆ.

ಖಚಿತ ಮಾಹಿತಿ ಮೇರೆಗೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ.ಸಿ.ಸುರೇಂದ್ರ ಹಾಗೂ ಕನಕಪುರ ವನ್ಯಜೀವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನಾಗೇಂದ್ರ ಪ್ರಸಾದ್ ಮಾರ್ಗದರ್ಶನದಲ್ಲಿ ವಲಯ ಅರಣ್ಯಾಧಿಕಾರಿ ಅನಿಲ್‌ಕುಮಾರ್ ಹಾಗೂ ಸಿಬ್ಬಂದಿಗಳು ಗಸ್ತಿನಲ್ಲಿದ್ದಾಗ ಕಡವೆ ಮಾಂಸ ಸಾಗಿಸುತ್ತಿದ್ದ ಆರೋಪಿಗಳು ಅಧಿಕಾರಿಗಳನ್ನು ನೋಡಿ ಬೈಕ್ ಅನ್ನು ಬಿಟ್ಟು ಓಡಿ ಹೋಗುತ್ತಿದ್ದಾಗ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತ ದರ್ಶನ್ ಮತ್ತು ಗಿರೀಶ್ ಎಂಬುವವರಿಂದ ಪ್ಲಾಸ್ಟಿಕ್ ಚೀಲದಲ್ಲಿ ಇದ್ದ ಕಡವೆ ಮಾಂಸ, ಎರಡು ಬೈಕ್ ಹಾಗೂ ಎರಡು ಮೊಬೈಲ್‌ಗಳನ್ನು ವಶಪಡಿಸಿಕೊಂಡು ಆರೋಪಿಗಳನ್ನು ವಶಕ್ಕೆ ಪಡೆದು ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿದೆ. ಜೊತೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಪರಾರಿಯಾಗಿರುವ ಇನ್ನುಳಿದ ಆರೋಪಿಗಳ ಬಂಧನಕ್ಕೆ ಬಲೆ ಬೀಸಲಾಗಿದೆ.

ಕಾರ್ಯಾಚರಣೆಯಲ್ಲಿ ಉಪ ವಲಯ ಅರಣ್ಯಾಧಿಕಾರಿಗಳಾದ ನಿಹಾಲ್ ಅಹ್ಮದ್, ಫ್ರಾನ್ಸಿಸ್ ನೋಹನ್ ಹಾಗೂ ಗಸ್ತು ಅರಣ್ಯ ಪಾಲಕರಾದ ಸಿದ್ದರಾಮ ಪೂಜಾರಿ, ನಬಿಲಾಲ್ ಕುರಿಕಾಯಿ, ಶ್ರೇಯಾಂಶ ವಸವಾಡೆ, ಮೌನೇಶ್ ಚಳ್ಳಗಿ ಪಾಲ್ಗೊಂಡಿದ್ದರು.

ವಿಕಲಚೇತನರು ಸಾಧನೆಯ ಹಾದಿಯಿಂದ ಹಿಂದೆ ಸರಿಯಬಾರದು: ಡಿಸಿ ಡಾ.ಕುಮಾರ್



ವಿಶ್ವ ವಿಕಲಚೇತನರ ದಿನಾಚರಣೆಯನ್ನು ಉದ್ಘಾಟಿಸುತ್ತಿರುವ ಜಿಲ್ಲಾಧಿಕಾರಿ ಡಾ.ಕುಮಾರ್.

ಮಂಡ್ಯ,ಡಿ.3– ವಿಕಲಚೇತನರು ಸಾಧನೆಯ ಹಾದಿಯಿಂದ ಹಿಂದೆ ಸರಿಯಬಾರದು ಹಾಗೂ ಮನುಷ್ಯ ಎಂದ ಮೇಲೆ ನ್ಯೂನತೆಗಳು ಸಹಜವಾಗಿ ಇದ್ದೇ ಇರುತ್ತವೆ. ದೈಹಿಕವಾಗಿ ನ್ಯೂನತೆ ಹೊಂದಿರುವವರನ್ನು ವಿಶೇಷಚೇತನರು ಎಂದು ಕರೆದು ಗೌರವಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಮಂಗಳವಾರ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಅಲಿಂಕೋ ಸಂಸ್ಥೆ, ಗ್ರಾಮೀಣ ಪುನರ್ವಸತಿ ಯೋಜನೆ ಕಾರ್ಯಕರ್ತರು ಮತ್ತು ಜಿಲ್ಲೆಯಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ದುಡಿಯುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ವಿಕಲಚೇತನರ ದಿನಾಚರಣೆಯ ಉದ್ಘಾಟನಾ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿದರು.

ವಿಶೇಷ ವಿಕಲಚೇತನರನ್ನು ಯಾರು ಕೂಡ ಅಂಗವಿಕಲರು ಎಂದು ಕರೆಯಬಾರದು. ಪ್ರತಿಯೊಬ್ಬರಿಗೂ ಕೂಡ ದೈಹಿಕವಾಗಿ ಮತ್ತು ಮಾನಸಿಕವಾಗಿ ನ್ಯೂನತೆ ಎನ್ನುವುದು ಇದ್ದೇ ಇರುತ್ತದೆ. ಅದರಲ್ಲಿ ದೈಹಿಕವಾಗಿ ನ್ಯೂನತೆ ಇರುವವರೇ ವಿಶೇಷ ವಿಕಲಚೇತನರು. ಆದ್ದರಿಂದ ಅವರನ್ನು ಅಂಗವಿಕಲರು ಎನ್ನದೇ ವಿಶೇಷಚೇತನರು ಎಂದು ಗೌರವ ನೀಡಬೇಕು. ದೈಹಿಕವಾಗಿ ಚೆನ್ನಾಗಿ ಇದ್ದು ಮಾನಸಿಕವಾಗಿ ಕುಗ್ಗಿರುವವರು ಕೂಡ ಒಂದು ರೀತಿಯಲ್ಲಿ ವಿಕಲಚೇತನರೇ. ಹಾಗಾಗಿ ಯಾವುದೇ ಕಾರಣಕ್ಕೂ ವಿಶೇಷ ವಿಕಲಚೇತನರು ಸಾಧನೆಯ ಹಾದಿಯಿಂದ ಇಂದೇ ಸರಿಯಬಾರದು ಎಂದು ಹೇಳಿದರು.

ನಾವು ಕೂಡ ಬಲಶಾಲಿಗಳೇ, ನಾವು ಏನು ಬೇಕಾದರೂ ಸಾಧನೆ ಮಾಡುತ್ತೇವೆ ಎಂಬ ಆತ್ಮಸ್ಥೈರ್ಯವನ್ನು ಮನದಟ್ಟು ಮಾಡಿಕೊಂಡು ಸಿಕ್ಕ ಅವಕಾಶಗಳನ್ನು ಬಳಸಿಕೊಂಡು ನೀವು ಕೂಡ ಪ್ರತಿಯೊಬ್ಬರಂತೆ ಜೀವಿಸುವ ಹಕ್ಕಿದೆ, ನಿಮಗಾಗಿ ಸರ್ಕಾರದಿಂದ ಬಂದಂತಹ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳಬೇಕು. ಯಾವುದೋ ಒಂದು ನ್ಯೂನತೆ ನಮ್ಮನ್ನು ಆವರಿಸಿಕೊಂಡಿದೆ ಎಂದು ಅದೇ ಬೇಸರದಲ್ಲಿ ಜೀವನ ಕಳೆಯುವುದಕ್ಕಿಂತ ಅದೇ ನ್ಯೂನತೆಯನ್ನು ಮೆಟ್ಟಿ ನಿಂತು ನಿಮ್ಮಲ್ಲಿರುವ ಚೈತನ್ಯವನ್ನು ಬಳಸಿಕೊಂಡು ಮುಂದೆ ಬಂದು ಸಾಧನೆ ಮಾಡಬೇಕು ಎಂದು ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಮಾತನಾಡಿದರು. ವೇದಿಕೆಯ ಮೇಲೆ ವಿಶೇಷ ಸಾಧನೆ ಮಾಡಿರುವ ವಿಕಲಚೇತನರಿಗೆ ಸನ್ಮಾನ ಮಾಡಿ ವಿಶ್ವ ವಿಕಲಚೇತನರ ದಿನಾಚರಣೆಯ ಅಂಗವಾಗಿ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದ್ದು ಸ್ಪರ್ಧೆಯಲ್ಲಿ ವಿಜೇತರಾದ ವಿಕಲಚೇತನರಿಗೆ ಬಹುಮಾನ ವಿತರಿಸಲಾಯಿತು.

ಕೊಟ್ಟ ಮಾತಿನಂತೆ ಗ್ರಾಮದ ಅಭಿವೃದ್ಧಿ ಮಾಡದ ಆರೋಪ

ಸಚಿವ ಚಲುವರಾಯಸ್ವಾಮಿ, ಶಾಸಕ ರವಿಕುಮಾರ್ ಗಣಿಗಗೆ ಘೇರಾವ್

ಮಂಡ್ಯ: ಕೊಟ್ಟ ಮಾತಿನಂತೆ ಗ್ರಾಮದ ಅಭಿವೃದ್ಧಿ ಮಾಡದ ಹಿನ್ನೆಲೆಯಲ್ಲಿ ರೊಚ್ಚಿಗೆದ್ದ ಗ್ರಾಮಸ್ಥರು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಮತ್ತು ಶಾಸಕ ರವಿಕುಮಾರ್ ಗಣಿಗ ಅವರಿಗೆ ಘೇರಾವ್ ಹಾಕಿದ ಘಟನೆ ತಾಲೂಕಿನ ಕೊಮ್ಮೇರಹಳ್ಳಿ ಗ್ರಾಮದಲ್ಲಿ ಸೋಮವಾರ ರಾತ್ರಿ ಸಂಭವಿಸಿದೆ.

ತಮ್ಮೂರಿಗೆ ಬಂದ ಸಚಿವ ಮತ್ತು ಶಾಸಕರನ್ನು ತಡೆದ ಗ್ರಾಮಸ್ಥರು ಮುತ್ತಿಗೆ ಹಾಕಿ ಕೊಟ್ಟ ಮಾತಿನಂತೆ ಗ್ರಾಮವನ್ನು ಅಭಿವೃದ್ಧಿ ಮಾಡಿಲ್ಲ ಎಂದು ಕೂಗಾಡಲಾರಂಭಿಸಿದರು. ಈ ವೇಳೆ ಮಾತಿಗೆ ಮಾತು ಬೆಳೆದು ಪರಿಸ್ಥಿತಿ ಗಂಭೀರ ಸ್ವರೂಪ ಪಡೆಯಿತು.

ಗ್ರಾಮಸ್ಥರ ಆಕ್ರೋಶಕ್ಕೆ ಕಂಗಲಾದ ಸಚಿವರು ಮತ್ತು ಶಾಸಕರು ಗ್ರಾಮಸ್ಥರ ವಿರುದ್ಧ ಗರಂ ಆದರಲ್ಲದೆ ತರಾಟೆಯಿಂದ ಮುಜುಗರಕ್ಕೊಳಗಾದರು. ಈ ವೇಳೆ ಆಕ್ರೋಶಗೊಂಡ ಜನರನ್ನು ಸಮಾಧಾನ ಮಾಡಲು ಪ್ರಯತ್ನಿಸಿದ ಸಚಿವ ಚಲುವರಾಯಸ್ವಾಮಿ ಮಾತನಾಡಿ ಗ್ರಾಮದ ಅಭಿವೃದ್ಧಿ ಮಾಡುವುದಾಗಿ ಭರವಸೆ ನೀಡಿದರೂ ಗ್ರಾಮಸ್ಥರು ಒಪ್ಪದೆ ಕೂಗಾಡಿದರು.

ಈ ವೇಳೆ ಶಾಸಕ ರವಿಕುಮಾರ್ ಮತ್ತು ಅವರ ಬೆಂಬಲಿಗರು ಹಾಗು ಗ್ರಾಮಸ್ಥರ ನಡುವೆ ಮಾತಿನ ಚಕಮಕಿ ನಡೆಯಿತು.

ಪೊಲೀಸರು ಮಧ್ಯ ಪ್ರವೇಶ ಮಾಡಿ ಗ್ರಾಮಸ್ಥರನ್ನು ಸಮಾಧಾನ ಮಾಡಿದರು. ಬಳಿಕ ಪೊಲೀಸರ ಭದ್ರತೆಯೊಂದಿಗೆ ಸ್ಥಳದಿಂದ ಶಾಸಕರು ಮತ್ತು ಸಚಿವರು ಅಲ್ಲಿಂದ ತೆರಳಿದರು.

ಫೆಂಗಲ್ ಚಂಡಮಾರುತಕ್ಕೆ ಮಂಡ್ಯ ಜಿಲ್ಲೆಯ ಹಲವೆಡೆ ಬೆಳೆ ನಾಶ, ಅನ್ನದಾತರು ಕಂಗಾಲು

ಮದ್ದೂರು, ಡಿ.3– ಫೆಂಗಲ್ ಚಂಡಮಾರುತಕ್ಕೆ ಮಂಡ್ಯ ಜಿಲ್ಲೆಯ ಹಲವೆಡೆ ಬೆಳೆ ನಾಶವಾಗಿದೆ. ಇದರಿಂದ ಅನ್ನದಾತರು ಕಂಗಾಲಾಗಿದ್ದಾರೆ. ಕಟಾವು ಮಾಡಿದ ಭತ್ತದ ಬೆಳೆ ಸಂಪೂರ್ಣ ನಾಶವಾಗಿ, ಮಳೆ ನೀರಿಗೆ ಆಹುತಿಯಾದ ಘಟನೆ ಮದ್ದೂರು ತಾಲೂಕಿನ ಅಜ್ಜಳ್ಳ ಗ್ರಾಮದಲ್ಲಿ ನಡೆದಿದೆ.

ಭತ್ತವನ್ನು ಕಟಾವು ಮಾಡಿದ್ದ ರೈತರಿಗೆ ಕೈಗೆ ಬಂದ ಬೆಳೆ ಬಾಯಿಗಿಲ್ಲ ಎಂಬಂತಾಗಿದೆ ಇದೀಗ ಫೆಂಗಲ್ ಚಂಡಮಾರುತದಿಂದ ನಿರಂತರ ಮಳೆ ಹಿನ್ನೆಲೆ ಗದ್ದೆಯಲ್ಲಿ ಕಟಾವು ಮಾಡಿದ್ದ ಭತ್ತ ಕೊಳೆಯುತ್ತಿದೆ. ಇದೇ ರೀತಿ ಜಿಲ್ಲೆಯ ಹಲವು ಕಡೆ ಕೈಗೆ ಬಂದ ಬೆಳೆ ನಾಶವಾಗಿದೆ.

ಒಂದನೇ ಪುಟದಿಂದ

44 ಕೋಟಿ ಮಂಜೂರು

ಈ ವರ್ಷ ನಾಲ್ಕು ಬಗೆಯ ವಿಕಲಚೇತನರ ಆರೈಕೆದಾರರಿಗೆ ಪ್ರತಿ ತಿಂಗಳು 1000 ರೂ. ಆರೈಕೆದಾರರ ಭತ್ಯೆ ನೀಡುವ ಯೋಜನೆಯನ್ನು ದೇಶದಲ್ಲಿ ಪ್ರಪ್ರಥಮ ಬಾರಿಗೆ ಕರ್ನಾಟಕ ಘೋಷಿಸಲಿದೆ.

ಪ್ರಸಕ್ತ ಸಾಲಿನಲ್ಲಿ 7 ಜಿಲ್ಲೆಗಳಲ್ಲಿ 2 ಕೋಟಿ ರೂ. ವೆಚ್ಚದಲ್ಲಿ 10 ಬುದ್ಧಿ ಮಾಂದ್ಯ ಮಕ್ಕಳ ವಸತಿ ಶಾಲೆಗಳನ್ನು ತೆರೆಯಲಾಗಿದೆ. ಇದಲ್ಲದೇ ಇನ್ನೂ 13 ಹೊಸ ಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಅನುದಾನಕ್ಕೆ ಒಳಪಡಿಸಲಾಗಿದೆ.

ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರ ಅವಲಂಬಿತರಿಗೆ ನೀಡಲಾಗುವ ಮರಣ ಪರಿಹಾರ ನಿಧಿಯನ್ನು ಪರಿಷ್ಕರಿಸಿ 1 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ, ಸರ್ಕಾರಿ ಉದ್ಯೋಗಗಳಲ್ಲಿ 'ಸಿ' ಮತ್ತು 'ಡಿ' ಸಮೂಹದ ಹುದ್ದೆಗಳಲ್ಲಿ ಶೇ.5 ಹಾಗೂ 'ಎ' ಮತ್ತು 'ಬಿ' ಹುದ್ದೆಗಳಲ್ಲಿ ಶೇ.4ರಷ್ಟು ಮೀಸಲಾತಿ ನೀಡಲಾಗಿದೆ.

ಅಲ್ಲದೇ ಇವರು ನಿರ್ವಹಿಸಬಹುದಾದ ಹುದ್ದೆಗಳನ್ನು ಗುರುತಿಸಲು ರಾಜ್ಯ ಮಟ್ಟದಲ್ಲಿ ತಜ್ಞರ ಸಮಿತಿ ರಚಿಸಲಾಗಿದೆ. ಹುದ್ದೆಗಳ ಗುರುತಿಸುವಿಕೆ ಕಾರ್ಯ ನಡೆಯುತ್ತಿದೆ. ವಿಕಲಚೇತನರ ಅನುಕೂಲಕ್ಕಾಗಿ ವಾಹನಗಳನ್ನು ನೀಡಲು ಈಗಾಗಲೇ ಸೂಚನೆ ನೀಡಲಾಗಿದೆ.

ಸಾಮಾಜಿಕ ಸಬಲೀಕರಣಕ್ಕಾಗಿ ಶೇಕಡಾ 40ರಿಂದ 74ರಷ್ಟು ವಿಕಲಚೇತನರಿಗೆ 800 ರೂ. ಹಾಗೂ ಶೇಕಡಾ 75 ಮತ್ತು ಅದಕ್ಕಿಂತ ಹೆಚ್ಚಿನ ಅಂಗವೈಕಲ್ಯತೆ ಉಳ್ಳವರಿಗೆ 1400 ರೂ. ಮತ್ತು ತೀವ್ರತರ ಮನೋವೈಕಲ್ಯತೆ ವ್ಯಕ್ತಿಗಳಿಗೆ 2000 ರೂ. ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ.

ಕೇಂದ್ರ ಸರ್ಕಾರದಿಂದ ನೀಡಲಾಗುವ ವಿಕಲಚೇತನರ ಮಾಸಾಶನ ಮೊತ್ತ ಹೆಚ್ಚಿಸುವಂತೆ ಕೋರಿ ರಾಜ್ಯ ಸರ್ಕಾರ ಪತ್ರ ಬರೆಯಲು ಕ್ರಮ ಕೈಗೊಳ್ಳಲಿದೆ ಎಂದರು.

ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿಗಳ ಸಂವಿಧಾನ ಪಾಠ!

ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಬಂದಿದ್ದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂವಿಧಾನ ಕುರಿತು ಪಾಠ ಮಾಡಿ, ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಸಂವಿಧಾನದ ಶ್ರೇಷ್ಠತೆ ಮತ್ತು ವಿಫಲತೆ ಯಾರ ಕೈಯ್ಯಲ್ಲಿದೆ ಎನ್ನುವ ಆಧಾರದ ಮೇಲೆ ನಿರ್ಧಾರವಾಗುತ್ತದೆ ಎನ್ನುವ ಅಂಬೇಡ್ಕರ್ ಮಾತು ಮತ್ತು ನಮ್ಮದು ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಕುವೆಂಪು ಅವರ ಮಾತುಗಳನ್ನು ಉಲ್ಲೇಖಿಸಿದರು.

ಸಂವಿಧಾನದ ಬಗ್ಗೆ ಗೌರವ ಇಲ್ಲದವರ ಕೈಗೆ ಸಿಕ್ಕರೆ, ಎಷ್ಟೇ ಒಳ್ಳೆ ಸಂವಿಧಾನವಾದರೂ ಪರಿಣಾಮ ಕೆಟ್ಟದ್ದಾಗಿರುತ್ತದೆ. ಸಂವಿಧಾನದ ಪೀಠಿಕೆಯಲ್ಲೇ ಇಡೀ ಸಂವಿಧಾನದ ಸಾರಾಂಶ ಇದೆ. ಜಾತ್ಯತೀತತೆ, ಸಾಮಾಜಿಕ ನ್ಯಾಯ ಎಂಬ ಎರಡೂ ಪದಗಳು ಮೂಲ ಸಂವಿಧಾನದಲ್ಲಿ ಇರಲಿಲ್ಲ. ಬಳಿಕ ಸೇರ್ಪಡೆ ಮಾಡಲಾಯಿತು. ಇದನ್ನು ತೆಗೆಯಬೇಕೆಂದು ಕೆಲವರು ಸುಪ್ರೀಂಕೋರ್ಟ್‌ಗೆ ಹೋಗಿದ್ದರು. ಆದರೆ, ಸುಪ್ರೀಂಕೋರ್ಟ್ ಜಾತ್ಯತೀತತೆ ಮತ್ತು ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಿತು ಎಂದರು. ಭಾರತ ಬಹುತ್ವದ ದೇಶ, ಎಲ್ಲಾ ಜಾತಿ, ಧರ್ಮದವರನ್ನು ಸಮಾನವಾಗಿ ನಡೆಸಿಕೊಳ್ಳುವುದು ನಮ್ಮ ದೇಶದ ಗುಣ, ಇದೇ ಸಂವಿಧಾನದ ಮೌಲ್ಯ. ಭಾರತದಲ್ಲಿ ಅಸಮಾನತೆ ಸೃಷ್ಟಿಯಾಗಿದ್ದು ಜಾತಿ ವ್ಯವಸ್ಥೆಯಿಂದ. ಜಾತಿ ಆಧಾರದ ಮೇಲೆ ಒಬ್ಬರ ಯೋಗ್ಯತೆ ಅಳೆಯುವುದು ಅನಾಗರಿಕತನ. ವಿದ್ಯೆ ಮತ್ತು ಸಂಪತ್ತು ಗಳಿಸುವ ಅವಕಾಶ ಶೂದ್ರರಿಗೆ ಮತ್ತು ಮಹಿಳೆಯರಿಗೆ ಇರಲಿಲ್ಲ. ಇದರಿಂದ ಅಸಮಾನತೆ ಸೃಷ್ಟಿಯಾಯಿತು. ಅಪ್ಪ–ಅಮ್ಮ ವಿದ್ಯಾವಂತರಾದರೆ ಮಾತ್ರ ಮಕ್ಕಳನ್ನೂ ವಿದ್ಯಾವಂತರನ್ನಾಗಿ ಮಾಡುತ್ತಾರೆ ಎಂದ ಮುಖ್ಯಮಂತ್ರಿ, ತಾವು ವಿದ್ಯಾಭ್ಯಾಸದಿಂದ ವಂಚಿತರಾಗಿ ಬಳಿಕ ವಿದ್ಯೆ ಕಲಿತು ವಕೀಲರಾದ ಪ್ರಸಂಗ ವಿವರಿಸಿದರು. ಸಂವಿಧಾನ ಓದು ಅಭಿಯಾನವನ್ನು ರಾಜ್ಯಾದ್ಯಂತ ಆರಂಭಿಸಲಾಯಿತು, ಸಂವಿಧಾನದ ಧ್ಯೇಯೋದ್ದೇಶ ಮತ್ತು ಆಶಯಗಳನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ಬಸವಣ್ಣನವರು 850 ವರ್ಷಗಳ ಹಿಂದೆಯೇ ಜಾತಿ ವ್ಯವಸ್ಥೆ ಮತ್ತು ಕರ್ಮಸಿದ್ಧಾಂತ ಧಿಕ್ಕರಿಸಿದ್ದಾರೆ. ಆದರೆ, ಇವತ್ತಿಗೂ ಇದು ಪೂರ್ತಿ ಹೋಗಿಲ್ಲ. ಸಂವಿಧಾನದಲ್ಲಿ ಕಂದಾಚಾರಗಳಿಗೆ ಅವಕಾಶವಿಲ್ಲ, ಒಂದು ಜಾತಿ, ಒಂದು ಧರ್ಮಕ್ಕೆ ಮಾತ್ರ ಈ ದೇಶ ಸೀಮಿತವಲ್ಲ ಎಂದರು.

'ಮರಳು ಭಾಗ್ಯ'

ಯಶಸ್ವಿ ಬಿಡ್‌ದಾರರೆಂದು ಪರಿಗಣಿಸಲಾಗುವುದು. ಒಂದಕ್ಕಿಂತ ಹೆಚ್ಚು ಟೆಂಡರ್‌ದಾರರು ಏಕರೂಪ ಟೆಂಡರ್ ದರ ನಮೂದಿಸಿದಲ್ಲಿ ಲಾಟರಿ ಮೂಲಕ ಯಶಸ್ವಿ ಬಿಡ್‌ದಾರರನ್ನು ಆಯ್ಕೆ ಮಾಡಲಾಗುವುದು. ಗುತ್ತಿಗೆ ಪ್ರಕ್ರಿಯೆಯನ್ನು ಇ–ಪೋರ್ಟಲ್ ನಲ್ಲಿ ಆಸಕ್ತ ವ್ಯಕ್ತಿ ಇಲ್ಲವೇ ಖಾಸಗಿ ಕಂಪನಿಗಳವರು ಅರ್ಜಿ ಸಲ್ಲಿಸಲು ಜಿಲ್ಲಾವಾರು ಅಧಿಸೂಚನೆ ಜಾರಿ ಮಾಡಲಾಗುವುದು. ಇಂದಿನಿಂದಲೇ ಜಿಲ್ಲಾಧಿಕಾರಿಗಳು ಹೊಸ ನೀತಿಯಡಿ ಮರಳು ಗುತ್ತಿಗೆ ನೀಡಿ ಗ್ರಾಹಕರಿಗೆ ಸರ್ಕಾರ ನಿಗದಿಪಡಿಸಿದ ದರದಲ್ಲಿ ಮರಳು ಮಾರಾಟ ಮಾಡಬಹುದು ಎಂದು ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

ಭಾರೀ ಬಂಡೆ

ಮಧ್ಯರಾತ್ರಿ ವೇಳೆಗೆ ಬಂಡೆ ಉರುಳಿ ಬಿದ್ದಿರುವುದರಿಂದ ಯಾವುದೇ ಅನಾಹುತ ಸಂಭವಿಸಿಲ್ಲ. ಹಗಲು ವೇಳೆ ಆಗಿದ್ದರೆ, ಭಾರೀ ಅಪಾಯವೇ ಸಂಭವಿಸುತ್ತಿತ್ತು.

ಸಾರಿಗೆ ಬಸ್ ಚಾಲಕನ ಸಮಯ ಪ್ರಜ್ಞೆ: ಚಾಮುಂಡಿಬೆಟ್ಟದಲ್ಲಿ ರಾತ್ರಿ ತಂಗಿದ್ದ ಸಾರಿಗೆ ಸಂಸ್ಥೆಯ ಬಸ್ ಇಂದು ಬೆಳಗ್ಗೆ ಬೆಟ್ಟದಿಂದ ಮೈಸೂರಿಗೆ ಬರುವಾಗ ರಸ್ತೆಯಲ್ಲಿ ಬಂಡೆ ಬಿದ್ದಿರುವುದನ್ನು ಬಸ್ ಚಾಲಕ ಗಮನಿಸಿದ್ದಾರೆ. ಬಂಡೆಯೊಂದಿಗೆ ಮಣ್ಣು ಹಾಗೂ ಸಣ್ಣ–ಪುಟ್ಟ ಕಲ್ಲುಗಳು ಕುಸಿದಿದ್ದವು. ಬಂಡೆ ಬಿದ್ದಿರುವ ಸ್ಥಳ ಕಡಿದಾದ ತಿರುವಾಗಿದ್ದು, ಬಸ್ ವೇಗವಾಗಿ ಬಂದಿದ್ದರೆ, ಬಂಡೆಗೆ ಡಿಕ್ಕಿ ಹೊಡೆಯುತ್ತಿತ್ತು. ಆದರೆ, ಬಸ್ ಚಾಲಕ ಸಮಯ ಪ್ರಜ್ಞೆಯಿಂದ ತಕ್ಷಣವೇ ಬಸ್ ನಿಲ್ಲಿಸಿದ್ದಾರೆ. ಕೊನೆಗೆ ಚಾಲಕ–ನಿರ್ವಾಹಕ, ಪ್ರಯಾಣಿಕರ ಸಹಾಯದಿಂದ ರಸ್ತೆ ಬದಿಯಿದ್ದ ಕಲ್ಲುಗಳನ್ನು ಬದಿಗೆ ಸರಿಸಿ, ಬಂಡೆಯನ್ನು ಪಕ್ಕಕ್ಕೆ ತಳ್ಳಿದ್ದಾರೆ. ಬಳಿಕ ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ.

ತೆರವು ಕಾರ್ಯಾಚರಣೆ: ರಸ್ತೆ ಮೇಲೆ ಬಂಡೆ ಉರುಳಿ ಬಿದ್ದಿರುವ ವಿಷಯ ತಿಳಿಯುತ್ತಿದ್ದಂತೆಯೇ ಲೋಕೋಪಯೋಗಿ ಇಲಾಖೆಯ ಸಿಬ್ಬಂದಿ, ಜೆಸಿಬಿಯೊಂದಿಗೆ ಸ್ಥಳಕ್ಕೆ ಆಗಮಿಸಿ ಬಂಡೆ ಹಾಗೂ ರಸ್ತೆ ಬದಿ ಬಿದ್ದಿದ್ದ ಮಣ್ಣು ಮತ್ತು ಕಲ್ಲುಗಳ ರಾಶಿಯನ್ನು ರಸ್ತೆ ಬದಿ ಸರಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಮತ್ತಷ್ಟು ಬಂಡೆ ಉರುಳುವ ಆತಂಕ: ಬಂಡೆ ಉರುಳಿಬಿದ್ದ ಸ್ಥಳ ಸೇರಿದಂತೆ ಬೆಟ್ಟದ ಮುಖ್ಯ ರಸ್ತೆಯ ಬದಿಯ ಕೆಲ ಸ್ಥಳಗಳಲ್ಲಿ ದೊಡ್ಡ ಬಂಡೆಗಳು ತುದಿಯಲ್ಲಿದ್ದು, ಮಳೆ ಬಂದು ಮಣ್ಣು ಸಡಿಲಗೊಂಡರೆ ಅವುಗಳು ರಸ್ತೆಗೆ ಉರುಳುವ ಸಾಧ್ಯತೆ ಇದೆ. ಹಾಗಾಗಿ ಅಧಿಕಾರಿಗಳು ಅವಘಡ ಸಂಭವಿಸುವ ಮುನ್ನವೇ ಎಚ್ಚೆತ್ತು ಕೊಳ್ಳಬೇಕು ಎಂದು ಸ್ಥಳೀಯರು ಆಗ್ರಹಪಡಿಸಿದ್ದಾರೆ.

ಮರುಕಳಿಸದಂತೆ ಕ್ರಮ ಅಗತ್ಯ: ಆರೇಳು ವರ್ಷದ ಹಿಂದೆ ಚಾಮುಂಡಿ ಬೆಟ್ಟದ ನಂದಿ ರಸ್ತೆಯಲ್ಲಿ ಐದಾರು ಬಾರಿ ಭೂಕುಸಿತ ಉಂಟಾಗಿದ್ದು, ಇಂದಿಗೂ ಆ ರಸ್ತೆಯನ್ನು ದುರಸ್ತಿ ಮಾಡಲು ಸಾಧ್ಯವಾಗಿಲ್ಲ. ಅಲ್ಲದೆ ಬೆಟ್ಟದ ಸುರಕ್ಷತೆ ಬಗ್ಗೆ ಜನರಲ್ಲಿ ಆತಂಕ ಉಂಟಾಗಿದೆ ಇದೀಗ ದೊಡ್ಡ ಬಂಡೆ ಉರುಳಿ ಬಿದ್ದಿರುವುದು ಜನರಲ್ಲಿ ಆತಂಕ ಮೂಡಿಸಿದೆ.

ಕೋಟೆ ತಾಲೂಕಲ್ಲಿ ಹುಲಿ ಹಾವಳಿ; ಅರಣ್ಯ ಇಲಾಖೆ ಕಾರ್ಯಾಚರಣೆ



ಸಹಾಯವಾಣಿಗೆ ಕರೆ ಮಾಡಿ

ಹುಲಿ ಚಲನವಲನ ಕಂಡಲ್ಲಿ ಸಾರ್ವಜನಿಕರು ಕೂಡಲೇ ಸಹಾಯವಾಣಿ 9481990926 ಅಥವಾ 1926ಕ್ಕೆ ಕರೆ ಮಾಡಿ ಮಾಹಿತಿ ನೀಡಿ. ಯಾರೂ ಸುಳ್ಳು ಸುದ್ದಿ ಹಬ್ಬಿಸಬೇಡಿ. ವಿಡಿಯೋ ಅಥವಾ ಫೋಟೋ ತಿರುಚಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಡಬೇಡಿ. ಯಾವುದೇ ವದಂತಿಗಳಿಂದ ಭಯಭೀತರಾಗದೆ ಸಹಾಯವಾಣಿಗೆ ಕರೆ ಮಾಡಿ ಹುಲಿ ಇರುವಿಕೆ ಬಗ್ಗೆ ಖಚಿತಪಡಿಸಿಕೊಳ್ಳಿ. ರೈತರು ಜಮೀನಿಗೆ ತೆರಳುವಾಗ ಎಚ್ಚರ ವಹಿಸಿ. ಈ ಮೂಲಕ ಹುಲಿ ಸೆರೆ ಕಾರ್ಯಾಚರಣೆಗೆ ಸಹಕಾರ ನೀಡಿ ಎಂದು ಅರಣ್ಯ ಇಲಾಖೆ ಮೈಸೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮನವಿ ಮಾಡಿದ್ದಾರೆ.



ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಹುಲಿ ಸೆರೆಗೆ ಕೂಂಬಿಂಗ್ ನಡೆಸುತ್ತಿರುವುದು.

ಮೈಸೂರು, ಡಿ.3(ಎಸ್‌ಬಿಡಿ)– ಹೆಚ್.ಡಿ.ಕೋಟೆ ತಾಲೂಕಿನಲ್ಲಿ ಆತಂಕ ಸೃಷ್ಟಿಸಿರುವ ಹುಲಿಗಳ ಸೆರೆಗೆ ಅರಣ್ಯ ಇಲಾಖೆ ಕಾರ್ಯಾಚರಣೆ ಆರಂಭಿಸಿದೆ.

ತಾಲೂಕಿನ ಶಾಂತಿಪುರ ಹಾಗೂ ಬೋಚಿಕಟ್ಟೆ ಗ್ರಾಮದ ಬಳಿ ಮಂಗಳವಾರ ಬೆಳಗ್ಗೆ ಹುಲಿ ಓಡಾಟದ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಕೊಂಬಿಂಗ್ ನಡೆಸಿದಾಗ ಹುಲಿಯ ಹಳೆ ಹೆಜ್ಜೆ ಗುರುತುಗಳು ಪತ್ತೆಯಾಗಿವೆ. ಮಧ್ಯಾಹ್ನ ಚಾಕಹಳ್ಳಿ ಗ್ರಾಮದಲ್ಲಿ ಹುಲಿ ಕಾಣಿಸಿಕೊಂಡಿದ್ದು, ಅಲ್ಲಿಯೂ ಹೆಜ್ಜೆ ಗುರುತುಗಳು ಕಂಡು ಬಂದ ಹಿನ್ನೆಲೆಯಲ್ಲಿ ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ, ಮೈಸೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ, ಹೆಚ್.ಡಿ.ಕೋಟೆ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿ, ವಿಶೇಷ ಹುಲಿ ಸಂರಕ್ಷಣಾ ದಳ ಹಾಗೂ ಚಿರತೆ ಕಾರ್ಯಪಡೆ ಜಂಟಿಯಾಗಿ ವ್ಯಾಪಕ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಹುಲಿ ಸೆರೆ ಸವಾಲು: ಈ ಭಾಗದಲ್ಲಿ ತಾಯಿ ಹುಲಿ ಹಾಗೂ 2 ಮರಿಗಳು ಸಂಚರಿಸುತ್ತಿದ್ದು, ಪದೇ ಪದೆ ಜಾಗವನ್ನು ಬದಲಾಯಿಸುತ್ತಿವೆ. ಅಲ್ಲದೆ ಜೋಳ ಹಾಗೂ ಬಾಳೆ ತೋಟಗಳಲ್ಲಿ ಅಡಗಿಕೊಳ್ಳುವುದರಿಂದ ಕೂಂಬಿಂಗ್ ಕಾರ್ಯಾಚರಣೆ ಸವಾಲಾಗಿ ಪರಿಣಮಿಸಿದೆ. ಆಗಾಗ್ಗೆ ಜಾಗ ಬದಲಿಸುತ್ತಿರುವುದರಿಂದ ಸೆರೆ ಹಿಡಿಯುವ ಕಾರ್ಯಾಚರಣೆಗೆ ತೊಡಕಾಗಿದೆ. ಆದರೂ ನಿರಂತರವಾಗಿ ಹುಲಿ ಚಲನ–ವಲನದ ಮೇಲೆ ನಿಗಾ ವಹಿಸಿ ಕಾರ್ಯಾಚರಣೆ ನಡೆಸುತ್ತಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಟ್ರಾಪ್ ಕ್ಯಾಮರಾಗಳು, ನೆಟ್‌ವರ್ಕ್ ಕ್ಯಾಮರಾಗಳು, ಡ್ರೋನ್‌ಗಳನ್ನು ಕಾರ್ಯಾಚರಣೆಗೆ ಬಳಸಲಾಗುತ್ತಿದೆ. ಅಗತ್ಯಬಿದ್ದರೆ ಆನೆಗಳನ್ನೂ ಬಳಸಿಕೊಳ್ಳಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೋನ್‌ಗಳು ಸೇರಿದಂತೆ ಎಲ್ಲಾ ಸಲಕರಣೆಗಳೊಂದಿಗೆ ಕಾರ್ಯಾಚರಣೆ ಮುಂದುವರೆಸಲಾಗಿದೆ.

ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್‌ಗೆ ಕೋರಿ ರಾಜ್ಯಪಾಲರಿಗೆ ಕಡತ ರವಾನಿಸಿದ ಸರ್ಕಾರ



ಬೆಂಗಳೂರು, ಡಿ.3–ಭ್ರಷ್ಟಾಚಾರ ದೂರಿನ ಬಗ್ಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕೆಂದು ರಾಜ್ಯ ಸರ್ಕಾರ, ರಾಜ್ಯಪಾಲರಿಗೆ ಮನವಿ ಮಾಡಿದೆ.

ಈ ಹಿಂದೆ ಸಚಿವ ಸಂಪುಟದಲ್ಲಿ ತೆಗೆದುಕೊಂಡ ತೀರ್ಮಾನದಂತೆ ಬಿಡಿಎ ಹೌಸಿಂಗ್ ನಿರ್ಮಾಣ ಪ್ರಕರಣದಲ್ಲಿ ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಇಂದು(ಡಿ. 3) ಸರ್ಕಾರ, ರಾಜ್ಯಪಾಲರಿಗೆ ಕಡತ ರವಾನೆ ಮಾಡಿದೆ. ಈ ಹಿನ್ನೆಲೆಯಲ್ಲಿ ಏನಾಗುತ್ತೋ ಏನೋ ಎಂದು ಬಿಎಸ್‌ವೈಗೆ ಢವಢವ ಶುರುವಾಗಿದೆ.

ಬಿಡಿಎ ಹೌಸಿಂಗ್ ನಿರ್ಮಾಣ ಪ್ರಕರಣ ಸಂಬಂಧ ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿಗೆ ಅನುಮತಿ ಕೋರಿ ಮತ್ತೊಮ್ಮೆ ರಾಜ್ಯಪಾಲರಿಗೆ ಮನವಿ ಮಾಡಲು ಕಳೆದ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿತ್ತು. ಅದರಂತೆ ಇಂದು ರಾಜ್ಯಪಾಲರಿಗೆ ಬಿಎಸ್‌ವೈ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ಕಡತ ರವಾನಿಸಿದೆ. ಆದ್ರೆ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಯಾವ ನಿರ್ಧಾರ ಕೈಗೊಳ್ಳಲಿದ್ದಾರೆ ಎನ್ನುವುದರ ಮೇಲೆ ಬಿಎಸ್‌ವೈ ಭವಿಷ್ಯ ನಿರ್ಧಾರವಾಗಲಿದೆ. ಬಿಡಿಎ ಹೌಸಿಂಗ್ ನಿರ್ಮಾಣ ಪ್ರಕರಣಕ್ಕೆ ಸಂಬಂಧಿಸಿದಂತೆ ಟಿಜೆ ಅಬ್ರಾಹಂ ದೂರಿನ ಮೇರೆಗೆ 2020ರಲ್ಲೂ ರಾಜ್ಯಪಾಲರಿಗೆ ಅನುಮತಿ ಕೋರಿ ಕಡತ ಮಂಡಿಸಲಾಗಿತ್ತು. ಆದರೆ ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲು ರಾಜ್ಯಪಾಲರು ತಿರಸ್ಕರಿಸಿದ್ದರು. ಈಗ ಮತ್ತೊಮ್ಮೆ ಸಿದ್ದರಾಮಯ್ಯ ಸರ್ಕಾರ, ಅನುಮತಿ ಮರುಪರಿಶೀಲಿಸುವಂತೆ ಕೋರಿ ಕಡತ ಕಳುಹಿಸಿದೆ.

ಪ್ರಕರಣದ ಹಿನ್ನೆಲೆ: ಟಿ.ಜೆ. ಅಬ್ರಹಾಂ 2020ರ ನ.19 ರಂದು ಎಸಿಬಿಗೆ ದೂರು ನೀಡಿ, ಭ್ರಷ್ಟಾಚಾರ ನಿಗ್ರಹ ಕಾಯ್ದೆ, ಅಕ್ರಮ ಹಣ ವರ್ಗಾವಣೆ ಕಾಯಿದೆ 2002ರ ಅಡಿ ಯಡಿಯೂರಪ್ಪ ಹಾಗೂ ಕುಟುಂಬ ಸದಸ್ಯರ ವಿರುದ್ಧ ಕ್ರಮಕ್ಕೆ ಮನವಿ ಮಾಡಿದ್ದರು. ಆದರೆ, ಪ್ರಕರಣದ ವಿಚಾರಣೆ ನಡೆಸಿದ್ದ ನ್ಯಾಯಾಲಯವು, ಹಾಲಿ ಮುಖ್ಯಮಂತ್ರಿಗಳಾಗಿರುವ ಯಡಿಯೂರಪ್ಪ ವಿರುದ್ಧ ವಿಚಾರಣೆಗೆ ರಾಜ್ಯಪಾಲರ ಅನುಮತಿ ಅಗತ್ಯ ಎಂದು ಹೇಳಿತ್ತು. ಈ ಹಿನ್ನೆಲೆಯಲ್ಲಿ ಟಿ.ಜೆ. ಅಬ್ರಹಾಂ ಅವರು ರಾಜ್ಯಪಾಲರಿಗೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಮನವಿ ಸಲ್ಲಿಸಿದ್ದರು.

ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ವಂಚನೆ ಆರೋಪ: ಪ್ರಕರಣ ದಾಖಲು

ಮೈಸೂರು, ಡಿ.3– ಒಪ್ಪಂದದಂತೆ ನಿವೇಶನ ನೀಡದೆ ಗೃಹ ನಿರ್ಮಾಣ ಸಹಕಾರ ಸಂಘವೊಂದಕ್ಕೆ ವಂಚಿಸಿರುವ ಆರೋಪದಡಿ ಖಾಸಗಿ ಗುತ್ತಿಗೆ ಸಂಸ್ಥೆಯೊಂದರ ವಿರುದ್ಧ ಮೈಸೂರಿನ ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶ್ರೀ ರಾಮಕೃಷ್ಣ ಹೌಸ್ ಬಿಲ್ಡಿಂಗ್ ಕೋ ಆಪರೇಟಿವ್ ಸೊಸೈಟಿ ಮೈಸೂರು ಸೌತ್ ಮುಖ್ಯಸ್ಥರು, ಸ್ಕಿಲ್ ಟೆಕ್ ಇಂಜಿನಿಯರ್ಸ್ ಅಂಡ್ ಕಂಟ್ರಾಕ್ಟರ್ಸ್ ಸಂಸ್ಥೆಯ ನಿರ್ದೇಶಕರು ಹಾಗೂ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದು, ಸಂಘದ ಸದಸ್ಯರ ಅನುಕೂಲಕ್ಕಾಗಿ ಜಮೀನು ಖರೀದಿಸಿ ವಸತಿ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಕೊಡಿಸುವುದಾಗಿ ನಂಬಿಸಿ, ಕೋಟ್ಯಾಂತರ ರೂ ವಂಚಿಸಿರುವುದಾಗಿ ಆರೋಪಿಸಿದ್ದಾರೆ.

2006ರಲ್ಲಿ ಶ್ರೀ ರಾಮಕೃಷ್ಣ ಹೌಸ್ ಬಿಲ್ಡಿಂಗ್ ಕೋ ಆಪರೇಟಿವ್ ಸೊಸೈಟಿ ಸದಸ್ಯರಿಗಾಗಿ ನಿವೇಶನ ನಿರ್ಮಿಸಲು ಸ್ಕಿಲ್ ಟೆಕ್ ಇಂಜಿನಿಯರ್ಸ್‌ನ ಶಿವಶಂಕರ್, ಅರುಣ್ ಕುಮಾರ್, ವೀರೇಶ್ ಜೊತೆ ಒಪ್ಪಂದ ಮಾಡಿಕೊಂಡಿದ್ದರು. ಹಂಚ್ಯಾ ಗ್ರಾಮದ ಸರ್ವೆ ನಂ.45 ರಲ್ಲಿ 30 ಎಕರೆ ಜಮೀನು ನೀಡುವುದಾಗಿ ಅಗ್ರಿಮೆಂಟ್ ಮಾಡಿಕೊಂಡು 181 ನಿವೇಶನಗಳನ್ನ ಅಭಿವೃದ್ಧಿಪಡಿಸಿ ಕೊಡುವುದಾಗಿ ಒಪ್ಪಿದ್ದರು. ಈ ಸಂಬಂಧ ಆ ಸಂಸ್ಥೆಗೆ 14,67,04,434 ರೂ. ಪಾವತಿ ಮಾಡಲಾಗಿದೆ. ಒಪ್ಪಂದದಂತೆ 30 ಎಕರೆ ಬದಲಾಗಿ ಕೇವಲ 12 ಎಕರೆ ಜಮೀನು ಖರೀದಿಸಿ, 90 ಸೈಟ್ ಗಳನ್ನ ನೀಡಿದ್ದಲ್ಲದೆ ಸದಸ್ಯರಿಂದ ಪ್ರತಿ ಚದರ ವಿಸ್ತೀರ್ಣಕ್ಕೆ 95 ರೂ.ನಂತೆ ಒಟ್ಟು 2,63,47,614 ರೂ. ಹೆಚ್ಚುವರಿಯಾಗಿ ಪಡೆದಿದ್ದಾರೆ. ಉಳಿದ 90 ನಿವೇಶನಗಳಿಗಾಗಿ ನೋಟಿಸ್ ನೀಡಿದಾಗ ಸಮಯಾವಕಾಶ ಪಡೆದು ನಂತರ ನಿವೇಶನ ನೀಡುವಲ್ಲಿ ವಿಫಲರಾಗಿದ್ದಾರೆ. ಇದೇ ವೇಳೆ ಕೋ.ಆಪರೇಟಿವ್ ಸೊಸೈಟಿಗೆ ಮರೆಮಾಚಿ ಹಂಚ್ಯಾ ಗ್ರಾಮದ ಸರ್ವೆ ನಂ.126 ರಲ್ಲಿ 6 ಎಕರೆ 28 ಗುಂಟೆ ಜಮೀನು ಖರೀದಿಸಿ, ನಿವೇಶನಗಳನ್ನಾಗಿ ಪರಿವರ್ತಿಸಿ ಬೇರೆಯವರಿಗೆ ಮಾರಾಟ ಮಾಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಮೈಸೂರು ಮಿತ್ರ

ಬುಧವಾರ 4 ಡಿಸೆಂಬರ್ 2024

ಫೆಂಗಲ್ ದುರ್ಬಲ; ಮೈಸೂರಲ್ಲಿ ಬಿಡುವು ನೀಡಿದ ಮಳೆರಾಯ

ಮೈಸೂರು, ಡಿ.3(ಬಿಎಲ್‌ಯು)– ಫೆಂಗಲ್ ಚಂಡಮಾರುತದ ಪರಿಣಾಮ ಕಳೆದ ಎರಡು ದಿನಗಳಿಂದ ಆರ್ಭಟಿಸಿದ್ದ ಮಳೆರಾಯ ಇಂದು ಪೂರ್ಣ ಪ್ರಮಾಣದಲ್ಲಿ ಬಿಡುವು ನೀಡಿತು. ಕಳೆದ ಮೂರು ದಿನಗಳಿಂದ ಮೋಡ ಕವಿದ ವಾತಾವರಣ, ನಿರಂತರ ಮಳೆಯಿಂದ ತತ್ತರಿಸಿದ್ದ ಜನರು ಇಂದು ಸೂರ್ಯನ ಕಿರಣಗಳನ್ನು ನೋಡಿ ಸದ್ಯ ಮಳೆ ನಿಂತಿತ್ತಲ್ಲ ಎಂದು ನಿಟ್ಟುಸಿರು ಬಿಟ್ಟರು.

ಶನಿವಾರದಿಂದ ಮೈಸೂರಿನಲ್ಲಿ ದಟ್ಟ ಮೋಡ ಆವರಿಸಿತ್ತು. ಭಾನುವಾರ ಸಂಜೆ ಆರಂಭವಾದ ಮಳೆ ಇಂದು ಮುಂಜಾನೆ ತನಕ ನಿರಂತರವಾಗಿ ಸುರಿದಿದೆ. ಜಿಟಿ ಜಿಟಿ ಮಳೆಯಿಂದ ಎರಡು ದಿನ ಶಾಲಾ–ಕಾಲೇಜುಗಳಿಗೆ ರಜೆ ನೀಡ ಲಾಗಿತ್ತು. ಆದರೆ ಕಚೇರಿ ಸೇರಿದಂತೆ ಇತರೆ ಕೆಲಸಗಳಿಗೆ ಹೋಗಬೇಕಾದವರು ಮಳೆಯಲ್ಲೇ ನೆನೆದು ದೈನಂದಿನ ಕಾರ್ಯದಲ್ಲಿ ತೊಡಗಿದ್ದರು.

ಮಳೆಯಿಂದಾಗಿ ವ್ಯಾಪಾರ–ವಹಿವಾಟು ಮೇಲೆ ತೀವ್ರ ಪರಿಣಾಮ ಬೀರಿತ್ತು. ಮಳೆಯಿಂದ ಜನರು ಹೊರಗೆ ಬಾರದ ಕಾರಣ ಅಂಗಡಿಗಳಲ್ಲಿ ವ್ಯಾಪಾರ ವಿಲ್ಲದೇ ಬಿಕೋ ಎನ್ನುತ್ತಿದ್ದವು. ಮೈಸೂರಿನ ರಸ್ತೆ ಬದಿಯ ಫಾಸ್ಟ್‌ಫುಡ್, ಪಾನಿಪೂರಿ ಸೇರಿದಂತೆ ಇತರೆ ತಿಂಡಿ ತಿನಿಸು ಮಾರಾಟ ಮಾಡುವ ವ್ಯಾಪಾರಸ್ಥರು ಗ್ರಾಹಕರಿಗೆ ಕಾಯುವ ಪರಿಸ್ಥಿತಿ ಎದುರಾಗಿತ್ತು. ಇಂತಹ ಸಾಕಷ್ಟು ವ್ಯಾಪಾರಸ್ಥರಿಗೆ ನಷ್ಟವೂ ಉಂಟಾಯಿತು.

ಮೈಸೂರಿನಲ್ಲಿ ನಿನ್ನೆ ಒಂದೇ ದಿನ 31.9 ಮಿಲಿ ಮೀಟರ್ ಮಳೆಯಾಗಿದೆ. ಭಾನುವಾರ ಕೂಡ ಮೈಸೂರಿನಲ್ಲಿ 13 ಮಿಲಿ ಮೀಟರ್ ಮಳೆಯಾಗಿತ್ತು.

ಫೆಂಗಲ್ ಚಂಡಮಾರುತವು ದುರ್ಬಲಗೊಂಡಿದ್ದು, ಪಶ್ಚಿಮಾಭಿಮುಖವಾಗಿ ಸಾಗುತ್ತಿರುವ ಕಾರಣ ರಾಜ್ಯದಲ್ಲಿ ಅದರ ಪ್ರಭಾವ ಕ್ಷೀಣಿಸಿದೆ. ಆದರೆ ಬಂಗಾಳ ಕೊಲ್ಲಿಯಲ್ಲಿ ಬೀಸುತ್ತಿರುವ ಗಾಳಿ ಪರಿಣಾಮ ಡಿ.5 ಹಾಗೂ 6ರಂದು ಅಲ್ಲಲ್ಲಿ ಮಳೆ ಬೀಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ದಟ್ಟ ಮೋಡದ ವಾತಾವರಣ ಹಾಗೂ ಮಳೆಯಿಂದ ಜನರು ಪ್ರಯಾಸಪಟ್ಟಿದ್ದರು. ಚಳಿ ಹಾಗೂ ಮಳೆಯಿಂದ ನೆನೆದ ಜನರು ಇಂದು ಸೂರ್ಯನ ಕಿರಣಗಳನ್ನು ನೋಡಿ ಸದ್ಯ ಮಳೆ ನಿಂತಿತ್ತಲ್ಲ ಎಂದು ನಿಟ್ಟುಸಿರು ಬಿಟ್ಟರು.

ಚಂಡಮಾರುತದ ಸಂದರ್ಭದಲ್ಲಿ ಮೈಸೂರಿನಲ್ಲಿ 17 ಡಿಗ್ರಿ ಸೆಲ್ಸಿಯಸ್ ನಷ್ಟು ಕನಿಷ್ಠ ಉಷ್ಣಾಂಶವಿತ್ತು. ಆದರೆ ಇಂದು 20.8 ಡಿಗ್ರಿ ಕನಿಷ್ಠ, ಗರಿಷ್ಠ 26 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಸೋಮವಾರ 31 ಮಿಲಿ ಮೀಟರ್ ದಾಖಲೆ ಮಳೆ



ಮಂಗಳವಾರ ಮಳೆ ಇಲ್ಲದೆ ಮೈಸೂರು ಸಹಜ ಸ್ಥಿತಿಗೆ ಮರಳಿತು.

ಡಿ.7ರಂದು ಮತ್ತೊಂದು ಚಂಡಮಾರುತ

ಫೆಂಗಲ್ ಚಂಡಮಾರುತದಿಂದ ಜನರು ಚೇತರಿಸಿಕೊಳ್ಳುತ್ತಿರುವಾಗಲೇ ಡಿಸೆಂಬರ್ 7ರಂದು ಮತ್ತೊಂದು ಚಂಡಮಾರುತ ಎದುರಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಈ ಸಂಬಂಧ ಮಾಹಿತಿ ನೀಡಿರುವ ಮೈಸೂರಿನ ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ತಾಂತ್ರಿಕ ಅಧಿಕಾರಿ ಡಾ.ಜಿ.ವಿ.ಸುಮಂತ್ ಕುಮಾರ್, ಡಿಸೆಂಬರ್ 7ರ ವೇಳೆಗೆ ಬಂಗಾಳಕೊಲ್ಲಿಯ ನಿಕೋಬಾರ್ ದ್ವೀಪ ಸಮೂಹದಲ್ಲಿ ಮತ್ತೊಂದು ವಾಯುಭಾರ ಕುಸಿತ ಉಂಟಾಗುವ ಲಕ್ಷಣವಿದೆ ಎಂದು ಮಾಹಿತಿ ನೀಡಿದ್ದಾರೆ. ನಿಕೋಬಾರ್ ದ್ವೀಪದಲ್ಲಿ ಉಂಟಾಗುವ ವಾಯುಭಾರ ಕುಸಿತದ ಪ್ರಭಾವ ಎಷ್ಟರ ಮಟ್ಟಿಗೆ ಇರುತ್ತದೆ ಎಂಬುವುದರ ಮೇರೆಗೆ ಮೈಸೂರು ಭಾಗದಲ್ಲಿ ಇದರ ಪರಿಣಾಮ ಅವಲಂಬನೆ ಆಗುತ್ತದೆ ಎಂದು ತಿಳಿಸಿದ್ದಾರೆ. ಫೆಂಗಲ್ ಚಂಡಮಾರುತದಂತೆ ಇದರ ತೀವ್ರತೆ ಕೂಡ ಹೆಚ್ಚಿದ್ದರೆ ಸಹಜವಾಗಿಯೇ ಮೈಸೂರು ಭಾಗದಲ್ಲೂ ಮಳೆಯಾಗಬಹುದು ಎಂದು ಅವರು ಹೇಳಿದ್ದಾರೆ.

ಕೆಎಸ್‌ಆರ್‌ಟಿಸಿ ಬಸ್ ಬಾನೆಟ್‌ನಲ್ಲಿ ದಿಢೀರ್ ಬೆಂಕಿ



ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಕಂಡ ಬೆಂಕಿ ನಂದಿಸಿದ ಅಗ್ನಿಶಾಮಕ ಸಿಬ್ಬಂದಿ.

ಮೈಸೂರು, ಡಿ.3(ಬಿಎಲ್‌ಯು)– ಚಲಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ದಿಢೀರ್ ಬೆಂಕಿ ಕಾಣಿಸಿಕೊಂಡು ಬಾನೆಟ್ ಭಾಗಕ್ಕೆ ಹಾನಿಯಾದ ಘಟನೆ ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ಬಳಿ ಸಂಭವಿಸಿದೆ.

ನಡಾಡಿ ಗ್ರಾಮದಿಂದ ಹೆಚ್.ಡಿ. ಕೋಟೆಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್, ದೇವಲಾಪುರ ಮತ್ತು ಜಕ್ಕಹಳ್ಳಿ ಮಧ್ಯೆ ಬಾನೆಟ್‌ನಲ್ಲಿ ದಿಢೀರ್ ಬೆಂಕಿ ಕಾಣಿಸಿಕೊಂಡಿದೆ. ಹೊಗೆ ಬರುವುದನ್ನು ಗಮನಿಸಿ, ಎಚ್ಚೆತ್ತ ಚಾಲಕ ಹಾಗೂ ನಿರ್ವಾಹಕ ತಕ್ಷಣವೇ ಬಸ್ ನಿಲ್ಲಿಸಿ ಪ್ರಯಾಣಿಕರನ್ನು ಕೆಳಗೆ ಇಳಿಸಿದರು. ಇದರಿಂದ ಯಾವುದೇ ತೊಂದರೆ ಆಗಲಿಲ್ಲ.

ಬಾನೆಟ್‌ನಲ್ಲಿ ಬೆಂಕಿ ಹೊತ್ತಿ ಉರಿಯಲಾರಂಭಿಸಿದಾಗ, ವಿಷಯ ತಿಳಿದು ತಕ್ಷಣವೇ ಸ್ಥಳಕ್ಕೆ ಬಂದ ಅಗ್ನಿಶಾಮಕ ದಳದವರು ಬೆಂಕಿ ನಂದಿಸಿದ್ದಾರೆ.

ನಕಲಿ ದಾಖಲಾತಿ ಸೃಷ್ಟಿಸುವವರ ವಿರುದ್ಧ ಪೊಲೀಸ್ ಕೇಸ್ ದಾಖಲಿಸಿ

ಮುಡಾ ಆಯುಕ್ತರಿಗೆ ಸ್ನೇಹಮಯಿ ಕೃಷ್ಣ ಆಗ್ರಹ



ಮೈಸೂರು, ಡಿ.3(ಬಿಎಲ್‌ಯು)– ನಕಲಿ ದಾಖಲಾತಿ ಸೃಷ್ಟಿಸಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ವಂಚಿಸುತ್ತಿರುವವರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಬೇಕು ಎಂದು ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಮುಡಾ ಆಯುಕ್ತರಿಗೆ ಮನವಿ ಮಾಡಿದ್ದಾರೆ.

ಮೈಸೂರಿನ ದಟ್ಟಗಳ್ಳಿ ಸರ್ವೆ ನಂಬರ್ 15/1, 15/2, 27/1, 27/2, 27/3, 27/4, 32, 38/1, 38/2, 40/1, 40/2, 40/3 ಹಾಗೂ 41/1ರಲ್ಲಿನ ಭೂಮಿಗೆ ತಂತಿ ಬೇಲಿ ನಿರ್ಮಿಸಿ, ಪ್ರಾಧಿಕಾರದ ಫಲಕ ಅಳವಡಿಸಬೇಕು ಎಂದು ಕೋರಿದ್ದಾರೆ.

ಈ ಜಮೀನುಗಳಿಗೆ ಸಂಬಂಧಿಸಿದಂತೆ ಸುಳ್ಳು ಕ್ರಯಪತ್ರಗಳನ್ನು ಸೃಷ್ಟಿಸಿ ತಾವೇ ಮೂಲ ಭೂಮಾಲೀಕರು, ನಿವೇಶನ ಖರೀದಿದಾರರೆಂದು ಹೇಳುತ್ತಿರುವ 136 ಜನರು ಹಾಗೂ ಈ ಜಮೀನು ಖರೀದಿ ಮಾಡಿದ್ದೇನೆಂದು ಹೇಳುವ ವೀರ ಕುಮಾರ್ ಜೈನ್ ವಿರುದ್ಧ ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಬೇಕು ಎಂದು ಆಗ್ರಹಿಸಿದ್ದಾರೆ. ಹೀಗೆ ಪ್ರಾಧಿಕಾರಕ್ಕೆ ನಷ್ಟ ಉಂಟು ಮಾಡುತ್ತಿರುವ ವಂಚಕರ ವಿರುದ್ಧ ಮುಡಾ ಅಧಿಕಾರಿಗಳು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಕ್ರಮ ಜರುಗಿಸದ ಕಾರಣ ಇಂತಹ ವಂಚನೆ ಹೆಚ್ಚಾಗುತ್ತಿದೆ. ಆದ ಕಾರಣ ಮುಡಾ ಅಧಿಕಾರಿಗಳು ಈ ಕೂಡಲೇ ವಂಚಕರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಬೇಕು ಎಂದು ಸ್ನೇಹಮಯಿ ಕೃಷ್ಣ ಆಗ್ರಹಿಸಿದ್ದಾರೆ

ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್‌ಗೆ ಪ್ರಶಸ್ತಿ



ಮೈಸೂರು ದಸರಾ ಫಲಪುಷ್ಪ ಪ್ರದರ್ಶನ–2024 ಸಮಿತಿಯು ಸುಂದರವಾಗಿ ನಿರ್ವಹಿಸಲ್ಪಟ್ಟ ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್ ಉದ್ಯಾನವನಕ್ಕೆ ಅತ್ಯುತ್ತಮ ಉದ್ಯಾನವನ ಪ್ರಶಸ್ತಿ ನೀಡಿದೆ. ಪ್ರಶಸ್ತಿಯನ್ನು ಸಂಸ್ಥೆ ನಿರ್ದೇಶಕ ಅಶ್ವಿನ್ ಡಾಂಗೆ ಸ್ವೀಕರಿಸಿದರು.

ಕನಕ ಜಯಂತಿ ಆಚರಣೆ



ಮೈಸೂರು ಕೊಲ್ಲಾಪುರ ಮಹಾಲಕ್ಷ್ಮಿ ದೇವಸ್ಥಾನದಲ್ಲಿ ಕನಕ ಅಂಚೆ ಬಳಗದ ವತಿಯಿಂದ 537ನೇ ಕನಕ ಜಯಂತಿ ಆಚರಿಸಲಾಯಿತು. ಬಳಗದ ಅಧ್ಯಕ್ಷ ಅಣ್ಣಯ್ಯ, ಕಾರ್ಯದರ್ಶಿ ಮಂಜುನಾಥ್, ಮಹದೇವ್, ಪ್ರದೀಪ್ ಕುಮಾರ್, ಶಿವಣ್ಣ, ಪ್ರಕಾಶ್ ಒ, ಕೆಂಡಗಣ್ಣಸ್ವಾಮಿ, ರಾಜಕುಮಾರ್, ಚಂದ್ರಶೇಖರ, ಚೇತನ್ ಹಿನಕಲ್, ಮಂಜುನಾಥ್, ಮರೀಗೌಡ ಗಂಧನಹಳ್ಳಿ ಮತ್ತಿತರರು ಹಾಜರಿದ್ದರು.

ವಿಶ್ವ ಏಡ್ಸ್ ದಿನ ಆಚರಣೆ



ಮೈಸೂರಿನ ಇಎಸ್‌ಐ ಆಸ್ಪತ್ರೆ ವತಿಯಿಂದ ವಿಶ್ವ ಏಡ್ಸ್ ದಿನ ಆಚರಿಸಲಾಯಿತು. ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ್, ಆರ್‌ಎಂಓ ಡಾ.ಚಂದ್ರಕಲಾ, ಡಾ.ಕೆ.ಟಿ. ಅನಿತಾ, ಇಎಸ್‌ಐ ಆಸ್ಪತ್ರೆಯ ಸೆಕ್ರೆಟರಿ ಓಬಿಜಿ ವೈದ್ಯಾಧಿಕಾರಿ ಅನಿತಾ, ಚರ್ಮರೋಗ ವೈದ್ಯಾಧಿಕಾರಿಗಳು, ಮೆಡಿಸಿನ್ ಡಿಪಾರ್ಟ್‌ಮೆಂಟ್‌ನ ವೈದ್ಯಾಧಿಕಾರಿಗಳು, ಆಪ್ತ ಸಮಾಲೋಚಕ ಎಸ್.ಗೋಪಾಲ್, ಪ್ರಯೋಗಶಾಲಾ ತಜ್ಞ ಸಿದ್ದೇಶ್ವರಪ್ಪ ಇದ್ದರು.

ಸಂಭಾಲ್ ಹಿಂಸಾಚಾರ: ಲೋಕಸಭೆಯಲ್ಲಿ ಪ್ರತಿಪಕ್ಷಗಳ ಸಭಾತ್ಯಾಗ



ನವದೆಹಲಿ, ಡಿ.3– ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ಇತ್ತೀಚೆಗೆ ನಡೆದ ಹಿಂಸಾಚಾರದ ಕುರಿತು ಲೋಕಸಭೆಯಲ್ಲಿ ಚರ್ಚೆಗೆ ಬಿಗಿಪಟ್ಟು ಹಿಡಿದು ವಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಬಹುತೇಕ ಎಲ್ಲಾ ಪ್ರತಿಪಕ್ಷಗಳು ಮಂಗಳವಾರ ಸದನದಿಂದ ಕೆಲಕಾಲ ಸಭಾತ್ಯಾಗ ನಡೆಸಿದವು.

ಪ್ರಶ್ನೋತ್ತರ ಅವಧಿ ಆರಂಭವಾಗುತ್ತಿದ್ದಂತೆಯೇ, ತನ್ನ ಆಸನದಿಂದ ಮೇಲೆದ್ದ ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್, ವಿಷಯ ಪ್ರಸ್ತಾಪಿಸಿ, ಸಂಭಾಲ್ ವಿಚಾರ ಕುರಿತು ಮಾತನಾಡಲು ಸ್ಪೀಕರ್ ಓಂ ಬಿರ್ಲಾ ಅವರ ಅನುಮತಿ ಕೋರಿದರು. ಇದು ತುಂಬಾ ಗಂಭೀರವಾದ ವಿಷಯ. ಐದು ಜನರು ಸಾವನ್ನಪ್ಪಿದ್ದಾರೆ ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸ್ಪೀಕರ್ ಶೂನ್ಯ ವೇಳೆಯಲ್ಲಿ ಮಾತನಾಡಲು ಅವಕಾಶ ಕೊಡುವುದಾಗಿ ಹೇಳಿದರು. ಇದರಿಂದ ಕೆರಳಿದ ಯಾದವ್ ಹಾಗೂ ಅವರ ಪಕ್ಷದ ಸದಸ್ಯರು ಪ್ರತಿಭಟನೆ ನಡೆಸಿದರು.

ಈ ಮಧ್ಯೆ ಕೆಲ ಎಸ್‌ಪಿ ಸದಸ್ಯರು ಸದನದ ಬಾವಿಗಿಳಿದು ಘೋಷಣೆ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು. ಈ ಮಧ್ಯೆ ಡಿಎಂಕೆ ಸದಸ್ಯ ಎ ರಾಜಾ, ಕಾಂಗ್ರೆಸ್ ಸೇರಿದಂತೆ ಇತರ ಪ್ರತಿಪಕ್ಷದ ಸದಸ್ಯರು ಎಸ್‌ಪಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವಂತೆ ಸೂಚಿಸಿದರು.

ಎನ್‌ಸಿಪಿ ಮತ್ತು ಶಿವಸೇನೆ–ಯುಬಿಟಿ ಸದಸ್ಯರು ಸಮಾಜವಾದಿ ಪಕ್ಷದ ಸಂಸದರ ಬೆಂಬಲಕ್ಕೆ ಎದ್ದು ನಿಂತರು. ಕೆಲ ಕಾಂಗ್ರೆಸ್ ಸದಸ್ಯರು ಕೂಡ ಎದ್ದು ನಿಂತು, ವಿಪಕ್ಷ ನಾಯಕ ರಾಹುಲ್ ಗಾಂಧಿ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದರು.

ಪ್ರತಿಭಟನೆ ನಡೆಯುತ್ತಿರುವಾಗಲೇ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಯಾದವ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು. ಸ್ವಲ್ಪ ಸಮಯದ ನಂತರ, ಯಾದವ್ ತಮ್ಮ ಪಕ್ಷದ ಸಂಸದರನ್ನು ಹೊರಹೋಗುವಂತೆ ಸನ್ನೆ ಮಾಡಿದರು. ಕೊನೆಗೆ ರಾಹುಲ್ ಗಾಂಧಿ ಸೇರಿದಂತೆ ವಿರೋಧ ಪಕ್ಷದ ಸದಸ್ಯರು ಸಭಾತ್ಯಾಗ ಮಾಡಿದರು.

ತಮಿಳುನಾಡು ಪ್ರವಾಹ ನಿಭಾಯಿಸಲು ಎಲ್ಲಾ ರೀತಿ ನೆರವು

ಸಿಎಂಗೆ ಮೋದಿ ಭರವಸೆ



ನವದೆಹಲಿ, ಡಿ.3– ಫೆಂಗಲ್ ಚಂಡಮಾರುತದಿಂದ ತಮಿಳುನಾಡಿನ ಹಲವು ಜಿಲ್ಲೆಗಳಲ್ಲಿ ಸಾವು–ನೋವು ಉಂಟಾಗಿದ್ದು, ಬೆಳೆನಷ್ಟ, ಜನಜೀವನ ಅಸ್ತವ್ಯಸ್ತವಾಗಿದೆ. ಪರಿಸ್ಥಿತಿಯನ್ನು ನಿಭಾಯಿಸಲು ಎಲ್ಲಾ ರೀತಿಯ ನೆರವು ನೀಡುವುದಾಗಿ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದಾರೆ.

ಪ್ರವಾಹ ಪರಿಸ್ಥಿತಿ ಕುರಿತು ಪ್ರಧಾನಿ ಮೋದಿ ಸ್ಟಾಲಿನ್‌ಗೆ ಕರೆ ಮಾಡಿ ಮಾಹಿತಿ ಪಡೆದುಕೊಂಡು ಎಲ್ಲಾ ರೀತಿಯ ನೆರವು ನೀಡುವುದಾಗಿ ತಿಳಿಸಿದ್ದಾರೆ. ಭಾರಿ ಮಳೆಯ ನಂತರ ಉತ್ತರ ತಮಿಳುನಾಡಿನ ವಿಲ್ಲುಪುರಂ ಜಿಲ್ಲೆಯು ತೀವ್ರ ಪ್ರವಾಹಕ್ಕೆ ಒಳಗಾಗಿದೆ. ಸೇತುವೆಗಳು ಮತ್ತು ರಸ್ತೆಗಳು ಮುಳುಗಿ ಹೋಗಿದ್ದರಿಂದ ಹಳ್ಳಿಗೆ, ವಸತಿ ಕಾಲೋನಿಗಳಿಗೆ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ರೈತರ ಬೆಳೆದು ನಿಂತಿರುವ ಬೆಳೆಗಳು ಮುಳುಗಿ ಹೋಗಿವೆ.

ತಿರುವಣ್ಣಾಮಲೈನಲ್ಲಿ, ಡಿಸೆಂಬರ್ 1ರಂದು ರಾತ್ರಿ ಮಳೆಗೆ ಬೆಟ್ಟದಿಂದ ಬಂಡೆ ಮನೆಯೊಂದರ ಮೇಲೆ ಬಿದ್ದು ಏಳು ಮಂದಿ ಸಿಲುಕಿಹಾಕಿಕೊಂಡಿದ್ದು ಐವರ ಮೃತದೇಹ ಹೊರತೆಗೆಯಲಾಗಿದೆ. ಫೆಂಗಲ್ ಚಂಡಮಾರುತದಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ತುರ್ತು ಮರುಸ್ಥಾಪನೆ ಮತ್ತು ಪುನರ್ವಸತಿ ಕಾರ್ಯಗಳಿಗಾಗಿ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ನಿಧಿಯಿಂದ 2,000 ಕೋಟಿ ರೂಪಾಯಿ ಬಿಡುಗಡೆ ಮಾಡುವಂತೆ ಎಂ.ಕೆ.ಸ್ಟಾಲಿನ್, ಪ್ರಧಾನಿ ನರೇಂದ್ರ ಮೋದಿಯವರಿಗೆ ಮನವಿ ಮಾಡಿದ್ದರು.

ಹಾನಿಯ ಪ್ರಾಥಮಿಕ ಅಂದಾಜಿನ ಪ್ರಕಾರ, ತಾತ್ಕಾಲಿಕ ಮರುಸ್ಥಾಪನೆ ಪ್ರಯತ್ನಗಳಿಗೆ 2,475 ಕೋಟಿ ರೂ. ಅಗತ್ಯವಿದೆ ಎಂದು ಸಿಎಂ, ಪ್ರಧಾನಿಗೆ ಬರೆದ ಪತ್ರದಲ್ಲಿ ತಿಳಿಸಿದ್ದಾರೆ. ಹಾನಿಯ ಸಮಗ್ರ ಮೌಲ್ಯಮಾಪನವನ್ನು ಕೈಗೊಳ್ಳಲು ಆದಷ್ಟು ಬೇಗ ಕೇಂದ್ರ ತಂಡವನ್ನು ನಿಯೋಜಿಸುವಂತೆ ಮೋದಿಯವರಿಗೆ ಮನವಿ ಮಾಡಿದ್ದಾರೆ.

ಇಂದು ಮೈಸೂರಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ

ಮೈಸೂರು,ಡಿ.3–ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈಸೂರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಸೂರು, ನೆಹರು ಯುವ ಕೇಂದ್ರ, ಮೈಸೂರು ರಾಷ್ಟ್ರೀಯ ಸೇವಾ ಯೋಜನೆ, ಮೈಸೂರು ವಿಶ್ವವಿದ್ಯಾನಿಲಯ, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಮೈಸೂರು ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಮೈಸೂರು ಸಹಯೋಗದಲ್ಲಿ (ಡಿ.4) ಬೆಳಗ್ಗೆ 10 ಗಂಟೆಗೆ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಮೈಸೂರು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವನ್ನು ಏರ್ಪಡಿಸಲಾಗಿದೆ.

ಸಮಾಜ ಕಲ್ಯಾಣ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಶಾಸಕ ತನ್ವೀರ್ ಸೇಠ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರು, ಹೆಚ್.ಡಿ ಕೋಟೆ ಶಾಸಕ ಅನಿಲ್‌ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಹಾಗೂ ಬೆಂಗಳೂರಿನ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಉಪಸ್ಥಿತರಿರಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಸುನಿಲ್ ಬೋಸ್ ಆಗಮಿಸಲಿದ್ದಾರೆ.

ಶಾಸಕರಾದ ಜಿಟಿ.ದೇವೇಗೌಡ, ಕೆಹರೀಶ್ ಗೌಡ, ರವಿಶಂಕರ್ ಡಿ, ಟಿ.ಎಸ್.ಶ್ರೀವತ್ಸ, ದರ್ಶನ್ ಧ್ರುವನಾರಾಯಣ್, ಜಿ.ಡಿ. ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಯತೀಂದ್ರ ಮತ್ತು ವಿವೇಕಾನಂದ ಸಮಾರಂಭದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಪಿಯರ್ ಫೌಚರ್ಡ್ ಅಕಾಡೆಮಿಯ ಫೆಲೋಶಿಪ್



ಮೈಸೂರಿನ ತಪೋವನ ಸೊಲೇಸ್ ನಿವಾಸಿಯೂ ಆದ ದಾವಣಗೆರೆ ಬಾಪೂಜಿ ದಂತ ವೈದ್ಯಕೀಯ ಕಾಲೇಜಿನ ಮಾಜಿ ಪ್ರಾಂಶುಪಾಲ ಡಾ.ಎ.ಆರ್.ಪ್ರಭಾಕರ್ ಅವರು ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಯುಎಸ್‌ಎನ ಪಿಯರ್ ಫೌಚರ್ಡ್ ಅಕಾಡೆಮಿಯ ಫೆಲೋಶಿಪ್ ಅನ್ನು ಅಕಾಡೆಮಿ ಅಧ್ಯಕ್ಷ ಚೆರಿಲ್ ಬೆಲ್ಲಿಂಗ್ ಸಮ್ಮುಖದಲ್ಲಿ ಸ್ವೀಕರಿಸಿದರು. ಪಿಯರ್ ಫೌಚರ್ಡ್ ಅಕಾಡೆಮಿಯು ಅಂತಾರಾಷ್ಟ್ರೀಯ ದಂತ ಫೆಲೋಶಿಪ್ ಸಂಸ್ಥೆಯಾಗಿದ್ದು, ಯಾವುದೇ ಲಾಭೋದ್ದೇಶವನ್ನು ಹೊಂದಿಲ್ಲ. ದಂತ ವೈದ್ಯಶಾಸ್ತ್ರ ಕ್ಷೇತ್ರದಲ್ಲಿ ಸಾಧನೆ ಮಾಡಿದಂತಹ ಮಹನೀಯರನ್ನು ಅಭಿನಂದಿಸುವ ಮಹದುದ್ದೇಶವನ್ನು ಇದು ಹೊಂದಿದೆ.

ಆದೇಶ ಪತ್ರ ವಿತರಣೆ



ಮೈಸೂರು ನಗರ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗದ ಸಂಚಾಲಕರಾಗಿ ನೇಮಕಗೊಂಡ ಆರ್.ಕೆ.ರವಿ ಅವರಿಗೆ ಕೆಪಿಸಿಸಿ ಹಿಂದುಳಿದ ವರ್ಗದ ಅಧ್ಯಕ್ಷರೂ ಆದ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆದೇಶ ಪತ್ರ ನೀಡಿದರು. ಈ ವೇಳೆ ಮೈಸೂರು ನಗರ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗದ ಅಧ್ಯಕ್ಷ ಎನ್.ಆರ್.ನಾಗೇಶ್, ನಗರ ಹಾಗೂ ರಾಜ್ಯ ಹಿಂದುಳಿದ ವರ್ಗದ ಸಮಿತಿಯ ಕಮಲ ಅನಂತರಾಮ್, ಬಿ.ಜಿ.ಕೇಶವ, ಮಹೇಂದ್ರ ಕಾಗಿನೆಲೆ, ಲಕ್ಷ್ಮಿ ನಾರಾಯಣ, ರಾಜು ಉಪ್ಪಾರ್, ಹರೀಶ್‌ರೆಡ್ಡಿ, ಮಹೇಶ್ ಮಡಿವಾಳ್, ರವಿಕುಮಾರ್, ಸತೀಶ್, ವೆಂಕಟೇಶ್, ದಿನೇಶ್ ಇತರರಿದ್ದರು.

ಯೋಗದ ಮೂಲಕ ಸಬಲೀಕರಣ ವಿಚಾರ ಸಂಕಿರಣ



ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಯೋಗ ವಿಜ್ಞಾನ ಕಾರ್ಯಕ್ರಮದ ಸಹಯೋಗದೊಂದಿಗೆ ರಾಷ್ಟ್ರೀಯ ಉನ್ನತ ಶಿಕ್ಷಣ ಅಭಿಯಾನ ಪ್ರಾಯೋಜಕತ್ವದಲ್ಲಿ ಯೋಗದ ಮೂಲಕ ಸಬಲೀಕರಣ ಕುರಿತು ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಮುಖ್ಯ ಅತಿಥಿಗಳಾಗಿ ಡಾ.ಸುತ್ತೂರು ಎಸ್.ಮಾಲಿನಿ, ಜೆನೆಟಿಕ್ ಅಂಡ್ ಜಿನೋಮೆಟಿಕ್ ಅಧ್ಯಕ್ಷರು ಮತ್ತು ಎಂಎಂ ಟಿಟಿಸಿ ಮೈಸೂರು ವಿಶ್ವವಿದ್ಯಾನಿಲಯ ಮೈಸೂರು ಪ್ರೊ. ಎಸ್ ಮದಿಹಳಗನ್ನ, ಕೋ–ಆರ್ಡಿನೇಟರ್ ಯೋಗಿಕ್ ಸೈನ್ಸ್ ಪ್ರೋಗ್ರಾಮ್ ಮಾನಸ ಗಂಗೋತ್ರಿ ಮೈಸೂರು ಮತ್ತು ಸಂಪನ್ಮೂಲ ವ್ಯಕ್ತಿ ಡಾ.ಪಿ.ಅನುಪಮಾ, ಸಂಸ್ಕೃತ ಯೋಗಶಾಸ್ತ್ರ ವಿಭಾಗ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ಬೆಂಗಳೂರು ಮತ್ತಿತರರನ್ನು ಚಿತ್ರದಲ್ಲಿ ಕಾಣಬಹುದು.

ದೇಶ - ವಿದೇಶ

ಹಿಂದೂ ನಾಯಕ ಕೃಷ್ಣದಾಸ್ ಜಾಮೀನು ಅರ್ಜಿ ವಿಚಾರಣೆ ಜ.2ಕ್ಕೆ ಮುಂದೂಡಿಕೆ



ಢಾಕಾ: ದೇಶದ್ರೋಹದ ಆರೋಪದ ಮೇಲೆ ಬಂಧನಕ್ಕೊಳಗಾಗಿರುವ ಹಿಂದೂ ನಾಯಕ ಚಿನ್ಮಯಿ ಕೃಷ್ಣದಾಸ್ ಜಾಮೀನು ಅರ್ಜಿ ವಿಚಾರಣೆಯನ್ನು ಬಾಂಗ್ಲಾದೇಶದ ನ್ಯಾಯಾಲಯವು 2025ರ ಜ.2ಕ್ಕೆ ಮುಂದೂಡಿದೆ. ಮೆಟ್ರೋಪಾಲಿಟನ್ ಸೆಷನ್ಸ್ ನ್ಯಾಯಾಧೀಶ ಮೊಹಮ್ಮದ್ ಸೈಫುಲ್ ಇಸ್ಲಾಂ ಅವರು ಇಂದು (ಮಂಗಳವಾರ) ಕೃಷ್ಣದಾಸ್ ಅವರ ಜಾಮೀನು ಅರ್ಜಿಯನ್ನು ವಿಚಾರಣೆ ನಡೆಸಿದ್ದಾರೆ ಎಂದು ಬಾಂಗ್ಲಾದೇಶದ ಸುದ್ದಿ ಮಾಧ್ಯಮ 'ಬಿಡಿನ್ಯೂಸ್24 ಡಾಟ್ ಕಾಮ್' ವರದಿ ಮಾಡಿದೆ. ಬಾಂಗ್ಲಾದೇಶದ 'ಸಮ್ಮಿಲಿತ್ ಸನಾತನಿ ಜಾಗರಣ ಜೋತೆ' ಹಿಂದೂ ಸಂಘಟನೆಯ ವಕ್ತಾರ ಚಿನ್ಮಯಿ ಕೃಷ್ಣದಾಸ್ ಅವರನ್ನು ದೇಶದ್ರೋಹದ ಆರೋಪದಲ್ಲಿ ಕಳೆದ ಸೋಮವಾರ (ನ.25) ಢಾಕಾದ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿತ್ತು. ಮಂಗಳವಾರ (26) ಇವರ ಜಾಮೀನು ಅರ್ಜಿಯನ್ನು ಚಟ್ಟೋಗ್ರಾಮ ನ್ಯಾಯಾಲಯವು ತಿರಸ್ಕರಿಸಿ, ಜೈಲಿಗೆ ಕಳುಹಿಸಿತ್ತು. ಚಿನ್ಮಯಿ ಕೃಷ್ಣದಾಸ್ ಅವರ ಬಂಧನದ ವೇಳೆ ನಡೆದ ಘರ್ಷಣೆಯಲ್ಲಿ ವಕೀಲ ಸೈಫುಲ್ ಇಸ್ಲಾಂ ಎಂಬವರು ಮೃತಪಟ್ಟಿದ್ದರು. ಕೃಷ್ಣದಾಸ್ ಅವರು ಈ ಹಿಂದೆ ಬಾಂಗ್ಲಾದೇಶದ ಇಸ್ಕಾನ್‌ನ ವಕ್ತಾರರಾಗಿ ಕಾರ್ಯನಿರ್ವಹಿಸಿದ್ದರು.

ಪ್ರಿಯಕರನ ಹತ್ಯೆ ಪ್ರಕರಣ: ಬಾಲಿವುಡ್ ನಟಿ ನರ್ಗಿಸ್ ಫಕ್ರಿ ಸಹೋದರಿ ಅಲಿಯಾ ಬಂಧನ



ನವದೆಹಲಿ: ಬಾಲಿವುಡ್ ನಟಿ ನರ್ಗಿಸ್ ಫಕ್ರಿ ಅವರ ಸಹೋದರಿ ಅಲಿಯಾ ಫಕ್ರಿ ಅವರನ್ನು ಮಾಜಿ ಪ್ರಿಯಕರ 35 ವರ್ಷದ ಎಡ್ವರ್ಡ್ ಜೇಕಬ್ಸ್ ಮತ್ತು 33 ವರ್ಷದ ಅನಸ್ತಾಸಿಯಾ ಎಟಿಯೆನ್ನೆ ಎಂಬಾಕೆಯನ್ನು ಹತ್ಯೆಗೈದ ಆರೋಪದಲ್ಲಿ ಬಂಧಿಸಲಾಗಿದೆ.

ಎಡ್ವರ್ಡ್ ಜೇಕಬ್ಸ್ ಮತ್ತು ಆತನ ಸ್ನೇಹಿತೆ ಅನಸ್ತಾಸಿಯಾ ನೆಲೆಸಿದ್ದ ಎರಡು ಅಂತಸ್ತಿನ ಗ್ಯಾರೇಜ್‌ಗೆ 43 ವರ್ಷದ ಅಲಿಯಾ ಫಕ್ರಿ ಬೆಂಕಿ ಹಚ್ಚಿದ್ದರು. ಜತೆಗೆ, 'ನೀವೆಲ್ಲರೂ ಇಂದು ಸಾಯುತ್ತೀರಿ' ಎಂದು ಕೂಗಾಡಿದ್ದರು ಎಂದು ವರದಿಯಾಗಿದೆ.

ಬೆಂಕಿ ಸಂಪೂರ್ಣವಾಗಿ ಕಟ್ಟಡವನ್ನು ಆವರಿಸಿದ್ದರಿಂದ ಎಡ್ವರ್ಡ್ ಜೇಕಬ್ಸ್ ಮತ್ತು ಅನಸ್ತಾಸಿಯಾ ಅವರಿಗೆ ತಪ್ಪಿಸಿಕೊಳ್ಳಲು ಸಾಧ್ಯವಾಗಿರಲಿಲ್ಲ. ದಟ್ಟ ಹೊಗೆಯಿಂದಾಗಿ ಉಸಿರುಗಟ್ಟಿ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದರು. ಜೇಕಬ್ಸ್ ಒಂದು ವರ್ಷದ ಹಿಂದೆ ಅಲಿಯಾ ಫಕ್ರಿಯೊಂದಿಗೆ ಬ್ರೇಕ್ ಅಪ್ ಮಾಡಿಕೊಂಡಿದ್ದ. ಆದರೂ ಅಲಿಯಾ, ನನ್ನ ಮಗನನ್ನು ಹಿಂಬಾಲಿಸುತ್ತಿದ್ದಳು ಎಂದು ಜೇಕಬ್ಸ್ ಅವರ ತಾಯಿ ಆರೋಪಿಸಿದ್ದಾರೆ.


ಅದಾನಿ ಕಂಪನಿಯಿಂದ ವಿದ್ಯುತ್ ಖರೀದಿ ಅರ್ಧದಷ್ಟು ಕಡಿಮೆ ಮಾಡಿದ ಬಾಂಗ್ಲಾ



ಢಾಕಾ: ಭಾರತದ ಅದಾನಿ ಪವರ್ ಕಂಪನಿಯಿಂದ ಖರೀದಿಸುತ್ತಿರುವ ವಿದ್ಯುತ್ ಪ್ರಮಾಣದಲ್ಲಿ ಅರ್ಧದಷ್ಟನ್ನು ಕಡಿಮೆ ಮಾಡಿರುವುದಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಅಧಿಕಾರಿಗಳು ತಿಳಿಸಿದ್ದಾರೆ. ಚಳಿಗಾಲದಲ್ಲಿ ಬೇಡಿಕೆ ಇಳಿಮುಖವಾಗಿರುವುದರಿಂದ ಖರೀದಿಸುತ್ತಿರುವ ವಿದ್ಯುತ್‌ನ ಪ್ರಮಾಣವನ್ನು ಅರ್ಧದಷ್ಟು ತಗ್ಗಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ನೂರಾರು ದಶಲಕ್ಷ ಡಾಲರ್‌ನಷ್ಟು ಬಾಕಿಯನ್ನು ಬಾಂಗ್ಲಾದೇಶದ ವಿದ್ಯುತ್ ಮಂಡಳಿ ಉಳಿಸಿಕೊಂಡಿರುವ ನಡುವೆಯೇ ಈ ಬೆಳವಣಿಗೆ ನಡೆದಿದೆ. ದೊಡ್ಡ ಮೊತ್ತದ ಯೋಜನೆ ಪಡೆಯಲು ಭ್ರಷ್ಟಾಚಾರಕ್ಕೆ ಮುಂದಾಗಿರುವ ಪ್ರಕರಣದಲ್ಲಿ ಅಮೆರಿಕದ ನ್ಯಾಯಾಲಯವು ಅದಾನಿ ಅವರನ್ನು ದೋಷಿ ಎಂದು ಹೇಳಿದ್ದು, ಅದನ್ನು ಅದಾನಿ ಅಲ್ಲಗಳೆದಿದ್ದಾರೆ. ವಿದ್ಯುತ್ ಪೂರೈಕೆಯ ಬಾಕಿ ಹಣ ಬೆಳೆದಿದೆ ಎಂಬ ಕಾರಣಕ್ಕೆ ಅಕ್ಟೋಬರ್ 31ರಂದು ಅದಾನಿ ಕಂಪನಿಯು ದಿಢೀರನೆ ವಿದ್ಯುತ್ ಪೂರೈಕೆಯನ್ನು ಸ್ಥಗಿತಗೊಳಿಸಿತ್ತು.

ಬಾಂಗ್ಲಾದೇಶ ವಿದ್ಯುತ್ ಅಭಿವೃದ್ಧಿ ಮಂಡಳಿಯ (ಬಿಪಿಡಿಬಿ) ಅಧಿಕಾರಿಗಳಲ್ಲಿ ಇದು ಅಚ್ಚರಿ ಮೂಡಿಸಿತ್ತು.

ತಾಜ್ ಮಹಲ್‌ಗೆ ಬಾಂಬ್ ಬೆದರಿಕೆ; ಆಗ್ರಾ ಪೊಲೀಸರಿಂದ ಬಿಗಿ ಭದ್ರತೆ



ಆಗ್ರಾ: ಆಗ್ರಾದ ತಾಜ್‌ಮಹಲ್‌ನಲ್ಲಿ ಬಾಂಬ್ ಸ್ಫೋಟಿಸುವ ಬೆದರಿಕೆ ಇಮೇಲ್ ಬಂದ ಹಿನ್ನೆಲೆಯಲ್ಲಿ ಪೊಲೀಸರು ಕಟ್ಟೆಚ್ಚರ ವಹಿಸಿದ್ದಾರೆ. ಇಂದು ಉತ್ತರ ಪ್ರದೇಶ ಪ್ರವಾಸೋದ್ಯಮ ಪ್ರಾದೇಶಿಕ ಕಚೇರಿಗೆ ಬಾಂಬ್ ಬೆದರಿಕೆ ಬಂದಿದ್ದು, ನಂತರ ಅದು ಸುಳ್ಳು ಕರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತಾಜ್ ಮಹಲ್‌ಗೆ ಇಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿತ್ತು. ಪ್ರವಾಸೋದ್ಯಮ ಇಲಾಖೆಗೆ ಇಮೇಲ್ ಬಂದಿದೆ. ಅದರ ಆಧಾರದ ಮೇಲೆ ತಾಜ್‌ಗಂಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಬಾಂಬ್ ನಿಷ್ಕ್ರಿಯ ದಳ ತಂಡ ಮತ್ತು ಸ್ಥಳೀಯ ಪೊಲೀಸರು ಮೊಘಲ್ ಸ್ಮಾರಕವಾದ ತಾಜ್ ಮಹಲ್‌ಗೆ ಧಾವಿಸಿ ದೇಶದ ಪ್ರಮುಖ ಪ್ರವಾಸಿ ಸ್ಥಳದ ಆವರಣದಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಆಗ್ರಾದಲ್ಲಿರುವ ಉತ್ತರ ಪ್ರದೇಶ ಪ್ರವಾಸೋದ್ಯಮದ ಪ್ರಾದೇಶಿಕ ಕಚೇರಿಗೆ ತಾಜ್‌ಮಹಲ್ ಸ್ಫೋಟಿಸುವ ಬೆದರಿಕೆ ಇಮೇಲ್ ಬಂದಿದ್ದು, ನಂತರ ಅದು ಸುಳ್ಳು ಎಂದು ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ.

ಸಮುದ್ರ ದಡದಲ್ಲಿ ರಷ್ಯಾ ನಟಿ ಧ್ಯಾನ: ರಕ್ಕಸ ಅಲೆಗೆ ಹೋಯ್ತು ಪ್ರಾಣ!



ಥಾಯ್ಲೆಂಡ್: ಸಮುದ್ರ ದಂಡೆಯ ಬಳಿ ಕಲ್ಲಿನ ಮೇಲೆ ಕುಳಿತು ಯೋಗ, ಧ್ಯಾನ ಮಾಡುತ್ತಿದ್ದ ರಷ್ಯನ್ ನಟಿಯೊಬ್ಬರು ಅಲೆಗಳ ಹೊಡೆತಕ್ಕೆ ಸಿಲುಕಿ ದಾರುಣವಾಗಿ ಮೃತಪಟ್ಟಿದ್ದಾರೆ.

ಥಾಯ್ಲೆಂಡ್‌ನ ಕೋಯ್ ಸಮುಯಿ ದ್ವೀಪಕ್ಕೆ ರಜೆಯ ಸಮಯವನ್ನು ಕಳೆಯಲು ಗೆಳೆಯನೊಂದಿಗೆ ಬಂದಿದ್ದ ರಷ್ಯಾದ 24 ವರ್ಷದ ಕಮಿಲ್ಲಾ ಬೆಲ್ಯಾಟಸ್ಕಾ ಮೃತ ನಟಿ.

ಕಮಿಲ್ಲಾ ಸಮುದ್ರದ ದಡದಲ್ಲಿ ಕಲ್ಲು ಬಂಡೆಯ ಮೇಲೆ ಕುಳಿತಿದ್ದ ವೇಳೆ ಭಾರಿ ಗಾತ್ರದ ಅಲೆಯೊಂದು ಅವರನ್ನು ಎಳೆದೊಯ್ದ ದೃಶ್ಯಗಳು ಹತ್ತಿರದಲ್ಲಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಹತ್ತಿರದಲ್ಲಿದ್ದ ಇತರೆ ಪ್ರವಾಸಿಗರು ಕಮಿಲ್ಲಾ ಅವರನ್ನು ರಕ್ಷಿಸಲು ಪ್ರಯತ್ನಿಸಿದರೂ ಸಾಧ್ಯವಾಗಲಿಲ್ಲ. ಕೆಲ ಹೊತ್ತಿನ ಬಳಿಕ ಅವರ ಮೃತದೇಹ ಕಿಲೋಮೀಟರ್ ದೂರದಲ್ಲಿ ದೊರೆತಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಕಟಾವು ಮಾಡಿದ ಭತ್ತ ಗದ್ದೆಗಳಲ್ಲೇ ಮೊಳಕೆ

● ಬೆಳೆಗಾರರಿಗೆ ಭೀತಿ ● ಅಕಾಲಿಕ ಮಳೆಯಿಂದ ಕೊಡಗಿನ ರೈತಾಪಿ ವರ್ಗ ಕಂಗಾಲು

"ಮಳೆ ಬಂದು ಗದ್ದೆಯಲ್ಲಿ ನೀರು ನಿಂತು ಕಟಾವು ಮಾಡಿದ್ದ ಭತ್ತದ ಬೆಳೆ ನಷ್ಟವಾಗಿದೆ. ಕೃಷಿ ಇಲಾಖೆ ಬೆಳೆ ನಷ್ಟ ಸಮೀಕ್ಷೆ ನಡೆಸಿ, ಸೂಕ್ತ ಪರಿಹಾರ ನೀಡಬೇಕು. ಕೃಷಿ ಇಲಾಖೆ ನಮ್ಮ ಕಷ್ಟ ಕೇಳಬೇಕು. ಸರ್ಕಾರ ನಮ್ಮ ಕಡೆ ನೋಡಬೇಕು.
-ಗಣೇಶ್, ಹುದುಗೂರು ರೈತ

"ಸಾಲ ಮಾಡಿ ಭತ್ತದ ನಾಟಿ ಮಾಡಿದ್ದು, ವರ್ಷಕ್ಕೆ ಒಂದೇ ಬೆಳೆ ಬೆಳೆಯುತ್ತೇವೆ. ಕೂಲಿಗೆ ಆಳುಗಳು ಸಿಗದೆ ಮುಯ್ಯಿಗೆ ಜನರನ್ನು ಕರೆದುಕೊಂಡು ಭತ್ತ ಕಟಾವು ಮಾಡಿದ್ದೆವು. ಊಟಕ್ಕಾಗಿ ಭತ್ತ ಬೆಳೆದಿದ್ದು, ಇದೀಗ ಆ ಬೆಳೆ ನೀರಲ್ಲಿ ತೇಲುತ್ತಿದೆ. ಅಕ್ಕಿಯನ್ನು ದುಡ್ಡು ಕೊಟ್ಟು ಖರೀದಿಸುವ ಸ್ಥಿತಿಗೆ ಬಂದಿದೆವೇ. ಹಿಂದೆ ಕಾಡಾನೆ ದಾಳಿಯಿಂದ ಕೈಗೆ ಪೆಟ್ಟಾಗಿದ್ದು, ಇದೀಗ ಒಂದು ಕೈಯಲ್ಲಿ ಕೆಲಸ ಮಾಡುತ್ತಿದ್ದೇನೆ. ಕೃಷಿ ಇಲಾಖೆ ಸೂಕ್ತ ಪರಿಹಾರ ಒದಗಿಸಬೇಕು.
-ಮುತ್ತಪ್ಪ, ಹುದುಗೂರು ರೈತ



ಕುಶಾಲನಗರ ತಾಲೂಕು ವ್ಯಾಪ್ತಿ ಕಟಾವು ಮಾಡಿರುವ ಭತ್ತದ ಫಸಲು ನೀರು ತುಂಬಿದ ಗದ್ದೆಯಲ್ಲೇ ಇರುವುದು.

ಮಡಿಕೇರಿ, ಡಿ.3–ಅಕಾಲಿಕ ಮಳೆಯಿಂದ ಕೊಡಗಿನ ರೈತಾಪಿ ವರ್ಗದವರು ಕಂಗಾಲಾಗಿದ್ದು, ಭತ್ತ ಕಟಾವಿಗೆ ಬಂದಿರುವುದರಿಂದ ಆತಂಕ ಕಾಡುತ್ತಿದೆ.

ಸಕಾಲದಲ್ಲಿ ಮಳೆಯಾಗಿ ಭತ್ತದ ಬಿತ್ತನೆ ಕಾರ್ಯ ಸುಸೂತ್ರವಾಗಿ ನಡೆದು, ರೈತರ ನಿರೀಕ್ಷೆಯಂತೆ ಉತ್ತಮ ಫಸಲು ಬೆಳೆದು ನಿಂತಿದೆ. ಆದರೆ, ವಾಯುಭಾರ ಕುಸಿತ ಪ್ರಭಾವದಿಂದ ಸುರಿಯುವ ಮಳೆ, ಮೋಡ, ಮಂಜು ಮುಸುಕಿದ ವಾತಾವರಣ ರೈತರನ್ನು ಚಿಂತೆಗೀಡು ಮಾಡಿದೆ. ಕುಶಾಲನಗರ ತಾಲೂಕು ವ್ಯಾಪ್ತಿಯ ಮದಲಾಪುರ, ಹುದುಗೂರು, ಯಡವನಾಡು, ಸೀಗೆ ಹೊಸೂರು, ಹೆಬ್ಬಾಲೆ, ತೊರೆನೂರು, ಕಣಿವೆ, ಶಿರಂಗಾಲ ಭಾಗದಲ್ಲಿ ಭತ್ತದ ಕಟಾವು ಕಾರ್ಯ ನಡೆಸಲಾಗಿದೆ. ಫಸಲು ಭರಿತ ಹುಲ್ಲನ್ನು ಒಣಗಿಸುವ ಸಲುವಾಗಿ ಗದ್ದೆಗಳಲ್ಲೇ ಬಿಡಲಾಗಿದೆ. ಆದರೆ, 3 ದಿನಗಳಿಂದ ಸುರಿದ ಮಳೆಗೆ ಗದ್ದೆಗಳಲ್ಲಿ ನೀರು ನಿಂತಿದ್ದು, ಒಣಗಲು ಹಾಕಲಾಗಿದ್ದ ಭತ್ತದ ಫಸಲು ಹಾನಿಯಾಗಿದೆ. ಇದೇ ರೀತಿ ಮಳೆ ಮುಂದುವರೆದಲ್ಲಿ ಗದ್ದೆಗಳಲ್ಲೇ ಭತ್ತ ಮೊಳಕೆ ಒಡೆಯುವ ಭೀತಿ ಬೆಳೆಗಾರರನ್ನು ಕಾಡುತ್ತಿದೆ.

ಈ ವರ್ಷ ಕಾಲಕ್ಕೆ ಸರಿಯಾಗಿ ಉತ್ತಮ ಮಳೆಯಾಗಿ ರೈತರು ಭತ್ತದ ಕೃಷಿಗೆ ತಮ್ಮನ್ನು ಒಡ್ಡಿಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಕುಶಾಲನಗರ ಹಾಗೂ ಸೋಮವಾರಪೇಟೆ ತಾಲೂಕಿನಾದ್ಯಂತ ಭತ್ತದ ಬೆಳೆ ರೈತನ ಕೈ ಹಿಡಿಯುವ ಲಕ್ಷಣಗಳು ಕಾಣ ಸಿಕ್ಕಿದ್ದವು. ಇದೀಗ ಕಟಾವು ಕಾರ್ಯ ಆರಂಭವಾಗಿರುವ ಕಾಲದಲ್ಲೇ ವಾಯುಭಾರ ಕುಸಿತ ತೊಡಕಾಗಿ ಪೋಣಿಮಿಸಿದೆ ಮೋಡ ಕವಿದ ವಾತಾವ ವಿದ್ದು, ಭತ್ತವನ್ನು ಕಟಾವು ಮಾಡುವುದಾದರೂ ಹೇಗೆ? ಕಟಾವು ಮಾಡಿರುವ ಭತ್ತವನ್ನು ಒಣಗಿಸುವುದಾದರೂ ಹೇಗೆ? ಎಂಬ ಚಿಂತೆ ಅನ್ನದಾತರದ್ದಾಗಿದೆ.

"ಒಂದೆಡೆ ಭತ್ತದ ಕೃಷಿ ಅಧಿಕ ಶ್ರಮ, ಕಡಿಮೆ ಲಾಭಾಂಶವಿರುವ ಕಾಯಕವಾಗಿದೆ. ರೈತರೇ ಈ ಕೃಷಿಗೆ ಬೆನ್ನು ತಿರುಗಿಸಿ ಬೇರೆ ಬೆಳೆಗಳ ಕಡೆ ಮುಖ ಮಾಡುತ್ತಿದ್ದಾರೆ. ಕಾಡುಪ್ರಾಣಿಗಳ ಉಪಟಳ, ಮಳೆಯೊಂದಿಗಿನ ಜೂಜಾಟ, ಹವಾಮಾನ ವೈಪರಿತ್ಯ, ಸೂಕ್ತ ಮಾರುಕಟ್ಟೆ ಅಲಭ್ಯತೆ ಮತ್ತು ಬೆಂಬಲ ಬೆಲೆ ಜಂಜಾಟಗಳು ಭತ್ತ ಬೆಳೆಯುವ ಸಾಹಸಕ್ಕೆ ಕೈ ಹಾಕಿದ ರೈತರನ್ನು ಹೈರಾಣಾಗಿಸಿವೆ. ಹೀಗಾಗಿಯೇ ಕೊಡಗು ಜಿಲ್ಲೆಯ ಬಹುತೇಕ ರೈತರು ಭತ್ತದ ಗದ್ದೆಗಳನ್ನು ಪಾಳು ಬಿಡುವಂತಾಗಿದೆ. ಪರಿಣಾಮ ವರ್ಷದಿಂದ ವರ್ಷಕ್ಕೆ ಭತ್ತ ಬೆಳೆಯುವ ಭೂ ಪ್ರದೇಶದ ವಿಸ್ತೀರ್ಣ ಕೂಡ ಕ್ಷೀಣಿಸುತ್ತಿದ್ದು, ಭತ್ತದ ಬಟ್ಟಲು ಎಂಬ ಖ್ಯಾತಿ ಹೊಂದಿದ್ದ ಕೊಡಗಿನ ಗದ್ದೆಗಳು ಲೇಔಟ್‌ಗಳಾಗಿ ಪರಿವರ್ತನೆಯಾಗುತ್ತಿವೆ.

ಹವಾಮಾನ ವೈಪರೀತ್ಯ ಹಿನ್ನೆಲೆ ಮುನ್ನೆಚ್ಚರಿಕೆ ವಹಿಸಿ

ಕೆಎಸ್‌ಎನ್‌ಡಿಎಂಸಿ ನಿರ್ದೇಶಕ ಹರ್ಷಲ್ ಗೋಯಲ್ ಸೂಚನೆ



ಮಡಿಕೇರಿ ಜಿಲ್ಲಾಡಳಿತ ಭವನದ ಎನ್‌ಐಸಿ ನಡೆದ ಅಧಿಕಾರಿಗಳ ಸಭೆಯಲ್ಲಿ ಕೆಎಸ್‌ಎನ್‌ಡಿಎಂಸಿ ನಿರ್ದೇಶಕ ಹರ್ಷಲ್ ಗೋಯಲ್ ಮಾತನಾಡಿದರು.

ಮಡಿಕೇರಿ, ಡಿ.3–ಹವಾಮಾನ ವೈಪರೀತ್ಯ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ವಹಿಸಿ, ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರ ಕಾಲ ಕಾಲಕ್ಕೆ ಹೊರಡಿಸುವ ಮಾಹಿತಿಯನ್ನು ಹಂಚಿಕೊಳ್ಳಬೇಕು ಎಂದು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ನೈಸರ್ಗಿಕ ವಿಪತ್ತು ಉಸ್ತುವಾರಿ ಕೇಂದ್ರದ ನಿರ್ದೇಶಕ ಹರ್ಷಲ್ ಗೋಯಲ್ ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ರಾಷ್ಟ್ರೀಯ ಮಾಹಿತಿ ಕೇಂದ್ರ(ಎನ್‌ಐಸಿ)ದಲ್ಲಿ ಮಂಗಳವಾರ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಪ್ರಕೃತಿ ವಿಕೋಪ ಯಾವುದೇ ಸಂದರ್ಭದಲ್ಲಿ ಎದುರಾಗಬಹುದು. ಆದ್ದರಿಂದ ಸದಾ ಮುನ್ನೆಚ್ಚರ ವಹಿಸುವುದು ಅತ್ಯಗತ್ಯ ಎಂದು ಹೇಳಿದರು.

ಜಿಲ್ಲಾ, ತಾಲೂಕು ಹಾಗೂ ಸ್ಥಳೀಯ ಮಟ್ಟದಲ್ಲಿ ವಾಟ್ಸ್‌ಆ್ಯಪ್ ಗ್ರೂಪ್‌ಗಳ ಮೂಲಕ ನೆಟ್‌ವರ್ಕ್ ಬಲಪಡಿಸಬೇಕು. ಭೂಕುಸಿತ ಪ್ರದೇಶದಲ್ಲಿ ಹೆಚ್ಚು ಮುನ್ನೆಚ್ಚರ ವಹಿಸಬೇಕು. ಅಂಗನವಾಡಿ, ಶಾಲಾ–ಕಾಲೇಜು, ಆಸ್ಪತ್ರೆ ಕಟ್ಟಡಗಳು ಸುಸ್ಥಿತಿಯಲ್ಲಿರಬೇಕು. ಕಟ್ಟಡಗಳಿಗೆ ಮಳೆ ನೀರು ಸೋರದಂತೆ ಗಮನಹರಿಸಬೇಕು ಎಂದು ಆದೇಶಿಸಿದರು.

ಮನೆ, ರಸ್ತೆ, ಚರಂಡಿ, ಸೇತುವೆ ಮತ್ತಿತರ ಹಾನಿ ಬಗ್ಗೆ ಕೂಡಲೇ ಕ್ರಮವಹಿಸಬೇಕು. ಕಂದಾಯ, ಲೋಕೋಪಯೋಗಿ, ಪಂಚಾಯತ್ ರಾಜ್, ಪೊಲೀಸ್, ಸೆಸ್ಕ್, ಪೌರಾಡಳಿತ ಮತ್ತು ನಗರಾಭಿವೃದ್ಧಿ, ಅಗ್ನಿಶಾಮಕ, ಆರ್‌ಟಿಓ, ಶಾಲಾ ಶಿಕ್ಷಣ, ಪದವಿಪೂರ್ವ ಶಿಕ್ಷಣ ಹೀಗೆ ವಿವಿಧ ಇಲಾಖೆಗಳು ಕೈಜೋಡಿಸಿ ಕಾರ್ಯನಿರ್ವಹಿಸಬೇಕು ಎಂದು ಮಾಹಿತಿ ನೀಡಿದರು.

ಉಪವಿಭಾಗಾಧಿಕಾರಿ ವಿನಾಯಕ ನರ್ವಡೆ, ವಿಪತ್ತು ನಿರ್ವಹಣಾ ಪರಿಣತ ಅನನ್ಯ ವಾಸುದೇವ್ ಮಾತನಾಡಿದರು. ಸಭೆಯಲ್ಲಿ ತಹಸೀಲ್ದಾರ್‌ಗಳಾದ ಪ್ರವೀಣ್ ಕುಮಾರ್(ಮಡಿಕೇರಿ), ರಾಮಚಂದ್ರ (ವಿರಾಜಪೇಟೆ), ಕೆ.ಶ್ರೀಧರ್(ಸೋಮವಾರಪೇಟೆ), ಕಿರಣ್ ಗೌರಯ್ಯ (ಕುಶಾಲನಗರ), ಡಿವೈಎಸ್‌ಪಿ ರವಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ವಿಜ್ಞಾನಿ ಲೋಯಲ್ ಮಿರಂಡಾ, ತಾಪಂ ಇಓಗಳಾದ ಅಪ್ಪಣ್ಣ(ವಿರಾಜಪೇಟೆ), ಪರಮೇಶ ಕುಮಾರ್(ಸೋಮವಾರಪೇಟೆ), ಅಗ್ನಿಶಾಮಕ ಅಧಿಕಾರಿ ರಾಜೇಶ್ ಮತ್ತಿತರರು ಹಾಜರಿದ್ದರು.

ಗಾಂಜಾ ಮಾರುತ್ತಿದ್ದವನ ಬಂಧನ

ಮಡಿಕೇರಿ, ಡಿ.3–ನಾಪೋಕ್ಲು ಸಮೀಪದ ಹೊದವಾಡ ಗ್ರಾಮದ ಬೋಳಿಬಾಣೆ ಬಳಿ ಗಾಂಜಾ ಮಾರುತ್ತಿದ್ದ ವ್ಯಕ್ತಿಯನ್ನು ನಾಪೋಕ್ಲು ಠಾಣಾ ಪೊಲೀಸರು ಬಂಧಿಸಿದ್ದಾರೆ. ಕಾವೇರಪ್ಪ (60) ಬಂಧಿತ ಆರೋಪಿ. ಈತ ಬೋಳಿಬಾಣೆ ಬಳಿ ಗಾಂಜಾ ಮಾರುತ್ತಿದ್ದ. ಈ ವೇಳೆ ದಾಳಿ ನಡೆಸಿದ ಪೊಲೀಸರು, 265 ಗ್ರಾಂ ಗಾಂಜಾ ವಶಪಡಿಸಿಕೊಂಡು ಈತನನ್ನು ಬಂಧಿಸಿದ್ದಾರೆ. ನಾಪೋಕ್ಲು ಠಾಣಾಧಿಕಾರಿ ಮಂಜುನಾಥ್ ಮತ್ತು ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ.

ಇಬ್ಬರು ಜಿಂಕೆ ಬೇಟೆಗಾರರ ಬಂಧನ

ಸುಂಟಿಕೊಪ್ಪ, ಡಿ.3–ಜಿಂಕೆಗಳನ್ನು ಬೇಟೆಯಾಡಿದ್ದ ಇಬ್ಬರು ಆರೋಪಿಗಳನ್ನು ಅರಣ್ಯಾಧಿಕಾಗಳು ಬಂಧಿಸಿದ್ದಾರೆ. ಎರಡು ಅತ್ತೂರು ನಲ್ಲೂರು ಗ್ರಾಮದ ತೋಟದ ಲೈನ್ ಮನೆಯಲ್ಲಿ ವಾಸವಿದ್ದ ಸುನೀಲ್ (34) ಮತ್ತು ಕೆ.ಡಿ.ಮುತ್ತಣ್ಣ (59) ಬಂಧಿತ ಆರೋಪಿಗಳು. ಮತ್ತೊಬ್ಬ ಆರೋಪಿ ಎ.ಎನ್.ಶ್ಯಾಮ್ (50) ತಲೆಮರೆಸಿಕೊಂಡಿದ್ದಾನೆ. ಗ್ರಾಮದ ನವೀನ್ ಕರುಂಬಯ್ಯ ಅವರಿಗೆ ಸೇರಿದ ಮುನ್ಸಿಫ್–ಡಿ ಕಾಫಿ ತೋಟದಲ್ಲಿ ಎರಡು ಹೆಣ್ಣು ಜಿಂಕೆಗಳನ್ನು ಬೇಟೆಯಾಡಿ ಮಾಂಸವಾಗಿ ಪರಿವರ್ತಿಸಿದ್ದರು. ಈ ವೇಳೆ ದಾಳಿ ನಡೆಸಿದ ಕುಶಾಲನಗರ ವಲಯದ ಆನೆಕಾಡು ಅರಣ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಆರೋಪಿಗಳನ್ನು ಬಂಧಿಸಿ, ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ.

ಡಿ.6, 7ರಂದು ಕೊರಗಜ್ಜ ಸನ್ನಿಧಿಯಲ್ಲಿ ನೇಮೋತ್ಸವ

ಮಡಿಕೇರಿ, ಡಿ.3–ಉಡೋತ್ ಮೊಟ್ಟೆಯ ಸ್ವಾಮಿ ಕೊರಗಜ್ಜ ದೈವ ಸನ್ನಿಧಿಯಲ್ಲಿ ಡಿ.6 ಮತ್ತು 7ರಂದು 4ನೇ ವರ್ಷದ ನೇಮೋತ್ಸವ ನಡೆಯಲಿದೆ. ಡಿ.6ರಂದು ಬೆಳಗ್ಗೆ 7.30ಕ್ಕೆ ಗಣಪತಿ ಹೋಮ ಮತ್ತು ಪ್ರಸಾದ ವಿತರಣೆ ನಡೆಯಲಿದೆ. ಸಂಜೆ 5 ಗಂಟೆಗೆ ದೈವದ ಭಂಡಾರ ಇಳಿಯುವುದು, ರಾತ್ರಿ 10.30 ಗಂಟೆಯಿಂದ ಕೊರಗಜ್ಜ ದೈವದ ನೇಮ ನಡೆಯಲಿದೆ ಎಂದು ದೇವಸ್ಥಾನ ಪ್ರಮುಖರು ತಿಳಿಸಿದ್ದಾರೆ.

ವಿಚಾರ ತಿಳಿಯಲು ನವಮಾಧ್ಯಮ ಮುಖ್ಯ



ಅರಮೇರಿ ಕಳಂಚೇರಿ ಮಠದಲ್ಲಿ ನಡೆದ ಹೊಂಬೆಳಕು ಚಿಂತನಾಗೋಷ್ಠಿಯನ್ನು ಕಸಾಪ ತಾಲೂಕು ಅಧ್ಯಕ್ಷ ಡಿ.ಪಿ.ರಾಜೇಶ್ ಉದ್ಘಾಟಿಸಿದರು.

ವಿರಾಜಪೇಟೆ, ಡಿ.3–ಸಮಾಜದ ಎಲ್ಲಾ ವಿಚಾರ ತಿಳಿಯಲು ನವಮಾಧ್ಯಮ ಅತೀ ಮುಖ್ಯವಾಗಿದೆ ಎಂದು ವಿರಾಜಪೇಟೆ ಬಿಂಬ ಮಾಧ್ಯಮ ಮನೆಯ ಉಷಾ ಪ್ರೀತಂ ಅಭಿಪ್ರಾಯಪಟ್ಟರು.

ಸಮೀಪದ ಅರಮೇರಿ ಕಳಂಚೇರಿ ಮಠದ ಶ್ರೀ ಲಿಂಗರಾಜೇಂದ್ರ ಭವನದಲ್ಲಿ ನಡೆದ ಹೊಂಬೆಳಕು ಕಿರಣ–226ನೇ ಮಾಸಿಕ ತತ್ವ ಚಿಂತನಾ ಗೋಷ್ಠಿಯಲ್ಲಿ ಸಮಾಜದ ಮೇಲೆ ನವಮಾಧ್ಯಮಗಳ ಪ್ರಭಾವ ಕುರಿತು ಉಪನ್ಯಾಸ ನೀಡಿದ ಅವರು, ಹಿಂದೆ ಆಕಾಶವಾಣಿಯಲ್ಲಿ ವಿಚಾರಗಳನ್ನು ತಿಳಿದುಕೊಳ್ಳುತ್ತಿದ್ದೇವು. ನಂತರದ ದಿನಗಳಲ್ಲಿ ಪತ್ರಿಕೆಗಳು ಬರುವುದನ್ನೇ ಜನರು ಕಾದು ಕುಳಿತು ಓದುತ್ತಿದ್ದರು ಎಂದರು. ಬಳಿಕ ಟಿವಿ ಮೂಲಕ ವಿಚಾರಗಳನ್ನು ತಿಳಿಯುತ್ತಿದ್ದೇವು. ಆದರೆ, ಇಂದು ಕಂಪ್ಯೂಟರ್ ಯುಗದಲ್ಲಿ ಸರ್ಕಾರದ ಎಲ್ಲಾ ವ್ಯವಹಾರ, ಕಚೇರಿಗಳಲ್ಲಿ ಕಂಪ್ಯೂಟರ್ ಬಳಸಲಾಗುತ್ತಿದೆ. ಮೊಬೈಲ್ ಬಂದ ನಂತರ ಪ್ರತಿಯೊಂದು ವಿಚಾರಗಳನ್ನು ತಕ್ಷಣ ತಿಳಿದುಕೊಳ್ಳುವಂತಾಗಿದೆ. ಇದರಿಂದ ಇತ್ತೀಚೆಗೆ ಪ್ರತಿಯೊಬ್ಬರು ಮೊಬೈಲ್ ಬಳಸುವಂತಾಗಿದೆ. ಇದರಿಂದ ನವಮಾಧ್ಯಮಗಳ ಪ್ರಭಾವ ಹೆಚ್ಚಾಗಿದ್ದು, ವಿಚಾರಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವ ವೇಳೆ ಯಾವುದು ಸರಿ? ಯಾವುದು ತಪ್ಪು? ಎಂದು 10 ಬಾರಿ ಯೋಚಿಸಬೇಕು ಎಂದು ಹೇಳಿದರು. ತಾಲೂಕು ಕಸಾಪ ಅಧ್ಯಕ್ಷ ಡಿ.ಪಿ.ರಾಜೇಶ್ ಕಾರ್ಯಕ್ರಮ ಉದ್ಘಾಟಿಸಿದರು. ಶ್ರೀಮಠದ ಶಾಂತಮಲ್ಲಿಕಾರ್ಜುನಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ವಿದ್ಯಾರ್ಥಿಗಳಾದ ಸಂಧ್ಯಾ, ಜ್ಞಾನಲತಾ, ವರ್ಷಿಣಿ ಹಾಜರಿದ್ದರು.

ವಿಂದ್ಯಾಗೆ ರೋಲ್ ಮಾಡೆಲ್ ಪ್ರಶಸ್ತಿ



ವಿರಾಜಪೇಟೆಯ ವಿಂದ್ಯಾ ಪ್ರತಾಪ್.

ವಿರಾಜಪೇಟೆ, ಡಿ.3–ಮಿಸ್ ಅಂಡ್ ಮಿಸ್ಸೆಸ್ ಇಂಡಿಯಾ ರೋಲ್ ಮಾಡೆಲ್–2024 ಪ್ರಶಸ್ತಿಯನ್ನು ವಿರಾಜಪೇಟೆಯ ವಿಂದ್ಯಾ ಪ್ರತಾಪ್ ಮುಡಿಗೇರಿಸಿಕೊಂಡರು.

ಬೆಂಗಳೂರಿನ ಲಲಿತ ಅಶೋಕ ಹೋಟೆಲ್ ಸಭಾಂಗಣದಲ್ಲಿ ನಂದಿನಿ ನಾಗರಾಜ್ ಸಂಸ್ಥೆ ವತಿಯಿಂದ ನಡೆದ ಸ್ಪರ್ಧೆಯಲ್ಲಿ ಒಟ್ಟು 30 ಸ್ಪರ್ಧಿಗಳು ಭಾಗವಹಿಸಿದ್ದರು. ವಿವಾಹಿತರ ವಿಭಾಗದಲ್ಲಿ ಎಂಟು ಮಹಿಳೆಯರ ಪೈಕಿ ವಿಂದ್ಯಾ ಆಯ್ಕೆಯಾಗಿದ್ದಾರೆ. ಈಕೆ ಪಟ್ಟಣದ ಬೋರೇಗೌಡ ಕಾಂಪ್ಲೆಕ್ಸ್ ಮಾಲೀಕರಾದ ಕೆ.ಬಿ.ಪ್ರತಾಪ್ ಹಾಗೂ ಗಾಯತ್ರಿ ಪ್ರತಾಪ್ ಅವರ ಪುತ್ರಿ. ವಿಂದ್ಯಾ ವಿರಾಜಪೇಟೆ ಕಾವೇರಿ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ನಂತರ ಸಂತ ಅನ್ನಮ್ಮ ವಿದ್ಯಾಸಂಸ್ಥೆಯಲ್ಲಿ ಪಿಯು ಶಿಕ್ಷಣ ಹಾಗೂ ಮೈಸೂರಿನಲ್ಲಿ ಪದವಿ ಪಡೆದಿದ್ದಾರೆ.

ವಿವಿಧೆಡೆ ಕೋಟ್ಪಾ ದಾಳಿ: 1.23 ಲಕ್ಷ ರೂ. ದಂಡ ವಸೂಲಿ



ಚಾಮರಾಜನಗರದಲ್ಲಿ ನಿಯಮ ಉಲ್ಲಂಘಿಸಿ ತಂಬಾಕು ಉತ್ಪನ್ನ ಮಾರುತ್ತಿದ್ದ ಅಂಗಡಿಗಳ ಮೇಲೆ ಕೋಟ್ಪಾ ತನಿಖಾ ತಂಡ ದಾಳಿ ನಡೆಸಿತು.

ಚಾಮರಾಜನಗರ, ಡಿ.3–ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಕಾಯ್ದೆ (ಕೋಟ್ಪಾ)ಯಡಿ ಏಪ್ರಿಲ್‌ನಿಂದ ನವೆಂಬರ್‌ವರೆಗೆ ಕೋಟ್ಪಾ ತನಿಖಾ ತಂಡದ ಸಹಯೋಗದೊಂದಿಗೆ ಜಿಲ್ಲೆಯ ವಿವಿಧೆಡೆ ದಾಳಿ ನಡೆಸಿ, ಒಟ್ಟು 1182 ಪ್ರಕರಣಗಳಲ್ಲಿ 1,23,270 ರೂ. ದಂಡ ವಿಧಿಸಲಾಗಿದೆ.

ನಿಯಮ ಉಲ್ಲಂಘಿಸಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದ ಅಂಗಡಿಗಳು, ಕೋಟ್ಪಾ ಸೆಕ್ಷನ್ ಎಚ್ಚರಿಕೆ ನಾಮಫಲಕ ಪ್ರದರ್ಶಿಸದ ಹೋಟೆಲ್, ಬಾರ್ ಅಂಡ್ ರೆಸ್ಟೋರೆಂಟ್‌ಗಳು, ಟೀ–ಸ್ಟಾಲ್, ಚಿಲ್ಲರೆ ಹಾಗೂ ಇತರೆ ಅಂಗಡಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಶಿಕ್ಷಣ ಸಂಸ್ಥೆಯ 100 ಗಜಗಳ ಅಂತರದ ಒಳಗೆ ತಂಬಾಕು ಪದಾರ್ಥಗಳನ್ನು ಮಾರಾಟ ಮತ್ತು ಸೇವನೆಗೆ ಉತ್ತೇಜನ ನೀಡುವ ಅಂಗಡಿ ಮಾಲೀಕರಿಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುತ್ತಿದ್ದ ವ್ಯಕ್ತಿಗಳಿಗೆ ಸ್ಥಳದಲ್ಲೇ ಕೋಟ್ಪಾ ಪ್ರಕರಣ ದಾಖಲಿಸಿ, ದಂಡ ವಿಧಿಸಲಾಗಿದೆ.

ಇದೇ ವೇಳೆ ಕರಪತ್ರ ವಿತರಿಸಿ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮ ಮತ್ತು ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದು ಜಿಲ್ಲಾ ತಂಬಾಕು ನಿಯಂತ್ರಣ ಘಟಕ ಕಾರ್ಯಕ್ರಮಾಧಿಕಾರಿ ತಿಳಿಸಿದ್ದಾರೆ.

ಡಿ.7ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾ ಪ್ರವಾಸ

● ವಿವಿಧ ಕಾರ್ಯಕ್ರಮದಲ್ಲಿ ಸಚಿವರುಗಳೊಂದಿಗೆ ಭಾಗಿ ● ಶಾಸಕ ಎ.ಆರ್.ಕೃಷ್ಣಮೂರ್ತಿ ಮಾಹಿತಿ



ಚಾಮರಾಜನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿದರು.

"ಹನೂರು ಮತ್ತು ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಂಪುಟದ ಪ್ರಮುಖ ಸಚಿವರು ಭೇಟಿ ನೀಡುತ್ತಿದ್ದು, ಇದಕ್ಕಾಗಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಮೂರು ಕಾರ್ಯಕ್ರಮಗಳಿಗೂ ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು.
-ಎ.ಆರ್.ಕೃಷ್ಣಮೂರ್ತಿ, ಶಾಸಕ

ಚಾಮರಾಜನಗರ, ಡಿ.3–ಮುಖ್ಯಮಂತ್ರಿ ಸಿದ್ದರಾಮಯ್ಯ ಡಿ.7ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಸತ್ತೇಗಾಲ, ಕೊಳ್ಳೇಗಾಲ ಹಾಗೂ ಯಳಂದೂರಿನಲ್ಲಿ ನಡೆಯುವ ವಿವಿಧ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಅಂದು ಬೆಳಗ್ಗೆ 10 ಗಂಟೆಗೆ ಹೆಲಿಕ್ಯಾಪ್ಟರ್ ಮೂಲಕ ಸತ್ತೇಗಾಲಕ್ಕೆ ಭೇಟಿ ನೀಡಲಿದ್ದಾರೆ. ಸಚಿವರಾದ ಮಧುಬಂಗಾರಪ್ಪ, ದಿನೇಶ್ ಗುಂಡೂರಾವ್, ಡಾ.ಹೆಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್, ಸಂಸದ ಸುನೀಲ್ ಬೋಸ್ ಸೇರಿದಂತೆ ಜಿಲ್ಲೆಯ ಶಾಸಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮೂರು ಕಾರ್ಯಕ್ರಮ: ಮೊದಲಿಗೆ ಹನೂರು ವಿಧಾನಸಭಾ ಕ್ಷೇತ್ರದ ಸತ್ತೇಗಾಲ ಗ್ರಾಮದಲ್ಲಿ ಗ್ರಾಮಸ್ಥರು ಹಾಗೂ ಸತ್ತೇಗಾಲ ಗ್ರಾಮಾಭಿವೃದ್ಧಿ ಸಂಘದಿಂದ ನಿರ್ಮಾಣವಾಗಿರುವ ಸರ್ಕಾರಿ ಪ್ರೌಢಶಾಲೆ ಕಟ್ಟಡವನ್ನು ಸಿಎಂ ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.

ಮಧ್ಯಾಹ್ನ 12 ಗಂಟೆಗೆ ಕೊಳ್ಳೇಗಾಲ ಪಟ್ಟಣದ ನ್ಯಾಷನಲ್ ಸ್ಕೂಲ್ ಆವರಣದಲ್ಲಿ ನಡೆಯುವ ಸುತ್ತೂರು ಮಠದ ಡಾ.ಶ್ರೀ ಶಿವರಾತ್ರಿ ರಾಜೇಂದ್ರಸ್ವಾಮೀಜಿ ಅವರ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. 3 ಗಂಟೆಗೆ ಯಳಂದೂರು ಪಟ್ಟಣದ ಸರ್ಕಾರಿ ಆಸ್ಪತ್ರೆ ಹಿಂಭಾಗದಲ್ಲಿ ಅಂದಾಜು 35 ಕೋಟಿ ರೂ. ವೆಚ್ಚದ 100 ಹಾಸಿಗೆ ಸಾಮರ್ಥ್ಯವುಳ್ಳ ಆಸ್ಪತ್ರೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಿದ್ದಾರೆ. ಈ ಮೂಲಕ ಇಡೀ ದಿನ ಜಿಲ್ಲೆಯಲ್ಲಿ ನಡೆಯುವ ಹಲವು ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಅತಿ ಹೆಚ್ಚು ಬಾರಿ ಜಿಲ್ಲೆಗೆ ಭೇಟಿ: ಅತಿಹೆಚ್ಚು ಬಾರಿ ಜಿಲ್ಲೆ ಹಾಗೂ ಜಿಲ್ಲಾ ಕೇಂದ್ರಕ್ಕೆ ಭೇಟಿ ನೀಡಿದ ಮುಖ್ಯಮಂತ್ರಿ ಎಂಬ ಹೆಗ್ಗಳಿಕೆಗೆ ಸಿದ್ದರಾಮಯ್ಯ ಪಾತ್ರರಾಗುತ್ತಿದ್ದಾರೆ. ಜಿಲ್ಲೆಗೆ ಭೇಟಿ ನೀಡಿದರೆ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ಮೌಢ್ಯಕ್ಕೆ ತಿಲಾಂಜಲಿ ಹಾಡಿರುವ ಸಿದ್ದರಾಮಯ್ಯ 2013–18ನೇ ಸಾಲಿನಲ್ಲಿ ಮೊದಲ ಬಾರಿಗೆ ಮುಖ್ಯಮಂತ್ರಿಯಾಗಿದ್ದಾಗ ಜಿಲ್ಲಾ ಕೇಂದ್ರಕ್ಕೆ ಒಟ್ಟು 17 ಬಾರಿ ಹಾಗೂ ಜಿಲ್ಲೆಗೆ ಒಟ್ಟು 25ಕ್ಕೂ ಹೆಚ್ಚು ಬಾರಿ ಭೇಟಿ ನೀಡಿ ದಾಖಲೆ ನಿರ್ಮಿಸಿದ್ದರು.

ಪ್ರಸ್ತುತ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದ ಒಂದೂವರೆ ವರ್ಷದ ಅವಧಿಯಲ್ಲಿ 5ಕ್ಕೂ ಹೆಚ್ಚು ಬಾರಿ ಜಿಲ್ಲೆಗೆ ಭೇಟಿ ನೀಡಿ ಜಿಲ್ಲೆಯ ಜನತೆಯ ಪ್ರಶಂಸೆಗೆ ಪಾತ್ರರಾಗುತ್ತಿದ್ದಾರೆ ಎಂದರು.

ಡಿ.6, 7ರಂದು ರಾಜೇಂದ್ರಶ್ರೀ ಜಯಂತ್ಯೋತ್ಸವ

ಕೊಳ್ಳೇಗಾಲದಲ್ಲಿ ವಿವಿಧ ಸಂಘ–ಸಂಸ್ಥೆ, ಸುತ್ತೂರು ಮಠದ ಭಕ್ತವೃಂದ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಹಯೋಗದಿಂದ ಡಿ.6 ಮತ್ತು 7ರಂದು ಸುತ್ತೂರು ಶ್ರೀ ಮಠದ ಡಾ.ಶ್ರೀ ಶಿವರಾತ್ರಿ ರಾಜೇಂದ್ರಸ್ವಾಮೀಜಿ ಜಯಂತ್ಯೋತ್ಸವ ಆಯೋಜಿಸಲಾಗಿದೆ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.6ರಂದು ಬೆಳಗ್ಗೆ 9 ಗಂಟೆಗೆ ಪಟ್ಟಣದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಆವರಣದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಶಿಬಿರದಲ್ಲಿ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ, ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆ ಹಾಗೂ ಸ್ಥಳೀಯ ತಜ್ಞವೈದ್ಯರು ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ಜಿಲ್ಲಾಧಿಕಾರಿ ಶಿಲ್ಪನಾಗ್ ಶಿಬಿರ ಉದ್ಘಾಟಿಸಲಿದ್ದು, ಶಾಸಕ ಎಂ.ಆರ್.ಮಂಜುನಾಥ್, ಜಿಪಂ ಸಿಇಓ ಮೋನಾ ರೋತ್, ಎಸ್‌ಪಿ ಡಾ.ಬಿ.ಟಿ.ಕವಿತಾ, ಡಿಎಚ್‌ಓ ಚಿದಂಬರ, ಉದ್ಯಮಿಗಳಾದ ನಿಶಾಂತ್, ದತ್ತೇಶ್ ಕುಮಾರ್ ಪಾಲ್ಗೊಳ್ಳಲಿದ್ದಾರೆ ಎಂದರು.

ಡಿ.7ರಂದು ಬೆಳಗ್ಗೆ 8.30ಕ್ಕೆ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಆವರಣದಿಂದ ಶ್ರೀಗಳ ಭಾವಚಿತ್ರ ಮೆರವಣಿಗೆ ನಡೆಯಲಿದ್ದು, ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಳ್ಳಲಿವೆ. 9.30ಕ್ಕೆ ವೇದಿಕೆಯಲ್ಲಿ ವಿದುಷಿ ಅನನ್ಯ ಭಟ್ ಮತ್ತು ತಂಡದಿಂದ ಸುಗಮ ಸಂಗೀತ ನಡೆಯಲಿದೆ. ಮಧ್ಯಾಹ್ನ 12 ಗಂಟೆ ಧಾರ್ಮಿಕ ಸಭೆ ಕಾರ್ಯಕ್ರಮ ನಡೆಯಲಿದ್ದು, ಶ್ರೀ ಶಿವರಾತಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರು, ಶಾಸಕರು, ವಿವಿಧ ಮಠಾಧೀಶರು ಭಾಗವಹಿಸಲಿದ್ದಾರೆ. 2.30ಕ್ಕೆ ಸುತ್ತೂರು ಶ್ರೀಮಠ–ಗುರುಪರಂಪರೆ ಅನಿಮೇಷನ್ ಚಿತ್ರ ಪ್ರದರ್ಶನ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಮರಿಸ್ವಾಮಿ, ನಿಶಾಂತ್, ಪುಟ್ಟರಂಗ, ವೀರಭದ್ರ, ತೋಟೇಶ್, ರಾಜು ಇದ್ದರು.

ಅಕ್ರಮ ಖಾತೆ ರದ್ದುಗೊಳಿಸುವಂತೆ ಆಗ್ರಹಿಸಿ ಪ್ರತಿಭಟನೆ



ಪಿ.ಸಿ.ವರ್ಗೀಸ್ ಕಾಲೋನಿ ನಿವಾಸಿಗಳು ಡಿಸಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ಡಿ.3–ಗುಂಡ್ಲುಪೇಟೆ ತಾಲೂಕಿನ ಯಡವನಹಳ್ಳಿ ಗ್ರಾಮದಲ್ಲಿ ಪಿ.ಸಿ.ವರ್ಗೀಸ್ ಕಾಲೋನಿಯ ಭೋವಿ ಜನಾಂಗಕ್ಕೆ ಮಂಜೂರಾಗಿದ್ದ ಜಮೀನನ್ನು ಅಕ್ರಮವಾಗಿ ಕ್ರಯ ಹಾಗೂ ಖಾತೆ ಮಾಡಿಕೊಂಡಿರುವ ತಮಿಳುನಾಡು ಮೂಲದ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ದಲಿತ ಪ್ರಗತಿಪರ ಸಂಘಟನೆಗಳ ಒಕ್ಕೂಟ ಹಾಗೂ ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ನೇತೃತ್ವದಲ್ಲಿ ಪಿ.ಸಿ.ವರ್ಗೀಸ್ ಕಾಲೋನಿ ನಿವಾಸಿಗಳು ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದರು.

ಪಿ.ಸಿ.ವರ್ಗೀಸ್ ಕಾಲೋನಿಯಲ್ಲಿ ಭೋವಿ ಜನಾಂಗಕ್ಕೆ ಸೇರಿದ ಬಡ ಮತ್ತು ಕೂಲಿ ಕಾರ್ಮಿಕ 60ಕ್ಕೂ ಹೆಚ್ಚು ಕುಟುಂಬಗಳು ಯಡವನಹಳ್ಳಿ ಗ್ರಾಮದ ಸರ್ವೇ ನಂ.457, 448, 449ರ ಸರ್ಕಾರಿ ಜಮೀನಿನಲ್ಲಿ ಸಾಗುವಳಿ ಮಾಡಿಕೊಂಡು ಬರುತ್ತಿದ್ದವು. ಜೊತೆಗೆ ಅಕ್ರಮ–ಸಕ್ರಮ ಸಮಿತಿಗೆ ಅರ್ಜಿ ಸಲ್ಲಿಸಲಾಗಿತ್ತು. ಈ ಕುಟುಂಬಗಳಿಗೆ ತಲಾ 4 ಎಕರೆಯಂತೆ ಸಾಗುವಳಿ ಪತ್ರ ನೀಡಲಾಗಿತ್ತು. ಆದರೆ, ತಮಿಳುನಾಡು ಮೂಲದ ಕಣ್ಣನ್, ವಾಸುದೇವನ್, ಸುಕುಮಾರನ್ ಅವರು ಈ ಕುಟುಂಬಗಳಿಗೆ ಸರ್ಕಾರದಿಂದ ಕೊಳವೆ ಬಾವಿ ಹಾಗೂ ಇನ್ನಿತರ ಸೌಲಭ್ಯ ಕೊಡಿಸುತ್ತೇವೆ ಎಂದು ಪತ್ರಗಳಿಗೆ ಸಹಿ ಹಾಕಿಸಿಕೊಂಡು ವಂಚಿಸಲಾಗಿದೆ ಎಂದು ಪ್ರತಿಭಟನಾಕಾರರು ದೂರಿದರು.

ಜಮೀನಿಗೆ ಅಳವಡಿಸಿರುವ ತಂತಿ ಬೇಲಿಯನ್ನು ಕೂಡಲೇ ತೆರವುಗೊಳಿಸಿ, ಕಾಲೋನಿ ನಿವಾಸಿಗಳಿಗೆ ಕೊಡಿಸಬೇಕು ಎಂದು ಒತ್ತಾಯಿಸಿದರು. ನಂತರ ಡಿಸಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಬಸವನಪುರ ರಾಜಶೇಖರ್, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಎಂ.ಶಿವಮೂರ್ತಿ, ಸಿದ್ದರಾಜು ಹಂಗಳ, ಡ್ಯಾನ್ಸ್ ಬಸವರಾಜು, ಜಿ.ಎಂ.ಶಂಕರ್, ಸೋಮು, ಮನು, ರಾಚಪ್ಪ, ಕುಮಾರ್, ಸೋಮೇಶ್, ರಂಗನಾಯಕ, ಮಹೇಶ್ವರಿ, ರತ್ನಮ್ಮ ಚಿನ್ನಮ್ಮ ಸಿ.ಎಂ. ಶಂಕರ್, ಸುಂದರ್, ಸಿ.ಎಚ್.ರಂಗಸ್ವಾಮಿ, ಕೋಡಹಳ್ಳಿ ರಾಜು, ಕುಮಾರ್ ಪುಟ್ಟಬುದ್ಧಿ ಇತರರಿದ್ದರು.



ಒಳ ಮೀಸಲಾತಿಗಾಗಿ ಪ್ರತಿಭಟನೆ...

ಆದಿವಾಸಿಗಳಿಗೆ ಒಳ ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ ಜಿಲ್ಲಾ ಬುಡಕಟ್ಟು ಗಿರಿಜನ ಅಭಿವೃದ್ಧಿ ಸಂಘದ ವತಿಯಿಂದ ಚಾಮರಾಜನಗರದ ಲ್ಯಾಂಪ್ಸ್ ಭವನ ಎದುರು ಬೃಹತ್ ಪ್ರತಿಭಟನೆ ನಡೆಯಿತು. ಮುಖಂಡರಾದ ಡಾ.ಸಿ.ಮಾದೇಗೌಡ, ಮುತ್ತಯ್ಯ, ದಾಸೇಗೌಡ, ಕೇತಮ್ಮ ಕೋಣೂರೇಗೌಡ, ರಂಗೇಗೌಡ, ದೊಡ್ಡಸಿದ್ದಯ್ಯ, ಮಾದು, ಜಡೇಸ್ವಾಮಿ, ಬಸವರಾಜು ಮತ್ತಿತರರು ಭಾಗವಹಿಸಿದ್ದರು.

ಕಸ ಸಂಗ್ರಹಣೆ ಬುಟ್ಟಿ ವಿತರಣೆ

ಚಾಮರಾಜನಗರ, ಡಿ.3–ನಗರದ 14ನೇ ವಾರ್ಡ್ ನಿವಾಸಿಗಳಿಗೆ ಸದಸ್ಯೆ ಚಿನ್ನಮ್ಮ ಸಿದ್ದರಾಮಯ್ಯ ಕಸ ಸಂಗ್ರಹಣೆ ಬುಟ್ಟಿ ವಿತರಿಸಿದರು.

ಇದೇ ವೇಳೆ ಮಾತನಾಡಿದ ಚಿನ್ನಮ್ಮ ಸಿದ್ದರಾಮಯ್ಯ, ವಾರ್ಡ್‌ನ ಸ್ವಚ್ಛತೆಗೆ ಹೆಚ್ಚು ಒತ್ತು ನೀಡಲಾಗಿದೆ. ನಗರಸಭಾ ವತಿಯಿಂದ ನೀಡಲಾಗಿರುವ ಬುಟ್ಟಿಯಲ್ಲಿ ಕಸ ಹಾಗೂ ಒಣ ಕಸವನ್ನು ಬೇರ್ಪಡಿಸಿ ಕಸದ ವಾಹನಕ್ಕೆ ನೀಡಬೇಕು. ಈ ಮೂಲಕ ಸ್ವಚ್ಛತೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ನಗರಸಭೆ ಪರಿಸರ ಇಂಜಿನಿಯರ್ ರೂಪಾ, ಹಿರಿಯ ಆರೋಗ್ಯ ನಿರೀಕ್ಷಕಿ ಸುಷ್ಮಾ, ಮಂಜುನಾಥ್, ಯಜಮಾನರಾದ ಗುರುಸ್ವಾಮಿ, ನಾಗರಾಜು, ಶಿವಣ್ಣ, ನಗರಸಭೆ ಸಿಬ್ಬಂದಿ ಹಾಜರಿದ್ದರು.



ಚಾಮರಾಜನಗರ 14ನೇ ವಾರ್ಡ್ ನಿವಾಸಿಗಳಿಗೆ ಸದಸ್ಯೆ ಚಿನ್ನಮ್ಮ ಕಸದ ಬುಟ್ಟಿ ವಿತರಿಸಿದರು.

ಮೈಸೂರು ಮಿತ್ರ

ರಾಮಕೃಷ್ಣನಗರದ ಶ್ರೀ ರಾಮಕೃಷ್ಣ ಪರಮಹಂಸ ವೃತ್ತದ ಬಳಿ ಕೋರ್ಟ್ ಆದೇಶ ಧಿಕ್ಕರಿಸಿ

ಮಂಜೂರು ಮಾಡಲಾದ 48 ನಿವೇಶನಗಳ ವಿವರ

ಮೈಸೂರು, ಡಿ.3(ಆರ್‌ಕೆ)–ಮೈಸೂರಿನ ವಿಶ್ವಮಾನವ ಜೋಡಿ ರಸ್ತೆಯ



ರಾಮಕೃಷ್ಣನಗರದ ಶ್ರೀ ರಾಮಕೃಷ್ಣ ಪರಮಹಂಸ ವೃತ್ತದ ಆಜುಬಾಜಲ್ಲಿ ಬರುವ ದಟ್ಟಗಳ್ಳಿಯ ವಿವಿಧ ಸರ್ವೆ ನಂಬರ್‌ಗಳಲ್ಲಿ ಕೋರ್ಟ್ ಆದೇಶವನ್ನು ಧಿಕ್ಕರಿಸಿ 48 ಮಂದಿಗೆ ಮಂಜೂರು ಮಾಡಲಾಗಿರುವ ನಿವೇಶನಗಳ ಮಂಜೂರಾತಿಯನ್ನು ಸರ್ಕಾರ ರದ್ದುಪಡಿಸಿ ಆದೇಶ ಹೊರಡಿಸಿರುವ ಹಿನ್ನೆಲೆಯಲ್ಲಿ ಮುಡಾ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಈ ನಿಟ್ಟಿನಲ್ಲಿ ಪ್ರಕ್ರಿಯೆ ಆರಂಭಿಸಿದ್ದಾರೆ.

ಪ್ರತಿಷ್ಠಿತ ಈ ಬಡಾವಣೆಯಲ್ಲಿ ಕೋಟ್ಯಾಂತರ ರೂ. ಬೆಲೆಬಾಳುವ ನಿವೇಶನ ಪಡೆದುಕೊಂಡವರ ಪೈಕಿ ರಿಯಲ್ ಎಸ್ಟೇಟ್ ಉದ್ಯಮಿಗಳು, ಜನಪ್ರತಿನಿಧಿಗಳು, ಪ್ರಭಾವಿಗಳೇ ಇದ್ದಾರೆ. ಇದೀಗ ಸರ್ಕಾರ ಈ ನಿವೇಶನಗಳ ಮಂಜೂರಾತಿಯನ್ನು ರದ್ದುಪಡಿಸಿ ಆದೇಶ ಹೊರಡಿಸಿರುವ ಹಿನ್ನೆಲೆಯಲ್ಲಿ ಮಂಜೂರಾತಿದಾರರು ಕಂಗಾಲಾಗಿದ್ದಾರೆ. ಈ ಹಿಂದಿನ ಮುಡಾ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್, 2023ರ ಏಪ್ರಿಲ್ 29ರಂದು 48 ನಿವೇಶನಗಳಿಗೆ ಅಧಿಕೃತ ಜ್ಞಾಪನ ಪತ್ರದ ಮೂಲಕ ಮಂಜೂರಾತಿ ಮಾಡಿದ್ದು, 2023ರ ಸೆ.27ರಂದು ಎಲ್ಲರಿಗೂ ಮಂಜೂರಾತಿ ಪತ್ರವನ್ನೂ ನೀಡಿದ್ದರು. ಅಲ್ಲದೆ, 2023ರ ಡಿ.8ರಂದು 48 ಮಂದಿಗೂ ನಿವೇಶನದ ಖಾತಾ ನೋಂದಣಿ ಮಾಡಿ, ಕಂದಾಯ ಸಹ ನಿಗದಿಗೊಳಿಸಿ ಭಾರಿ ಅಕ್ರಮಕ್ಕೆ ಆಸ್ಪದ ಮಾಡಿಕೊಟ್ಟಿದ್ದರು. ದಟ್ಟಗಳ್ಳಿ ಗ್ರಾಮದ ಸರ್ವೆ ನಂ. 15, 27, 32, 38, 39, 40 ಮತ್ತು 41ರ ಜಮೀನಿನಲ್ಲಿ ಅಭಿವೃದ್ಧಿಪಡಿಸಿದ ಬಡಾವಣೆಯಲ್ಲಿ 12x18, 9x12, 18x15.06+12.00/2 ಮೀಟರ್ ಅಳತೆಯ ನಿವೇಶನಗಳನ್ನು ಹಂಚಿಕೆ ಮಾಡಲಾಗಿತ್ತು. ಆ 48 ಮಂಜೂರಾತಿದಾರರು ಇವರೆ ನೋಡಿ;

1. ಬಿ.ಎಸ್.ಸೂರ್ಯಕುಮಾರಿ, ನಿವೇದಿತಾನಗರ, 1ನೇ ಕ್ರಾಸ್, ಬೋಗಾದಿ, ಮೈಸೂರು
2. ವಿ.ವೆಂಕಟಾಚಲಗೌಡ, ಚಿಕ್ಕ ಬೇಗೂರು, ಬೆಂಗಳೂರು.
3. ಎಸ್.ವಿ.ಉದಯನಾರಾಯಣ, ಜನತಾನಗರ, ಮೈಸೂರು.
4. ಹೆಚ್.ಎಸ್.ಪ್ರಭುಸ್ವಾಮಿ, ಹುಂಡಿಪುರ ಗ್ರಾಮ, ಗುಂಡ್ಲುಪೇಟೆ, ಚಾಮರಾಜನಗರ.
5. ಶ್ರೀನಿವಾಸಮೂರ್ತಿ, ಚಾಮರಾಜಪುರಂ, ಮೈಸೂರು.
6. ಹೆಚ್.ವಿ.ಬಾಬು, ಶಾರದಾ ಕಾಲೋನಿ, ಬಸವೇಶ್ವರ ನಗರ, ಬೆಂಗಳೂರು.
7. ಪಿ.ಎನ್.ಜಯರಾಮು, ವಿಜಯನಗರ 2ನೇ ಹಂತ, ಮೈಸೂರು.
8. ಎಂ.ಟಿ.ಪ್ರಭು, ಕುವೆಂಪುನಗರ, ಮೈಸೂರು.
9. ಜಯಮ್ಮ, ಮೂಕನಹಳ್ಳಿ, ಹುಣಸೂರು ತಾಲೂಕು.
10. ಎ.ವಿ.ಮಂಜುನಾಥ್, ರೈಲ್ವೆ ಬಡಾವಣೆ, ಬೋಗಾದಿ, ಮೈಸೂರು.
11. ಬಿ.ಕೆ.ಗಾಯತ್ರಿ, 1ನೇ ಮೇನ್, ಜಯಲಕ್ಷ್ಮಿಪುರಂ, ಮೈಸೂರು.
12. ಹೆಚ್.ಹೆಚ್.ಗೌರಮ್ಮ, ಗೋಕುಲಂ 3ನೇ ಹಂತ, ಮೈಸೂರು.
13. ರಂಗೇಶ್, ಗಂಗೋತ್ರಿ ಬಡಾವಣೆ, ಮೈಸೂರು.
14. ಜಯಂತಿ, ಮೂಕನಹಳ್ಳಿ, ಹುಣಸೂರು ತಾಲೂಕು.
15. ಎಂ.ವಿ.ನಿರ್ಮಲಾ, ಸ್ನೇಕ್ ಶ್ಯಾಮ್ ರಸ್ತೆ, ವಿಜಯನಗರ 2ನೇ ಹಂತ, ಮೈಸೂರು.
16. ಬಾಲಸುಬ್ರಹ್ಮಣ್ಯ, ಶ್ರೀರಾಂಪುರ 3ನೇ ಹಂತ, ಮೈಸೂರು.
17. ಬಿ.ಪೂರ್ಣಿಮಾ, ಕೋಟೆ, ಚನ್ನರಾಯಪಟ್ಟಣ.
18. ಸಿ.ಎಸ್.ಶೇಷಾದ್ರಿ, ಅಗ್ರಹಾರ ಹೊಸಕೋಟೆ, ಕಲ್ಲುಂಟೆ, ಬೆಂಗಳೂರು ಗ್ರಾಮಾಂತರ.
19. ಸುಮಾ ಶೈಲೇಶ್, ಕಲ್ಯಾಣನಗರ, ನಾಗರಬಾವಿ, ಬೆಂಗಳೂರು.
20. ಎಂ.ಎಸ್.ಗೀತಾ, ಬನಶಂಕರಿ 3ನೇ ಹಂತ, ಬೆಂಗಳೂರು.
21. ಎಂ.ಎನ್.ಕೃಪಾಶಂಕರ್, ಅಶೋಕ ರಸ್ತೆ, ಮೈಸೂರು.
22. ಹೆಚ್.ಆರ್.ಕೃಷ್ಣೇಗೌಡ, ರಾಮಕೃಷ್ಣನಗರ 1ನೇ ಬ್ಲಾಕ್, ಮೈಸೂರು.
23. ಹೆಚ್.ಕೆ.ಶಾರದಾ, ಲಕ್ಷ್ಮಿಕಾಂತನಗರ, ಹೆಬ್ಬಾಳು, ಮೈಸೂರು.
24. ಕೆ.ರತ್ನ, ಬೆಂಡನಹಳ್ಳಿ, ಚನ್ನರಾಯಪಟ್ಟಣ.
25. ಗೀತಾ ವಿ.ಮೂರ್ತಿ, ಕೆ.ಆರ್.ಮೊಹಲ್ಲಾ, ಮೈಸೂರು.
26. ಕಲಾವತಿ, ಕುವೆಂಪುನಗರ ಎಂ–ಬ್ಲಾಕ್, ಮೈಸೂರು.
27. ಹೆಚ್.ವಿ.ಮಧುಸೂದನ್, ಸೌಗಂಧಿಕ ಯಶಸ್ವಿನಿ ಬಡಾವಣೆ, ಬೋಗಾದಿ, ಮೈಸೂರು.
28. ವಿ.ಸೌಭಾಗ್ಯವತಿ, ಚಿಕ್ಕಪೇಟೆ, ಬೆಂಗಳೂರು.
29. ಎಂ.ಸಿದ್ದಮಲ್ಲಪ್ಪ, ಶಿವನಂಜಪ್ಪ ಬಡಾವಣೆ, ಮಂಡ್ಯ
30. ನಾಗರತ್ನ, ಶ್ರೀಕಂಠೇಶ್ವರನಗರ, ಬೆಂಗಳೂರು.
31. ಹೆಚ್.ವಿ.ಮುಕುಂದ, ಇ–ಬ್ಲಾಕ್, ಜೆ.ಪಿನಗರ, ಮೈಸೂರು.
32. ಶ್ರೀಲಕ್ಷ್ಮಿ, ಮಾರಿಗುಡಿ ಸ್ಟ್ರೀಟ್, ಚನ್ನರಾಯಪಟ್ಟಣ.
33. ಟಿ.ಜಿ.ವೆಂಕಟೇಶ್, ಕುವೆಂಪುನಗರ, ಕೆಹೆಚ್‌ಬಿ 2ನೇ ಹಂತ, ಮೈಸೂರು.
34. ಹೆಚ್.ಎನ್.ಸರಳಾಂಭ, ನಾಗರಬಾವಿ 2ನೇ ಹಂತ, ಬೆಂಗಳೂರು ಉತ್ತರ.
35. ಕೆ.ಕೃಷ್ಣಮೂರ್ತಿ, ಬಿಹೆಚ್‌ಇಎಲ್ ಬಡಾವಣೆ, ಪಟ್ಟಣಗೆರೆ, ಆರ್‌ಆರ್ ನಗರ, ಬೆಂಗಳೂರು.
36. ಬಿ.ಎ.ಇಂದ್ರಾಣಿ, ರಾಮಕೃಷ್ಣನಗರ, ಜೆ–ಬ್ಲಾಕ್, ಮೈಸೂರು.
37. ಎ.ಫ್ರಾನ್ಸಿಸ್, ಪರ್ಫೆಕ್ಟ್ ಡಿಕೋರ್ ಹಿಂಭಾಗ, ದಟ್ಟಗಳ್ಳಿ, ಮೈಸೂರು.
38. ಪುಷ್ಪಾ, ಬಿಟಿಎಂ ಲೇಔಟ್, 1ನೇ ಹಂತ, ಬೆಂಗಳೂರು.
39. ಮಂಜುಳಾ, ಶ್ರೀಕಂಠಪುರಿ ಎಕ್ಸ್‌ಟೆನ್ಷನ್, ನಂಜನಗೂಡು ಗ್ರಾಮಾಂತರ.
40. ಬಿ.ಟಿ.ಉಮಾದೇವಿ, ಟಿ.ಕೆ.ಬಡಾವಣೆ, ಮೈಸೂರು.
41. ಮಹದೇವ, ಜಲಪುರಿ, ಬಿ–ಬ್ಲಾಕ್, ಮೈಸೂರು.
42. ಎಂ.ಟಿ.ಜಯಲಕ್ಷ್ಮಿ, ಗಂಗೋತ್ರಿ ಬಡಾವಣೆ, ಮೈಸೂರು.
43. ಶಿವಮ್ಮ, ಬಾಲಾಜಿ ನಗರ, ಸುಮುಖ ರೆಸಿಡೆನ್ಸಿ ಬಳಿ, ಬೆಂಗಳೂರು.
44. ಪುಷ್ಪಲತಾ, ಟಿ.ಪಿ.ಪ್ರಸನ್ನಕುಮಾರ್ ಮತ್ತು ಟಿ.ವಿ.ನಾಗೇಂದ್ರದತ್ತ, ನಾಗರಬಾವಿ, ಬೆಂಗಳೂರು.
45. ಜೆ.ಎಸ್.ಸುನಂದಾದೇವಿ, ಜೆ.ಪಿನಗರ 7ನೇ ಫೇಸ್, ಬೆಂಗಳೂರು.
46. ಎನ್.ಶೀಲಾಮೂರ್ತಿ, ರಾಮಕೃಷ್ಣನಗರ, ಇ ಅಂಡ್ ಎಫ್ ಬ್ಲಾಕ್, ಮೈಸೂರು.
47. ಎನ್.ಎನ್.ಮಹೇಶ್, ಕನಕದಾಸನಗರ, ಜಿ–ಬ್ಲಾಕ್, ಮೈಸೂರು.
48. ಹೆಚ್.ವಿ.ವೃಷಭೇಂದ್ರಪ್ಪ, 9ನೇ ಮೇನ್, ವಿದ್ಯಾರಣ್ಯಪುರಂ, ಮೈಸೂರು.

ಸಭೆಯ ದಿಕ್ಕು ತಪ್ಪಿಸಿ ನಿವೇಶನ ಮಂಜೂರು ಮಾಡಿದ ಆಯುಕ್ತರ ವಿರುದ್ಧ ಶಿಸ್ತು ಕ್ರಮವಾಗಲಿ


ಮುಖ್ಯಮಂತ್ರಿ ತವರಲ್ಲೇ ಇಂತಹದ್ದೊಂದು ಭಾರಿ ಅಕ್ರಮ ನಡೆದಿರುವುದು ರಾಜ್ಯದ ಜನರೇ ತಲೆತಗ್ಗಿಸುವಂತಹ ವಿಚಾರ!

ಮೈಸೂರು, ಡಿ.3(ಆರ್‌ಕೆ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಸಾಮಾನ್ಯ ಸಭೆಯಲ್ಲಿ ಸದಸ್ಯರ ದಿಕ್ಕು ತಪ್ಪಿಸಿ, ಮೈಸೂರಿನ ದಟ್ಟಗಳ್ಳಿ ವಿವಿಧ ಸರ್ವೆ ನಂಬರ್‌ಗಳಲ್ಲಿ ಕಾನೂನುಬಾಹಿರವಾಗಿ 48 ಮಂದಿಗೆ ನಿವೇಶನ ಮಂಜೂರು ಮಾಡಿದ ಮುಡಾ ಮಾಜಿ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಹಾಗೂ ವಿಧಾನಪರಿಷತ್ ಮಾಜಿ ಸದಸ್ಯರೂ ಆದ ಸಿಐಟಿಬಿ ಮಾಜಿ ಅಧ್ಯಕ್ಷ ಡಿ.ಮಾದೇಗೌಡ ಒತ್ತಾಯಿಸಿದ್ದಾರೆ.

ಮೈಸೂರಿನ ರಾಮಕೃಷ್ಣನಗರದ ಶ್ರೀ ರಾಮಕೃಷ್ಣ ಪರಮಹಂಸ ವೃತ್ತದ ಬಳಿಯ ದಟ್ಟಗಳ್ಳಿ ಸರ್ವೆ ನಂಬರ್ 14, 27, 32, 38, 39, 40 ಮತ್ತು 41ರಲ್ಲಿ ಅಭಿವೃದ್ಧಿಪಡಿಸಲಾಗಿರುವ ಬಡಾವಣೆಯಲ್ಲಿ ಬೆಲೆಬಾಳುವ ನಿವೇಶನಗಳನ್ನು ನ್ಯಾಯಾಲಯದ ಆದೇಶ ಧಿಕ್ಕರಿಸಿ 48



ಟಿ.ಎಸ್.ಶ್ರೀವತ್ಸ



ಎ.ಹೆಚ್.ವಿಶ್ವನಾಥ್



ಡಿ.ಮಾದೇಗೌಡ

ಮಂದಿಗೆ ಮಂಜೂರು ಮಾಡಿರುವ ಪ್ರಕರಣ ತೀವ್ರ ಗಂಭೀರ ಸ್ವರೂಪದ್ದಾಗಿದೆ. 2023ರ ಮಾರ್ಚ್ 21ರಂದು ನಡೆದ ಪ್ರಾಧಿಕಾರದ ಸಾಮಾನ್ಯ ಸಭೆಯಲ್ಲಿ ತಪ್ಪು ಮಾಹಿತಿಯನ್ನು ನೀಡುವ ಮೂಲಕ ಸದಸ್ಯರ ದಿಕ್ಕು ತಪ್ಪಿಸಿರುವುದು ಕ್ರಿಮಿನಲ್ ಸ್ವರೂಪದ ಅಪರಾಧವಾಗಿದೆ.

ಸರ್ಕಾರ ಕೇವಲ ನಿವೇಶನಗಳ ಮಂಜೂರಾತಿ ರದ್ದುಪಡಿಸುವುದು ಮಾತ್ರವಲ್ಲ, ಜೊತೆಗೆ ಇಷ್ಟೆಲ್ಲಾ ಅವಾಂತರಕ್ಕೆ ಕಾರಣಕರ್ತನಾದ ಮುಡಾ ಮಾಜಿ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ, ಸೇವೆಯಿಂದ ಅಮಾನತುಗೊಳಿಸಿ, ಕಾನೂನು ರೀತಿಯ ಕ್ರಮ ಕೈಗೊಳ್ಳುವುದು ಅವಶ್ಯವಾಗಿದೆ ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ನವೆಂಬರ್ 30ರಂದು ಸರ್ಕಾರ ಈ ಬಗ್ಗೆ ಅಧಿಕೃತ ಆದೇಶ ಹೊರಡಿಸಿದ್ದು, ಮುಡಾ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಅವರು ಕೂಡಲೇ 48 ನಿವೇಶನಗಳ ಮಂಜೂರಾತಿಯನ್ನು ರದ್ದುಪಡಿಸಿ, ಮುಡಾ ವಶಕ್ಕೆ ಪಡೆಯಬೇಕು. ನಂತರ ಇದಕ್ಕೆ ಕಾರಣರಾದ ಅಧಿಕಾರಿಗಳು, ಸಿಬ್ಬಂದಿಯ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ, ಕಾನೂನು ರೀತಿಯ ಕ್ರಮ ಕೈಗೊಳ್ಳಬೇಕು. ಆಗ ಮಾತ್ರ ಈ ಬಗೆಯ ಅಕ್ರಮಗಳನ್ನು ಎಸಗಲು ಮುಂದಾಗುವ ಅಧಿಕಾರಿಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದಂತಾಗುತ್ತದೆ ಎಂದು ಟಿ.ಎಸ್.ಶ್ರೀವತ್ಸ, ಎ.ಹೆಚ್.ವಿಶ್ವನಾಥ್, ಡಿ.ಮಾದೇಗೌಡರು ಅಭಿಪ್ರಾಯಪಟ್ಟಿದ್ದಾರೆ.

ತಲೆ ತಗ್ಗಿಸುವ ವಿಚಾರ: ಸರ್ಕಾರ, ಕಾನೂನುಬಾಹಿರವಾಗಿ ಮಂಜೂರಾಗಿರುವ ದಟ್ಟಗಳ್ಳಿಯ ವಿವಿಧ ಸರ್ವೆ ನಂಬರ್‌ಗಳ 48 ನಿವೇಶನಗಳನ್ನು ಮಂಜೂರು ಮಾಡುವ ಪ್ರಾಧಿಕಾರದ ನಿರ್ಣಯವನ್ನು ರದ್ದುಪಡಿಸಿರುವುದು ಸ್ವಾಗತಾರ್ಹ. ಅದೇ ರೀತಿ ಶೇ.50:50ರ ಅನುಪಾತ, ಪ್ರೋತ್ಸಾಹದಾಯಕ ಯೋಜನೆ ಹಾಗೂ ಬದಲಿಯಾಗಿ ಮಂಜೂರು ಮಾಡಿರುವ ಸಾವಿರಾರು ನಿವೇಶನಗಳನ್ನು ವಾಪಸ್ ಪಡೆಯಲು ಸರ್ಕಾರ ಆದೇಶಿಸಬೇಕು. ಹಾಗೆಯೇ ಈ ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ಪಾಲ್ಗೊಂಡಿರುವ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ರಿಯಲ್ ಎಸ್ಟೇಟ್ ಉದ್ಯಮಿಗಳ ವಿರುದ್ಧ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ದಾವೆ ಹೂಡಿ ಕಾನೂನಿನಡಿ ಕ್ರಮ ಕೈಗೊಳ್ಳದಿದ್ದರೆ ಮುಂದೆ ಈ ಬಗೆಯ ಹಗರಣಗಳು ಎಗ್ಗಿಲ್ಲದೇ ಮುಂದುವರೆಯುತ್ತವೆ. ಮುಖ್ಯಮಂತ್ರಿಗಳು ಮೈಸೂರಿನವರೇ ಆಗಿದ್ದರೂ ತಮ್ಮ ತವರಲ್ಲಿ ಅಧಿಕಾರಿಗಳಿಂದ ಇಂತಹದೊಂದು ಭಾರಿ ಅಕ್ರಮ ನಡೆದಿರುವುದು, ಹಾಗೂ ಮುಖ್ಯಮಂತ್ರಿಗಳೇ ಲೋಕಾಯುಕ್ತ ತನಿಖೆಗೆ ಹಾಜರಾಗಿ ಹೇಳಿಕೆ ನೀಡಿರುವುದು ರಾಜ್ಯದ ಜನರು ತಲೆತಗ್ಗಿಸುವ ವಿಚಾರ ಎಂದು ಅವರು ಪ್ರತಿಕ್ರಿಯೆ ನೀಡಿದ್ದಾರೆ.

ಗಡಿಯಲ್ಲಿ ಶಾಂತಿ ಇಲ್ಲದೆ ಭಾರತ–ಚೀನಾ ಸಂಬಂಧ ಸಹಜವಾಗಿರಲು ಸಾಧ್ಯವಿಲ್ಲ

ನವದೆಹಲಿ, ಡಿ.3– ಗಡಿ ವಿವಾದವನ್ನು ಅಂತ್ಯಗೊಳಿಸಲು ನ್ಯಾಯಯುತ ಮತ್ತು ಪರಸ್ಪರ ಸ್ವೀಕಾರಾರ್ಹ ಒಪ್ಪಂದಕ್ಕೆ ಬರಲು ಚೀನಾದೊಂದಿಗೆ ಮಾತುಕತೆ ನಡೆಸಲು ಭಾರತ ಬದ್ಧವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಮಂಗಳವಾರ ಹೇಳಿದ್ದಾರೆ.

ಇಂದು ಲೋಕಸಭೆಯಲ್ಲಿ ಭಾರತ–ಚೀನಾ ಗಡಿ ಪರಿಸ್ಥಿತಿ ಕುರಿತು ಮಾತನಾಡಿದ ಜೈಶಂಕರ್ ಅವರು, ಚೀನಾದ ಕ್ರಮಗಳಿಂದಾಗಿ ಗಡಿಯಲ್ಲಿ ಶಾಂತಿ ಸ್ಥಾಪನೆ ಸಾಧ್ಯವಾಗುತ್ತಿಲ್ಲ ಮತ್ತು ಉದ್ವಿಗ್ನ ಪರಿಸ್ಥಿತಿ ಮುಂದುವರೆದಿದ್ದು, 2020ರಿಂದ ಭಾರತ–ಚೀನಾ ಸಂಬಂಧ ಸಹಜವಾಗಿಲ್ಲ ಎಂದು ಹೇಳಿದರು.

2020ರ ಏಪ್ರಿಲ್–ಮೇನಲ್ಲಿ ಪೂರ್ವ ಲಡಾಖ್‌ನಲ್ಲಿ ಚೀನಾ ಹೆಚ್ಚಿನ ಸಂಖ್ಯೆಯ ಸೈನಿಕರನ್ನು ನಿಯೋಜಿಸಿತ್ತು. ಇದರಿಂದ

ಲೋಕಸಭೆಯಲ್ಲಿ ಜೈಶಂಕರ್



ನಮಗೆ ಗಸ್ತು ತಿರುಗಲು ತೊಂದರೆಯಾಗಿತ್ತು ಮತ್ತು ಹಲವಾರು ಬಾರಿ ಉಭಯ ದೇಶಗಳ ಸೇನೆ ಮುಖಾಮುಖಿಯಾದವು ಎಂದರು. ಜೂನ್ 2020ರಲ್ಲಿ ಗಲ್ವಾನ್ ಕಣಿವೆಯಲ್ಲಿ ಉದ್ವಿಗ್ನತೆಯ ನಂತರ ಚೀನಾ ಮತ್ತು ಭಾರತದ ನಡುವೆ ಸಾಕಷ್ಟು ಉದ್ವಿಗ್ನತೆ ಉಂಟಾಗಿತ್ತು. 1991ರಲ್ಲಿ, ಎರಡೂ ದೇಶಗಳು ಎಲ್‌ಎಸಿಯಲ್ಲಿ ಶಾಂತಿಗೆ ಒಪ್ಪಿಕೊಂಡಿದ್ದವು. 1993ರಲ್ಲಿ LACಯಲ್ಲಿ ಶಾಂತಿಯನ್ನು ಮರುಸ್ಥಾಪಿಸುವ ಕುರಿತು ಒಪ್ಪಂದ ಮುಂದುವರೆದಿತ್ತು. ನಿರಂತರ ರಾಜತಾಂತ್ರಿಕ ಮಾತುಕತೆಗಳ ನಂತರ ಇತ್ತೀಚಿಗೆ ಭಾರತ–ಚೀನಾ ಬಾಂಧವ್ಯದಲ್ಲಿ ಸ್ವಲ್ಪ ಸುಧಾರಣೆ ಕಾಣುತ್ತಿದೆ ಎಂದು ಅವರು ಹೇಳಿದರು. ಗಡಿ ಪ್ರದೇಶಗಳಲ್ಲಿ ಶಾಂತಿ ಮತ್ತು ನೆಮ್ಮದಿ ಇಲ್ಲದಿರುವಾಗ ಭಾರತ–ಚೀನಾ ಸಂಬಂಧ ಸಹಜವಾಗಿರಲು ಸಾಧ್ಯವಿಲ್ಲ. ನಮ್ಮ ಪರಸ್ಪರ ಸಂಬಂಧಗಳು ಶಾಂತಿ ಮತ್ತು ರಾಜೀ ಆಧಾರದ ಮೇಲೆ ಮಾತ್ರ ಸುಧಾರಿಸುವ ಭರವಸೆ ಇದೆ. ರಾಜತಾಂತ್ರಿಕ ಮಟ್ಟದಲ್ಲಿ ಮಾತುಕತೆಗಳು ನಡೆಯುತ್ತಿವೆ ಮತ್ತು ಮಿಲಿಟರಿ ಮಟ್ಟದಲ್ಲಿಯೂ ಇದೇ ರೀತಿಯ ಕೆಲಸ ನಡೆಯುತ್ತಿದೆ ಎಂದು ಜೈಶಂಕರ್ ಲೋಕಸಭೆಗೆ ತಿಳಿಸಿದರು. ಶಾಂತಿ ಮತ್ತು ನೆಮ್ಮದಿಯ ಮರುಸ್ಥಾಪನೆಯು ಇತರೆ ವಿಚಾರಗಳಲ್ಲಿ ಉಭಯ ದೇಶಗಳ ಸಂಬಂಧ ಮುಂದುವರಿಯಲು ಆಧಾರವಾಗಿದೆ ಎಂದು ಅವರು ಹೇಳಿದರು.

ಡಿ.6,7ರಂದು ಮೈಸೂರಿನ ವಿವಿಧೆಡೆ ನೀರು ಸರಬರಾಜಲ್ಲಿ ವ್ಯತ್ಯಯ

ಮೈಸೂರು, ಡಿ.3(ಎಸ್‌ಪಿಎನ್)– ಹೊಂಗಳ್ಳಿ 2ನೇ ಹಾಗೂ 3ನೇ ಹಂತ ಯಂತ್ರಾಗಾರಕ್ಕೆ ವಿದ್ಯುತ್ ಸರಬರಾಜು ಮಾಡುವ ಬೆಳಗೊಳ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಹಮ್ಮಿಕೊಂಡಿರುವುದರಿಂದ ಡಿ.6 ಮತ್ತು 7ರಂದು ನೀರು ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ.


ಸಿಎಸ್‌ಆರ್ ಮತ್ತು ಹೆಚ್‌ಎಲ್‌ಆರ್ ಪ್ರಾಂತ್ಯಗಳು, ವಾರ್ಡ್ ನಂ.1ರಿಂದ 7, ವಾರ್ಡ್ ನಂ.20, 23, 38 ವಾರ್ಡ್ ನಂ.42ರಿಂದ 45, ವಾರ್ಡ್ ನಂ.47 ಸಂಬಂಧಪಟ್ಟ ಡಿಎಂಎ, ಪ್ರದೇಶಗಳಾದ ಹೆಬ್ಬಾಳ, ಕುಂಬಾರಕೊಪ್ಪಲು, ಮಂಚೇಗೌಡನಕೊಪ್ಪಲು, ಕೆಜಿ.ಕೊಪ್ಪಲು, ಮೇಟಗಳ್ಳಿ, ಲೋಕನಾಯಕನಗರ, ಬೃಂದಾವನ ಬಡಾವಣೆ, ಒಂಟಿಕೊಪ್ಪಲು, ಪಡುವಾರಹಳ್ಳಿ, ವಿನಾಯಕನಗರ, ಮಂಡಿಮೊಹಲ್ಲಾ, ಲಷ್ಕರ್‌ಮೊಹಲ್ಲಾ, ಶಾರದಾದೇವಿ ನಗರ, ಸರಸ್ವತಿಪುರಂ, ಬೋಗಾದಿ, ವಿಜಯನಗರ 1, 3ನೇ ಹಂತ, ಗೋಕುಲಂ 1, 2, 3ನೇ ಹಂತ ಹಾಗೂ ಹೊರವಲಯಗಳಾದ ಆರ್‌ಎಂಪಿ, ಬಿಇಎಂಎಲ್, ಯಾದವಗಿರಿ, ಬನ್ನಿಮಂಟಪ ಎಬಿಸಿ ಬಡಾವಣೆ, ಈರನಗೆರೆ, ಸಿದ್ಧಿಖಿನಗರ, ಶಿವರಾತ್ರೀಶ್ವರ ನಗರ, ತಿಲಕ್‌ನಗರ, ಬಡೇಮಕಾನ್, ಹಲೀಂನಗರ, ದೇವರಾಜ ಮೊಹಲ್ಲಾ ಭಾಗಶಃ, ಎನ್.ಆರ್.ಮೊಹಲ್ಲಾ ಭಾಗಶಃ ಪ್ರದೇಶಗಳು, ನಜರ್‌ಬಾದ್ ಮೊಹಲ್ಲಾ, ವಿದ್ಯಾರಣ್ಯಪುರಂ, ಕೃಷ್ಣಮೂರ್ತಿಪುರಂ, ಜನತಾ ನಗರ, ಕೆಎಚ್‌ಬಿ ಕಾಲೋನಿ, ಹೂಟಗಳ್ಳಿ, ವಿಜಯನಗರ 2ನೇ ಹಂತ ಹಾಗೂ ಇತ್ಯಾದಿ ಪ್ರದೇಶಗಳ ನೀರು ಸರಬರಾಜಿನಲ್ಲಿ ವ್ಯತ್ಯಯವುಂಟಾಗಲಿದೆ ಎಂದು ನೀರು ಸರಬರಾಜು ಮತ್ತು ಒಳಚರಂಡಿ ಪಶ್ಚಿಮ ವಿಭಾಗದ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಹ್ಯಾಕಾಶದ ಹತ್ತು ಹಲವು ಕೌತುಕ ಅನಾವರಣ

ಮೈಸೂರು ದಟ್ಟಗಳ್ಳಿಯ ನೈಪುಣ್ಯ ಶಾಲೆಯಲ್ಲಿ ಸ್ಪೇಸ್ ಲ್ಯಾಬ್ ಉದ್ಘಾಟನೆ



ಮೈಸೂರಿನ ಕನಕದಾಸನಗರದಲ್ಲಿರುವ (ದಟ್ಟಗಳ್ಳಿ) 'ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್' ಶಾಲೆಯಲ್ಲಿ ಸ್ಪೇಸ್ ಲ್ಯಾಬ್‌ನಲ್ಲಿರುವ ರಾಕೆಟ್‌ರಾನ್, ಸ್ಯಾಟಲೈಟ್ ಆರ್ಬಿಟಿಂಗ್ ಅರ್ಥ್, ಲ್ಯಾಂಡರ್, ರೋವರ್ ಮಾದರಿಗಳನ್ನು ಚಿತ್ರದಲ್ಲಿ ಕಾಣಬಹುದು.



ಸ್ಪೇಸ್ ಲ್ಯಾಬ್ ಉದ್ಘಾಟಿಸಿದ ಇಸ್ರೋ ಮಾಜಿ ಅಧ್ಯಕ್ಷ ಡಾ.ಎ.ಎಸ್.ಕಿರಣ್‌ಕುಮಾರ್, ಬಾಹ್ಯಾಕಾಶ ಮಾದರಿಗಳನ್ನು ವೀಕ್ಷಣೆ ಮಾಡಿದರು. ನೈಪುಣ್ಯ ವಿದ್ಯಾಸಂಸ್ಥೆ ಅಧ್ಯಕ್ಷ ಆರ್.ರಘು, ಕಾರ್ಯದರ್ಶಿ ಕೌಟಿಲ್ಯ, ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ಡಿ.3(ಪಿಎಂ)– ರಾಕೆಟ್‌ರಾನ್, ಪ್ಲಾನೆಟರಿ ರೋವರ್, ಅತ್ಯಾಧುನಿಕ ಟೆಲಿಸ್ಕೋಪ್, ಬಿನೋಕ್ಯೂಲರ್ಸ್ ಸೇರಿದಂತೆ ಬಾಹ್ಯಾಕಾಶದ ವಿಜ್ಞಾನ–ತಂತ್ರಜ್ಞಾನದ ಮಾದರಿಗಳನ್ನು ಒಳಗೊಂಡ 'ಸ್ಪೇಸ್ ಲ್ಯಾಬ್' ಮೈಸೂರಿನ ಕನಕದಾಸನಗರದಲ್ಲಿರುವ (ದಟ್ಟಗಳ್ಳಿ) 'ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್' ಶಾಲೆಯಲ್ಲಿ ಮಂಗಳವಾರ ಉದ್ಘಾಟನೆಗೊಂಡಿತು.

ಆ ಮೂಲಕ ಸ್ಪೇಸ್ ಲ್ಯಾಬ್ ಹೊಂದಿರುವ ಮೈಸೂರಿನ ಪ್ರಥಮ ಶಾಲೆ ಎಂಬ ಹೆಗ್ಗಳಿಕೆಗೂ ಈ ವಿದ್ಯಾಸಂಸ್ಥೆ ಭಾಜನವಾಯಿತು. ಇಲ್ಲಿ ನವರ್ಸ್ ಎಜುಟೆಕ್ ಕಂಪನಿಯು ಸಾಧನಗಳನ್ನು ಸಜ್ಜುಗೊಳಿಸಿದ್ದು, ಇಸ್ರೋ ಮಾಜಿ ಅಧ್ಯಕ್ಷ ಡಾ.ಎ.ಎಸ್.ಕಿರಣ್‌ಕುಮಾರ್ ಈ ನೂತನ ಸ್ಪೇಸ್ ಲ್ಯಾಬ್‌ನ ಉದ್ಘಾಟನೆ ನೆರವೇರಿಸಿದರು.

ಬಾಹ್ಯಾಕಾಶದ ಸಂಶೋಧನೆ, ಚಟುವಟಿಕೆಗಳನ್ನು ಶಾಲಾ ಹಂತದಲ್ಲಿಯೇ ಮಕ್ಕಳಿಗೆ ತಿಳಿಸಿಕೊಡುವ ಉದ್ದೇಶದಿಂದ ಈ ಲ್ಯಾಬ್ ಸಜ್ಜುಗೊಳಿಸಲಾಗಿದೆ. ಲ್ಯಾಂಡರ್, ರೋವರ್ ಮಾಡೆಲ್‌ಗಳು ಮಾತ್ರವಲ್ಲದೆ, ಭೂಮಿಯಿಂದ ಉಡಾವಣೆಗೊಂಡಿರುವ ಸ್ಯಾಟ್‌ಲೈಟ್ಸ್ ಮಾದರಿಗಳು ಇಲ್ಲಿ ಗಮನ ಸೆಳೆಯುತ್ತಿವೆ. ರಾಕೆಟ್‌ರಾನ್ ಮಾದರಿ ಇದ್ದು, ಇದು ವಿದ್ಯಾರ್ಥಿಗಳಿಗೆ ಸಮಗ್ರವಾಗಿ ರಾಕೆಟ್ ವಿಜ್ಞಾನ–ತಂತ್ರಜ್ಞಾನದ ಬಗ್ಗೆ ಮಾಹಿತಿ ಒದಗಿಸಲಿದೆ. ಜೊತೆಗೆ ಇಲ್ಲಿರುವ 'ಪ್ಲಾನೆಟರಿ ರೋವರ್' ಮಾದರಿಯು ರೋವರ್‌ನ ರೋಬೊಟಿಕ್ಸ್, ಇಂಜಿನಿಯರಿಂಗ್ ಮತ್ತು ಬಾಹ್ಯಾಕಾಶ ತಂತ್ರಜ್ಞಾನ ಅನಾವರಣಗೊಳಿಸಿದೆ. ರೋವರ್ ವಿನ್ಯಾಸದಲ್ಲಿ ಒಳಗೊಂಡಿರುವ ಎಲೆಕ್ಟ್ರಾನಿಕ್ಸ್ ತಂತ್ರಜ್ಞಾನ ಅರ್ಥ ಮಾಡಿಕೊಳ್ಳಲು ಇದು ಸಹಕಾರಿಯಾಗಿದೆ. 'ಪ್ಲಾನೆಟರಿ ಲ್ಯಾಂಡರ್' ಮಾದರಿ ಸಹ ಇಲ್ಲಿದ್ದು, ಇದು ಚಂದ್ರಯಾನ 3 ಲ್ಯಾಂಡರ್‌ನ ಬಗ್ಗೆ ಅರ್ಥ ಮಾಡಿಕೊಳ್ಳಲು ನೆರವಾಗುತ್ತದೆ. ಲ್ಯಾಂಡರ್ ಸಂಶೋಧನೆಯ ಸವಾಲುಗಳು ಹಾಗೂ ವಿನ್ಯಾಸ ತಂತ್ರಜ್ಞಾನಗಳನ್ನು ಈ ಮಾದರಿ ಮೂಲಕ ವಿದ್ಯಾರ್ಥಿಗಳು ಅರ್ಥ ಮಾಡಿಕೊಳ್ಳಬಹುದು. ಒಟ್ಟಾರೆ ವಿದ್ಯಾರ್ಥಿಗಳು ಲ್ಯಾಂಡರ್ ಕಾರ್ಯವಿಧಾನದ ಅಂಶಗಳನ್ನು ಇದರಿಂದ ತಿಳಿದುಕೊಳ್ಳಬಹುದು. ಆ ಮೂಲಕ ಬಾಹ್ಯಾಕಾಶ ಇಂಜಿನಿಯರಿಂಗ್ ಒಳನೋಟವನ್ನು ಇದು ಒದಗಿಸಲಿದೆ.

ಸ್ಪೇಸ್‌ನಲ್ಲಿ ಟೈಮ್ ತಿಳಿದುಕೊಳ್ಳುವ ಸಾಧನದ ಮಾದರಿಯೂ ಇಲ್ಲಿದೆ. ಇಲ್ಲಿನ ವಿದ್ಯಾರ್ಥಿಗಳೇ ಸಿದ್ಧಪಡಿಸಿದ ಹ್ಯಾಂಡ್ ಮೇಡ್ ಟೆಲಿಸ್ಕೋಪ್ ಮಾತ್ರವಲ್ಲದೆ, ಮೂರು ಲೆನ್ಸ್‌ಗಳನ್ನು ಒಳಗೊಂಡ ಅತ್ಯಾಧುನಿಕ ಟೆಲಿಸ್ಕೋಪ್ ಸಹ ಇಲ್ಲಿದೆ. 'ಸ್ಯಾಟಲೈಟ್ ಆರ್ಬಿಟಿಂಗ್ ಅರ್ಥ್' ಮಾದರಿ ಇದ್ದು, ಇದು ಉಪ ಗ್ರಹಗಳ ಕಾರ್ಯವಿಧಾನವನ್ನು ಪರಿಚಯಿಸುತ್ತದೆ. ಜೊತೆಗೆ ಇಲ್ಲಿರುವ 'ಸನ್–ಅರ್ಥ್–ಮೂನ್ ಓರೆರಿ' ಮಾದರಿಯು ಭೂಮಿ, ಚಂದ್ರ ಮತ್ತು ಸೂರ್ಯನ ನಡುವೆ ನಡೆಯುವ ಪ್ರಕ್ರಿಯೆಗಳನ್ನು ಅನಾವರಣಗೊಳಿಸುತ್ತದೆ. ಅಲ್ಲದೆ, ಹಗಲು, ರಾತ್ರಿ, ಋತುಗಳು ಮತ್ತು ಗ್ರಹಣಗಳನ್ನು ತಿಳಿಯುವ ವಿಧಾನಗಳನ್ನು ಅರ್ಥ ಮಾಡಿಕೊಳ್ಳಲು ಅನುವು ಮಾಡುತ್ತದೆ.

ಒಂದೊಂದು ಗ್ರಹದಲ್ಲಿ ಒಂದೊಂದು ಪ್ರಮಾಣದ ತೂಕ!: ಒಂದೊಂದು ಗ್ರಹದಲ್ಲಿ ನಮ್ಮ ತೂಕ ಒಂದೊಂದು ಪ್ರಮಾಣದಲ್ಲಿ ಇರಲಿದೆ. ಈ ಮಾಹಿತಿಯನ್ನು ಲ್ಯಾಬ್‌ನಲ್ಲಿ ಸಾಧನವೊಂದು ಅನಾವರಣಗೊಳಿಸುತ್ತಿದೆ. ಯಾವ್ಯಾವ ಗ್ರಹದಲ್ಲಿ ಒಬ್ಬ ಮನುಷ್ಯನ ತೂಕ ಎಷ್ಟು ಇರುತ್ತದೆ ಎಂಬ ಬಗ್ಗೆ ತಿಳಿಸುವ ಸಾಧನ ಇದಾಗಿದೆ. ಗುರುತ್ವಾಕರ್ಷಣೆ ಹಿನ್ನೆಲೆಯಲ್ಲಿ ತೂಕದಲ್ಲಿ ವ್ಯತ್ಯಾಸ ಕಂಡು ಬರಲಿದ್ದು, ಈ ಸಾಧನ ಯಾವ್ಯಾವ ಗ್ರಹಗಳಲ್ಲಿ ನಮ್ಮ ತೂಕ ಎಷ್ಟು ಇದೆ ಎಂಬುದನ್ನು ತೋರಿಸಲಿದೆ. ಇದರ ಮೇಲೆ ನಿಂತು ಗ್ರಹಗಳ ಹೆಸರಿನಲ್ಲಿ ನೀಡಿರುವ ಗುಂಡಿಗಳನ್ನು ಒತ್ತಿದರೆ ಆಯಾಯ ಗ್ರಹದಲ್ಲಿ ನಿಮ್ಮ ತೂಕ ಎಷ್ಟು ಇರುತ್ತದೆ ಎಂಬ ಮಾಹಿತಿ ಪ್ರದರ್ಶನಗೊಳ್ಳಲಿದೆ.

ಪ್ರತಿ ಮಗುವಿನಲ್ಲಿರುವ ವಿಜ್ಞಾನಿಗೆ ಉತ್ತೇಜನ ನೀಡಬೇಕು: ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಡಾ.ಎ.ಎಸ್.ಕಿರಣ್‌ಕುಮಾರ್, ಈ ಶಾಲೆಯಲ್ಲಿ ಶೈಕ್ಷಣಿಕ ಚಟುವಟಿಕೆ ಹಾಗೂ ಮಕ್ಕಳಲ್ಲಿ ಕಲಿಕೆಯ ಉತ್ಸಾಹ ಕಂಡು ಸಂತಸ ಉಂಟಾಗಿದೆ. ಎಲ್ಲಾ ಮಗುವಿನಲ್ಲೂ ಒಬ್ಬ ವಿಜ್ಞಾನಿ ಇರುತ್ತಾನೆ. ಆ ವಿಜ್ಞಾನಿ ಬೆಳೆಯುವುದಕ್ಕೆ ಅವಕಾಶ ನೀಡಬೇಕು. ಆ ಮೂಲಕ ದೊಡ್ಡದಾಗಿ ಬೆಳೆದು ಅಸಾಧಾರಣ ಸಾಧನೆ ಮಾಡಲು ಸಾಧ್ಯವಾಗುವಂತೆ ಮಾಡಬೇಕು ಎಂದು ಅಭಿಪ್ರಾಯಪಟ್ಟರು. ಇದೇ ವೇಳೆ ಶಾಲೆಯ ಹಲವು ಮಕ್ಕಳು ಸುನೀತಾ ವಿಲಿಯಮ್ಸ್, ಅಬ್ದುಲ್ ಕಲಾಂ, ಸಿ.ವಿ.ರಾಮನ್, ಐನ್‌ಸ್ಟಿನ್, ಕಲ್ಪನಾ ಚಾವ್ಲಾ ಮೊದಲಾದ ವಿಜ್ಞಾನಿಗಳ ವೇಷಧಾರಿಗಳಾಗಿ ಕಾಣಿಸಿಕೊಂಡು ತಮ್ಮ ವಿಜ್ಞಾನ ತಂತ್ರಜ್ಞಾನದಲ್ಲಿನ ಆಸಕ್ತಿ ಅನಾವರಣಗೊಳಿಸಿದರು. ಐಆರ್‌ಎಸ್ ಅಧಿಕಾರಿ ಶಿವಾನಂದ ಕಲ್ಕೇರಿ, ನೈಪುಣ್ಯ ವಿದ್ಯಾಸಂಸ್ಥೆ ಅಧ್ಯಕ್ಷ ಆರ್.ರಘು, ಕಾರ್ಯದರ್ಶಿ ಕೌಟಿಲ್ಯ, ನೈಪುಣ್ಯ ಆರ್‌ಟಿ ನಗರ ಶಾಲೆಯ ಪ್ರಾಂಶುಪಾಲರಾದ ಶಾಂತಿನಿ ಜೆರಾಲ್ಡ್, ನೈಪುಣ್ಯ ವಿದ್ಯಾಸಂಸ್ಥೆಯ ಪಿಆರ್‌ಓ ಭಾವನ ಶ್ರೀಕಾಂತ್ ಮತ್ತಿತರರು ಹಾಜರಿದ್ದರು.

2035ರ ವೇಳೆಗೆ ಭೂಮಿ ಸುತ್ತುವಂತಹ ಸ್ಪೇಸ್ ಸ್ಟೇಷನ್ ನಿರ್ಮಾಣ ಭಾರತದ ಗುರಿ

2040ರ ವೇಳೆಗೆ ಭಾರತೀಯರನ್ನು ಚಂದ್ರ ಗ್ರಹಕ್ಕೆ ಕರೆದೊಯ್ದು ವಾಪಸ್ಸು ಕರೆತರುವ ಯೋಜನೆ ಸಹ ಇದೆ; ಇಸ್ರೋ ಮಾಜಿ ಅಧ್ಯಕ್ಷ ಡಾ.ಎ.ಎಸ್.ಕಿರಣ್‌ಕುಮಾರ್ ಮಾಹಿತಿ

ಮೈಸೂರು,ಡಿ.3(ಪಿಎಂ)– ಮುಂಬರುವ 2035ರ ವೇಳೆಗೆ ಭೂಮಿ ಸುತ್ತ ಸುತ್ತುವಂತಹ ಸ್ಪೇಸ್ ಸ್ಟೇಷನ್ ನಿರ್ಮಾಣ ಮಾಡಬೇಕೆಂಬ ಗುರಿಯನ್ನು ಭಾರತ ಹೊಂದಿದ್ದು, ಜೊತೆಗೆ 2040ರ ವೇಳೆಗೆ ಭಾರತೀಯರನ್ನು ಚಂದ್ರ ಗ್ರಹಕ್ಕೆ ಕರೆದುಕೊಂಡು ಹೋಗಿ ವಾಪಸ್ಸು ಕರೆತರುವ ಯೋಜನೆ ಸಹ ಇದೆ ಎಂದು ಇಸ್ರೋ ಮಾಜಿ ಅಧ್ಯಕ್ಷ ಡಾ.ಎ.ಎಸ್.ಕಿರಣ್‌ಕುಮಾರ್ ಹೇಳಿದರು.

ದಟ್ಟಗಳ್ಳಿಯ ನೈಪುಣ್ಯ ಶಾಲೆಯಲ್ಲಿ ಸ್ಪೇಸ್ ಲ್ಯಾಬ್ ಉದ್ಘಾಟಿಸಿ ಸಭಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇದೆಲ್ಲಾ ಆಗಬೇಕಾದರೆ ಚಂದ್ರನ ಮೇಲೆ ಯಾವ ರೀತಿ ವಾತಾವರಣ ಇದೆ. ಮುಂದೆ ಮನುಷ್ಯನ ಕಳುಹಿಸಬಹುದೇ ಎಂಬುದನ್ನು ಪರಿಶೀಲಿಸಲು ಮೊದಲು ರೋಬೋಟ್ ಕಳುಹಿಸಿ, ಅದರ ಮೂಲಕ ಮಾಹಿತಿ ಸಂಗ್ರಹಿಸಬೇಕಿದೆ ಎಂದರು.

ಕಳೆದ ವರ್ಷ ನಮ್ಮ ಪ್ರಜ್ಞಾನ್ ರೋವರ್, ವಿಕ್ರಮ್ ಲ್ಯಾಂಡರ್ ಕಳುಹಿಸಲಾಗಿತ್ತು. ಅವುಗಳೂ ರೋಬೋಟಿಂಗ್ ತಂತ್ರಜ್ಞಾನ ಹೊಂದಿದ್ದವು. ಅಂದರೆ ನಾವು ರೋಬೋಟ್ ಕಳುಹಿಸುವಾಗ ಅದರಲ್ಲಿ ಒಂದು ಇಂಟೆಲಿಜನ್ಸ್ ಅಳವಡಿಸಬೇಕು. ಜೊತೆಗೆ ಸೆನ್ಸಾರ್ ಹಾಗೂ ಮೆಮೋರಿಯಲ್ಲಿ ಇನ್ಸ್‌ಟ್ರಕ್ಷರ್ ಸ್ಟೋರ್ ಮಾಡಲಾಗುತ್ತದೆ. ಅಂದರೆ ರೋಬೋಟ್‌ಗೆ ಐದು ವಿಷಯಗಳನ್ನು ಅಳವಡಿಸಲಾಗುತ್ತದೆ ಎಂದು ತಿಳಿಸಿದರು.

ಮನುಷ್ಯ ಪ್ರಕೃತಿಯಲ್ಲಿ ನೋಡಿದ್ದನ್ನೇ ತಾನು ನಿರ್ಮಾಣ ಮಾಡುತ್ತೇನೆ ಎಂಬುದಕ್ಕೆ ರೋಬೋಟಿಕ್ಸ್ ತಂತ್ರಜ್ಞಾನ ಸೂಕ್ತ ನಿದರ್ಶನ. ರೋಬೋಟ್ ಅಂದರೆ ಅದರಲ್ಲಿ ಕೆಲ ಮಾಹಿತಿ ತೆಗೆದುಕೊಳ್ಳಲು ಒಂದು ಅನುಕೂಲ ಕಲ್ಪಿಸಲಾಗುತ್ತದೆ. ಅದು ಸೆನ್ಸಾರ್ ಇರಬಹುದು. ಅದೇ ರೀತಿ ಯಾವುದೇ ಯಂತ್ರವಾದರೂ ಅದರಲ್ಲಿ ರೋಬೋಟಿಂಗ್ ತಂತ್ರಜ್ಞಾನ ಅಡಕವಾಗಿರುತ್ತದೆ. ಅಂದರೆ ರೋಬೋಟ್ ಸೆನ್ಸಾರ್‌ಗಳ ಮೂಲಕ ಮಾಹಿತಿ ತೆಗೆದುಕೊಂಡು ಕಂಟ್ರೋಲರ್ ಮೂಲಕ ಕೆಲಸ ಮಾಡಲು ಸೂಚನೆ ನೀಡುತ್ತದೆ ಎಂದರು. ರೋಬೋಟ್‌ನಲ್ಲಿ ಅಳವಡಿಸುವ ತಂತ್ರಜ್ಞಾನಗಳು ಮನುಷ್ಯನಲ್ಲಿ ನೈಜವಾಗಿಯೇ ಅಡಕವಾಗಿರುತ್ತವೆ. ನಮ್ಮಲ್ಲಿರುವ ಐದು ಜ್ಞಾನೇಂದ್ರಿಯಗಳು, ಐದು ಕರ್ಮೇಂದ್ರಿಯಗಳ ಮೂಲಕ ನಾವು ಪ್ರಪಂಚ ಅರಿಯುತ್ತೇವೆ. ಜ್ಞಾನೇಂದ್ರಿಯಗಳ ಮೂಲಕ ಅರಿಯುತ್ತೇವೆ, ಕೈ, ಕಾಲು ಸೇರಿದಂತೆ ಕರ್ಮೇಂದ್ರಿಯಗಳ ಮೂಲಕ ನಾವು ನಮ್ಮ ಕೆಲಸಗಳನ್ನು ಮಾಡುತ್ತೇವೆ. ಜೊತೆಗೆ ನಮ್ಮಲ್ಲಿ ಅಸಲಿ ಬುದ್ಧಿಮತ್ತೆ ಕೆಲಸ ಮಾಡುತ್ತಿದೆ. ಈ ಎಲ್ಲವೂ ರೋಬೋಟಿಕ್ ತಂತ್ರಜ್ಞಾನದಲ್ಲೂ ಕೃತಕವಾಗಿ ಇರುತ್ತದೆ ಎಂದು ವಿವರಿಸಿದರು.

ಒಂದನೇ ಪುಟದಿಂದ

ಮುಡಾ ವಶಕ್ಕೆ

ನಿರ್ಣಯವಾಗಿಲ್ಲ. ಆದಾಗ್ಯೂ, 48 ಮಂದಿಗೆ ವಿವಿಧ ಅಳತೆಯ ನಿವೇಶನಗಳನ್ನು ಅನಧಿಕೃತವಾಗಿ ಮಂಜೂರು ಮಾಡಲಾಗಿದ್ದು, ಸರ್ಕಾರದ ಆದೇಶದಂತೆ ಅವುಗಳನ್ನು ಇನ್ನೆರಡು ದಿನಗಳಲ್ಲಿ ಪ್ರಾಧಿಕಾರದ ವಶಕ್ಕೆ ಪಡೆಯುತ್ತೇವೆ. ಅಲ್ಲದೆ, ಕಾನೂನುಬಾಹಿರವಾದ ಈ ಪ್ರಕ್ರಿಯೆಗೆ ಕಾರಣಕರ್ತರಾದ ಅಧಿಕಾರಿಗಳ ವಿರುದ್ಧವೂ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದು ಅವರು ಹೇಳಿದ್ದಾರೆ. ರಾಜ್ಯ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್‌ನಲ್ಲಿ ರಿಟ್ ಅರ್ಜಿ ವಜಾ ಆಗಿದ್ದನ್ನು ಸಭೆಯ ಗಮನಕ್ಕೆ ತಾರದೆ, ಸದಸ್ಯರ ದಿಕ್ಕು ತಪ್ಪಿಸಿ ನಿವೇಶನ ಹಂಚಿಕೆ ಸಂಬಂಧ ಸರ್ಕಾರದ ಆದೇಶವನ್ನು ಕಾರ್ಯಾನುಷ್ಠಾನಕ್ಕೆ ತರಬೇಕು ಎಂದು ಹೇಳಿ, ನಿರ್ಣಯಿಸಲು ಕಾರಣರಾದ ಮುಡಾ ಹಿಂದಿನ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ವಿರುದ್ಧ ಕ್ರಮ ವಹಿಸಲು ಈ ಹಿಂದಿನ ಪ್ರಾಧಿಕಾರದ ಸಭೆಯಲ್ಲಿ ನಿರ್ಣಯಿಸಲಾಗಿತ್ತು.

ಸಭೆಯ ಕಾರ್ಯಸೂಚಿ ಹೊರಬರುತ್ತಿದ್ದಂತೆಯೇ ಪ್ರತಿಗಳಿಗೆ ಸಹಿ ಮಾಡಿ ಸರ್ಕಾರಕ್ಕೆ ಶಿಫಾರಸು ಮಾಡುತ್ತೇವೆ ಎಂದು ಲಕ್ಷ್ಮಿಕಾಂತರೆಡ್ಡಿ ತಿಳಿಸಿದ್ದಾರೆ.

ನೋಂದಣಾಧಿಕಾರಿಗೆ ಮುಡಾ ಆಯುಕ್ತರ ಮನವಿ

ಸೂಚಿಸುವಂತೆ ಪಾಲಿಕೆ ಆಯುಕ್ತರಿಗೆ ಹಾಗೂ ಯಾವುದೇ ಕ್ರಯಪತ್ರ/ದಸ್ತಾವೇಜು ನೋಂದಾಯಿಸಬಾರದು ಎಂದು ಸಂಬಂಧಪಟ್ಟ ಉಪನೋಂದಣಾಧಿಕಾರಿಗಳಿಗೆ ಸೂಚಿಸುವಂತೆ ಜಿಲ್ಲಾ ನೋಂದಣಾಧಿಕಾರಿಗಳಿಗೆ ಪ್ರತ್ಯೇಕ ಪತ್ರ ಬರೆದಿದ್ದಾರೆ. ಆ ಪತ್ರದಲ್ಲಿ ಸದರಿ ನಿವೇಶನಗಳ ಮಂಜೂರಾತಿದಾರರ ಮಾಹಿತಿಯನ್ನೂ ನಮೂದಿಸಲಾಗಿದೆ. ದಟ್ಟಗಳ್ಳಿ ಬಡಾವಣೆಯಲ್ಲಿ 48 ಮಂದಿಗೆ ನಿವೇಶನ ನೀಡಲು 2023ರ ಮಾರ್ಚ್ 21ರಂದು ಮುಡಾ ಸಭೆಯಲ್ಲಿ ಕೈಗೊಂಡಿದ್ದ ನಿರ್ಣಯವನ್ನು (ಸಭಾ ವಿಷಯ ಸಂಖ್ಯೆ 13(4)) ಸರ್ಕಾರ ನವೆಂಬರ್ 30ರಂದು ರದ್ದುಗೊಳಿಸಿದ್ದು, ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ.ಲತಾ ಆದೇಶ ಹೊರಡಿಸಿದ್ದಾರೆ.

ಡಿಕೆಶಿ ಹಣ ಅಕ್ರಮ ವರ್ಗಾವಣೆ; ವಿಚಾರಣೆ ಮುಂದೂಡಿದ ದೆಹಲಿ ಹೈಕೋರ್ಟ್

ನವದೆಹಲಿ, ಡಿ.3– ಹಣ ಅಕ್ರಮ ವರ್ಗಾವಣೆ ಪ್ರಕರಣ ಸಂಬಂಧ ಜಾರಿ ನಿರ್ದೇಶನಾಲಯ ನಡೆಸುತ್ತಿರುವ ತನಿಖೆ ಪ್ರಶ್ನಿಸಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ದೆಹಲಿ ಹೈಕೋರ್ಟ್ ಜ.23ಕ್ಕೆ ಮುಂದೂಡಿದೆ. ಈಗಾಗಲೇ ಪಟ್ಟಿ ಮಾಡಲಾದ ಪ್ರಕರಣಗಳು ಸಾಕಷ್ಟು ಇರುವುದರಿಂದ ಈ ಪ್ರಕರಣದ ವಿಚಾರಣೆಯನ್ನು ಇಂದು ನಡೆಸಲು ಸಾಧ್ಯವಿಲ್ಲ ಎಂಬ ಕಾರಣ ನೀಡಿ ನ್ಯಾಯಮೂರ್ತಿಗಳಾದ ಪ್ರತಿಭಾ ಎಂ.ಸಿಂಗ್ ಹಾಗೂ ಅಮಿತ್ ಶರ್ಮಾ ಒಳಗೊಂಡ ಪೀಠವು ವಿಚಾರಣೆ ಮುಂದೂಡಿದೆ. ಜಾರಿ ನಿರ್ದೇಶನಾಲಯವು 2020ರಲ್ಲಿ ಹೂಡಿರುವ ಪ್ರಕರಣಗಳನ್ನು ಹಾಗೂ ಸಮನ್ಸ್‌ಗಳನ್ನು ರದ್ದುಗೊಳಿಸಬೇಕು ಎಂದು ಕೋರಿ ಶಿವಕುಮಾರ್ ಅವರು 2020ರಲ್ಲಿ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದರು.

2 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಗುದ್ದಲಿ ಪೂಜೆ ನೆರವೇರಿಸಿದರು.

ನಂಜನಗೂಡು/ಮಲ್ಕುಂಡಿ, ಡಿ.3– ತಾಲೂಕಿನ ವಿವಿಧ ಗ್ರಾಮಗಳಲ್ಲಿ 2 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ಹೆಗ್ಗಡಹಳ್ಳಿ, ಶಿರಮಳ್ಳಿ, ಕುರಿಹುಂಡಿ, ಕಪ್ಪಸೋಗೆ, ನೆಲ್ಲಿತಾಳಪುರ, ರಾಜೂರು ಗ್ರಾಮಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ, ಸಮುದಾಯ ಭವನ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ತಾಲೂಕಿನ ಹೆಗ್ಗಡಹಳ್ಳಿ ಗ್ರಾಮದಲ್ಲಿ ಅವರು ಮಾತನಾಡಿದರು.

ವಿರೋಧ ಪಕ್ಷಗಳು ಗ್ಯಾರಂಟಿ ಯೋಜನೆಗಳಿಂದಾಗಿ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನದ ಕೊರತೆ ಉಂಟಾಗಿದೆ ಎಂದು ಟೀಕಿಸುತ್ತಿದ್ದರು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜನರಿಗೆ ನೀಡಿದ ವಾಗ್ದಾನದಂತೆ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಾರೆ. ಜೊತೆಗೆ ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ರಾಜ್ಯಾದ್ಯಂತ ಅಭಿವೃದ್ಧಿ ಕಾಮಗಾರಿಗಳಿಗೆ ಸಾಕಷ್ಟು ಅನುದಾನ ನೀಡಿದ್ದಾರೆ. ಈಗಾಗಲೇ ಅಭಿವೃದ್ಧಿ ಕಾಮಗಾರಿಗಳು ತಡೆ ಇಲ್ಲದಂತೆ ನಡೆಯುತ್ತಿದೆ. ನಂಜನಗೂಡು ಕ್ಷೇತ್ರಕ್ಕೂ 25 ಕೋಟಿ ವಿಶೇಷ ಅನುದಾನ ನೀಡಿದ್ದಾರೆ. ಅದರಲ್ಲಿ 20 ಕೋಟಿ ರೂ. ಗಳನ್ನು ಕ್ಷೇತ್ರದ ಗ್ರಾಮಾಂತರ ಪ್ರದೇಶಗಳಲ್ಲಿ ಸಿಸಿ ರಸ್ತೆ, ಚರಂಡಿ ಕಾಮಗಾರಿಗಳನ್ನು ನಿರ್ವಹಿಸಲು ಮೀಸಲಿರಿಸಲಾಗಿದೆ. ಅನುದಾನದಲ್ಲಿ ಈಗಾಗಲೇ ಕ್ಷೇತ್ರದಾದ್ಯಂತ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಅನುದಾನ ತಂದು ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ನಡೆಸಿ ಒಂದು ಮಾದರಿ ಕ್ಷೇತ್ರವನ್ನಾಗಿ ರೂಪಿಸಲಾಗುವುದು ಎಂದರು.

ಇಂದು ತಾಲೂಕಿನ ಹೆಗ್ಗಡಹಳ್ಳಿ ಗ್ರಾಮದಲ್ಲಿ 20 ಲಕ್ಷ ಶಿರಮಳ್ಳಿ ಗ್ರಾಮದಲ್ಲಿ 20 ಲಕ್ಷ ಕುರಿಹುಂಡಿ ಗ್ರಾಮ ದಲ್ಲಿ 50 ಲಕ್ಷ, ಕಪ್ಪಸೋಗೆ ಗ್ರಾಮದಲ್ಲಿ 50 ಲಕ್ಷ, ನಲ್ಲಿತಾಳಪುರ ಗ್ರಾಮದಲ್ಲಿ 20 ಲಕ್ಷ, ರಾಜೂರು ಗ್ರಾಮದಲ್ಲಿ 20 ಲಕ್ಷ, ಶಿರಮಳ್ಳಿ ಗ್ರಾಮದಲ್ಲಿ ಬಸವಭವನ, ಮಡಿವಾಳ ಸಮುದಾಯ ಭವನದ ಮುಂದುವರೆದ ಕಾಮಗಾರಿ, ಕುರಿಹುಂಡಿ, ಆಕಳ ಗ್ರಾಮದಲ್ಲಿ ವಿಶ್ವಕರ್ಮ ಸಮುದಾಯ ಭವನದ ಮುಂದುವರೆದ ಕಾಮಗಾರಿ ಸೇರಿದಂತೆ ಒಟ್ಟು 2 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದ್ದು, ಶೀಘ್ರ ಕಾಮಗಾರಿ ಮುಕ್ತಾಯಗೊಂಡು ಜನರಿಗೆ ಅನುಕೂಲವಾಗಲಿದೆ ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠನಾಯಕ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಮುಖಂಡರಾದ ನಾಗರಾಜಯ್ಯ, ಕುರಿಹುಂಡಿರಾಜು, ಹುಚ್ಚೇಗೌಡ, ಶಿವಪ್ಪದೇವರು, ಎಲ್.ಮಾದಪ್ಪ, ದೊರೆಸ್ವಾಮಿ ನಾಯಕ, ಹೆಗ್ಗಡಹಳ್ಳಿ ಪ್ರಕಾಶ್, ಆನಂದ್, ನಾಗರಾಜು, ಹಲ್ಲರೆ ಮಹದೇವು, ಪ್ರಭುಸ್ವಾಮಿ, ನಾರಾಯಣಸ್ವಾಮಿ, ಅಭಿನಂದನ್ ಪಟೇಲ್, ಹೆಗ್ಗನಹಳ್ಳಿ ಗ್ರಾಪಂ ಅಧ್ಯಕ್ಷ ಕಾಂತರಾಜು, ಸದಸ್ಯ ರಂಗಸ್ವಾಮಿ ಸೇರಿದಂತೆ ಇನ್ನಿತರರಿದ್ದರು.

ಕುಪ್ಯದಲ್ಲಿ ಮಕ್ಕಳ ಕವಿಗೋಷ್ಠಿ, ಪ್ರತಿಭಾ ಪುರಸ್ಕಾರ



ಕುಪ್ಯದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ತಿ.ನರಸೀಪುರ, ಡಿ.3– ಸರ್ಕಾರಿ ಪ್ರೌಢ ಶಾಲೆ ಕುಪ್ಯ, ಸಿರಿಗಂಧ ಸಾಹಿತ್ಯ ವೇದಿಕೆ ಹಾಗೂ ಕುಪ್ಯ ಗ್ರಾಮಸ್ಥರ ಸಹಯೋಗದಲ್ಲಿ ಮಕ್ಕಳ ಕವಿಗೋಷ್ಠಿ, ಎಸ್‌ಎಸ್‌ಎಲ್‌ಸಿ ಮತ್ತು ಕ್ರೀಡೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿತ್ತು

ಮೊದಲು ಬಾಲ ಕವಯಿತ್ರಿ, ಸಾಹಿತ್ಯ ಗೋಷ್ಠಿ ಅಧ್ಯಕ್ಷೆ ಕುಮಾರಿ ನಿಂಗಮಣಿ ಅವರನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ವೇದಿಕೆಗೆ ಕರೆತರಲಾಯಿತು. ಬಳಿಕ ಭುವನೇಶ್ವರಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಎಲ್ಲರಲ್ಲೂ ಬರೆಯುವ ಆಸಕ್ತಿ ಇರುತ್ತದೆ. ಪ್ರೋತ್ಸಾಹ ನೀಡಿದರೆ ಮಕ್ಕಳು ಚಿಕ್ಕಂದಿನಿಂದ ಪುಸ್ತಕಗಳನ್ನು ಓದುವ ಹಾಗೂ ಕಥೆ, ಕವನಗಳನ್ನು ಬರೆಯುವುದನ್ನು ರೂಢಿಸಿಕೊಳ್ಳುತ್ತಾರೆ. ಇಂಥಹ ಮಕ್ಕಳ ಕವಿಗೋಷ್ಠಿಗಳು ಹೆಚ್ಚು ನಡೆಯಬೇಕು. ಸಮಕಾಲೀನ ಕವಿಗಳು, ಬರಹಗಾರರ ಮಾರ್ಗದರ್ಶನ ಸಿಗಬೇಕು ಎಂದು ಅಭಿಪ್ರಾಯಪಟ್ಟರು.

30 ಬಾಲ ಕವಿ/ಕವಯಿತ್ರಿಯರು ತಮ್ಮ ಸ್ವರಚಿತ ಕವನಗಳನ್ನು ವಾಚಿಸಿದರು. ಅದರಲ್ಲಿ ಸಿರಿ, ಪವಿತ್ರ, ಲೇಖನ, ಬಿಂದು, ಸುಚಿತ್ರ, ಸುಮಾ, ಪ್ರೀತಮ್ ಅವರ ಕವಿತೆಗಳು ಎಲ್ಲರ ಮನ ಸೆಳೆದವು. ಇದೇ ವೇಳೆ 2023ರ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಅಂಕ ಗಳಿಸಿ ತೇರ್ಗಡೆಯಾದ ಸೌಜನ್ಯ, ಅಮಿತ್, ತನುಶ್ರೀ ಅವರನ್ನು ಸನ್ಮಾನಿಸಲಾಯಿತು. ರಾಜ್ಯ ಮಟ್ಟದ ಕ್ರೀಡಾಕೂಟಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಕ್ರೀಡಾಪಟುಗಳಾದ ಪ್ರೀತಮ್, ಮಾನಸ, ಪವಿತ್ರ, ಕಿಶೋರ್ ಹಾಗೂ ಸಾಂಸ್ಕೃತಿಕ ಪ್ರತಿಭೆ ಮೋಹನ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಉದಯೋನ್ಮುಖ ಕವಿಗಳಾದ ಮು.ನಾ.ರಮೇಶ್, ಮಂಜುಳ ಕಾವ್ಯ ಕಟ್ಟುವ ಕಲೆ, ಕನ್ನಡದ ಕವಿಗಳ ಬಗ್ಗೆ ಮಕ್ಕಳಿಗೆ ಮಾರ್ಗದರ್ಶನ ನೀಡಿದರು.

ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಮರಿಸ್ವಾಮಿ ಶುಭ ಹಾರೈಸಿದರು. ಮುಖ್ಯ ಶಿಕ್ಷಕರಾದ ಶಶಿಕಲಾ, ಮಮತಾಬಾಯಿ, ಗ್ರಾಪಂ ಅಧ್ಯಕ್ಷ ಗವಿಸಿದ್ದಯ್ಯ, ಎಸ್‌ಡಿಎಂಸಿ ಅಧ್ಯಕ್ಷ ಸಿದ್ದಮಾದು, ರಘು, ಮಹದೇವ, ಶಿವಣ್ಣ, ಭಾಗ್ಯಮ್ಮ, ಶಿಕ್ಷಕರಾದ ಶಂಕರ್, ವಿಜಯ್, ಸಬೀನಾ ಅಂಜುಂ, ರೂಪಾ, ಹೇಮಾ, ಮಮತಾ ಕುಮಾರಿ ಭಾಗವಹಿಸಿದ್ದರು. ಶಾಹೀನ್ ತಾಜ್ ನಿರೂಪಿಸಿದರು. ಲಕ್ಷ್ಮೀನಾರಾಯಣ ಸ್ವಾಗತಿಸಿ, ರವಿ ವಂದನಾರ್ಪಣೆ ಮಾಡಿದರು.

ಹಾಸನ ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ



ಸಭೆಯಲ್ಲಿ ಶಾಸಕ ದರ್ಶನ್ ಮಾತನಾಡಿದರು.

ನಂಜನಗೂಡು, ಡಿ.3– ಸಿಎಂ ಸಿದ್ದರಾಮಯ್ಯ ಅವರಿಗೆ ಶಕ್ತಿ ತುಂಬುವ ಸಲುವಾಗಿ ಡಿ.5ರಂದು ಹಾಸನದಲ್ಲಿ ನಡೆಯುವ ಸ್ವಾಭಿಮಾನಿ ಜನಾಂದೋಲನ ಸಮಾವೇಶದಲ್ಲಿ ಕ್ಷೇತ್ರದಿಂದ ಅತೀ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಶಾಸಕ ದರ್ಶನ್ ಮನವಿ ಮಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಜನಪರ ಕಾಳಜಿ ಉಳ್ಳವರಾಗಿದ್ದು, ರಾಜ್ಯವನ್ನು ಕಲ್ಯಾಣ ರಾಜ್ಯವನ್ನಾಗಿ ರೂಪಿಸುವ ಸಲುವಾಗಿ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಬಡವರ, ರೈತರ, ಹಿಂದುಳಿದ ವರ್ಗದವರ ಸಮುದಾಯಗಳಿಗೆ ಶಕ್ತಿ ತುಂಬಿದ್ದಾರೆ. ಅವರ ಜನಪ್ರಿಯತೆ ಸಹಿಸದ ಬಿಜೆಪಿ ನಿರಂತರವಾಗಿ ಅವರನ್ನು ಟಾರ್ಗೆಟ್ ಮಾಡಿ ಇಲ್ಲಸಲ್ಲದ ಆರೋಪಗಳನ್ನು ಮಾಡುವ ಮೂಲಕ ಸಮಸ್ಯೆಗಳನ್ನು ತಂದೊಡ್ಡುತ್ತಿದ್ದಾರೆ. ಹಿಂದುಳಿದ ಪರ ಕಾಳಜಿಯುಳ್ಳ ಮುಖ್ಯಮಂತ್ರಿಗಳನ್ನು ರಕ್ಷಣೆ ಮಾಡಿಕೊಂಡು ಅವರಿಗೆ ಶಕ್ತಿ ತುಂಬುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಆದ್ದರಿಂದ ಕ್ಷೇತ್ರದಿಂದ 10 ರಿಂದ 15 ಸಾವಿರ ಮಂದಿ ಸಮಾವೇಶದಲ್ಲಿ ಭಾಗವಹಿಸಿ ಮುಖ್ಯಮಂತ್ರಿಗಳ ಕೈ ಬಲಪಡಿಸಿ ಪಕ್ಷಕ್ಕೆ ಶಕ್ತಿ ತುಂಬಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ಕೇಶವಮೂರ್ತಿ ಮಾತನಾಡಿ, ಪ್ರತಿ ಗ್ರಾಪಂಗಳಿಗೆ ತಲಾ 3 ಬಸ್‌ಗಳನ್ನು ನಿಯೋಜಿಸಲಾಗಿದ್ದು, ಆಯಾ ಗ್ರಾಪಂ ಮುಖಂಡರು ಜವಾಬ್ದಾರಿ ವಹಿಸಿಕೊಂಡು ಹೆಚ್ಚಿನ ಜನರನ್ನು ಸಮಾವೇಶಕ್ಕೆ ಕರೆದುಕೊಂಡು ಬರುವ ಮೂಲಕ ಸಮಾವೇಶ ಯಶಸ್ವಿಗೊಳಿಸಬೇಕು ಎಂದರು.

ಇದೇ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ಶ್ರೀಕಂಠ ನಾಯಕ, ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ, ಜಿಪಂ ಮಾಜಿ ಸದಸ್ಯ ಕೆ. ಮಾರುತಿ, ಲತಾ, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್, ಕೆಪಿಸಿಸಿ ಸದಸ್ಯ ಅಕ್ಬರ್ ಅಲೀಮ್, ಮುಖಂಡರಾದ ಕುಳ್ಳಯ್ಯ, ಮಾದಪ್ಪ, ರಾಜೇಶ, ಶಿವಕುಮಾರ್, ವಿಜಯ ಕುಮಾರ್, ಶ್ರೀನಿವಾಸಮೂರ್ತಿ, ಸುರೇಶ, ಗ್ರಾಪಂ ಅಧ್ಯಕ್ಷ ಹರೀಶ, ಕಾರ್ಮಿಕ ಮುಖಂಡ ಗೋವಿಂದರಾಜು, ರವಿಪ್ರಕಾಶ್, ದೊರೆಸ್ವಾಮಿ ನಾಯಕ ಸೇರಿದಂತೆ ಹಲವರಿದ್ದರು.

ಹುಣಸೂರು ಅಲೆಮಾರಿ ಸಮುದಾಯಗಳ ಗ್ರಾಮಗಳಿಗೆ

ರಾಜ್ಯ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಭೇಟಿ

ಕುಂದುಕೊರತೆ ಆಲಿಕೆ: ಗ್ರಾಮಸ್ಥರಿಂದ ಮೂಲ ಸೌಕರ್ಯ ಕಲ್ಪಿಸಲು ಆಗ್ರಹ

ಹುಣಸೂರು, ಡಿ.3– ತಾಲೂಕಿನ ಪರಿಶಿಷ್ಟ ಜಾತಿ ಪಂಗಡಕ್ಕೆ ಸೇರಿದ ಅಲೆಮಾರಿ ಸಮುದಾಯಗಳು ವಾಸಿಸುವ ಗ್ರಾಮಗಳಿಗೆ ರಾಜ್ಯ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಭೇಟಿ ನೀಡಿ, ಕುಂದುಕೊರತೆ ಆಲಿಸಿದರು.

ತಾಲೂಕಿನ ಮರದೂರು ಗ್ರಾಪಂ ವ್ಯಾಪ್ತಿಯ ಕೆಬ್ಬೆಕೊಪ್ಪಲು ದೊಂಬರ ಕಾಲೋನಿ, ಗೋವಿಂದನಹಳ್ಳಿ ಗ್ರಾಪಂ ವ್ಯಾಪ್ತಿಯ ಅಂಬೇಡ್ಕರ್ ನಗರ, ಅರಸು ಕಲ್ಲಹಳ್ಳಿ ಗ್ರಾಪಂ ವ್ಯಾಪ್ತಿಯ ಮಂಗಳೂರು ಮಾಳ ಗ್ರಾಮಗಳಿಗೆ ಭೇಟಿ ನೀಡಿ ಕುಂದುಕೊರತೆ ಆಲಿಸಿದರು. ಈ ವೇಳೆ ಅಲ್ಲಿನ ನಿವಾಸಿಗಳು ಮೂಲ ಸೌಕರ್ಯ ಕಲ್ಪಿಸುವಂತೆ ಮನವಿ ಮಾಡಿದರು.

ಕೆಬ್ಬೆಕೊಪ್ಪಲು ಗ್ರಾಮದ ಶಿವರಾಜು ಮಾತನಾಡಿ, ನಮ್ಮ ಗ್ರಾಮದಲ್ಲಿ 25 ಅಲೆಮಾರಿ ಕುಟುಂಬಗಳು ಗುಡಿಸಲಿನಲ್ಲಿ ವಾಸಿಸುತ್ತಿದ್ದು, ದಸಂಸ ಸಂಘಟನೆ ಹೋರಾಟದ ಫಲವಾಗಿ ಆಶ್ರಯ ಯೋಜನೆಯಡಿ ಹಕ್ಕು ಪತ್ರ ಕೊಡಲಾಗಿದೆ. ಆದರೆ ಮನೆ ಮಂಜೂರು ಮಾಡಿಕೊಟ್ಟಿಲ್ಲ. ಹೀಗಾಗಿ 5 ಲಕ್ಷ ರೂ. ಮಂಜೂರು ಮಾಡಿಕೊಡಬೇಕು. ರಸ್ತೆ, ಚರಂಡಿ, ಬೀದಿ ದೀಪ, ಕುಡಿಯುವ ನೀರು, ಸಮುದಾಯ ಭವನ, ಅಂಗನವಾಡಿ ಕೇಂದ್ರ, ಸ್ಮಶಾನ ಇನ್ನಿತರ ಮೂಲ ಸೌಲಭ್ಯ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಅಂಬೇಡ್ಕರ್ ನಗರದ ಶೇಖರ್ ಹರೀಶ್, ಗ್ರಾಮದಲ್ಲಿ 33 ದೊಂಬರ ಕುಟುಂಬಗಳು ವಾಸಿಸುತ್ತಿದ್ದು, ನಮಗೆ ವಾಸಿಸಲು ಮನೆ ಸೇರಿದಂತೆ ಮೂಲ ಸೌಲಭ್ಯ ಕಲ್ಪಿಸಬೇಕು. ಅಲ್ಲದೇ ಹಂದಿ ಸಾಕಾಣಿಕೆಗಾಗಿ 1 ಎಕರೆ ಭೂಮಿ ಮಂಜೂರು ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಮಂಗಳೂರು ಮಾಳ ಸೇರಿದಂತೆ ಎಲ್ಲಾ ಗ್ರಾಮಗಳಿಗೆ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಭೇಟಿ ನೀಡಿದ ವೇಳೆ ಅಲ್ಲಿನ ಗ್ರಾಮಸ್ಥರು ಮೂಲ ಸೌಕರ್ಯ ಕಲ್ಪಿಸುವಂತೆ ಮನವಿ ಮಾಡಿಕೊಂಡರು.



ರಾಜ್ಯ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಅಲೆಮಾರಿ ಜನಾಂಗದ ಕುಂದುಕೊರತೆ ಆಲಿಸಿದರು.

ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಮನವಿ ಸ್ವೀಕರಿಸಿ ಮಾತನಾಡಿ, ಅಲೆಮಾರಿ ಸಮುದಾಯಗಳ ಕುಂದುಕೊರತೆ ಆಲಿಸಿದ್ದೇನೆ. ಮುಂಬರುವ ದಿನಗಳಲ್ಲಿ ಈ ಗ್ರಾಮಗಳ ನಿವಾಸಿಗಳಿಗೆ ಮನೆ, ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ ಮುಂತಾದ ಮೂಲ ಸೌಕರ್ಯಗಳನ್ನು ಆದ್ಯತೆ ಮೇರೆಗೆ ಹಂತ ಹಂತವಾಗಿ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ನಿಗಮದ ಅಧಿಕಾರಿ ಪಿ.ಆನಂದ ಕುಮಾರ್, ದಸಂಸ ಮುಖಂಡ ನಿಂಗರಾಜ್ ಮಲ್ಲಾಡಿ, ಮುಖಂಡರಾದ ಶಿವಾನಂದ ಎಂ.ಭಜಂತ್ರಿ, ರವಿಕುಮಾರ್, ಎಂ.ಎ.ರಂಗಸ್ವಾಮಿ, ಸಮಿತಿ ಸದಸ್ಯರಾದ ರವಿಕುಮಾರ್, ಮೋಹನ್ ನಾಯಕ್, ತಹಸೀಲ್ದಾರ್ ಮಂಜುನಾಥ್, ಇಓ ಹೊಂಬಯ್ಯ, ಸಹಾಯಕ ಸಮಾಜ ಕಲ್ಯಾಣಾಧಿಕಾರಿ ಅಶೋಕ, ಗಿರಿಜನ ಸಮನ್ವಯಾಧಿಕಾರಿ ಗಂಗಾಧರ, ನಗರಸಭಾಯುಕ್ತೆ ಮಾನಸ, ಗೋವಿಂದನಹಳ್ಳಿ ಪಿಡಿಓ ರಾಜ್‌ಕುಮಾರ್, ಮರದೂರು ಪಿಡಿಓ ಧರ್ಮೇಂದ್ರ, ಅರಸು ಕಲ್ಲಹಳ್ಳಿ ಪಿ.ಡಿ.ಓ ಶೇಖರ ಸೇರಿದಂತೆ ಇನ್ನಿತರರಿದ್ದರು.

ಹಾಸನ ಸಮಾವೇಶಕ್ಕೆ ತಾಲೂಕಿನ 20 ಸಾವಿರ ಮಂದಿ ಭಾಗಿ

ಕಾರ್ಯಕರ್ತರ ಸಭೆಯಲ್ಲಿ ಶಾಸಕ ಡಿ.ರವಿಶಂಕರ್



ಕಾರ್ಯಕರ್ತರ ಸಭೆಯಲ್ಲಿ ಶಾಸಕ ಡಿ. ರವಿಶಂಕರ್ ಮಾತನಾಡಿದರು.

ಕೆ.ಆರ್.ನಗರ, ಡಿ.3– ಹಾಸನದಲ್ಲಿ ಡಿ.5ರಂದು ನಡೆಯುವ ಕಾಂಗ್ರೆಸ್ ಪಕ್ಷ ಹಾಗೂ ಸ್ವಾಭಿಮಾನಿಗಳ ಒಕ್ಕೂಟದ ಆಶ್ರಯದಲ್ಲಿ ನಡೆಯುವ ಜನ ಕಲ್ಯಾಣ ಸಮಾವೇಶದಲ್ಲಿ ಕ್ಷೇತ್ರದ 20 ಸಾವಿರಕ್ಕೂ ಅಧಿಕ ಕಾರ್ಯಕರ್ತರು ಮತ್ತು ಸಿದ್ದರಾಮಯ್ಯ ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಸಮಾವೇಶದಲ್ಲಿ ಪಾಲ್ಗೊಳ್ಳುವವರಿಗೆ ವಾಹನದ ವ್ಯವಸ್ಥೆ ಮಾಡಲಾಗಿದ್ದು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮತ್ತು ಪಕ್ಷದ ಪ್ರಮುಖರೊಡನೆ ಸಂಪರ್ಕ ಸಾಧಿಸಿ ನೀವು ಬರುವುದರೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಕರೆತರಬೇಕು ಎಂದು ತಿಳಿಸಿದರು. ಕೆಪಿಸಿಸಿ ಸದಸ್ಯ ದೊಡ್ಡಸ್ವಾಮೇಗೌಡ ಮಾತನಾಡಿದರು.

ಸಭೆಯಲ್ಲಿ ಕೆಆರ್.ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ವಕ್ತಾರ ಸೈಯದ್ ಜಾಬೀರ್, ಮಹಿಳಾಧ್ಯಕ್ಷರಾದ ರಾಣಿ, ಲತಾ, ಜಿಪಂ ಮಾಜಿ ಸದಸ್ಯರಾದ ಜಿ.ಆರ್.ರಾಮೇಗೌಡ, ಜಯರಾಮೇಗೌಡ, ನಾಗರತ್ನ, ತಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಹೆಚ್.ಟಿ.ಮಂಜುನಾಥ್, ಕೆ.ಪಿ.ಯೋಗೇಶ್, ಮಾಜಿ ಸದಸ್ಯ ಜಿ.ಎಸ್. ಮಂಜುನಾಥ್, ಎಪಿಎಂಸಿ ಮಾಜಿ ಅಧ್ಯಕ್ಷ ನಟರಾಜು, ಸಿದ್ದಾಪುರ ಗ್ರಾಪಂ ಅಧ್ಯಕ್ಷ ರಂಗಸ್ವಾಮಿ, ದೊಡ್ಡಕೊಪ್ಪಲು ಗ್ರಾಪಂ ಅಧ್ಯಕ್ಷೆ ರಾಜೇಶ್ವರಿ, ಸದಸ್ಯ ಕೆ.ಪಿ.ಜಗದೀಶ್, ಅಡಗೂರು ಗ್ರಾಪಂ ಅಧ್ಯಕ್ಷ ಮಹದೇವ್, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಎಸ್. ಸಿದ್ದೇಗೌಡ, ಪುರಸಭೆ ಮಾಜಿ ಅಧ್ಯಕ್ಷ ನರಸಿಂಹರಾಜು, ಕಾಂಗ್ರೆಸ್ ಮುಖಂಡರಾದ ಗುಣಪಾಲ್‌ಜೈನ್, ತಿಮ್ಮಶೆಟ್ಟಿ, ರಾಜಯ್ಯ, ಬಲರಾಮೇಗೌಡ ಇತರರು ಹಾಜರಿದ್ದರು.

ಶಾಸಕ ಜಿ.ಟಿ.ದೇವೇಗೌಡರಿಗೆ ಸನ್ಮಾನ



ಮೈಸೂರು ತಾಲೂಕಿನ ಡಿಎಂಜಿ ಹಳ್ಳಿ ಗ್ರಾಪಂ ನೂತನ ಅಧ್ಯಕ್ಷೆ ವನಿತಾ ಮಂಜು ಹಾಗೂ ಉಪಾಧ್ಯಕ್ಷೆ ಮಂಗಳಮ್ಮ ಚಾಮಯ್ಯ ಅವರು ಶಾಸಕ ಜಿ.ಟಿ.ದೇವೇಗೌಡರನ್ನು ಸನ್ಮಾನಿಸಿದರು. ಇದೇ ವೇಳೆ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಶಾಸಕ ಜಿ.ಟಿ.ದೇವೇಗೌಡರು, ಎಪಿಎಂಸಿ ಮಾಜಿ ನಿರ್ದೇಶಕ ಕೋಟೆಹುಂಡಿ ಮಹದೇವು, ಬಸವೇಗೌಡ ಮತ್ತು ಗ್ರಾಪಂ ಸದಸ್ಯರು ಅಭಿನಂದಿಸಿದರು.

ಡಿ.17, ತಿ.ನರಸೀಪುರ ಬೀದಿಬದಿ ವ್ಯಾಪಾರಿಗಳ ಅನಿರ್ದಿಷ್ಟಾವಧಿ ಪ್ರತಿಭಟನೆ

ತಿ.ನರಸೀಪುರ, ಡಿ.3– ಬೀದಿಬದಿ ವ್ಯಾಪಾರಸ್ಥರಿಗೆ ಬದುಕಲು ವ್ಯಾಪಾರಕ್ಕೆ ಸ್ಥಳ ಕೊಡಿ ಇಲ್ಲವೇ ಸಾಯಲು ವಿಷ ಕೊಡಿ ಎಂಬ ಧ್ಯೇಯದೊಂದಿಗೆ ಪುರಸಭೆ ಎದುರು ಡಿ.17ರಿಂದ ಅನಿರ್ದಿಷ್ಟಾವಧಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಆಲಗೂಡು ಡಾ.ಎಸ್.ಚಂದ್ರಶೇಖರ್ ಪುರಸಭೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಟ್ಟಣದಲ್ಲಿ ಬೀದಿ ಬದಿ ವ್ಯಾಪಾರಸ್ಥರು ರಸ್ತೆ ಅತಿಕ್ರಮಣ ಮಾಡಿ ತಮಗಿಷ್ಟ ಬಂದ ಜಾಗದಲ್ಲಿ ವ್ಯಾಪಾರದಲ್ಲಿ ತೊಡಗಿಕೊಂಡಿದ್ದ ಹಿನ್ನೆಲೆಯಲ್ಲಿ ಪಾದಚಾರಿಗಳು ಓಡಾಡಲು ತೊಂದರೆಯಾಗಿದ್ದರಿಂದ ಪೊಲೀಸರು ಮತ್ತು ಪುರಸಭೆ ಅಧಿಕಾರಿಗಳು ನಾಗರಿಕರ ಹಿತದೃಷ್ಟಿಯಿಂದ ಬೀದಿ ಬದಿ ವ್ಯಾಪಾರಸ್ಥರನ್ನು ತೆರವುಗೊಳಿಸಿದ್ದರು. ಇದನ್ನು ದಲಿತ ಸಂಘರ್ಷ ಸಮಿತಿ ಅಭಿನಂದಿಸುತ್ತದೆ. ಆದರೆ ಒತ್ತುವರಿ ಜಾಗ ತೆರವುಗೊಳಿಸಿ 2 ತಿಂಗಳು ಕಳೆದರೂ ಶೋಷಿತ ಬಡವರ್ಗದ ಬೀದಿ ಬದಿ ವ್ಯಾಪಾರಿಗಳಿಗೆ ಪರ್ಯಾಯ ಸ್ಥಳ ನೀಡಲು ಪುರಸಭೆ ಆಡಳಿತ ವರ್ಗದ ಬೇಜವಾಬ್ದಾರಿಯನ್ನು ಸಮಿತಿ ಖಂಡಿಸುತ್ತದೆ ಎಂದರು.



ಸುದ್ದಿಗೋಷ್ಠಿಯಲ್ಲಿ ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಡಾ.ಚಂದ್ರಶೇಖರ್ ಮಾತನಾಡಿದರು.

ಬೀದಿ ಬದಿ ವ್ಯಾಪಾರವನ್ನೇ ಆಶ್ರಯಿಸಿ ಸ್ವಾವಲಂಬಿಗಳಾಗಿ ಪುರಸಭೆಗೆ ತೆರಿಗೆ ಪಾವತಿಸಿ ಜೀವನ ಸಾಗಿಸುತ್ತಿದ್ದ ಕುಟುಂಬಗಳು ಸಂಕಷ್ಟ ಎದುರಿಸುವಂತಾಗಿದೆ. ಅಲ್ಲದೇ ಬ್ಯಾಂಕ್, ಫೈನಾನ್ಸ್ ಹಾಗೂ ಕೈ ಸಾಲ ಪಡೆದವರ ಸಾಲ ತೀರಿಸಲು ದಿಕ್ಕು ತೋಚದೆ ಪರಿತಪಿಸುವ ಸ್ಥಿತಿ ನಿರ್ಮಾಣವಾಗಿದೆ. ಕುಟುಂಬ ನಿರ್ವಹಣೆ ಸಹ ಕಷ್ಟಕರವಾಗಿದ್ದು, ವ್ಯಾಪಾರಸ್ಥರ ಕುಟುಂಬಗಳು ಬೀದಿ ಪಾಲಾಗಿ ಭಿಕ್ಷೆ ಬೇಡುವ ಕಾಲ ಸನ್ನಿಹಿತವಾಗಿದೆ. ಅಕಸ್ಮಾತ್ ಸಾಲದ ಒತ್ತಡಕ್ಕೆ ಮನನೊಂದು ಸಾವು ನೋವು ಸಂಭವಿಸಿದರೆ ಇದಕ್ಕೆ ಯಾರು ಹೊಣೆ ಎಂಬ ಪ್ರಶ್ನೆ ಎದುರಾಗಿದೆ. ಬಡವರ ಹಸಿವು, ನೋವು, ಕಷ್ಟ ಅರ್ಥೈಸಿಕೊಂಡು ಕಾಲ ವಿಳಂಬ ಮಾಡದೇ ಬಡವ–ಶ್ರೀಮಂತ ಎಂಬ ತಾರತಮ್ಯ ಮಾಡದೇ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಮುಂದಿನ 15 ದಿನದೊಳಗೆ ಬೀದಿ ಬದಿ ವ್ಯಾಪಾರಕ್ಕೆ ಹಳೇ ಮಾರ್ಕೆಟ್ ಬಿಲ್ಡಿಂಗ್ ನೆಲ ಸಮಗೊಳಿಸಿ ಪರ್ಯಾಯ ವ್ಯವಸ್ಥೆ ಮಾಡಬೇಕು. ಇಲ್ಲದಿದ್ದಲ್ಲಿ ಡಿ.17 ರಿಂದ ಅನಿರ್ದಿಷ್ಟಾವಧಿ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿ ತಾಲೂಕು ಸಂಚಾಲಕ ಶ್ರೀರಾಂಪುರ ಗಿರೀಶ್, ತಾಲೂಕು ಸಂಚಾಲಕ ನಿಲಸೋಗೆ ಕುಮಾರ್, ಜಿಲ್ಲಾ ವಿಭಾಗೀಯ ಸಂಚಾಲಕ ಕನ್ನಾಯಕನಹಳ್ಳಿ ಮರಿಸ್ವಾಮಿ, ತೊಟ್ಟವಾಡಿ ರಾಜಪ್ಪ, ಸೋಮನಾಥಪುರ ಗೋವಿಂದರಾಜು, ಸೋಸಲೆ ಶಿವಕುಮಾರ್, ಕುಪ್ಯ ಗವಿಸಿದ್ದಯ್ಯ, ಭೈರಾಪುರ ಅರ್ಜುನ್, ಕೊಳತ್ತೂರು ಪ್ರಭಾಕರ್, ವಿನಯ್, ನೆರಗ್ಯಾತನಹಳ್ಳಿ ಮನೋಜ್, ಚೌಹಳ್ಳಿ ಪರಶುರಾಮ್, ಕರೋಹಟ್ಟಿ ರಜನೀಶ್ ಹಾಜರಿದ್ದರು.

ಮಹಿಳಾ ಸಮಾನತೆ, ಮೀಸಲಾತಿಗಾಗಿ ಸಂವಿಧಾನ ತಿದ್ದುಪಡಿ

ಸಂವಿಧಾನ ಸನ್ಮಾನ ಅಭಿಯಾನ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎನ್.ಮಹೇಶ್



ಸಂವಿಧಾನ ಸನ್ಮಾನ ಅಭಿಯಾನವನ್ನು ಮಾಜಿ ಸಚಿವ ಎನ್.ಮಹೇಶ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಡಿ.3– ಸಂವಿಧಾನ ತಿದ್ದುಪಡಿ ಮಾಡಿರುವುದು ಮೀಸಲಾತಿ ಉಳಿಸಲು, ಮಹಿಳೆಯರಿಗೆ ಸಮಾನತೆ ಕೊಡಲು, ಕೆಳ ಜಾತಿಯವರಿಗೆ ಸಮಾನತೆ ನೀಡುವ ಉದ್ದೇಶದಿಂದಲೇ ಹೊರತು ಸ್ವ ಇಚ್ಛೆಗಾಗಿ ಅಲ್ಲ ಎಂದು ಮಾಜಿ ಸಚಿವ ಎನ್.ಮಹೇಶ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸಂವಿಧಾನ ದಿನ ಅಂಗವಾಗಿ ಕೋಟೆ, ಸರಗೂರು ತಾಲೂಕು ಬಿಜೆಪಿ ಮಂಡಲದ ವತಿಯಿಂದ ಆಯೋಜಿಸಿದ್ದ ಸಂವಿಧಾನ ಸನ್ಮಾನ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ, ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಭಾರತ ಮಾತೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಬಿಜೆಪಿ ಸರ್ಕಾರ ಸಹ ಕೆಲವು ತಿದ್ದುಪಡಿ ಮಾಡಿದ್ದು, ಇದೂ ಸಹ ಮೀಸಲಾತಿ ಉಳಿಸಲು, ಮಹಿಳೆಯರ ಸಮಾನತೆಗಾಗಿಯೇ ಆಗಿದೆ ಎಂದರು.

ಸಂವಿಧಾನ ಬದಲಿಸುತ್ತೇನೆ ಎಂದು ಹೇಳಿದ ಮಾಜಿ ಸಂಸದ ಅನಂತಕುಮಾರ್ ಅವರಿಗೆ ಬಿಜೆಪಿ ಟಿಕೆಟ್ ನೀಡಲಿಲ್ಲ. ಬಿಜೆಪಿ ಸಂವಿಧಾನ ಬದಲಿಸಲು ಮನಸ್ಸು ಮಾಡಿದ್ದಲ್ಲಿ ಅವರಿಗೆ ಟಿಕೆಟ್ ನೀಡುತ್ತಿತ್ತು. ಅದಾಗಲಿಲ್ಲ, ಬಿಜೆಪಿ ಯಾವಾಗಲು ಸಂವಿಧಾನ ರಕ್ಷಣಾ ಪಕ್ಷವಾಗಿದೆ ಎಂದರು.

ಸಂವಿಧಾನ ಸನ್ಮಾನ ಅಭಿಯಾನದ ಸಂಯೋಜಕಿ ಪ್ರಫುಲ್ಲಾ ಮಲ್ಲಾಡಿ ಮಾತನಾಡಿ, ಭಾರತೀಯ ವಯಸ್ಕ ಮತದಾನದ ಹಕ್ಕನ್ನು ಕೊಡಿ ಎಂದು ಅಂಬೇಡ್ಕರ್ ಅವರು 1906ರಲ್ಲಿ ಸೈಮನ್ ಆಯೋಗಕ್ಕೆ ಮನವಿ ಸಲ್ಲಿಸಿದ್ದರು. ಅಂಬೇಡ್ಕರ್ ಸಲ್ಲಿಸಿದ ಮನವಿಯನ್ನು ಅಂದು ತಿರಸ್ಕರಿಸಲಾಗಿತ್ತು. ನಂತರದ ದಿನಗಳಲ್ಲಿ ಈ ಕಾನೂನು ಜಾರಿಗೆ ಬಂತು ಎಂದು ತಿಳಿಸಿದರು.

ಭಾರತ ಸಂವಿಧಾನ ಒಪ್ಪಿಕೊಂಡ 16 ತಿಂಗಳಲ್ಲೇ ಜವಹರಲಾಲ್ ನೆಹರೂ ಅವರು ತಿದ್ದುಪಡಿ ಮಾಡಿದರು. ನಂತರದ ದಿನಗಳಲ್ಲಿ ಇಂದಿರಾ ಗಾಂಧಿಯವರೂ ಸಹ ತಿದ್ದುಪಡಿ ಮಾಡಿದ್ದಾರೆ. ಆದರೆ ಈಗ ಬಿಜೆಪಿ ತಿದ್ದುಪಡಿ ಮಾಡುತ್ತದೆ. ಬದಲಿಸುತ್ತದೆ ಎಂದು ಕಾಂಗ್ರೆಸ್ ದೂರುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಮಹದೇವಯ್ಯ, ಕೋಟೆ, ಸರಗೂರು ತಾಲೂಕು ಬಿಜೆಪಿ ಅಧ್ಯಕ್ಷರಾದ ಶಂಭೇಗೌಡ, ಗುರುಸ್ವಾಮಿ, ಸರಗೂರು ಪಪಂ ಅಧ್ಯಕ್ಷೆ ರಾಧಿಕಾ, ಜಿಪಂ ಮಾಜಿ ಸದಸ್ಯರಾದ ವೆಂಕಟಸ್ವಾಮಿ, ಹೆಚ್.ಸಿ. ಲಕ್ಷ್ಮಣ್, ಜೆಡಿಎಸ್ ಅಧ್ಯಕ್ಷ ಗೋಪಾಲಸ್ವಾಮಿ, ಗಿರೀಶ್, ರಾಜು, ಬಸವರಾಜಪ್ಪ, ರುದ್ರಪ್ಪ, ಶಿವರಾಜಪ್ಪ, ನಾಗರಾಜು, ಶಿವಕುಮಾರ್, ಅನಿಲ್ ಕುಮಾರ್, ಸೋಮೇಶ್, ಮಹದೇವಮ್ಮ, ಸಿ.ಕೆ.ಮಹದೇವು, ಮಹೇಶ, ಗೋವಿಂದರಾಜು, ಭಾನುಪ್ರಕಾಶ್, ಗೋಪಾಲಯ್ಯ, ಸ್ವಾಮಿ, ರವೀಂದ್ರ, ಸಿದ್ದಯ್ಯ, ಚೆಲುವಯ್ಯ, ದಿನೇಶ, ನಂದೀಶ್, ನಂದೀಶ್ ಇನ್ನಿತರರಿದ್ದರು.

ಸಾಲಿಗ್ರಾಮ ಪಿಎಸಿಎಸ್‌ಗೆ ಸತೀಶ್ ಅಧ್ಯಕ್ಷ



ಸಾಲಿಗ್ರಾಮ ಪಿಎಸಿಎಸ್ ಅಧ್ಯಕ್ಷ ಸತೀಶ್ ಅವರನ್ನು ಮುಖಂಡರು ಸನ್ಮಾನಿಸಿದರು.

ಸಾಲಿಗ್ರಾಮ, ಡಿ.3– ಇಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸತೀಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷ ಕರುಣ್ ಕುಮಾರ್ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸತೀಶ್ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಸಹಕಾರ ಇಲಾಖೆ ಅಧಿಕಾರಿ ಗಿರೀಶ್ ಘೋಷಿಸಿದರು.

ಚುನಾವಣಾ ಪ್ರಕ್ರಿಯೆಯಲ್ಲಿ ನಿರ್ದೇಶಕರಾದ ಎಸ್.ಬಿ.ಅಶೋಕ್, ಕರುಣ್ ಕುಮಾರ್, ಪಾಪಣ್ಣ, ಸತೀಶ್, ಮಹೇಶ್, ಅನಂತ, ಅಶ್ವಿನಿ, ಚಂದ್ರನಾಯಕ, ಜಯರಾಮು, ರುಕ್ಮಿಣಿಯಮ್ಮ, ಸಣ್ಣದೇವಮ್ಮ, ಸಿಇಓ ಸುರೇಶ, ಸಿಬ್ಬಂದಿಗಳಾದ ಮಧು, ಶಶಿಕುಮಾರ್ ಭಾಗವಹಿಸಿದ್ದರು.

ನೂತನ ಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಜಿಪಂ ಮಾಜಿ ಸದಸ್ಯ ಸಾ.ರಾ.ನಂದೀಶ್, ನೂತನ ಅಧ್ಯಕ್ಷರು ಸಂಘದಿಂದ ರೈತರಿಗೆ ದೊರೆಯುವ ಸೌಲಭ್ಯಗಳನ್ನು ಸಕಾಲಕ್ಕೆ ದೊರಕುವಂತೆ ಮಾಡಬೇಕು. ಆ ಮೂಲಕ ಸದಸ್ಯರ ಸಹಕಾರದೊಂದಿಗೆ ಸಂಘದ ಬೆಳವಣಿಗೆಗೆ ಶ್ರಮಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ನೂತನ ಅಧ್ಯಕ್ಷ ಸತೀಶ್ ಅವರನ್ನು, ಅವರ ಬೆಂಬಲಿಗರು ಹಾಗೂ ಮುಖಂಡರು ಅಭಿನಂದಿಸಿ ಸಂಭ್ರಮಿಸಿದರು. ತಾಲೂಕು ಜೆಡಿಎಸ್ ಅಧ್ಯಕ್ಷ ರಾಜಣ್ಣ, ಎಸ್.ಕೆ.ಮಧುಚಂದ್ರ, ಸೋಮಶೇಖರ್, ಗ್ರಾಪಂ ಮಾಜಿ ಅಧ್ಯಕ್ಷ ಎಸ್.ಆರ್. ಪ್ರಕಾಶ್, ಪುರುಷೋತ್ತಮ್, ಸದಸ್ಯರಾದ ಗಂಗಾಧರ್, ಹರೀಶ್, ಮಾಜಿ ಸದಸ್ಯರಾದ ಅಯಾಜ್ ಅಹ್ಮದ್, ಅಂಕನಹಳ್ಳಿ ಗ್ರಾಪಂ ಅಧ್ಯಕ್ಷ ಬಾಬು, ಗಾರೆ ಕೆಲಸಗಾರರ ಸಂಘದ ಅಧ್ಯಕ್ಷ ಜಗದೀಶ್, ವಾಹನ ಚಾಲಕರ ಸಂಘದ ಅಧ್ಯಕ್ಷ ಮಂಜುನಾಥ್, ಮುಖಂಡರಾದ ಎಸ್.ಕೆ.ಯೋಗಣ್ಣ, ಸಾ.ರಾ.ಸತೀಶ್, ನಟರಾಜ್, ಕುಮಾರ್, ಲಾಲು ಸಾಹೇಬ್, ತಿಮ್ಮೇಗೌಡ, ಶಿವು ಸೇರಿದಂತೆ ಇತರರಿದ್ದರು.

ಈರಪ್ಪ ನಿಧನ



ಹನಗೋಡು, ಡಿ.3– ಇಲ್ಲಿನ ಕಾಮಗೌಡನಹಳ್ಳಿ ನಿವಾಸಿ ಈರಪ್ಪ (85) ಮಂಗಳವಾರ ಸಂಜೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ ಮೃತರ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಲೈಂಗಿಕ ಕಾರ್ಯಕರ್ತರು, ಅಲ್ಪಸಂಖ್ಯಾತರಿಗೆ ಮಹಿಳಾ ಅಭಿವೃದ್ಧಿ ನಿಗಮದಿಂದಲೇ ಸಾಲ ಸೌಲಭ್ಯ

- ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಭರವಸೆ
- ಮೈಸೂರಲ್ಲಿ ನಿಗಮದ ವಿವಿಧ ಯೋಜನೆಗಳ ಸಂಬಂಧ ಪ್ರಗತಿ ಪರಿಶೀಲನೆ

ಮೈಸೂರು,ಡಿ.3(ಎಂಟಿವೈ)– ಮಹಿಳೆಯರು, ಲೈಂಗಿಕ ಕಾರ್ಯಕರ್ತರು ಸ್ವ–ಉದ್ಯೋಗ ಆರಂಭಿಸುವುದಕ್ಕಾಗಿ ಇನ್ನು ಮುಂದೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದಲೇ ಸಾಲ ಸೌಲಭ್ಯ ಒದಗಿಸಲು ನಿರ್ಧರಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ತಿಳಿಸಿದ್ದಾರೆ.

ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ತ್ರೀಶಕ್ತಿ ಭವನದಲ್ಲಿ ಮಂಗಳವಾರ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮಹಿಳೆಯರು, ಲೈಂಗಿಕ ಅಲ್ಪಸಂಖ್ಯಾತರು ಹಾಗೂ ಲೈಂಗಿಕ ಕಾರ್ಯಕರ್ತರು ಸ್ವಾವಲಂಬಿ ಜೀವನ ನಡೆಸುವುದಕ್ಕಾಗಿ ಈ ಹಿಂದೆ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೊಳಿಸಿದರೂ, ಬ್ಯಾಂಕ್‌ಗಳು ಸಾಲ ಸೌಲಭ್ಯನೀಡಲು ಹಿಂದೇಟು ಹಾಕುತ್ತಿರುವುದು ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಅರ್ಹರಿದ್ದರೂ ಸಾಲಸೌಲಭ್ಯ ದೊರಕುತ್ತಿರಲಿಲ್ಲ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ನಿಗಮದಿಂದಲೇ ಸಾಲ ಸೌಲಭ್ಯ ನೀಡಿ, ಅರ್ಹ ಫಲಾನುಭವಿಗಳಿಗೆ ನೆರವಾಗಲು ಉದ್ದೇಶಿಸಲಾಗಿದೆ ಎಂದರು.

ಸರ್ಕಾರ ಹಲವು ಯೋಜನೆಯಡಿ ಅರ್ಹ ಫಲಾನುಭವಿಗಳನ್ನು ಸಾಲ ಸೌಲಭ್ಯ ಹಾಗೂ ಸಬ್ಸಿಡಿ ನೀಡಲಾಗುತ್ತಿದ್ದರೂ ಬ್ಯಾಂಕ್‌ಗಳಲ್ಲಿ ಸಕಾಲದಲ್ಲಿ ಸಾಲ ನೀಡದೇ ಫಲಾನುಭವಿಗಳನ್ನು ಬ್ಯಾಂಕಿಗೆ ಅಲೆಸಿ ಸತಾಯಿಸುತ್ತಿರುವ ದೂರು ಎಲ್ಲೆಡೆ ಕೇಳಿ ಬಂದಿತ್ತು. ಸರ್ಕಾರ ಸಾಲ ಸೌಲಭ್ಯಕ್ಕೆ ಅರ್ಹರು ಎಂದು ನಿರ್ಧಾರ ಮಾಡಿದರೂ ಬ್ಯಾಂಕುಗಳು ಸಾಲ ನೀಡದೇ ಇರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ್ದಾರೆ. ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಸಾಲ ವಿತರಣೆಗೆ ನಿಗಮವು ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ: ರಾಜ್ಯದಲ್ಲಿ ಈಗಾಗಲೇ ವಿವಿಧ ಯೋಜನೆಯಡಿ ಬ್ಯಾಂಕ್‌ಗಳಿಗೆ ಸಾಲ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳನ್ನು ನಿಗಮ ಗುರುತಿಸಿ, ನೆರವು ನೀಡಲು ಮುಂದಾಗಲಿದೆ. ಅಲ್ಲದೆ, ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಲೀಡ್ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅರ್ಹ ಫಲಾನುಭವಿಗಳಿಗೆ ಸಾಲ ಸೌಲಭ್ಯ ನೀಡಲು ಇರುವ ತೊಡಕುಗಳನ್ನು ಚರ್ಚಿಸಿ, ಅವುಗಳನ್ನು ಸರ್ಕಾರದ ಮಟ್ಟದಲ್ಲಿಯೇ ಬಗೆಹರಿಸುವ ಪ್ರಯತ್ನ ಮಾಡುವುದಾಗಿ ಹೇಳಿದರು.

ಸಮೀಕ್ಷೆ: ಲಿಂಗತ್ವ ಅಲ್ಪಸಂಖ್ಯಾತರಿಗೂ ಸರ್ಕಾರದ ವಿವಿಧ ಸೌಲಭ್ಯ ಮತ್ತು ಸವಲತ್ತು ಕಲ್ಪಿಸುವ ಉದ್ದೇಶದಿಂದ ರಾಜ್ಯದಲ್ಲಿ ಸಮೀಕ್ಷೆ ನಡೆಸಲಾಗುತ್ತಿದೆ. ಬಳಿಕ ಲಿಂಗತ್ವ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಸರ್ಕಾರದಿಂದ ಇರುವ ಯೋಜನೆಗಳನ್ನು ತಲುಪಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ ಅನ್ನಭಾಗ್ಯ ಯೋಜನೆಯೊಂದಿಗೆ ಗೃಹಲಕ್ಷ್ಮೀ ಯೋಜನೆಯಡಿ ಮಾಸಾಶನ ಸಿಗುವಂತಹ ಕಾರ್ಯವನ್ನು ಕಾಂಗ್ರೆಸ್ ಸರ್ಕಾರ ಮಾಡಿದೆ ಎಂದು ತಿಳಿಸಿದರು.

ನಿಗಮಕ್ಕೆ ಸರ್ಕಾರ 95 ಕೋಟಿ ರೂ. ಅನುದಾನ ನೀಡಿದ್ದು, ಇನ್ನೂ ಹೆಚ್ಚಿನ ಅನುದಾನ ನೀಡುವಂತೆ ಮನವಿ ಮಾಡಲಾಗಿದೆ. ನಿಗಮದಿಂದ ಹಲವು ಯೋಜನೆಯಡಿ ಸಾಲ ನೀಡಲು ರಾಜ್ಯ ಸರ್ಕಾರ ಸಬ್ಸಿಡಿ ನೀಡುತ್ತಿದ್ದರೂ ಬ್ಯಾಂಕುಗಳು ಫಲಾನುಭವಿಗಳಿಗೆ ಸಾಲ ನೀಡದಿರುವುದರಿಂದ ಕರ್ನಾಟಕ ರಾಜ್ಯ ಹಣಕಾಸು ನಿಗಮದಲ್ಲಿ 58 ಕೋಟಿ ರೂ. ಸಬ್ಸಿಡಿ ಹಣ ಬಳಕೆಯಾಗದೇ ಉಳಿದಿದೆ ಎಂದರು.

ಈ ಸಂದರ್ಭದಲ್ಲಿ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಬಸವರಾಜು, ಜಿಲ್ಲಾ ನಿರೂಪಣಾಧಿಕಾರಿ ಬಿ.ಮಂಜುನಾಥ್, ಅಭಿವೃದ್ಧಿ ನಿರೀಕ್ಷಕ ಹೆಚ್.ವಿ.ಜಗದಾಂಬ ಸಿಡಿಪಿಓಗಳಾದ ಮಂಜುಳಾ, ಭಾಗ್ಯಶ್ರೀ, ಹರೀಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ತಿಬ್ಬಯ್ಯ, ರೋಹಿತ್, ಅಣ್ಣಯ್ಯ, ಗೋವಿಂದ, ಶ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷೆ ಪ್ರೇಮಾ ಕುಮಾರಿ, ಮಮತಾ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಮೈಸೂರಿನ ವಿಜಯನಗರದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸ್ತ್ರೀಶಕ್ತಿ ಭವನದಲ್ಲಿ ಮಂಗಳವಾರ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಉದ್ಘಾಟಿಸಿದರು

ಬ್ಯಾಂಕ್‌ಗಳ ವಿರುದ್ಧ ದೂರು

ಸಭೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಯೋಜನೆಯ ಫಲಾನುಭವಿಗಳು, ಸರ್ಕಾರ ಸಬ್ಸಿಡಿಯೊಂದಿಗೆ ಸಾಲ ಪಡೆಯಲು ಅವಕಾಶ ನೀಡಿದ್ದರೂ ಬ್ಯಾಂಕುಗಳಲ್ಲಿ ಅಧಿಕಾರಿಗಳು ಇಲ್ಲಸಲ್ಲದ ದಾಖಲೆಗಳನ್ನು ತನ್ನಿ ಎಂದು ಅಲೆಸುತ್ತಿದ್ದಾರೆ ಎಂದು ನಿಗಮದ ಅಧ್ಯಕ್ಷರ ಬಳಿ ಅಳಲು ತೋಡಿಕೊಂಡರು. ಭದ್ರತೆ ಇಲ್ಲದೇ ಸಾಲ ಕೊಡುವುದಿಲ್ಲ ಎಂದು ಕೆಲ ಮಹಿಳೆಯರು ಹೇಳಿದರೆ, ಕೆಲ ಲೈಂಗಿಕ ಅಲ್ಪಸಂಖ್ಯಾತರು ನಾವೂ ಮನುಷ್ಯರೇ, ನಮ್ಮ ಭಾವನೆಗಳಿಗೆ ಬೆಲೆ ಕೊಡಿ ಎಂದು ಅಳಲು ತೋಡಿಕೊಂಡರು.

ಲೈಂಗಿಕ ಅಲ್ಪಸಂಖ್ಯಾತ ಶಿವರಾಮ್ ಮಾತನಾಡಿ, ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ನಮ್ಮನ್ನು ಬೇರೆ ದೃಷ್ಟಿಯಲ್ಲಿ ನೋಡುತ್ತಾರೆ. ಸೀರೆ ಉಟ್ಟರೆ ಮಾತ್ರ ನಮ್ಮನ್ನು ಲೈಂಗಿಕ ಅಲ್ಪಸಂಖ್ಯಾತರು ಎಂದು ಪರಿಗಣಿಸುತ್ತಾರೆ. ನಾನು ಮಹಿಳೆ, ನನಗೂ ಟಿಕೆಟ್ ಕೊಡಿ ಎಂದರೆ ಸೀರೆ ಧರಿಸಿಕೊಂಡು ಬಾ ಎಂದು ಬಸ್ ಕಂಡಕ್ಟರ್ ಛೇಡಿಸುತ್ತಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಸೀಟ್ ಬ್ಲಾಕ್ ದಂಧೆ ಪ್ರಕರಣ

ಕಿಂಗ್‌ಪಿನ್ ಸೇರಿ 10 ಮಂದಿ ಬಂಧನ

ಬೆಂಗಳೂರು, ಡಿ.3– ಪ್ರತಿಷ್ಠಿತ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಸೀಟ್ ಬ್ಲಾಕ್ ಮಾಡುವ ದಂಧೆಯಲ್ಲಿ ತೊಡಗಿದ್ದ 10 ಆರೋಪಿಗಳನ್ನು ಮಲ್ಲೇಶ್ವರಂ ಪೊಲೀಸರು ಬಂಧಿಸಿದ್ದಾರೆ. ಈ ಗ್ಯಾಂಗ್ ಪ್ರತಿಷ್ಠಿತ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಸೀಟ್ ಬ್ಲಾಕ್ ದಂಧೆ ಮಾಡುತ್ತಿದ್ದರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕೌನ್ಸಲಿಂಗ್‌ಗೆ ಹಾಜರಾಗಿ ಕಾಲೇಜು ಆಯ್ಕೆಯಾಗದೇ ಇರುವವರನ್ನು ಗುರಿಯಾಗಿಸಿಕೊಂಡಿದ್ದರು. ಈ ರೀತಿ ನಾನಾ ಕಾರಣಗಳಿಂದ 2,625 ವಿದ್ಯಾರ್ಥಿಗಳು ಸೀಟ್ ರಿಜೆಕ್ಟ್ ಮಾಡಿದ್ದರು.

ಕೆಇಎ ನೌಕರ ಅವಿನಾಶ್‌ನ ಸಹಾಯದಿಂದ ಪಡೆದ ಪಾಸ್‌ವರ್ಡ್‌ನಿಂದ ಸರ್ಕಾರಿ ಸೀಟ್ ಪಡೆದು ಕಾಲೇಜು ಆಯ್ಕೆ ಮಾಡಿಕೊಳ್ಳದ ವಿದ್ಯಾರ್ಥಿಗಳ ಸೀಟ್ ಬ್ಲಾಕ್ ಮಾಡುತ್ತಿದ್ದರು. ಆ ಸೀಟ್‌ಗಳನ್ನು ಲಕ್ಷಾಂತರ ರೂ.ಗೆ ಮ್ಯಾನೇಜ್‌ಮೆಂಟ್ ಕೋಟಾದಡಿ ಬೇರೆಯವರಿಗೆ ಡೀಲ್ ಮಾಡುತ್ತಿದ್ದರು. ಕಾಲೇಜಿನ ಮ್ಯಾನೇಜ್‌ಮೆಂಟ್ ಹಾಗೂ ಮಧ್ಯವರ್ತಿಗಳ ಸಹಾಯದಿಂದ ಡೀಲ್ ಮಾಡುವುದರಲ್ಲಿ ತೊಡಗಿದ್ದರು.

ಆರೋಪಿ ಪ್ರಕಾಶ್ ದೂರು ದಾಖಲಾಗಿದೆ ಎಂದು ಗೊತ್ತಾದ ಕೂಡಲೇ ತಮ್ಮ ಬಳಿಯಿದ್ದ ಲ್ಯಾಪ್‌ಟಾಪ್‌ಗಳನ್ನು ಕಡೂರಿನ ತನ್ನ ಜಮೀನಿನಲ್ಲಿ ಸುಟ್ಟುಹಾಕಿ ಸಾಕ್ಷಿ ನಾಶ ಮಾಡಿದ್ದ. ಸದ್ಯ ಮಲ್ಲೇಶ್ವರಂ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದು, ತನಿಖೆ ನಡೆಸಿದ್ದಾರೆ.

ಸೇವೆಯಿಂದ ಸರ್ವವೂ ಸಿದ್ಧಿಸುತ್ತದೆ

ಕೂಡನಹಳ್ಳಿಯಲ್ಲಿ ನಟರಾಜ ಪಿಯು ಕಾಲೇಜು ಎನ್‌ಎಸ್‌ಎಸ್ ಶಿಬಿರದಲ್ಲಿ ಪ್ರೊ. ಶಿವರಾಜಪ್ಪ ಅಭಿಮತ

ಮೈಸೂರು, ಡಿ. 3– ಪೂಜೆಗಿಂತ ಸೇವೆ ದೊಡ್ಡದು ಎಂದು ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ. ಎಸ್.ಶಿವರಾಜಪ್ಪ ಅಭಿಪ್ರಾಯಪಟ್ಟರು.

ಶ್ರೀ ನಟರಾಜ ಮಹಿಳಾ ಪದವಿ ಪೂರ್ವ ಕಾಲೇಜು ವತಿಯಿಂದ ಮೈಸೂರು ತಾಲೂಕು ಕೂಡನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿರುವ ರಾಷ್ಟ್ರೀಯ ಸೇವಾ ಯೋಜನಾ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೂಜೆಯಿಂದ ಆತ್ಮತೃಪ್ತಿ ಸಿಗುತ್ತದೆ. ಆದರೆ ಸೇವೆಯಿಂದ ಯಶಸ್ಸು, ಕೀರ್ತಿ ಸಿಗುತ್ತದೆ.

ಗಾಂಧೀಜಿ, ಕುವೆಂಪು, ಅಂಬೇಡ್ಕರ್, ಅಬ್ದುಲ್ ಕಲಾಂ ಇವರು ಸೇವೆಯಿಂದ ಜಗತ್ಪ್ರಸಿದ್ಧಿಯಾದವರು. ತ್ಯಾಗದಿಂದ ಮಾತ್ರ ಎಲ್ಲವೂ ಸಾಧ್ಯ. ಇಂತಹ ಶಿಬಿರಗಳಿಂದ ಸ್ವಾಭಿಮಾನದ ಸಮುದಾಯದ ವ್ಯಕ್ತಿ ವಿಕಾಸ ಸಾಧ್ಯ. ಯಾವುದೇ ಭೇದವಿಲ್ಲದೆ ನಾವೆಲ್ಲರೂ ಒಂದು ಎಂಬ ಮನೋಭಾವನೆ ಮೂಡಿಸುತ್ತದೆ. ಕ್ರಿಯಾಶೀಲ, ಸೃಜನಶೀಲ ಬದುಕಿಗೆ ಇವು ಪೂರಕವಾಗಿವೆ ಎಂದು ತಿಳಿಸಿದರು.

ಶಿಬಿರವನ್ನು ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯು ಶಿಬಿರಾರ್ಥಿನಿಯರಲ್ಲಿ ಸೇವಾ ಮನೋ ಭಾವನೆಯನ್ನು ಬೆಳೆಸುತ್ತದೆ. ಶಿಸ್ತು, ಸಂಯಮ, ಕಾರ್ಯಕ್ರಮದ ಆಯೋಜನೆ ಬಗ್ಗೆ ಅರಿವನ್ನು ಮೂಡಿಸುತ್ತದೆ. ಗ್ರಾಮೀಣ ಪ್ರದೇಶದ ಜನರ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಸಹಕರಿಸುತ್ತದೆ. ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಸಲು ಕಾರಣವಾಗಿದೆ. ಜೊತೆಗೆ ವ್ಯಕ್ತಿತ್ವ ವಿಕಸನವಾಗುತ್ತದೆ ಎಂದರು.

ಮುಖ್ಯ ಅತಿಥಿಯಾಗಿದ್ದ ಕೂಡನಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಶಿವಪ್ಪ ಮಾತನಾಡಿ, ಗ್ರಾಮೀಣ ಪ್ರದೇಶದ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚು ಒತ್ತು ನೀಡುತ್ತಿರುವ ಹೊಸಮಠದ ಶ್ರೀಗಳು ಮಹಿಳೆಯರು ಸ್ವಾವಲಂಬನೆ ಉದ್ದೇಶದಿಂದ ಈ ಕಾಲೇಜು ಸ್ಥಾಪಿಸಿದ್ದಾರೆ ಎಂದು ಶ್ಲಾಘಿಸಿದರು.

ಬದುಕಿನಲ್ಲಿ ನಾವು ಎಷ್ಟೇ ಕೋಟಿ ಸಂಪಾದನೆ ಮಾಡಿದರು ಯಾವುದೂ ಉಳಿಯದು. ಆದರೆ ಮಾನವೀಯತೆ ಮತ್ತು ಜೀವನ ಮೌಲ್ಯಗಳು ಮುಖ್ಯ. ನಾವು ನಾವಾಗಿ ಬದುಕಬೇಕು ಸಾಧಿಸುವ ಛಲವಿರಬೇಕು. ನಮ್ಮ ಭವಿಷ್ಯವನ್ನು ನಾವೇ ರೂಪಿಸಿಕೊಳ್ಳಬೇಕು. ನಮ್ಮನ್ನು ನಾವು ಅರಿತುಕೊಳ್ಳಬೇಕು ಎಂದು ತಿಳಿ ಹೇಳಿದರು.

ಶ್ರೀಮತಿ ಸುನೀತಾರಾಣಿ ವಿ.ಡಿ., ಪ್ರಾಂಶುಪಾಲರು, ಶ್ರೀ ನಟರಾಜ ಮಹಿಳಾ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲೆ ವಿ.ಡಿ. ಸುನೀತಾ ರಾಣಿ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಕೆಎಸ್.ಪುಷ್ಪಾ ಉಪಸ್ಥಿತರಿದ್ದರು.



ಮೈಸೂರು ತಾಲೂಕು ಕೂಡನಹಳ್ಳಿಯಲ್ಲಿ ನಡೆಯುತ್ತಿರುವ ಶ್ರೀ ನಟರಾಜ ಮಹಿಳಾ ಪದವಿಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಶಿಬಿರದಲ್ಲಿ ಸಂಸ್ಥೆಯ ವಿಶೇಷಾಧಿಕಾರಿ ಪ್ರೊ.ಎಸ್. ಶಿವರಾಜಪ್ಪ ಮಾತನಾಡಿದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಪ್ರಾಂಶುಪಾಲೆ ವಿ.ಡಿ. ಸುನೀತಾ ರಾಣಿ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಕೆ.ಎಸ್. ಪುಷ್ಪಾ, ಸರ್ಕಾರಿ ಶಾಲೆಯ ಮುಖ್ಯಶಿಕ್ಷಕ ಶಿವಪ್ಪ ಇದ್ದಾರೆ.

ವರಿಷ್ಠರು ಅಗತ್ಯ ತೀರ್ಮಾನ ತೆಗೆದುಕೊಳ್ಳುತ್ತಾರೆ: ವಿಜಯೇಂದ್ರ

ಬೆಂಗಳೂರು, ಡಿ.3– ರಾಜ್ಯ ಬಿಜೆಪಿ ಬೆಳವಣಿಗೆಯ ವರಿಷ್ಠರು ಗಮನಿಸುತ್ತಿದ್ದಾರೆ. ಆ ಬಗ್ಗೆ ಅಗತ್ಯ ತೀರ್ಮಾನಗಳನ್ನು ತೆಗೆದುಕೊಳ್ಳುತ್ತಾರೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.



ಪಕ್ಷದ ಕಚೇರಿ ಜಗನ್ನಾಥ ಭವನದಲ್ಲಿ ಮಂಗಳವಾರ ನಡೆದ ಸಂಘಟನಾ ಪರ್ವ ಕುರಿತ ಸಭೆ ಮತ್ತು ಪಕ್ಷದ ಪ್ರಮುಖ ನಾಯಕರ ಸಭೆಯ ನಂತರ ಸುದ್ದಿಗಾರರ ಜತೆ ಮಾತನಾಡಿದ ಅವರು, ಪಕ್ಷದ ಸಂಘಟನೆಯ ಕುರಿತ ವಿಷಯಕ್ಕಷ್ಟೇ ಈ ಸಭೆ ಸೀಮಿತವಾಗಿತ್ತು ಎಂದರು.

ಬಸನಗೌಡ ಪಾಟೀಲ ಯತ್ನಾಳ್ ಬಣವು ದೆಹಲಿಯಲ್ಲಿ ನಡೆಸಿರುವ ಸುದ್ದಿಗೋಷ್ಠಿಯ ಬಗ್ಗೆ ಪ್ರಶ್ನಿಸಿದಾಗ, ವರಿಷ್ಠರು ನೋಟಿಸ್ ನೀಡಿದ್ದಾರೆ. ಆ ಬಗ್ಗೆ ಅವರೇ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದಷ್ಟೇ ಉತ್ತರಿಸಿದರು.

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ಕೇಂದ್ರ ಸಂಸದೀಯ ಸಮಿತಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ, ಚುನಾವಣಾ ವೀಕ್ಷಕ ರಾಧಾಕೃಷ್ಣನ್, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಬಿ.ಶ್ರೀರಾಮುಲು, ಪುದುಚೇರಿ ಉಸ್ತುವಾರಿ ನಿರ್ಮಲ್ ಕುಮಾರ್ ಸುರಾಣ, ಶಾಸಕ ಅಶ್ವಥ ನಾರಾಯಣ್ ಸಭೆಯಲ್ಲಿ ಭಾಗಿಯಾಗಿದ್ದರು.

ದರ್ಶನ್ ಗ್ಯಾಂಗ್ ಜಾಮೀನು ಅರ್ಜಿ ವಿಚಾರಣೆ ಡಿ.6ಕ್ಕೆ ಮುಂದೂಡಿಕೆ

ಬೆಂಗಳೂರು, ಡಿ.3– ಅನಾರೋಗ್ಯದ ಕಾರಣದಿಂದ ಮಧ್ಯಂತರ ಜಾಮೀನು ಪಡೆದಿರುವ ದರ್ಶನ್, ಖಾಯಂ ಜಾಮೀನು ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಅದೇ ರೀತಿ, ಪವಿತ್ರಾ ಗೌಡ, ನಾಗರಾಜ್, ಲಕ್ಷ್ಮಣ್ ಇನ್ನಿತರೆ ಆರೋಪಿಗಳು ಕೂಡ ಜಾಮೀನು ಅರ್ಜಿ ಸಲ್ಲಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ಹೈಕೋರ್ಟ್‌ನಲ್ಲಿ ವಾದ–ಪ್ರತಿವಾದ ನಡೆಯುತ್ತಿದೆ. ಸದ್ಯಕ್ಕೆ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳ ಜಾಮೀನು ಅರ್ಜಿಯ ವಿಚಾರಣೆಯನ್ನು ಡಿ.6ಕ್ಕೆ ಮುಂದೂಡಿಕೆ ಮಾಡಲಾಗಿದೆ.



ದರ್ಶನ್ ಪರವಾಗಿ ಹಿರಿಯ ವಕೀಲ ಸಿ.ವಿ. ನಾಗೇಶ್, ಇತ್ತೀಚೆಗೆ ಹೈಕೋರ್ಟ್‌ನಲ್ಲಿ ವಾದ ಮಂಡನೆ ಮಾಡಿದ್ದರು. ಇಂದು (ಡಿ.3) ಪವಿತ್ರಾ ಗೌಡ ಪರವಾಗಿ ಹಿರಿಯ ವಕೀಲ ಸೆಬಾಸ್ಟಿಯನ್ ವಾದಿಸಿದ್ದಾರೆ. ಪವಿತ್ರಾ ಗೌಡ ಅವರಿಗೆ ಕೊಲೆ ಮಾಡುವ ಉದ್ದೇಶ ಇರಲಿಲ್ಲ. ಎಲ್ಲರೂ ಹೊಡೆದ ಕಾರಣದಿಂದ ರೇಣುಕಾಸ್ವಾಮಿ ಸಾವು ಸಂಭವಿಸಿರಬಹುದು ಎಂದು ವಾದ ಮಾಡಲಾಗಿದೆ.

ಆರೋಪಿಗಳ ಪರವಾಗಿ ವಕೀಲರ ವಾದ ಮಂಡನೆ ಅಂತ್ಯವಾಗಿದೆ ಡಿ. 6ರಂದು ಎಸ್‌ಪಿಪಿ ಪ್ರಸನ್ನಕುಮಾರ್ ವಾದ ಮಾಡಲಿದ್ದಾರೆ. ಆ ಬಳಿಕ ಜಾಮೀನಿಗೆ ಸಂಬಂಧಿಸಿದ ತೀರ್ಪನ್ನು ಹೈಕೋರ್ಟ್ ನೀಡಲಿದೆ. ಪವಿತ್ರಾ ಗೌಡ ಪರಪ್ಪನ ಅಗ್ರಹಾರದಲ್ಲಿ ಜೈಲುವಾಸ ಅನುಭವಿಸುತ್ತಿದ್ದಾರೆ.

ದರ್ಶನ್‌ಗೆ ಬಳ್ಳಾರಿ ಜೈಲಿನಲ್ಲಿ ಇದ್ದಾಗ ಬೆನ್ನು ನೋವು ಕಾಣಿಸಿಕೊಂಡಿತ್ತು ಆದ್ದರಿಂದ ಅವರಿಗೆ ಶಸ್ತ್ರ ಚಿಕಿತ್ಸೆ ಅಗತ್ಯ ಇದೆ ಎಂದು ವೈದ್ಯರು ಸಲಹೆ ನೀಡಿದ್ದರಿಂದ ಮಧ್ಯಂತರ ಜಾಮೀನು ನೀಡಲಾಗಿತ್ತು ಆದರೆ ಈವರೆಗೂ ಅವರು ಶಸ್ತ್ರ ಚಿಕಿತ್ಸೆ ಮಾಡಿಸಿಲ್ಲ. ಬಿಪಿ ವ್ಯತ್ಯಾಸ ಆಗುತ್ತಿರುವುದರಿಂದ ಶಸ್ತ್ರ ಚಿಕಿತ್ಸೆಯನ್ನು ಸದ್ಯಕ್ಕೆ ಮಾಡಿಲ್ಲ ಎಂಬ ಮಾಹಿತಿ ಇದೆ. ದರ್ಶನ್ ಅವರಿಗೆ ಕೆಂಗೇರಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಮಾಂಟೆಸರಿ ಶಿಕ್ಷಕರ ತರಬೇತಿಗಾಗಿ ಅರ್ಜಿ ಆಹ್ವಾನ

ಮೈಸೂರು, ಡಿ. 3– ಸಖಿ ಸ್ವಾವಲಂಬಿ ಯೋಜನೆಯಡಿಯಲ್ಲಿ ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ಮಾಂಟೆಸರಿ ಶಿಕ್ಷಕರ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ. 18 ರಿಂದ 55ರ ವಯೋಮಾನದ ವಿದ್ಯಾರ್ಥಿಗಳು, ಗೃಹಿಣಿಯರು ಮತ್ತು ಉದ್ಯೋಗಾಕಾಂಕ್ಷಿಗಳಿಗಾಗಿ ಡಿಸೆಂಬರ್ 2024 ರಿಂದ ಮೇ 2025 ರವರೆಗೆ ಆರು ತಿಂಗಳ ಅವಧಿಯ ಈ ತರಬೇತಿಯಲ್ಲಿ ನುರಿತ ಅಧ್ಯಾಪಕರಿಂದ ಮಕ್ಕಳ ಮಾನಸಿಕ ಬೆಳವಣಿಗೆ, ಪೋಷಕಾಂಶಗಳು, ಆಹಾರ, ಆಟ ಮುಂತಾದವುಗಳ ಕುರಿತು ಪ್ರಾತ್ಯಕ್ಷಿಕೆ ಮತ್ತು ಪಠ್ಯ ಚಟುವಟಿಕೆಗಳಿರುತ್ತವೆ. ಪ್ರಶಿಕ್ಷಕರಿಗಾಗಿ ಕಂಪ್ಯೂಟರ್ ಕಲಿಕಾ ಅಭ್ಯಾಸ, ಕನ್ನಡ ನುಡಿ ಬೆರಳಚ್ಚು ತರಬೇತಿಗಳನ್ನೂ ಸಹ ಆಯೋಜಿಸಲಾಗಿದೆ. ಆಸಕ್ತರು ಇದೇ ಡಿಸೆಂಬರ್ 10ರ ಒಳಗೆ ತಮ್ಮ ಸ್ವವಿವರಗಳೊಂದಿಗೆ ಸಂಸ್ಥಾಪನಾ ಕಾರ್ಯದರ್ಶಿ ಗಾಯತ್ರಿ ಸುಂದರೇಶ್ ಅವರನ್ನು ಮೊ. 9964790442 / 8310306882 ಸಂಪರ್ಕಿಸಬಹುದು.

ಅಕ್ರಮ ಆಸ್ತಿ ಸಂಪಾದನೆ ಪ್ರಕರಣ

ಲೋಕಾಯುಕ್ತ ಮುಂದೆ ವಿಚಾರಣೆಗೆ ಹಾಜರಾದ ಸಚಿವ ಜಮೀರ್ ಅಹ್ಮದ್

ಬೆಂಗಳೂರು, ಡಿ.3– ಅಕ್ರಮ ಆಸ್ತಿ ಸಂಪಾದನೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಸತಿ ಮತ್ತು ವಕ್ಫ್ ಖಾತೆ ಸಚಿವ ಜಮೀರ್ ಅಹ್ಮದ್ ಖಾನ್ ಮಂಗಳವಾರ ಲೋಕಾಯುಕ್ತ ಪೊಲೀಸರ ಮುಂದೆ ವಿಚಾರಣೆಗೆ ಹಾಜರಾದರು.



ಇಂದು ಬೆಳಗ್ಗೆ ದಾಖಲೆ ಸಮೇತ ಲೋಕಾಯುಕ್ತ ಕಚೇರಿಗೆ ಆಗಮಿಸಿದ ಸಚಿವರು, ಅಧಿಕಾರಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಎಸಿಬಿಯಲ್ಲಿ ದಾಖಲಾಗಿದ್ದ ಪ್ರಕರಣ ಸಂಬಂಧ ವಿಚಾರಣೆಗೆ ಲೋಕಾಯುಕ್ತ ಬುಲಾವ್ ನೀಡಿತ್ತು. ಈ ಹಿಂದೆ ಜಮೀರ್ ಅಹ್ಮದ್ ಮನೆ ಮೇಲೆ ದಾಳಿ ನಡೆಸಿದ್ದ ಎಸಿಬಿ, ಜಮೀರ್ ಮನೆ, ಕಚೇರಿಗಳಲ್ಲಿ ಪರಿಶೀಲನೆ ನಡೆಸಿ, ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿತ್ತು. ಅಕ್ರಮ ಆಸ್ತಿ ಗಳಿಕೆ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ನಡೆಸಿತ್ತು. ನಂತರ ಸರ್ಕಾರ ಎಸಿಬಿ ರದ್ದು ಮಾಡಿ ಆದೇಶ ನೀಡಿದ್ದರಿಂದ, ಆ ಪ್ರಕರಣವನ್ನು ಈಗ ಲೋಕಾಯುಕ್ತ ತನಿಖೆ ನಡೆಸುತ್ತಿದೆ. ಅದರಂತೆ ವಿಚಾರಣೆಗೆ ಹಾಜರಾಗುವಂತೆ ಜಮೀರ್‌ಗೆ ಲೋಕಾಯುಕ್ತ ನೋಟೀಸ್ ನೀಡಿದ್ದ ಹಿನ್ನೆಲೆಯಲ್ಲಿ ಇಂದು ವಿಚಾರಣೆಗೆ ಹಾಜರಾಗಿದ್ದಾರೆ.

ಸರ್ಕಾರಿ ಸಂಸ್ಥೆಗಳಲ್ಲಿ ನಿಗದಿತ ಸಮಯಕ್ಕೆ ಸಂಬಳ ಸಿಗಲ್ಲ!

ಗೃಹಲಕ್ಷ್ಮಿ ಹಣ ವಿಳಂಬ ವಿಚಾರದಲ್ಲಿ ಹೆಬ್ಬಾಳ್ಕರ್ ಸಮರ್ಥನೆ

ಬೆಂಗಳೂರು, ಡಿ.3– ಗೃಹಲಕ್ಷ್ಮಿ ಯೋಜನೆಯ ಹಣ ವಿಳಂಬಕ್ಕೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆಯ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಮೊಂಡು ವಾದ ಮಂಡಿಸಿದ್ದಾರೆ.



ಗೃಹಲಕ್ಷ್ಮಿ ಹಣ 2 ತಿಂಗಳು ಯಾಕೆ ಬರಲಿಲ್ಲ ಎಂಬ ಮಾಧ್ಯಮಗಳ ಪ್ರಶ್ನೆಗೆ, ನಿಮ್ಮ ಸಂಸ್ಥೆಗಳಲ್ಲಿ ನಿಮಗೆ ಪ್ರತಿ ತಿಂಗಳು ಸರಿಯಾಗಿ ಸಂಬಳ ಸಿಗುತ್ತಾ ಎಂದು ಮರು ಪ್ರಶ್ನೆ ಹಾಕಿದ್ದಾರೆ.

ಈ ಪ್ರಶ್ನೆಗೆ ಮಾಧ್ಯಮಗಳು ಹೌದು ಮೇಡಂ ಸರಿಯಾಗಿ ಸಂಬಳ ಬರುತ್ತಿದೆ... ಎಂದು ಉತ್ತರಿಸಿದ್ದಕ್ಕೆ ಸರ್ಕಾರಿ ಸಂಸ್ಥೆಗಳಲ್ಲಿ ಹಾಗಿಲ್ಲ. ಸರ್ಕಾರಿ ಸಂಸ್ಥೆಗಳಲ್ಲಿ 1 ತಿಂಗಳಿಗೊಮ್ಮೆ, 2 ತಿಂಗಳಿಗೊಮ್ಮೆ, 3 ತಿಂಗಳಿಗೊಮ್ಮೆ ಕೊಡುತ್ತಾರೆ. ಹಿಂದಿನಿಂದಲೂ ಹೀಗೆಯೇ ಇದೆ ಎಂದು ಉತ್ತರಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಯ ಹಣ 1 ತಿಂಗಳು ತಡವಾದರೆ 500 ಫೋನ್ ಕರೆಗಳು ಬರುತ್ತವೆ. ಅವರನ್ನು ಸಮಾಧಾನ ಮಾಡುವುದರಲ್ಲೇ ಸಮಯ ಹಿಡಿಯುತ್ತದೆ. ತಿಂಗಳು ಬಂದಿಲ್ಲ ಎಂದರೆ ಮುಂದಿನ ತಿಂಗಳು ಬರಲ್ಲ ಅಂತ ವಿಪಕ್ಷಗಳು ಹೇಳುತ್ತವೆ. ನಾವು ವಚನಭ್ರಷ್ಟರು ಅಲ್ಲ. ವಚನ ಪಾಲನೆ ಮಾಡುತ್ತೇವೆ ಎಂದು ಹೇಳುವ ಮೂಲಕ ಹಣ ವಿಳಂಬವಾಗಿ ಪಾವತಿಯಾಗುವುದಕ್ಕೆ ಸಮರ್ಥನೆ ನೀಡಿದ್ದಾರೆ.

ಅಹಿಂದ ಸಮಾವೇಶ ಅಲ್ಲ: ಹಾಸನದಲ್ಲಿ ನಡೆಯುತ್ತಿರುವ ಸಮಾವೇಶ ಅಹಿಂದ ಸಮಾವೇಶ ಅಲ್ಲ. ಹಾಸನ ಸಮಾವೇಶ ಜನ ಕಲ್ಯಾಣ ಸಮಾವೇಶ. ಪಕ್ಷದ ಅಡಿಯಲ್ಲಿಯೇ, ಪಕ್ಷದ ನಾಯಕರು, ಮುಖಂಡರ ನೇತೃತ್ವದಲ್ಲಿ ಸಮಾವೇಶ ನಡೆಯುತ್ತಿದೆ. ನಮ್ಮ ಕಾರ್ಯಕ್ರಮಗಳು ಮತ್ತು ಮತದಾರಿಗೆ ಅಭಿನಂದನೆ ಸಲ್ಲಿಸಲು ಸಮಾವೇಶ ಮಾಡುತ್ತಿದ್ದೇವೆ. ಹಾಸನ ಮಾತ್ರವಲ್ಲ ಇಡೀ ಕರ್ನಾಟಕದಲ್ಲಿ ಇಂತಹ ಸಮಾವೇಶ ಮಾಡುತ್ತೇವೆ. ಸಿದ್ದರಾಮಯ್ಯ ಅವರು ಕಾಂಗ್ರೆಸ್‌ನಿಂದ ಮುಖ್ಯಮಂತ್ರಿ ಆಗಿದ್ದಾರೆ. ಸಂಘಟನೆ, ಪಕ್ಷ, ಸರ್ಕಾರ ಇವನ್ನೆಲ್ಲ ಜೊತೆಯಾಗಿ ಅವರು ಮುನ್ನಡೆಸುತ್ತಾರೆ ಎಂದರು.

ಪವರ್ ಶೇರಿಂಗ್ ಬಗ್ಗೆ ಗೊತ್ತಿಲ್ಲ: ಪವರ್ ಶೇರಿಂಗ್ ಬಗ್ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಸುಳಿವು ನೀಡಿದ್ದಾರೆ ಎಂಬ ವಿಚಾರಕ್ಕೆ ಇದರ ಬಗ್ಗೆ ನನಗೇನು ಗೊತ್ತಿಲ್ಲ. ಈ ಪ್ರಶ್ನೆಯನ್ನು ಅವರ ಬಳಿಯೇ ಕೇಳಿ. ನಮಗೆ ಹೈಕಮಾಂಡ್ ನಿರ್ಣಯವೇ ಅಂತಿಮ. ಇದಕ್ಕಿಂತ ಜಾಸ್ತಿ ನಾನೇನು ಹೇಳುವುದಿಲ್ಲ. ನಾನು ಪಕ್ಷದ ಶಿಸ್ತಿನ ಸಿಪಾಯಿ. ಪವರ್ ಶೇರಿಂಗ್ ಬಗ್ಗೆ ಸಚಿವರ ಗಮನಕ್ಕೆ ಬಂದಿಲ್ಲ ಇದು ಸಂಪೂರ್ಣವಾಗಿ ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದರು. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಷಯವೂ ಗೊತ್ತಿಲ್ಲ ಎಂದಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಅಮರನ್(ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಜಲಂಧರ(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಜಲಂಧರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮೆಕ್ಯಾನಿಕ್ ರಾಕಿ (ತೆ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಘೀರ (ಕ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ.
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಚಳಿಗಾಲದ ರೇಸ್

4ನೇ ದಿನ, ಬುಧವಾರ, 4–12–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ಚಿತ್ರದುರ್ಗ ಪ್ಲೇಟ್ ಡಿII–1400 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 2ಕ್ಕೆ
1. ಧುರಾಂಡರ್ 2. ಬಂದೆಲ್ ಕಂಡ್ ಕ್ವೀನ್ 3. ಗೇಮ್ ಬಾಯ್

II. ಲಾಲ್‌ಬಾಗ್ ಪ್ಲೇಟ್–1100 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ನ್ಯಾಚುರಲ್ ಟೊರ್ನಾಡೊ 2. ಮಾರ್ಕ್ ಒನ್ 3. ಸ್ಪಿರಿಚಿಲ್ ಫೋರ್ಸ್

III ಚಿತ್ರದುರ್ಗ ಪ್ಲೇಟ್ ಡಿI–1400 ಮೀ. ರೇಟೆಡ್ 00 ರಿಂದ 25. ಮ.3.00ಕ್ಕೆ
1. ಬ್ರೇಕ್ ಅವೇ 2. ರಾಭ್ 3. ಗೋಲ್ಡನ್ ಬರ್ಡ್

IV. ದಾಂಡಲಿ ಪ್ಲೇಟ್–1600 ಮೀ. ರೇಟೆಡ್ 40 ರಿಂದ 65. ಮ.3.30ಕ್ಕೆ
1. ಬೆಂಗಾ ಝಿ 2. ತರೇಕ್ 3. ಕಾನ್‌ಫಿಡೆಂಟ್ ಗೇಮ್

V. D.V.ವಿಶ್ವನಾಥ್ ಮೆಮೋರಿಯಲ್ ಟ್ರೋಫಿ–1800 ಮೀ. ರೇಟೆಡ್ 40 ರಿಂದ 65. ಮ.4.00ಕ್ಕೆ
1. ಔರ್ಲಿ 2. ಸ್ಕೈ ಸ್ಟ್ರಾಮ್ 3. ಡಿ ಲಾರ್ಡ್

VI. ಬಿಜಾಪುರ ಪ್ಲೇಟ್ –1200 ಮೀ. ರೇಟೆಡ್ 60 ಮತ್ತು ಮೇಲ್ವರ್ಗ. ಸಂಜೆ 4.30ಕ್ಕೆ
1. ಬ್ರೇವ್ ಟ್ರೂಪರ್ 2. ಅಬ್‌ಸಲ್ಯೂಟ್ ಚಾಲೆಂಜರ್

VII. ಕ್ರೌನ್ ಟ್ರೆಷರ್ ಪ್ಲೇಟ್– 1400 ಮೀ. ರೇಟೆಡ್ 40 ರಿಂದ 65. ಸಂ.5.00ಕ್ಕೆ
1 ಓ ಮಂಚಾಲಿ 2. ಸ್ಕ್ವೇರ್ ಕಟ್ 3. ಹಿರೋಹಿಸವ್

ದಿನದ ಅತ್ಯುತ್ತಮ	ಬ್ರೇವ್ ಟ್ರೂಪರ್
ಡಬ್ಬಲ್	ಬ್ರೇಕ್ ಅವೇ, ಔರ್ಲಿ
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರೆಬಲ್	2, 3 ಮತ್ತು 4
II ಟ್ರೆಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

2,988 ಔಷಧಿಗಳಲ್ಲಿ ಗುಣಮಟ್ಟವಿಲ್ಲ; 282 ಔಷಧಿಗಳು ನಕಲಿ!

ನವದೆಹಲಿ, ಡಿ.3– ದೇಶದಲ್ಲಿ ಮಾರಾಟವಾಗುತ್ತಿರುವ 2,988 ಔಷಧ ಮಾದರಿಗಳು ಪ್ರಮಾಣಿತ ಗುಣಮಟ್ಟ ಹೊಂದಿಲ್ಲ ಮತ್ತು 282 ಔಷಧಿಗಳು ಕಲಬೆರಕೆ ಇಲ್ಲವೇ ನಕಲಿಯಾಗಿರುವುದು ಪರೀಕ್ಷೆಯಲ್ಲಿ ಕಂಡುಬಂದಿದೆ ಎಂದು ಆರೋಗ್ಯ ಸಚಿವರು ಮಂಗಳವಾರ ರಾಜ್ಯಸಭೆಗೆ ತಿಳಿಸಿದ್ದಾರೆ.

2023ರ ಏಪ್ರಿಲ್‌ನಿಂದ 2024ರ ಮಾರ್ಚ್‌ವರೆಗಿನ ಅವಧಿಯಲ್ಲಿ 1,06,150 ಔಷಧ ಮಾದರಿಗಳನ್ನು ಪರೀಕ್ಷಿಸಲಾಗಿದೆ. ನಕಲಿ ಅಥವಾ ಕಲಬೆರಕೆ ಔಷಧಗಳ ತಯಾರಿಕೆ, ಮಾರಾಟ ಮತ್ತು ವಿತರಣೆಗಾಗಿ 604 ಪ್ರಕರಣಗಳಲ್ಲಿ ಕಾನೂನು ಕ್ರಮಗಳನ್ನು ಪ್ರಾರಂಭಿಸಲಾಗಿದೆ ಎಂದು ಆರೋಗ್ಯ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

PUBLIC NOTICE

My Client, Sri. H. MAHENDRA KUMAR, S/o Sri. M. HIRALAL, aged about 39 years, residing at No. 1430/2, 8th Cross, Irwin Road, Lash kar Mohalla, Mysore-570001, intends to purchase the Property bearing No. 2208, New No. M- 89, B.N. Street, MYSORE -570001, measuring East to West: 40.0 Ft. and North to South: 10.0 Ft. of vacant site from its owner, Smt. KAMALAMMA W/o Sri. MANJUNATH M.S., residing at No. 1825, 3rd Cross, Ratan Singh Galli, Mandi Mohalla, MYSORE -570001.

If anyone having any kind of sale agreement or any right, title, interest, objection or claim in the said property, he/she is hereby called upon to lodge his/her right, title, interest, claim or objection with legal documentary support within 15 (Fifteen) days from this date to the below mentioned mobile numbers.

If no one comes with any such claim, my client will proceed to transact the same in his favour and thereafter no claim or objection whatsoever will be entertained.

SCHEDULE OF THE PROPERTY

All that piece and parcel of Property bearing Property bearing No. 2208, New No. M-89, B.N. Street, MYSORE-570001, and Bounded on:- East by: 9.0 Mtrs. Wide B.N. Street, West by: Property bearing No. 2210, North by: Property bearing No. 2209, South by: Property bearing No. 2207. In between measuring measuring East to West: 40.0 Ft. and North to South: 10.0 Ft.. of vacant site.

L.N. RAJENDRAN, B.Sc., LL.B.
Advocate, # 179/6, 1" Floor,
M.G. Road, Udayagiri, MYSORE -570019. Mobile: 97415 22545.
Place: MYSORE., Dated: 02.12.2024.



